

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ


ಜೂನ್ 11 ಬುಧವಾರ 2025

ಸಂಪುಟ: 46 | ಸಂಚಿಕೆ: 56 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4



ಮತ್ತೆ ಜಾತಿಗಣತಿ

● ಹೈಕಮಾಂಡ್ ಸೂಚನೆಯಂತೆ ಸಿಎಂ ಸಿದ್ದರಾಮಯ್ಯ ನಿರ್ಧಾರ ● 90 ದಿನದಲ್ಲಿ ಸಮೀಕ್ಷೆ ಪೂರ್ಣಗೊಳಿಸುವ ಸಂಬಂಧ ನಾಳೆ ಸಂಪುಟ ಸಭೆಯಲ್ಲಿ ತೀರ್ಮಾನ

ನವದೆಹಲಿ, ಜೂ.10– ಜಾತಿಗಣತಿ ವರದಿ ಬಗ್ಗೆ ಅಪಸ್ವರ ಎದ್ದಿರುವ ಹಿನ್ನೆಲೆಯಲ್ಲಿ ಮರು ಗಣತಿ ನಡೆಸಲು ನಿರ್ಧಾರ ಕೈಗೊಂಡಿರುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಕರೆದಿದ್ದ ಸಭೆಯಲ್ಲಿ ಪಾಲ್ಗೊಂಡ ಬಳಿಕ ಅವರು ನವದೆಹಲಿಯ ಕರ್ನಾಟಕ ಭವನದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು. ಕರ್ನಾಟಕದಲ್ಲಿ ನಡೆಯುತ್ತಿರುವ ರಾಜಕೀಯ ಬೆಳವಣಿಗೆಗಳ ಬಗ್ಗೆ ಕಾಂಗ್ರೆಸ್ ಪಕ್ಷದ ವರಿಷ್ಠರೊಂದಿಗೆ ಚರ್ಚಿಸಲಾಗಿದೆ. ವಿವಿಧ ಜಾತಿಗಳ ಸಂಘ–ಸಂಸ್ಥೆಗಳು, ಮಠಾಧೀಶರು, ಸಮುದಾಯಗಳ ಮುಖಂಡರು, ಸಚಿವರು ಜಾತಿ ಗಣತಿ ವರದಿ ಬಗ್ಗೆ ಅಪಸ್ವರ ಎತ್ತಿರುವ ಬಗ್ಗೆ ಚರ್ಚಿಸಲಾಗಿ, ಜಾತಿಗಣತಿ ವರದಿಯನ್ನು ತಾತ್ವಿಕವಾಗಿ ಒಪ್ಪಿಕೊಳ್ಳುವುದು ಹಾಗೂ ಜಾತಿಗಣತಿಯ ದತ್ತಾಂಶ ಹತ್ತು ವರ್ಷ ಹಳೆಯದಾಗಿರುವುದರಿಂದ ಮರು ಗಣತಿ ಮಾಡಲು ತೀರ್ಮಾನಿಸಲಾಗಿದೆ.

ಈಗಾಗಲೇ ಪರಿಶಿಷ್ಟ ಜಾತಿಗಳ ಜನಗಣತಿ ನಡೆದಂತೆ ಇತರೆ ಜಾತಿಗಳ ಗಣತಿಯನ್ನು ಹೊಸದಾಗಿ ಕೈಗೊಳ್ಳಲು ನಿರ್ಧರಿಸಲಾಗಿದೆ. ಸಮೀಕ್ಷಾ ಕಾರ್ಯವನ್ನು 90 ದಿನದೊಳಗೆ ಪೂರ್ಣಗೊಳಿಸಿ ವರದಿ ನೀಡಬೇಕಾಗುವುದು ಎಂದು ತಿಳಿಸಿದರು.

ಕಾಲ್ತುಳಿತ ಪ್ರಕರಣ: ಬೆಂಗಳೂರಿನಲ್ಲಿ ಇತ್ತೀಚೆಗೆ ನಡೆದ ಕಾಲ್ತುಳಿತ ಪ್ರಕರಣದ ಬಗ್ಗೆ ಚರ್ಚಿಸಿ, ಸರ್ಕಾರ ತೆಗೆದುಕೊಂಡ ಕ್ರಮಗಳ ಬಗ್ಗೆ ವರಿಷ್ಠರಿಗೆ ವಿವರಿಸಲಾಗಿದೆ. ಪ್ರಕರಣದ ತನಿಖೆಗೆ ಜಿಲ್ಲಾಧಿಕಾರಿಗಳ ನೇತೃತ್ವದ ಮ್ಯಾಜಿಸ್ಟ್ರಿಯಲ್ ತನಿಖೆ, ನಿವೃತ್ತ

■ 6ನೇ ಪುಟಕ್ಕೆ



ದೆಹಲಿಯ ಇಂದಿರಾಗಾಂಧಿ ಭವನದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಸಮ್ಮುಖದಲ್ಲಿ ಸಭೆ ನಡೆಯಿತು. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕೆ.ಸಿ.ವೇಣುಗೋಪಾಲ್, ರಣದೀಪ್ ಸಿಂಗ್ ಸುರ್ಜೇವಾಲ ಚಿತ್ರದಲ್ಲಿದ್ದಾರೆ.

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಕಾಲ್ತುಳಿತ ದುರಂತ ಪ್ರಕರಣ; ಸಿಎಂ, ಡಿಸಿಎಂಗೆ ರಾಹುಲ್ ಗಾಂಧಿ ಕ್ಲಾಸ್

ಖಾಸಗಿ ಕಾರ್ಯಕ್ರಮ 'ಸರ್ಕಾರಿ' ಆಗಬೇಕಿತ್ತಾ...!

ನವದೆಹಲಿ, ಜೂ.10(ಕೆಎಂಶಿ)– ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಕಾಲ್ತುಳಿತ ಪ್ರಕರಣ ಹಾಗೂ ಸಂಪುಟದಲ್ಲಿ ಹೊಂದಾಣಿಕೆ ಕೊರತೆ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿರುವ ಕಾಂಗ್ರೆಸ್ ಅಧಿನಾಯಕ ರಾಹುಲ್ ಗಾಂಧಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ತೀವ್ರ ತರಾಟೆಗೆ ತೆಗೆದುಕೊಂಡಿದ್ದಾರೆ.

ದೆಹಲಿಯ ಇಂದಿರಾಗಾಂಧಿ ಭವನದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸಮ್ಮುಖದಲ್ಲೇ ರಾಹುಲ್ ಗಾಂಧಿ, ಖಾಸಗಿ ಕಾರ್ಯಕ್ರಮದಿಂದ ಪಕ್ಷಕ್ಕೆ ರಾಷ್ಟ್ರ ಹಾಗೂ ಅಂತಾರಾಷ್ಟ್ರೀಯ ಮಟ್ಟದಲ್ಲಿ ಭಾರಿ ಮುಜುಗರವಾಗಿದೆ ಎಂದಿದ್ದಾರೆ. ಪಕ್ಷ ಮತ್ತು ಸರ್ಕಾರದಲ್ಲಿ ಕೆಲವು ರಾಜಕೀಯ ತೀರ್ಮಾನ ಕೈಗೊಳ್ಳುವಂತಹ ಸನ್ನಿವೇಶ ಎದುರಾಗಿದ್ದು ಅವುಗಳ ಸ್ವರೂಪದ ಬಗ್ಗೆ ಮುಂದೆ ನಿಮಗೆ ಮಾಹಿತಿ ನೀಡುವುದಾಗಿಯೂ ತಿಳಿಸಿದ್ದಾರೆ.

ಕಾಲ್ತುಳಿತ ಪ್ರಕರಣ ಕೇವಲ ಭಾರತದಲ್ಲಷ್ಟೇ ಅಲ್ಲ, ವಿಶ್ವಮಟ್ಟದಲ್ಲೂ ಚರ್ಚೆಗೆ ಗ್ರಾಸವಾಗಿದೆ. ನಾವು ಕರ್ನಾಟಕ ಸರ್ಕಾರವನ್ನು ಅತ್ಯಂತ ಗೌರವದಿಂದ ನೋಡುತ್ತಿದ್ದೆವು.

ಆದರೆ, ಇತ್ತೀಚಿನ ಘಟನಾವಳಿಗಳು ನಮಗೆ ನೋವು ತಂದಿದೆ. ಖಾಸಗಿ ಕಾರ್ಯಕ್ರಮವನ್ನು ಸರ್ಕಾರದ ಕಾರ್ಯಕ್ರಮವಾಗಿ ಏಕೆ ಪರಿವರ್ತಿಸಿದ್ದೀರಿ, ಆಟಗಾರರನ್ನು ಸರ್ಕಾರದ ವತಿಯಿಂದ ಸನ್ಮಾನಿಸುವ ಅಗತ್ಯವಿತ್ತೆ, ನೀವುಗಳು ಕಾರ್ಯಕ್ರಮ ಮಾಡುವಲ್ಲಿ ಮುನ್ನೆಚ್ಚರಿಕಾ ಕ್ರಮ ಏಕೆ ತೆಗೆದುಕೊಳ್ಳಲಿಲ್ಲ.

ಪೊಲೀಸ್ ಬೇಡ ಎಂದಿದ್ದಲ್ಲದೆ, ವರದಿಯನ್ನೂ ನೀಡಿದ್ದಾರೆ. ಅದನ್ನೂ ಪರಿಗಣಿಸದೆ ತರಾತುರಿಯಲ್ಲಿ ಕಾರ್ಯಕ್ರಮ ನಡೆಸಿ ಏನು ಸಾಧನೆ ಮಾಡಿದಂತಾಯಿತು. ದುರಂತದಲ್ಲಿ 11 ಮಂದಿ ಪ್ರಾಣ ಕಳೆದುಕೊಂಡಿದ್ದಾರೆ. ಬಹಳಷ್ಟು ಜನ ಗಾಯಗೊಂಡಿದ್ದಾರೆ, ಇದರ ನಂತರವೂ ನೀವು ಕ್ರೀಡಾಂಗಣದೊಳಗೆ

■ 6ನೇ ಪುಟಕ್ಕೆ

ಇಡಿಯಿಂದ ಮತ್ತೆ 100 ಕೋಟಿ ಮೌಲ್ಯದ 92 ಮುಡಾ ನಿವೇಶನ ಮುಟ್ಟುಗೋಲು

● ಈ ಮೊದಲು 300 ಕೋಟಿ ಮೌಲ್ಯದ 160 ನಿವೇಶನ ವಶಕ್ಕೆ ಪಡೆಯಲಾಗಿತ್ತು ● ಒಟ್ಟಾರೆ 400 ಕೋಟಿ ಬೆಲೆಯ ಆಸ್ತಿ ಸರ್ಕಾರದ ವಶಕ್ಕೆ ● ಲೋಕಾಯುಕ್ತ ದಾಖಲಿಸಿದ್ದ ಎಫ್‌ಐಆರ್ ಆಧರಿಸಿಯೇ ಇಡಿ ತನಿಖೆಯ ಫಲಶ್ರುತಿ

ಬೆಂಗಳೂರು, ಜೂ.10(ಕೆಎಂಶಿ)–ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ (ಮುಡಾ) ವತಿಯಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಕುಟುಂಬ ಬಿಡಿ ನಿವೇಶನಗಳನ್ನು ಪಡೆದ ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆ ಮುಂದುವರೆಸಿರುವ ಜಾರಿ ನಿರ್ದೇಶನಾಲಯ (ಇ.ಡಿ.) ಇದೀಗ 100 ಕೋಟಿ ರೂ. ಮೌಲ್ಯದ 92 ನಿವೇಶನಗಳನ್ನು ವಶಕ್ಕೆ ಪಡೆದಿದೆ.

ಈ ಸಂಬಂಧ ಬೆಂಗಳೂರು ವಲಯ ಕಚೇರಿ ಪತ್ರಿಕಾ ಹೇಳಿಕೆ ನೀಡಿ, ಹಣ ಅಕ್ರಮ ವರ್ಗಾವಣೆ ತಡೆ ಕಾಯಿದೆ ಅಡಿಯಲ್ಲಿ ಈ ನಿವೇಶನಗಳನ್ನು ವಶಕ್ಕೆ ಪಡೆಯಲಾಗಿದೆ ಎಂದು ತಿಳಿಸಿದೆ.





ಹಗರಣಕ್ಕೆ ಸಂಬಂಧಿಸಿದಂತೆ ಈಗಾಗಲೇ 300 ಕೋಟಿ ರೂ. ಮೌಲ್ಯದ 160 ನಿವೇಶನಗಳನ್ನು ವಶಕ್ಕೆ ಪಡೆಯಲಾಗಿದೆ. ಬಿಡಿ ನಿವೇಶನಗಳ ಹಂಚಿಕೆ ಸಂದರ್ಭದಲ್ಲಿ ಲಂಚದ ರೂಪದಲ್ಲಿ ಹಣ, ಬ್ಯಾಂಕ್ ಮೂಲಕ ವರ್ಗಾವಣೆ, ಚರ ಮತ್ತು ಸ್ಥಿರಾಸ್ತಿಗಳ ಕೈಬದಲಾವಣೆ ಆಗಿರುವ ಹಿನ್ನೆಲೆಯಲ್ಲಿ ಸರ್ಕಾರಕ್ಕೆ 100 ಕೋಟಿ ರೂ. ನಷ್ಟ ತಡೆಯಲು ಈ ನಿವೇಶನಗಳನ್ನು ವಶಕ್ಕೆ ಪಡೆಯಲಾಗಿದೆ. ಮುಡಾ ಆಯುಕ್ತರಾಗಿದ್ದ ಜಿ.ಟಿ. ದಿನೇಶ್‌ಕುಮಾರ್ ಸೇರಿದಂತೆ ಹಲವರು ಈ ಅಕ್ರಮದಲ್ಲಿ ಭಾಗಿಯಾಗಿದ್ದಾರೆ. ನ್ಯಾಯಾಲಯದ ಆದೇಶದಂತೆ ಮೈಸೂರು ಲೋಕಾಯುಕ್ತ ಎಸ್‌ಪಿ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಇನ್ನಿತರರ ವಿರುದ್ಧ ಭಾರತೀಯ ದಂಡಸಂಹಿತೆಯ ವಿವಿಧ ನಿಯಮಗಳಡಿ ಎಫ್‌ಐಆರ್ ದಾಖಲಿಸಿ ನಡೆಸಿದ ತನಿಖೆ ವರದಿ ಆಧಾರದಲ್ಲಿ ಕ್ರಮ ಕೈಗೊಳ್ಳಲಾಗಿದ್ದು, ತನಿಖೆ ಇನ್ನೂ ಮುಂದುವರೆದಿದೆ ಎಂದು ಇ.ಡಿ. ಹೇಳಿದೆ.

ಮುಡಾದಲ್ಲಿ ಸಾವಿರಾರು ಕೋಟಿ ರೂ. ಮೌಲ್ಯದ ಬಿಡಿ ನಿವೇಶನಗಳ ಕಾನೂನು ಬಾಹಿರ ಹಂಚಿಕೆ ಹಾಗೂ ಸಂಸ್ಥೆ ಹಣ ಅನ್ಯ ಕಾರ್ಯಗಳಿಗೆ ಬಳಸಲಾಗಿದೆ ಎಂಬ ಆರೋಪದಡಿ ಇಡಿ ಮಧ್ಯ ಪ್ರವೇಶ ಮಾಡಿತ್ತು. ಪ್ರಾಧಿಕಾರದ ಕಚೇರಿ ಹಾಗೂ ಅಧಿಕಾರಿಗಳ ಮನೆ ಮೇಲೆ ಹಠಾತ್ ದಾಳಿ ನಡೆಸಿ, ಪ್ರಕರಣಕ್ಕೆ ಸಂಬಂಧಿಸಿದಂತೆ ಕೆಲವು ಮಹತ್ತರ ದಾಖಲೆಗಳನ್ನು ಇಡಿ ವಶಪಡಿಸಿಕೊಂಡಿತ್ತು. ದಾಖಲೆ ಪರಿಶೀಲನೆ ನಂತರ ಮುಡಾದ ಇಬ್ಬರು ಮಾಜಿ ಆಯುಕ್ತರು ಸೇರಿದಂತೆ ಕೆಲವು ಅಧಿಕಾರಿಗಳು, ಬಿಲ್ಡರ್‌ಗಳನ್ನು ವಿಚಾರಣೆಗೊಳಪಡಿಸಿತ್ತು. ಪ್ರಮುಖ ಆರೋಪಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಅವರ ಪತ್ನಿ ಪಾರ್ವತಿ ಅವರನ್ನೂ ವಿಚಾರಣೆಗೆ ಹಾಜರಾಗುವಂತೆ ಎರಡು ಬಾರಿ ನೋಟಿಸ್ ಜಾರಿ ಮಾಡಲಾಗಿತ್ತು. ಈ ವೇಳೆ ನ್ಯಾಯಾಲಯದ ಮೊರೆ ಹೋದ ಸಿದ್ದರಾಮಯ್ಯ ಮತ್ತು ಪಾರ್ವತಿ ಅವರು, ವಿಚಾರಣೆಗೆ ಹಾಜರಾಗುವುದರಿಂದ ತಡೆಯಾಜ್ಞೆ ಪಡೆದಿದ್ದರು.



ಮುಡಾ ಪ್ರಕರಣ ಹಳ್ಳ ಹಿಡಿದಿಲ್ಲ; ನನ್ನ ದೂರಿನಲ್ಲಿ ಹುರುಳಿದೆ

ಮೈಸೂರು, ಜೂ. 10(ಆರ್‌ಕೆ)– ಮುಡಾ ನಿವೇಶನ ಹಂಚಿಕೆ ಹಗರಣದ ತನಿಖೆ ಹಳ್ಳ ಹಿಡಿದಿಲ್ಲ, ನನ್ನ ದೂರಿನಲ್ಲಿ ಹುರುಳಿದೆ ಎಂಬುದಕ್ಕೆ ನಿವೇಶನಗಳನ್ನು ಮುಟ್ಟುಗೋಲು ಹಾಕಿಕೊಂಡಿರುವುದೇ ಸಾಕ್ಷಿ ಎಂದು ಪ್ರಕರಣದ ದೂರುದಾರ ಸ್ನೇಹಮಯಿ ಕೃಷ್ಣ ತಿಳಿಸಿದ್ದಾರೆ.



ಸ್ನೇಹಮಯಿ ಕೃಷ್ಣ

ಲೋಕಾಯುಕ್ತ ಅಧಿಕಾರಿಗಳು 'ಬಿ' ಅಂತಿಮ ವರದಿ ಸಲ್ಲಿಸಿದ ನಂತರ ಮುಡಾ ಪ್ರಕರಣ ಮುಚ್ಚಿ ಹೋಯಿತು, ಸ್ನೇಹಮಯಿ ಕೃಷ್ಣ ದೂರಿನಲ್ಲಿ ಹುರುಳಿಲ್ಲ ಎಂದು ಹೇಳಲಾಗುತ್ತಿತ್ತು. ಆದರೆ, ನಾನು ಸಲ್ಲಿಸಿರುವ ದಾಖಲಾತಿಗಳು ಮುಡಾದಲ್ಲಿ ನಡೆದಿರುವ ಅಕ್ರಮಗಳಿಗೆ ಕನ್ನಡಿಯಂತಿವೆ ಎಂದರು.

ನನ್ನ ದೂರು ಆಧರಿಸಿ ಜಾರಿ ನಿರ್ದೇಶನಾಲಯ, ಲೋಕಾಯುಕ್ತವಲ್ಲದೇ ನಿವೃತ್ತ ನ್ಯಾಯಮೂರ್ತಿಗಳ ನೇತೃತ್ವದ ಏಕಸದಸ್ಯ ಪೀಠವು ತನಿಖೆ ನಡೆಸುತ್ತಿದೆ. ನ್ಯಾಯಾಲಯದ ನಿರ್ದೇಶನದನ್ವಯ ಎಫ್‌ಐಆರ್ ದಾಖಲಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಇತರರ ವಿರುದ್ಧ ಲೋಕಾಯುಕ್ತ ಅಧಿಕಾರಿಗಳು ತನಿಖೆ ನಡೆಸುತ್ತಿದ್ದಾರೆ ಎಂದು ತಿಳಿಸಿದರು.

ಇಡಿ ಅಧಿಕಾರಿಗಳಿಗೆ ಪ್ರಕರಣದಲ್ಲಿ ಹುರುಳಿದೆ ಎಂಬುದು ಖಾತರಿಯಾಗಿರುವುದರಿಂದ ಅಕ್ರಮವಾಗಿ ಹಂಚಿಕೆಯಾಗಿರುವ ನಿವೇಶನಗಳನ್ನು ಮುಟ್ಟುಗೋಲು ಹಾಕಿದ್ದಾರೆ. ಆದ್ದರಿಂದ ನನ್ನ ದೂರಿನಲ್ಲಿ ಸತ್ಯಾಂಶವಿದೆ ಹಾಗೂ ಕಾನೂನು ಹೋರಾಟ ಪ್ರಕ್ರಿಯೆ ನಡೆಯುತ್ತಿದೆ ಎಂಬುದಕ್ಕೆ ಇದು ಸಾಕ್ಷಿಯಾಗಿದೆ ಎಂದು ಪ್ರಕರಣದ ದೂರುದಾರ ಸ್ನೇಹಮಯಿ ಕೃಷ್ಣ ತಿಳಿಸಿದರು.



ಮೈಸೂರು ಮಿತ್ರ ಬುಧವಾರ 11 ಜೂನ್ 2025

ಪ್ಲಾಸ್ಟಿಕ್ ಮುಕ್ತ ಮೈಸೂರಿಗೆ ನಾವೆಲ್ಲಾ ಪಣತೊಡೋಣ

ಚಾಮರಾಜ ಕ್ಷೇತ್ರದ ಶಾಸಕ ಹರೀಶ್‌ಗೌಡರ ಮನವಿ



ಮೈಸೂರಿನ ಜೂನಿಯರ್ ಮಹಾರಾಣಿ ಕಾಲೇಜಲ್ಲಿ ಶಾಸಕ ಕೆ.ಹರೀಶ್‌ಗೌಡರು ಸಸಿ ನೆಡುವ ಮೂಲಕ ಪರಿಸರ ದಿನ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಮೈಸೂರು,ಜೂ.10–ನಗರದ ಉತ್ತಮ ಪರಿಸರ ನಿರ್ಮಾಣಕ್ಕಾಗಿ ಪ್ಲಾಸ್ಟಿಕ್ ಮುಕ್ತ ಮೈಸೂರಿಗೆ ಪ್ರತಿಯೊಬ್ಬರೂ ಪಣ ತೊಡಬೇಕಿದೆ ಎಂದು ಶಾಸಕ ಕೆ.ಹರೀಶ್ ಗೌಡರು ಹೇಳಿದರು.

ಮೈಸೂರಿನ ನಾರಾಯಣ ಶಾಸ್ತ್ರಿ ರಸ್ತೆಯಲ್ಲಿರುವ ಜೂನಿಯರ್ ಮಹಾರಾಣಿ ಕಾಲೇಜು ಆವರಣದಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಗಿಡ ನೆಟ್ಟು, ಕಾಲೇಜಿನ ವಿದ್ಯಾರ್ಥಿಗಳಿಗೆ ಬಟ್ಟೆ ಬ್ಯಾಗನ್ನು ವಿತರಿಸಿ, ಪ್ಲಾಸ್ಟಿಕ್‌ನಿಂದ ಆಗುವ ಅನಾಹುತಗಳ ಬಗ್ಗೆ ಜಾಗೃತಿ ಮೂಡಿಸಿ ಮಾತನಾಡಿದ ಅವರು, ಪ್ಲಾಸ್ಟಿಕ್ ಬಳಕೆಯಿಂದಾಗಿ ಆರೋಗ್ಯ ಹಾಳಾಗುತ್ತದೆ. ಪ್ಲಾಸ್ಟಿಕ್ ಎಲ್ಲೆಂದರಲ್ಲಿ ಬಿಸಾಡುತ್ತಿರುವ ಕಾರಣ ಜಾನುವಾರುಗಳು ಅವುಗಳನ್ನು ತಿಂದು ಸಾಯುತ್ತಿವೆ. ಹೀಗಾಗಿ ಪ್ಲಾಸ್ಟಿಕ್ ಬಳಕೆ ಕಡಿಮೆ ಮಾಡಬೇಕು. ಇದರ ವಿರುದ್ಧ ದೊಡ್ಡ ಅಭಿಯಾನವಾಗಬೇಕು ಎಂದರು.

ಪರಿಸರಕ್ಕೆ ನಾವು ಅನಿವಾರ್ಯವಲ್ಲ. ಆದರೆ ನಮಗೆ ಪರಿಸರ ಅನಿವಾರ್ಯ. ನಮ್ಮ ಮುಂದಿನ ಪೀಳಿಗೆಯ ನೆಮ್ಮದಿ ಬದುಕಿಗೆ ಇರುವುದೊಂದು ಜೀವಗ್ರಹವಾದ ಈ ಭೂಮಿಯನ್ನು ಉಳಿಸಿಕೊಳ್ಳಬೇಕಿದೆ. ಪ್ಲಾಸ್ಟಿಕ್ ಮುಕ್ತ ಜಗತ್ತಿಗೆ ನಾವು ಸಹಕರಿಸೋಣ. ಹಾಗಾಗಿ ಪ್ಲಾಸ್ಟಿಕ್ ಬಳಕೆಯ ದುಷ್ಪರಿಣಾಮಗಳ ಬಗ್ಗೆ ಜನ ಜಾಗೃತಿಯ ಅವಶ್ಯಕತೆ ಇದೆ ಎಂದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲ ಸೋಮಣ್ಣ, ಮಹದೇವ್, ಸದಸ್ಯರಾದ ಮಂಜುಳಾ, ಚೆಲುವ ನವೀನ್ ಮತ್ತಿತರರು ಉಪಸ್ಥಿತರಿದ್ದರು.

ದೀಪಾ ಭಾಸ್ತಿಗೆ ಅಭಿನಂದನೆ



ಕೊಡಗು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್, ಕೊಡಗು ಜಿಲ್ಲಾ ಮಹಿಳಾ ಬರಹಗಾರರ ಸಂಘ ಮತ್ತು ಮಡಿಕೇರಿ ತಾಲೂಕು ಕಸಾಪ ವತಿಯಿಂದ ಕೊಡಗಿನಲ್ಲಿ ನಡೆದ ಕಾರ್ಯಕ್ರಮದಲ್ಲಿ ಬೂಕರ್ ಪ್ರಶಸ್ತಿ ಪುರಸ್ಕೃತ ದೀಪಾ ಭಾಸ್ತಿಗೆ ಕನ್ನಡ ಲೇಖಕಿಯರ ಟ್ರಸ್ಟ್‌ನ ಅಧ್ಯಕ್ಷೆ ಡಾ.ಪದ್ಮಶೇಖರ್, ಕಾರ್ಯದರ್ಶಿ ಹೇಮಾ ನಂದೀಶ್ ಮೈಸೂರು ಕನ್ನಡ ಲೇಖಕಿಯರ ಟ್ರಸ್ಟ್ ವತಿಯಿಂದ ಅಭಿನಂದಿಸಿದರು.

ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನ ಆಚರಣೆ ನಾಳೆ



ಮೈಸೂರು, ಜೂ. 10–ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ, ಪೊಲೀಸ್ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಕಾರ್ಮಿಕ ಇಲಾಖೆ, ಜಿಲ್ಲಾ ಕಾರ್ಮಿಕ ಯೋಜನಾ ಸೊಸೈಟಿ, ಮಕ್ಕಳ ಸಹಾಯವಾಣಿ ಸಂಯುಕ್ತಾಶ್ರಯದಲ್ಲಿ ಜೂ.12ರಂದು ಬೆಳಗ್ಗೆ 11 ಗಂಟೆಗೆ ಮಹಾರಾಜ ಸರ್ಕಾರಿ ಪದವಿಪೂರ್ವ ಕಾಲೇಜು ಆವರಣದಲ್ಲಿ ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನ ಆಚರಣೆ ಹಮ್ಮಿಕೊಳ್ಳಲಾಗಿದೆ.

ಬೆಳಗ್ಗೆ 9.30ಕ್ಕೆ ನಗರ ಬಸ್ ನಿಲ್ದಾಣದಿಂದ ಶಾಲಾ ಮಕ್ಕಳಿಂದ ಜಾಥಾ ಕಾರ್ಯಕ್ರಮ ನಡೆಯಲಿದೆ. ಕಾರ್ಯಕ್ರಮವನ್ನು ಹಿರಿಯ ಸಿವಿಲ್ ನ್ಯಾಯಾಧೀಶ ಕೆ.ಕೆ. ಅಮರ್‌ನಾಥ್ ಉದ್ಘಾಟಿಸುವರು. ಜಿಲ್ಲಾಧಿಕಾರಿ ಹಾಗೂ ಬಾಲ ಕಾರ್ಮಿಕ ಯೋಜನಾ ಸೊಸೈಟಿ ಅಧ್ಯಕ್ಷ ಲಕ್ಷ್ಮೀಕಾಂತರೆಡ್ಡಿ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್, ಪೊಲೀಸ್ ಅಧೀಕ್ಷಕ ಎನ್.ವಿಷ್ಣುವರ್ಧನ್, ಜಿಪಂ ಸಿಇಓ ಎಸ್.ಯುಕೇಶ್‌ಕುಮಾರ್, ಮೈಸೂರು ಪಾಲಿಕೆ ಆಯುಕ್ತ ಶೇಖ್ ತನ್ವೀರ್ ಆಸೀಫ್, ಎಡಿಸಿ ಡಾ.ಪಿ.ಶಿವರಾಜು, ಮೈಸೂರು ಅಭಿವೃದ್ಧಿ ಪ್ರಾಧಿಕಾರ ಆಯುಕ್ತ ಕೆ.ಆರ್.ರಕ್ಷಿತ್ ಭಾಗವಹಿಸಲಿದ್ದಾರೆ.

ನಿಧನ

ಶಾಂತಾ ಬಾಯಿ



ಮೈಸೂರು, ಜೂ. 10 – ಮೈಸೂರಿನ ಎನ್.ಆರ್. ಮೊಹಲ್ಲಾ ನಿವಾಸಿ ದಿವಂಗತ ಮಾರುತಿ ರಾವ್ ಅವರ ಪತ್ನಿ ಶಾಂತಾ ಬಾಯಿ (63) ಮಂಗಳವಾರ ಬೆಂಗಳೂರಿನಲ್ಲಿ ನಿಧನರಾದರು. ಮೃತರು ಇಬ್ಬರು ಪುತ್ರಿಯರು, ಓರ್ವ ಪುತ್ರ, ಅಳಿಯ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

ಮೃತರ ಅಂತ್ಯಕ್ರಿಯೆ ಎನ್.ಆರ್.ಮೊಹಲ್ಲಾದ ರುದ್ರಭೂಮಿಯಲ್ಲಿ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೊಹಮ್ಮದ್ ಸಗೀರ್ ಉಲ್ಲಾ



ಕೇಂದ್ರ ಅಬಕಾರಿ ಇಲಾಖೆ ನಿವೃತ್ತ ಸೂಪರಿಂಟೆಂಡೆಂಟ್ ಮತ್ತು ನಂ.289, 6ನೇ ಕ್ರಾಸ್, ಬನ್ನಿಮಂಟಪ ಸಿ ಬಡಾವಣೆ ನಿವಾಸಿ ಮೊಹಮ್ಮದ್ ಸಗೀರ್ ಉಲ್ಲಾ (99) ಮಂಗಳವಾರ ನಿಧನರಾದರು. ಮೃತರು, ಪುತ್ರಿಯರು ಸೇರಿದಂತೆ ಅಪಾರ ಬಂಧು ವರ್ಗ ಅಗಲಿದ್ದಾರೆ. ಬನ್ನಿಮಂಟಪದಲ್ಲಿರುವ ಟಿಪ್ಪು ಮಸೀದಿಯಲ್ಲಿ ನಮಾಜ್ ಇ ಜನಾಜಾ ನಡೆದು ನಂತರ ಟಿಪ್ಪು ವೃತ್ತದಲ್ಲಿರುವ ಮುಸ್ಲಿಮರ ಸ್ಮಶಾನದಲ್ಲಿ ಅಂತ್ಯಕ್ರಿಯೆ ನೆರವೇರಿತು ಎಂದು ಕುಟುಂಬ ವರ್ಗ ತಿಳಿಸಿವೆ.

ಕೆ.ಮರಿಚಾಮಯ್ಯ



ಕಾನೂನು ಮಾಪನಶಾಸ್ತ್ರ ವಿಭಾಗದ ನಿವೃತ್ತ (ಕೆಎಎಸ್) ಅಧಿಕಾರಿ ಹಾಗೂ ಕುವೆಂಪುನಗರ ನಿವಾಸಿ ಕೆ. ಮರಿಚಾಮಯ್ಯ (92) ಸೋಮವಾರ ನಿಧನರಾದರು. ಮೃತರು ಓರ್ವ ಪುತ್ರಿ, ಇಬ್ಬರು ಪುತ್ರರು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಅಶೋಕಪುರಂ ರುದ್ರಭೂಮಿಯಲ್ಲಿ ಮಂಗಳವಾರ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಪತ್ರಿಕಾ ವಿತರಕ ಎಂ.ಗಂಗಾಧರ್



ಮೈಸೂರು, ಜೂ.10– ಪತ್ರಿಕಾ ವಿತರಕ ಎಂ.ಗಂಗಾಧರ್ (62) ಮಂಗಳವಾರ ನಿಧನರಾದರು. ಮೃತರು ಪತ್ನಿ ಲಕ್ಷ್ಮೀ, ಮೂವರು ಪುತ್ರರು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಜೂ.11ರ ಬುಧವಾರ ಮಧ್ಯಾಹ್ನ 12 ಗಂಟೆಗೆ ಅಶೋಕಪುರಂ ಸ್ಮಶಾನದಲ್ಲಿ ಅಂತ್ಯಕ್ರಿಯೆ ನೆರವೇರಲಿದೆ ಎಂದು ಕುಟುಂಬ ಮೂಲಗಳು ತಿಳಿಸಿವೆ.

ಸಂತಾಪ: ಎಂ.ಗಂಗಾಧರ್ ಅವರ ನಿಧನಕ್ಕೆ ಮೈಸೂರು ನಗರ ಪತ್ರಿಕಾ ವಿತರಕರ ಸಂಘ ಸಂತಾಪ ಸೂಚಿಸಿದೆ. ಎಂ.ಗಂಗಾಧರ್ ಅವರು ಸುಮಾರು 40 ವರ್ಷಗಳಿಂದ ಪತ್ರಿಕಾ ವಿತರಕರಾಗಿ ಸೇವೆ ಸಲ್ಲಿಸಿದ್ದು, ಕಳೆದ 25 ವರ್ಷಗಳಿಂದ ಪತ್ರಿಕಾ ವಿತರಕರ ಸಂಘದ ಸದಸ್ಯರಾಗಿದ್ದರು. ಇವರ ನಿಧನದಿಂದ ಸಂಘಕ್ಕೆ ತುಂಬಲಾರದ ನಷ್ಟ ಉಂಟಾಗಿದೆ. ಇವರ ಆತ್ಮಕ್ಕೆ ಶಾಂತಿ ಸಿಗಲಿ ಹಾಗೂ ಅವರ ಕುಟುಂಬಕ್ಕೆ ದುಃಖ ಭರಿಸುವ ಶಕ್ತಿಯನ್ನು ದೇವರು ಕೊಡಲೆಂದು ಪ್ರಾರ್ಥಿಸುವುದಾಗಿ ಸಂಘದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಸಂತಾಪ ಸೂಚಿಸಿದ್ದಾರೆ.

ಭಲವಾದಿ ನಾರಾಯಣಸ್ವಾಮಿ, ರವಿಕುಮಾರ್ ಪರಿಷತ್ ಸದಸ್ಯತ್ವದಿಂದ ವಜಾಗೆ ಆಗ್ರಹಿಸಿ ಪ್ರತಿಭಟನೆ



ಮೈಸೂರು ಜಿಲ್ಲಾಧಿಕಾರಿ ಕಚೇರಿ ಮುಂಭಾಗ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ವತಿಯಿಂದ ಛಲವಾದಿ ನಾರಾಯಣ ಸ್ವಾಮಿ, ಎನ್.ರವಿಕುಮಾರ್ ಅವರನ್ನು ವಿಧಾನಪರಿಷತ್ ಸದಸ್ಯತ್ವದಿಂದ ವಜಾಗೆ ಆಗ್ರಹಿಸಿ ಪ್ರತಿಭಟನೆ ನಡೆಸಲಾಯಿತು.

ಮೈಸೂರು, ಜೂ.10(ಜಿಎ)–ದಲಿತ, ಹಿಂದುಳಿದ, ಅಲ್ಪಸಂಖ್ಯಾತ ನಾಯಕರ ಏಳಿಗೆ ಸಹಿಸದೆ ವಿಧಾನಪರಿಷತ್ ಸದಸ್ಯರಾದ ಛಲವಾದಿ ನಾರಾಯಣಸ್ವಾಮಿ, ಎನ್.ರವಿಕುಮಾರ್ ಬಳಸಿರುವ ಕೀಳು ಮಟ್ಟದ ಭಾಷೆ ಖಂಡಿಸಿ, ಇವರ ಪರಿಷತ್ ಸದಸ್ಯತ್ವ ರದ್ದುಪಡಿಸಬೇಕೆಂದು ಒತ್ತಾಯಿಸಿ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ವತಿಯಿಂದ ಜಿಲ್ಲಾಧಿಕಾರಿ ಕಚೇರಿ ಬಳಿ ಮಂಗಳವಾರ ಪ್ರತಿಭಟನೆ ನಡೆಸಲಾಯಿತು.

ಸಚಿವ ಪ್ರಿಯಾಂಕ ಖರ್ಗೆ ಅವರು ಮನುವಾದಿ ಬಿಜೆಪಿ, ಆರ್‌ಎಸ್‌ಎಸ್ ಕೋಮುವಾದಿ ಸಂಘ ಪರಿವಾರದವರ ವಿರುದ್ಧ ಸದನದ ಒಳಗೆ, ಹೊರಗೆ ಹೋರಾಡುತ್ತಿದ್ದಾರೆ. ಅವರ ಪ್ರಶ್ನೆಗಳಿಗೆ ಉತ್ತರಿಸಲಾಗದೆ ನಿಂಧನೆ ಮಾಡುತ್ತಿರುವುದು ನಾಚಿಕೆಗೇಡಿನ ಸಂಗತಿ. ಮಲ್ಲಿಕಾರ್ಜುನ ಖರ್ಗೆಯವರ ದಿಟ್ಟತನದೆದುರು ಸೋತು, ಸೋಲನ್ನು ಮುಚ್ಚಿಕೊಳ್ಳಲು ದಲಿತ ಮನುವಾದಿಗಳನ್ನು ಮುಂದೆ ಬಿಡುತ್ತಿದ್ದಾರೆ. ಇಂತಹ ಮನುವಾದಿಗಳು ಸ್ವಾಭಿಮಾನವನ್ನು ಅಡವಿಟ್ಟು ಮನುವಾದಿ ಬಿಜೆಪಿ, ಆರ್‌ಎಸ್‌ಎಸ್ ಸಂಘ ಪರಿವಾರದ ಜೀತ ಮಾಡುತ್ತಿದ್ದಾರೆ. ಇವರು ಸಂವಿಧಾನ, ಅಂಬೇಡ್ಕರ್ ವಿರೋಧಿಗಳು ಎಂದು ಕಿಡಿಕಾರಿದರು.

ಛಲವಾದಿ ನಾರಾಯಣಸ್ವಾಮಿ ಛಲವಾದಿ ಮನುವಾದಿ ನಾರಾಯಣ ಸ್ವಾಮಿಯಾಗಿದ್ದಾರೆ. ಸದನದಲ್ಲಿ ಗಂಭೀರವಾಗಿ ಚರ್ಚಿಸಬೇಕಾದ ದಲಿತರ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ, ಔದ್ಯೋಗಿಕ ಮತ್ತು ಇನ್ನಿತರೆ ಸಮುದಾಯಿಕ ಸಮಸ್ಯೆಗಳು ಮತ್ತು ದಲಿತರ ಮೇಲಿನ ದೌರ್ಜನ್ಯಗಳ ಬಗ್ಗೆ ಹಲವಾರು ವಿಷಯಗಳಿವೆ. ಆದರೆ ಚರ್ಚೆಗಳಲ್ಲಿ ದಲಿತ ಸಮುದಾಯದ ಆರ್‌ಎಸ್‌ಎಸ್ ವಾದಿ ಛಲವಾದಿ ನಾರಾಯಣಸ್ವಾಮಿ ಪಾಲ್ಗೊಳ್ಳುತ್ತಿಲ್ಲ. ಬದಲಿಗೆ ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಮಾತನಾಡುವ ಏಕೈಕ ಉದ್ದೇಶದಿಂದ ಕಲಬುರ್ಗಿಗೆ ಭೇಟಿ ನೀಡುತ್ತಿದ್ದಾರೆ. ಖರ್ಗೆ ಕುಟುಂಬದ ವಿರುದ್ಧ ಅವಹೇಳನಕಾರಿಯಾಗಿ ಮಾತನಾಡಿ ಸುಳ್ಳು ಅಪಾದನೆ ಹೊರಸುತ್ತಿದ್ದಾರೆ. ಆ ಮೂಲಕ ಸಮಾಜದ ಸ್ವಾಸ್ಥ್ಯ ಮತ್ತು ಸಾಮರಸ್ಯ ಹಾಳುಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಕರ್ನಾಟಕ ವಿಧಾನಪರಿಷತ್ ವಿರೋಧಪಕ್ಷದ ಮುಖ್ಯ ಸಚೇತಕ ಎನ್.ರವಿಕುಮಾರ್ ಸಹ ಇತ್ತೀಚೆಗೆ ಕಲಬುರ್ಗಿಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ವಿರುದ್ಧ ನಡೆದ ಪ್ರತಿಭಟನಾ ರ‍್ಯಾಲಿಯಲ್ಲಿ ಕಲಬುರ್ಗಿಯ ಜಿಲ್ಲಾಧಿಕಾರಿಯನ್ನು ಪಾಕಿಸ್ತಾನದಿಂದ ಬಂದವರಂತೆ ಕಾಣುತ್ತಿದ್ದಾರೆ ಎಂಬ ಪದ ಬಳಸಿದ್ದಾರೆ. ಮುಸ್ಲಿಂ ಸಮುದಾಯವನ್ನು ನಿಂದಿಸಲೆಂದೇ ಈ ರೀತಿಯ ಹೇಳಿಕೆ ನೀಡುತ್ತಿದ್ದಾರೆ. ಇವರಿಬ್ಬರು ಸಂವಿಧಾನ ವಿರೋಧಿಯಾಗಿ ಸಮಾಜದ ಸಾಮರಸ್ಯ ಕದಡುವ ಕೆಲಸ ಮಾಡುತ್ತಿದ್ದು, ತಮ್ಮ ಸ್ಥಾನದಲ್ಲಿ ಮುಂದುವರಿಯಲು ಅರ್ಹರಲ್ಲ. ಹೀಗಾಗಿ ಕೂಡಲೇ ಇವರನ್ನು ವಿಧಾನಪರಿಷತ್ ಸದಸ್ಯತ್ವದಿಂದ ವಜಾ ಮಾಡಬೇಕೆಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ರಾಜ್ಯ ಸಮಿತಿ ಸದಸ್ಯ ಗೋವಿಂದರಾಜು, ಜಿಲ್ಲಾ ಸಂಘಟನಾ ಸಂಚಾಲಕ ರಾಜಣ್ಣ ಇಟ್ನ, ಕೃಷ್ಣ ಕೋಳಘಟ್ಟ, ಪುಟ್ಟಸ್ವಾಮಿ ದೇವರಸನಹಳ್ಳಿ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

ನೇರ ಗುತ್ತಿಗೆ ಆಧಾರದ ಮೇಲೆ ನೇಮಕಾತಿಗೆ ಅರ್ಜಿ ಆಹ್ವಾನ

ಮೈಸೂರು, ಜೂ.10–ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯದ ವತಿಯಿಂದ ಮೈಸೂರು ಜಿಲ್ಲೆಯಲ್ಲಿನ ಪಿರಿಯಾಪಟ್ಟಣ ಜನರಲ್ ಆಸ್ಪತ್ರೆಗೆ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಮಾದರಿಯಂತೆ ಮಂಜೂರಾಗಿರುವ (6) ಶುಶ್ರೂಷಾಧಿಕಾರಿ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ (ರೋಸ್ಟರ್ ಕಂ ಮೆರಿಟ್ ಆಧಾರಿತ) ನೇಮಕ ಮಾಡಲು ಅರ್ಹ ಅಭ್ಯರ್ಥಿಗಳಿಂದ ನೇರ ಸಂದರ್ಶನದ ಮೂಲಕ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಶುಶ್ರೂಷಾಧಿಕಾರಿ ಹುದ್ದೆಗೆ ಜನರಲ್ ನರ್ಸಿಂಗ್, ಬಿಎಸ್ಸಿ ನರ್ಸಿಂಗ್ (ಕರ್ನಾಟಕ ನರ್ಸಿಂಗ್ ಕೌನ್ಸಿಲ್‌ನ ನೋಂದಣಿ ಪ್ರಮಾಣ ಪತ್ರ ಕಡ್ಡಾಯ) ವಿದ್ಯಾರ್ಹತೆ ಹೊಂದಿರಬೇಕು, ರೂ.15,555/–, ಮಾಸಿಕ ಸಂಚಿತ ವೇತನ ಮಾತ್ರ, 6 ಹುದ್ದೆಗಳು, ಕರ್ತವ್ಯ ನಿರ್ವಹಿಸುವ ಸ್ಥಳ ಪಿರಿಯಾಪಟ್ಟಣ ಜನರಲ್ ಆಸ್ಪತ್ರೆ, ತಾಯಿ ಮತ್ತು ಮಕ್ಕಳ ಆಸ್ಪತ್ರೆ, ಕಾಲಾವಧಿ; ನೇಮಕಗೊಂಡು ಒಂದು ವರ್ಷ ಅವಧಿಗೆ ಮಾತ್ರ, ಹುದ್ದೆಗಳಿಗೆ ಅನ್ವಯಿಸುವಂತೆ ಸಾ.ಅ. 35 ಹಿಂದುಳಿದ ವರ್ಗ: 38, ಪರಿಶಿಷ್ಟ ಜಾತಿ: ಪರಿಶಿಷ್ಟ ಪಂಗಡ: 40 ವಯೋಮಿತಿಯನ್ನು ಹೊಂದಿರಬೇಕು. ನೇರ ಸಂದರ್ಶನವನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ, ನಜರ್‌ಬಾದ್, ಮೈಸೂರು–570010 ಇಲ್ಲಿ ಜೂ.16 ರಂದು ಬೆಳಗ್ಗೆ 10.30 ಗಂಟೆಗೆ ಆಸಕ್ತರು ದೃಢೀಕೃತ ದಾಖಲಾತಿಗಳೊಂದಿಗೆ ನೇರ ಸಂದರ್ಶನಕ್ಕೆ ಹಾಜರಾಗುವಂತೆ ಜಿಲ್ಲಾ ಮಟ್ಟದ ಗುತ್ತಿಗೆ ಆಧಾರಿತ ನೇಮಕಾತಿ ಸಮಿತಿ, ಸದಸ್ಯ ಕಾರ್ಯದರ್ಶಿ ಮತ್ತು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕನ್ನಡ ಪ್ರಾಧ್ಯಾಪಕರಿಗೆ ಪುನಶ್ಚೇತನ ಶಿಬಿರ



ಮಾನಸಗಂಗೋತ್ರಿಯ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ಮಾಳವಿಯ ಮಿಷನ್ ಶಿಕ್ಷಕರ ತರಬೇತಿ ಕೇಂದ್ರದಲ್ಲಿ ಆಯೋಜಿಸಿದ್ದ ಕನ್ನಡ ಪುನಶ್ಚೇತನ ಶಿಬಿರದಲ್ಲಿ ಜಾನಪದ ವಿದ್ವಾಂಸ ಪ್ರೊ.ಕೃಷ್ಣಮೂರ್ತಿ ಹನೂರು ಮಾತನಾಡಿದರು.

ಮೈಸೂರು,ಜೂ.10(ಎಂಟಿವೈ)– ರಾಘವಾಂಕನ ಕಾವ್ಯದಲ್ಲಿ ಸತ್ಯ ಮತ್ತು ಹರಿಹರನ ರಗಳೆಯಲ್ಲಿ ಭಕ್ತಿ ಬಹುದೊಡ್ಡ ಮೌಲ್ಯಗಳಾಗಿವೆ ಎಂದು ಜಾನಪದ ವಿದ್ವಾಂಸ ಪ್ರೊ.ಕೃಷ್ಣಮೂರ್ತಿ ಹನೂರು ವಿಶ್ಲೇಷಿಸಿದ್ದಾರೆ.

ಮಾನಸಗಂಗೋತ್ರಿಯ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ ವತಿಯಿಂದ ಮಾಳವಿಯ ಮಿಷನ್ ಶಿಕ್ಷಕರ ತರಬೇತಿ ಕೇಂದ್ರದಲ್ಲಿ ಕನ್ನಡ ಸಹಾಯಕ ಪ್ರಾಧ್ಯಾಪಕರಿಗಾಗಿ ಆಯೋಜಿಸಿದ್ದ 52ನೇ ಕನ್ನಡ ಪುನಶ್ಚೇತನ ಶಿಬಿರದಲ್ಲಿ 'ಹರಿಹರ ಮತ್ತು ಸಾಮಾಜಿಕತೆ, ರಾಘವಾಂಕ ಮತ್ತು ಸಾಮಾಜಿಕತೆ' ವಿಷಯ ಕುರಿತು ಮಾತನಾಡಿದ ಅವರು, ಹರಿಹರ ಕನ್ನಡ ಸಾಹಿತ್ಯದ ಮೊದಲ ಬಂಡಾಯಗಾರ ಎನಿಸಿದ್ದಾರೆ. ಹರಿಹರರು ದೇವರಿಗಿಂತಲೂ ಭಕ್ತರೇ ದೊಡ್ಡವರು ಎಂದು ನಂಬಿದ್ದರು. ಎಲ್ಲರೂ ಆತ್ಮ ಸಂತೋಷಕ್ಕಾಗಿ ಭಕ್ತಿ ಮತ್ತು ಧ್ಯಾನದಲ್ಲಿ ತಲ್ಲೀನರಾಗಬೇಕು. ಹರಿಹರನ ಮಾದಾರ ಚನ್ನಯ್ಯನ ರಗಳೆಯಲ್ಲಿ ಭಕ್ತಿ ಬಹುದೊಡ್ಡ ಮೌಲ್ಯವಾದರೆ, ರಾಘವಾಂಕನ ಹರಿಶ್ಚಂದ್ರ ಕಾವ್ಯದಲ್ಲಿ ಸತ್ಯ ಬಹುದೊಡ್ಡ ಮೌಲ್ಯವಾಗಿ ಸ್ವೀಕೃತವಾಗುತ್ತದೆ. ಈ ಕಾವ್ಯವನ್ನು ಜನ ಕೇಳಿ ತಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ವಚನ ಚಳವಳಿಯು ಸಂತ ಮಾರ್ಗ. ಹಿಂದಿನ ಯುದ್ಧ ಮಾರ್ಗಕ್ಕಿಂತ ಭಿನ್ನವಾದದ್ದು. ಕಾಂಚಾಣವೆಂಬ ನಾಯನೆಚ್ಚಿ ಕೆಟ್ಟನಯ್ಯ ಎನ್ನುತ್ತಾರೆ ಬಸವಣ್ಣ. ವಚನ ಸಾಹಿತ್ಯ ಸ್ವಾನುಭವದ ಮಾತುಗಳಿಂದ ಕೂಡಿದೆ. ಇದರ ಬಹುದೊಡ್ಡ ಆಶಯ ಕಾಯಕ. ಮೈಸೂರು ವಿಶ್ವವಿದ್ಯಾನಿಲಯದ ಕ್ಯಾಂಪಸ್ ಸೌಂದರ್ಯ ಜಗತ್ತಿನ ಯಾವ ವಿಶ್ವವಿದ್ಯಾನಿಲಯದಲ್ಲೂ ಇಲ್ಲ. ಜಗತ್ತಿನ ಬೇರೆ ಬೇರೆ ಅಭಿವೃದ್ಧಿಶೀಲ ವಿವಿಗಳು ಬೇರೆ ರೀತಿ ಅಭಿವೃದ್ಧಿಯಾಗಿವೆ. ಸೌಂದರ್ಯದಲ್ಲಿ ನಮ್ಮ ಮಾನಸಗಂಗೋತ್ರಿ ಮೀರಿಸುವ ವಿವಿ ಮತ್ತೊಂದಿಲ್ಲ ಎಂದು ಬಣ್ಣಿಸಿದರು.

ಕಾರ್ಯಕ್ರಮದಲ್ಲಿ ಶಿಬಿರದ ಸಂಯೋಜಕ, ಪ್ರಸಾರಾಂಗದ ನಿರ್ದೇಶಕ ಡಾ.ನಂಜಯ್ಯ ಎಂ.ಹೊಂಗನೂರು, ಮಾಳವಿಯ ಮಿಷನ್ ಶಿಕ್ಷಕ ತರಬೇತಿ ಕೇಂದ್ರ ನಿರ್ದೇಶಕಿ ಪ್ರೊ.ಜ್ಯೋತಿ ಎಚ್, ಸಹಾಯಕ ಪ್ರಾಧ್ಯಾಪಕ ಡಾ.ಎಲ್.ನಂಜುಂಡಸ್ವಾಮಿ, ಶಿಬಿರಾರ್ಥಿಗಳು ಉಪಸ್ಥಿತರಿದ್ದರು.

ಸಾವಿನ ಮನೆಯಲ್ಲಿ ರಾಜಕೀಯ ಬೇಡ




ಕೆ.ವಿ.ಮಲ್ಲೇಶ್

ಮೈಸೂರು,ಜೂ.10–ಕಾಲ್ತುಳಿತ ಪ್ರಕರಣಕ್ಕೆ ರಾಜ್ಯ ಸರಕಾರವೇ ಕಾರಣ ಎಂಬಂತೆ ಬಿಂಬಿಸಲು ಯತ್ನಿಸುತ್ತಿರುವ ವಿರೋಧ ಪಕ್ಷಗಳ ನಡೆ ಸರಿಯಲ್ಲ. ಕಾಲ್ತುಳಿತ ಘಟನೆ ಅನಿರೀಕ್ಷಿತವೇ ಹೊರತು ಉದ್ದೇಶಪೂರ್ವಕವಲ್ಲ. ಇಂತಹ ಸಂದಿಗ್ಧ ಪರಿಸ್ಥಿತಿಯಲ್ಲಿ ಈ ಘೋರ ದುರಂತಕ್ಕೆ ಮರುಗುವ, ಸಂತ್ರಸ್ತರಿಗೆ ನೆರವಾಗಬೇಕೇ ಹೊರತು ಹಳ್ಳಕ್ಕೆ ಬಿದ್ದವರಿಗೆ ಆಳಿಗೊಂದು ಕಲ್ಲು ಎಂಬಂತೆ ವಿಪಕ್ಷಗಳು ವರ್ತಿಸಬಾರದು ಎಂದು ನಗರಪಾಲಿಕೆ ಮಾಜಿ ಸದಸ್ಯ ಕೆ.ವಿ.ಮಲ್ಲೇಶ್ ಕಿವಿಮಾತು ಹೇಳಿದ್ದಾರೆ.

18 ವರ್ಷಗಳ ನಂತರ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಟ್ರೋಫಿ ಗೆದ್ದ ಖುಷಿಯನ್ನು ಇಡೀ ಕರುನಾಡು ಸಂಭ್ರಮಿಸಿತು. ಅಭಿಮಾನಿಗಳ ಸಂಭ್ರಮವನ್ನು ಕಂಡ ರಾಜ್ಯ ಸರಕಾರ ಕೂಡ ಜನರ ಭಾವನೆಗಳಿಗೆ ಪ್ರತಿಸ್ಪಂದನೆಯಾಗಿ ಅಭಿನಂದನಾ ಸಮಾರಂಭವನ್ನು ಆಯೋಜಿಸಿತು. ಕೆಲ ದಿನಗಳ ನಂತರ ಅಭಿನಂದನಾ ಸಮಾರಂಭ ಆಯೋಜಿಸಬಹುದಿತ್ತು. ಆದರೆ, ಆಟಗಾರರು ಇಂಗ್ಲೆಂಡ್ ಟೆಸ್ಟ್ ಟೂರ್ನಿಗೆ ತೆರಳಬೇಕಾದ ಹಿನ್ನೆಲೆಯಲ್ಲಿ ಅಂದೇ ಆತುರಾತುರವಾಗಿ ಅಭಿನಂದನಾ ಸಮಾರಂಭ ಆಯೋಜಿಸಬೇಕಾಯಿತು. ಆದರೆ, ಸಮಾರಂಭ ಆಯೋಜಿಸಿದಾಗ ಸಮಯದ ಬಗ್ಗೆಯಾಗಲಿ, ಕಾರ್ಯಕ್ರಮದ ಬಗ್ಗೆಯಾಗಲೀ ವ್ಯಕ್ತವಾಗದ ವಿರೋಧ, ಕೊಂಕು ನುಡಿಗಳು ದುರಂತ ನಡೆದ ಮೇಲೆ ವ್ಯಕ್ತವಾಗುತ್ತಿರುವುದು ದುರಂತ.

ಅದೊಂದು ಖಾಸಗಿ ತಂಡ, ಅದರ ಮಾಲೀಕರು ಕರುನಾಡಿನವರಲ್ಲ, ಅದು ಜೂಜು ಎಲ್ಲವೂ ಸರಿ. ಆದರೆ, ಇಷ್ಟು ವರ್ಷ ಈ ಬಗ್ಗೆ ಏಕೆ ಚರ್ಚೆ ನಡೆಯಲಿಲ್ಲ? ಈಗಲೂ ಐಪಿಎಲ್ ಬ್ಯಾನ್ ಮಾಡಿ, ಬೇಡ ಎಂದವರ‍್ಯಾರು. ರಾಯಲ್ ಚಾಲೆಂಜರ್ಸ್ ತಂಡದ ಹೆಸರಿನಲ್ಲಿರುವ 'ಬೆಂಗಳೂರು' ಹೆಸರು ತೆಗೆಸಲು ಕ್ರಮ ಕೈಗೊಳ್ಳಿ, ಬೇಡ ಎಂದವರ‍್ಯಾರು. ಆಟಕ್ಕೆ ಗಡಿಗಳಿಲ್ಲ, ಅದು ಎಲ್ಲ ಎಲ್ಲೆಗಳನ್ನು ಮೀರಿದ ಜಾತ್ಯತೀತ ಕೂಟ. ಅದನ್ನೂ ಜಾತಿ, ಧರ್ಮ, ಭಾಷೆಯ ಗಡಿಗಳೊಳಗೆ ಬಂಧಿಸುವುದು ಎಷ್ಟು ಸರಿ. ಇಷ್ಟು ಸಣ್ಣ ವಿಷಯವೂ ಅರ್ಥವಾಗದಂತೆ ವರ್ತಿಸುವುದು ಮೂರ್ಖತನವಲ್ಲದೇ ಮತ್ತೇನು? ಎಂದು ಮಲ್ಲೇಶ್ ಛೇಡಿಸಿದ್ದಾರೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

11.06.2025 ಬುಧವಾರ, ಮಳೆ ನಕ್ಷತ್ರ: ಮೃಗಶಿರ, 08.06.2025 ರಿಂದ 21.06.2025
ವಿಶ್ವವಸು ನಾಮ ಸಂವತ್ಸರ, ಉತ್ತರಾಯಣ, ಗ್ರೀಷ್ಮ ಋತು, ಜ್ಯೇಷ್ಠ ಮಾಸ, ಶುಕ್ಲ ಪಕ್ಷ,
ತಿಥಿ: ಹುಣ್ಣಿಮೆ, ನಕ್ಷತ್ರ: ಜ್ಯೇಷ್ಠ, ರಾಹುಕಾಲ: ಮಧ್ಯಾಹ್ನ 12 ರಿಂದ 1.30ರವರೆಗೆ

■ **ಅವಧೂತ ದತ್ತ ಪೀಠ, ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮ:** ವಿಶ್ವದ ಮೊಟ್ಟ ಮೊದಲ ವಿಶಿಷ್ಟ ಕಾರ್ಯಕ್ರಮ ವನ ದುರ್ಗಾ ವೃಕ್ಷಶಾಂತಿ ಮಹಾಯಜ್ಞ, ಸಹಸ್ರ ಚಂಡೀ ಯಾಗ, ಸ್ಥಳ: ಅವಧೂತ ದತ್ತ ಪೀಠ, ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮ, ಊಟಿ ರಸ್ತೆ, ಬೆಳಗ್ಗೆಯಿಂದ.

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಸಂಧಿವಾತಕ್ಕೆ ಚಿಕಿತ್ಸಾ ಶಿಬಿರ, ಗರ್ಭಾಶಯ ಮುಖದಲ್ಲಿ ಹುಣ್ಣು (ಸರ್ವೈಕಲ್ ಎರೋಷನ್) ಶಿಬಿರ, ಯೋಗ ಮಾಡಿ ಆರೋಗ್ಯವಾಗಿರಿ, ದೇಹ ಮನಸ್ಸುಗಳ ಆರೋಗ್ಯಕ್ಕಾಗಿ ಯೋಗಾಭ್ಯಾಸ ತರಗತಿ (ಬೆಳಗ್ಗೆ 6.30ರಿಂದ 7ರವರೆಗೆ), ಕಾರ್ನಿಯಲ್ ಒಪೇಸಿಟಿ (ಕಾರ್ನಿಯಾದ ಅಪಾರದರ್ಶಕತೆ, ಕಣ್ಣಿನ ಹೂ)ಗೆ ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಆಲನಹಳ್ಳಿ, ಬೆಳಗ್ಗೆ 9ರಿಂದ.

■ **ಕಾವೇರಿ ಆಯುರ್ವೇದ ಆಸ್ಪತ್ರೆ:** ಉತ್ತಮ ನಿದ್ರೆ ಅಭ್ಯಾಸ ಮತ್ತು ನಿದ್ರೆ ಸಮಸ್ಯೆ ನಿವಾರಣೆಯ ಶಿಬಿರ, ವೆರಿಕೋಸ್ ವೇನ್ಸ್, ಉಬ್ಬಿದ ರಕ್ತನಾಳ, ಹಸಿರುಂಬು, ಇಸಬು ರೋಗ, ಬಂಗು, ಅಲರ್ಜಿ ಚರ್ಮರೋಗ ತಪಾಸಣಾ ಶಿಬಿರ, ಸ್ಥಳ: ಕಾವೇರಿ ಆಯುರ್ವೇದ ಆಸ್ಪತ್ರೆ, ದೇವೇಗೌಡ ಸರ್ಕಲ್ ಹತ್ತಿರ, ಕೆಬಿಎಲ್ ಲೇಔಟ್, ಬೆಳಗ್ಗೆ 10 ಗಂಟೆಯಿಂದ.

■ **ಮಹಾರಾಜ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ:** ಉಚಿತ ಆರೋಗ್ಯ ತಪಾಸಣಾ ಶಿಬಿರ, ಉದ್ಘಾಟನೆ: ಮಹಾರಾಜ ಎಜುಕೇಷನ್ ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷ ಡಾ.ಎಸ್. ಮುರಳಿ, ಮುಖ್ಯ ಅತಿಥಿಗಳು: ಚಂದಗಾಲು ಗ್ರಾಪಂ ಅಧ್ಯಕ್ಷ ಜವರಪ್ಪ, ಉಪಾಧ್ಯಕ್ಷೆ ಶ್ರೀಮತಿ ಸುಮಾ, ಪಿಡಿಓ ಶ್ರೀಮತಿ ಶಿಲ್ಪ, ಸ್ಥಳ: ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಚಂದಗಾಲು, ಬೆಳಗ್ಗೆ 10ರಿಂದ.

■ **ಮೈಸೂರು ಜಿಲ್ಲಾ ಪ್ರಾಕೃತಿಕ ಚಿಕಿತ್ಸಾ ಪರಿಷತ್:** ಆಕ್ಯೂಪ್ರೆಶರ್, ಸು–ಜೋಕ್ ಮತ್ತು ಆಕ್ಯೂ ಡಿಜಿಟಲ್ ಫಿಶಿಯೋ ಥೆರಪಿ ಚಿಕಿತ್ಸಾ ಶಿಬಿರ, ಸ್ಥಳ: ಇನ್ನರ್ ವ್ಹೀಲ್, ರೋಟರಿ ಭವನ, ವಿಜಯನಗರ, ರೈಲ್ವೆ ಬಡಾವಣೆ, ಬೆಳಗ್ಗೆ 10.30ಕ್ಕೆ.

■ **ಕರ್ನಾಟಕ ರಾಜ್ಯ ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾನಿಲಯ:** ಖ್ಯಾತ ಸರೋದ್ ವಾದಕರಾಗಿದ್ದ ಪಂಡಿತ್ ರಾಜೀವ ತಾರಾನಾಥರ ಸ್ಮರಣೆ, ಗಣೇಶ ಅಮೀನಗಡ ಹಾಗೂ ರಘುಪತಿ ತಾಮ್ಹನ್ ಕರ್ ಸಂಪಾದಿಸಿದ ಪಂ.ರಾಜೀವ ತಾರಾನಾಥರ ಕುರಿತ 'ಸರೋದ್ ಸ್ವರಯಾನ' ಕೃತಿಯ ಮೂರನೆಯ ಮುದ್ರಣ ಬಿಡುಗಡೆ ಸಮಾರಂಭ, ಕೃತಿ ಬಿಡುಗಡೆ : ಸಿತಾರ್ ವಾದಕಿ ಹಾಗೂ ಲೇಖಕಿ ಸಿ.ಎಸ್.ಸರ್ವಮಂಗಳಾ, ಉಪಸ್ಥಿತರು : ಹಿರಿಯ ರಂಗಕರ್ಮಿ ಕಪ್ಪಣ್ಣ, ಸಂಗೀತ ವಿವಿಯ ಕುಲಸಚಿವ (ಮೌಲ್ಯಮಾಪನ) ಪ್ರೊ.ಎಂ.ಜಿ.ಮಂಜುನಾಥ್, ಸಂಗೀತ ವಿವಿಯ ಹಣಕಾಸು ಅಧಿಕಾರಿಗಳು ಹಾಗೂ ಪ್ರಭಾರ ಕುಲಸಚಿವರಾದ ರೇಖಾ, ಅಧ್ಯಕ್ಷತೆ : ಸಂಗೀತ ವಿವಿ ಕುಲಪತಿ ಡಾ.ನಾಗೇಶ್ ವಿ.ಬೆಟ್ಟಕೋಟೆ, ಸ್ಥಳ: ಕರ್ನಾಟಕ ರಾಜ್ಯ ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ, ಬೆಳಗ್ಗೆ 11ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಜೈ ಹಿಂದ್–ದೇಶ ರಕ್ಷಣೆಯ ವೀರರಿಗೆ ಬಾನುಲಿ ನಮನ, ಪ್ರಸ್ತುತಿ–ಎಸ್. ಲಕ್ಷ್ಮೀನಾರಾಯಣ, 6.40 ಅರಿವಿನ ಶಿಖರ : ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಸದಾಶಿವ ಪಾಟೀಲ್, ರೋಹಿಣಿ ಸುಧಾಮ್ ಹಾಗೂ ನಿತಿನ್ ರಾಜಾರಾಂ ಶಾಸ್ತ್ರೀ, ವ್ಯಾಖ್ಯಾನ–ಡಾ. ಕಬ್ಬಿನಾಲೆ ವಸಂತ ಭಾರದ್ವಾಜ್, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು–ಎಸ್. ಸುನೀತಾ, 8.30ಯೋಗ ಕುರಿತ ವಿಶೇಷ ಸರಣಿ ಮಹಾಯೋಗ, 8.35 ಯೋಗದತ್ತ ಜಗತ್ತು–ಯೋಗ ಕುರಿತ ವಿಶೇಷ ಕಾರ್ಯಕ್ರಮ ಸರಣಿ, 8.50 ಚಿತ್ರಗೀತೆಗಳು, 9.00 ವೃತ್ತಿ ಮಾರ್ಗದರ್ಶನ, 9.30 ಚಿತ್ರಗೀತೆಗಳು, 10.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ, ಅಲಿ ಅಹಮದ್ ಖಾನ್–ಸರೋದ್ ವಾದನ, 10.30 ಹಿಂದಿ ಚಿತ್ರಗೀತೆಗಳು, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹಾಗೂ ಮಿಶ್ರಮಾಧುರ್ಯ

ಮಧ್ಯಾಹ್ನ: 12.05 ವನಿತಾ ವಿಹಾರ, 12.35 ದೇವರನಾಮ, 12.45 ಜನಪದ ಸಂಗೀತ, 1.00 ಪ್ರಗತಿ ಪಥ –ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಕುರಿತು ಸರಣಿ, 1.20 ಭಾವಗೀತೆಗಳು–ಶಂಕರ್ ಶಾನುಭೋಗ್, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ, ಎ. ಎನ್.ಕಿಸನ್–ವೀಣಾವಾದನ, 4.00 ಮಹಿಳಾ ರಂಗ, 4.30 ಹಿಂದಿ ಚಿತ್ರಗೀತೆಗಳು, 4.45 ಹಿಂದಿ ಪಾಠ, ಪ್ರಸ್ತುತಿ–ಎಸ್. ಈಶ್ವರ್ ಭಟ್, 5.05 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ–ಕೃಷಿ ವಿಜ್ಞಾನ ಕೇಂದ್ರದ ವಿಸ್ತರಣಾ ಚಟುವಟಿಕೆಗಳನ್ನು ಕುರಿತ ಸಂವಾದ, ಭಾಗವಹಿಸುತ್ತಾರೆ–ಚಾಮರಾಜನಗರ ತಾಲೂಕು ಹರದನಹಳ್ಳಿಯ ಕೃಷಿ ವಿಜ್ಞಾನ ಕೇಂದ್ರದ ಮುಖ್ಯ ವಿಜ್ಞಾನಿ ಡಾ. ಜಿ. ಎಸ್. ಯೋಗೀಶ್ ಹಾಗೂ ಚಾಮರಾಜನಗರ ತಾಲೂಕು ಅಂಕನ ಶೆಟ್ಟಿಪುರದ ಸೌಹಾರ್ದ ರೈತ ಉತ್ಪಾದಕ ಸಂಸ್ಥೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸಿ.ಸುರೇಶ್, ಪ್ರಸ್ತುತಿ: ಎನ್.ಕೇಶವಮೂರ್ತಿ, 7.35 ಕನ್ನಡದಲ್ಲಿ ವಾರ್ತೆಗಳು, 7.45 ಕನ್ನಡ ಚಿತ್ರಗೀತೆಗಳು, 8.00 ಕರ್ನಾಟಕ ಶಾಸ್ತ್ರೀಯ ಸಂಗೀತ, ಸಿ.ಎಸ್. ಕೇಶವಚಂದ್ರ–ಕೊಳಲು ವಾದನ, 8.30 ಹಿಂದಿ ಚಿತ್ರಗೀತೆಗಳು, 9.30 ಕ್ರೀಡಾಲೋಕ, 10.00 ಹಳ್ಳಿ ಹಾಡು, ಭಾಗವಹಿಸುತ್ತಾರೆ–ಚಾಮರಾಜನಗರ ಜಿಲ್ಲೆ ದೊಡ್ಡಮೋಳೆಯ ದೊಡ್ಡಗವಿ ಬಸಪ್ಪ ಇವರೊಂದಿಗೆ ಭಾಗವಹಿಸುತ್ತಾರೆ–ಡಾ. ಮೈಸೂರು ಉಮೇಶ್, 10.30 ಸವಿನೆನಪು–ಹಳೆಯ ಕನ್ನಡ ಚಿತ್ರಗೀತೆಗಳು

■ **ಸುರಭಿ ಗಾನ ಕಲಾಮಂದಿರ ಚಾರಿಟಬಲ್ ಟ್ರಸ್ಟ್:** ಕರ್ನಾಟಕ ಶಾಸ್ತ್ರೀಯ ಸಂಗೀತ ಅಧ್ಯಯನ ಶಿಬಿರ–2025, ಸ್ಥಳ: #510, 13ನೇ ಮುಖ್ಯ ರಸ್ತೆ, ಸರಸ್ವತಿಪುರಂ, ಸಂಜೆ 4.30ರಿಂದ.

■ **ಶ್ರೀ ಸುತ್ತೂರು ಮಠ :** ಬೆಳದಿಂಗಳ ಸಂಗೀತ–280, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ವಿದುಷಿ ಡಾ. ರಂಜನಿ ವಾಸುಕಿ ಅವರಿಂದ ಗಾಯನ, ವಿದ್ವಾನ್ ಜಿ. ವೆಂಕಟೇಶ್ ಜೋಸ್ಯರ್–ವಯೋಲಿನ್, ವಿದ್ವಾನ್ ಫಣೀಂದ್ರ ಭಾಸ್ಕರ–ಮೃದಂಗ, ವಿದ್ವಾನ್ ಶರತ್ ಕೌಶಿಕ್–ಘಟಂ, ಸ್ಥಳ: ಶ್ರೀ ಸುತ್ತೂರು ಮಠ, ಚಾಮುಂಡಿಬೆಟ್ಟದ ತಪ್ಪಲು, ಸಂಜೆ 6ಕ್ಕೆ.

ಸರಗೂರಿನಲ್ಲಿಂದು

■ **ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಪಡುವಲು ಶ್ರೀ ವಿರಕ್ತಮಠ, ಬಿಡಗಲು, ಸರಗೂರು ಟೌನ್, ತಾಲೂಕು ಶರಣ ಸಾಹಿತ್ಯ ಪರಿಷತ್ತು ಸರಗೂರು:** ದತ್ತಿ ಉಪನ್ಯಾಸ ಕಾರ್ಯಕ್ರಮ, ಸಾನ್ನಿಧ್ಯ : ಪಡುವಲು ಶ್ರೀ ವಿರಕ್ತ ಮಠ ಬಿಡಗಲು ಶ್ರೀ ಮಹದೇವಸ್ವಾಮೀಜಿ, ಉಪಸ್ಥಿತರು : ಕುರಹಟ್ಟಿ ಶ್ರೀ ಗುರುಮಲ್ಲೇಶ್ವರ ದಾಸೋಹ ಮಠದ ಶ್ರೀ ಮಾದಪ್ಪ ಸ್ವಾಮೀಜಿ, ಭುಜಗಯ್ಯನಹುಂಡಿ ಶ್ರೀ ಗುರುಮಲ್ಲೇಶ್ವರ ದಾಸೋಹ ಮಠದ ಶ್ರೀ ಶಿವಲಿಂಗೇಂದ್ರ ಸ್ವಾಮೀಜಿ, ಉದ್ಘಾಟನೆ: ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಅಧ್ಯಕ್ಷ ಎಂ.ಎನ್.ನಂದೀಶ್‌ಕುಮಾರ್ ಮೂಡ್ಲುಪುರ, ಅಧ್ಯಕ್ಷತೆ : ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ. ಹೆಳವರಹುಂಡಿ ಸಿದ್ದಪ್ಪ, ಪ್ರೊ.ಮೊರಬದ ಮಲ್ಲಿಕಾರ್ಜುನ ಅವರಿಂದ ಬಸವಣ್ಣನವರ ಸಾಮಾಜಿಕ ಸಂದೇಶಗಳು ಕುರಿತು ಉಪನ್ಯಾಸ, ಮುಖ್ಯ ಅತಿಥಿಗಳು: ಮಹಾಸಭಾ ಅಧ್ಯಕ್ಷ ಸಿ.ಎಸ್.ಅರ್ಜುನ್, ಕೊಳ್ಳೇಗಾಲ ಶರ್ಮಾ, ಎಂ.ಚಂದ್ರಶೇಖರ್, ಕೆ.ಗುರುಸ್ವಾಮಿ, ಸ್ಥಳ: ಪಡುವಲು ಶ್ರೀ ವಿರಕ್ತಮಠ, ಬಿಡಗಲು, ಸರಗೂರು.

ಮೈಸೂರು ಮಿತ್ರ

ರೈತ ಸಂಘಟನೆಗಳ ತೀವ್ರ ವಿರೋಧದ ಹಿನ್ನೆಲೆ

ಕೆಆರ್‌ಎಸ್‌ನಲ್ಲಿ ಉದ್ದೇಶಿತ 'ಕಾವೇರಿ ಆರತಿ'ಗೆ ತಡೆ

ಮೈಸೂರು, ಜೂ. 10(ಆರ್‌ಕೆ)– ಮಂಡ್ಯ ಜಿಲ್ಲೆ ಶ್ರೀರಂಗಪಟ್ಟಣ ತಾಲೂಕು ಕೃಷ್ಣರಾಜಸಾಗರ (ಕೆಆರ್‌ಎಸ್)ದ ಬೃಂದಾವನದಲ್ಲಿ ನಡೆಸಲುದ್ದೇಶಿಸಿದ್ದ 'ಕಾವೇರಿ ಆರತಿ' ಕಾರ್ಯಕ್ರಮದ ಕಾಮಗಾರಿಗೆ ತಾತ್ಕಾಲಿಕ ತಡೆ ನೀಡಲಾಗಿದೆ.

ಗಂಗಾರತಿ ಮಾದರಿಯಲ್ಲಿ ಕಾವೇರಿ ಆರತಿಯನ್ನು ವಾರದ ಮೂರು ದಿನ (ಶುಕ್ರವಾರ, ಶನಿವಾರ ಮತ್ತು ಭಾನುವಾರ) ಮುಂಬರುವ ದಸರಾದಿಂದ ನಡೆಸಲು ಸರ್ಕಾರ ನಿರ್ಧರಿಸಿದೆ. ಮೂಲಸೌಕರ್ಯ ಅಭಿವೃದ್ಧಿಪಡಿಸಲು ಕಾಮಗಾರಿಗೆ ಟೆಂಡರ್ ಕರೆದು ಕೆಲಸವನ್ನೂ ಆರಂಭಿಸಲಾಗಿತ್ತು.

ಕಾವೇರಿ ಆರತಿ ಕಾಮಗಾರಿಗೆ ಸ್ಥಳೀಯ ರೈತ ಸಂಘಟನೆಗಳು ಪ್ರತಿಭಟನೆ ನಡೆಸಿ ತೀವ್ರ ಆಕ್ಷೇಪ ವ್ಯಕ್ತಪಡಿಸಿದ ಹಿನ್ನೆಲೆಯಲ್ಲಿ ಜಲಸಂಪನ್ಮೂಲ ಇಲಾಖೆ ಹಿರಿಯ ಅಧಿಕಾರಿಗಳು ಸದ್ಯಕ್ಕೆ ಕಾಮಗಾರಿಯನ್ನು ಸ್ಥಗಿತಗೊಳಿಸುವಂತೆ ಕಾವೇರಿ ನೀರಾವರಿ ನಿಗಮ ನಿಯಮಿತ (ಸಿಎನ್‌ಎನ್‌ಎಲ್)ದ ಅಧಿಕಾರಿಗಳಿಗೆ ಮೌಖಿಕವಾಗಿ ತಿಳಿಸಿದ್ದಾರೆ.

ಕೆಆರ್‌ಎಸ್ ಅಣೆಕಟ್ಟೆಗೆ ಅಪಾಯ ಸಂಭವಿಸುವ ಯಾವುದೇ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಬಾರದು, ಬೃಂದಾವನದ ಸೌಂದರ್ಯಕ್ಕೆ ಧಕ್ಕೆ ಉಂಟುಮಾಡುವ ಕೆಲಸ ಮಾಡಬಾರದೆಂಬುದು ರೈತರು, ಸ್ಥಳೀಯರ ಆಗ್ರಹವಾಗಿದೆ.

ಈ ಹಿಂದೆ ಕಾಂಗ್ರೆಸ್–ಜೆಡಿಎಸ್ ಸಮ್ಮಿಶ್ರ ಸರ್ಕಾರದಲ್ಲಿ ಡಿಸ್ನಿಲ್ಯಾಂಡ್ ಮಾದರಿಯಲ್ಲಿ ಕೆಆರ್‌ಎಸ್ ಅಭಿವೃದ್ಧಿಪಡಿಸುವ ಬೃಹತ್ ಯೋಜನೆ ಅನುಷ್ಠಾನಗೊಳಿಸಲು ಮುಂದಾಗಿತ್ತಾದರೂ, ರೈತ ಸಂಘಟನೆಗಳು, ಪರಿಸರ ಪ್ರೇಮಿಗಳು ತೀವ್ರ ವಿರೋಧ ವ್ಯಕ್ತಪಡಿಸಿದ ಕಾರಣ ಯೋಜನೆಯನ್ನು ಸ್ಥಗಿತಗೊಳಿಸಲಾಗಿತ್ತು.

ತದನಂತರ ಅಧಿಕಾರಕ್ಕೆ ಬಂದ ಬಿಜೆಪಿ ಸರ್ಕಾರ ಸಹ ಈ ಯೋಜನೆ ಕೈಗೆತ್ತಿಕೊಳ್ಳುವ ಸಾಹಸಕ್ಕೆ ಕೈ ಹಾಕಿರಲಿಲ್ಲ. ಪ್ರಸ್ತುತ ಕಾಂಗ್ರೆಸ್ ಸರ್ಕಾರವು ಮತ್ತೆ ಡಿಸ್ನಿಲ್ಯಾಂಡ್ ಮಾದರಿಯಲ್ಲೇ ಮಾರ್ಪಾಡುಗಳೊಂದಿಗೆ ಮಾಡಿ ಕೆಆರ್‌ಎಸ್ ಸಮಗ್ರ ಅಭಿವೃದ್ಧಿ ಮಾಡಲು ಯೋಜನೆ ರೂಪಿಸಿದೆಯಾದರೂ ಈ ಯೋಜನೆ ಜಾರಿಗೊಳಿಸುವುದಕ್ಕೂ ರೈತ ಸಂಘಟನೆಗಳು ಹಾಗೂ ಪರಿಸರ ಪ್ರೇಮಿಗಳು ಆಕ್ಷೇಪ ವ್ಯಕ್ತಪಡಿಸಿರುವುದರಿಂದ ಅದೂ ಸಹ ಸ್ಥಗಿತಗೊಂಡಿದೆ. ಅಂತರರಾಷ್ಟ್ರೀಯ ಮಟ್ಟದಲ್ಲಿ ಬೃಂದಾವನ ಅಭಿವೃದ್ಧಿಪಡಿಸುವ ಕಾಮಗಾರಿಗೆ ಕಾವೇರಿ ನೀರಾವರಿ ನಿಗಮವು 2024ರ ಸೆಪ್ಟೆಂಬರ್ 9ರಂದು ಟೆಂಡರ್ ಕರೆದಿತ್ತಾದರೂ, ಪ್ರಕ್ರಿಯೆ ಪೂರ್ಣಗೊಳ್ಳದೇ ಇಡೀ ಯೋಜನೆ ಸ್ಥಗಿತಗೊಂಡಿದೆ.

ಬೆಂಗಳೂರು ಕಾಲ್ತುಳಿತ

ರಾಜ್ಯ ಸರ್ಕಾರದ ವಿರುದ್ಧ ಜೂ.13ಕ್ಕೆ ಬಿಜೆಪಿ ಬೃಹತ್ ಪ್ರತಿಭಟನೆ



ಶಿವಮೊಗ್ಗ, ಜೂ.10– ರಾಯಲ್ ಚಾಲೆಂಜರ್ಸ್ ಬೆಂಗಳೂರು (ಆರ್‌ಸಿಬಿ) ತಂಡದ ವಿಜಯೋತ್ಸವದ ಸಂದರ್ಭದಲ್ಲಿ ಜೂನ್ 4 ರಂದು 11 ಜೀವಗಳನ್ನು ಬಲಿ ಪಡೆದ ಚಿನ್ನಸ್ವಾಮಿ ಕ್ರೀಡಾಂಗಣದ ಹೊರಗೆ ಸಂಭವಿಸಿದ ಕಾಲ್ತುಳಿತಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರದ ವಿರುದ್ಧ ಬೃಹತ್ ಪ್ರತಿಭಟನೆ ನಡೆಸಲು ಯೋಜಿಸಲಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಘೋಷಿಸಿದ್ದಾರೆ.

ಮಂಗಳವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರವನ್ನು ಉರುಳಿಸುವವರೆಗೆ ಪ್ರತಿಭಟನೆ ನಡೆಸಲು ಬಿಜೆಪಿ ನಿರ್ಧರಿಸಿದೆ ಎಂದು ಹೇಳಿದರು.

ಜೂನ್ 13ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಯಲಿದೆ. ಬಿಜೆಪಿ ಕಾರ್ಯಕರ್ತರು, ಮೃತ ಕುಟುಂಬಗಳ ಸದಸ್ಯರು ಮತ್ತು ಘಟನೆಯ ಸಂತ್ರಸ್ತರು ಭಾಗವಹಿಸಲಿದ್ದಾರೆ. ಸುಮಾರು 15,000–20,000 ಪ್ರತಿಭಟನಾಕಾರರು ಸೇರುವ ನಿರೀಕ್ಷೆಯಿದೆ ಎಂದು ಅವರು ಹೇಳಿದರು.

ಆರ್‌ಸಿಬಿ, ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ (ಕೆಎಸ್‌ಸಿಎ) ಮತ್ತು ಈವೆಂಟ್ ಮ್ಯಾನೇಜ್‌ಮೆಂಟ್ ಕಂಪನಿ ಡಿಎನ್‌ಎ ಆರೋಪಿಗಳಲ್ಲ. ಘಟನೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮೊದಲ ಆರೋಪಿ, ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಎರಡನೇ ಆರೋಪಿ ಮತ್ತು ಗೃಹ ಸಚಿವ ಪರಮೇಶ್ವರ್ ಮೂರನೇ ಆರೋಪಿಯಾಗಿದ್ದಾರೆ. ನಂತರದ ಜವಾಬ್ದಾರಿ ಆರ್‌ಸಿಬಿ, ಕೆಎಸ್‌ಸಿಎ ಮತ್ತು ಡಿಎನ್‌ಎ ಮೇಲೆ ಇರುತ್ತವೆ ಎಂದು ಹೇಳಿದ್ದಾರೆ.


ಬಿಜೆಪಿ ಈ ಪ್ರಕರಣದ ತನಿಖೆಯನ್ನು ಹೈಕೋರ್ಟ್‌ನ ಹಾಲಿ ನ್ಯಾಯಾಧೀಶರಿಂದ ನಡೆಸಬೇಕೆಂದು ಒತ್ತಾಯಿಸಿತ್ತು. ಆದರೆ, ಸರ್ಕಾರ ತನಿಖೆಯನ್ನು ಅಪರಾಧ ತನಿಖಾ ಇಲಾಖೆಗೆ (ಸಿಐಡಿ) ವಹಿಸಿತು. ಅಲ್ಲದೆ, ನಿವೃತ್ತ ಹೈಕೋರ್ಟ್ ನ್ಯಾಯಾಧೀಶರಿಂದಲೂ ತನಿಖೆಗೂ ಆದೇಶಿಸಿದೆ.

ರಾಜ್ಯ ಸರ್ಕಾರಕ್ಕೆ ಕ್ಲೀನ್ ಚಿಟ್ ನೀಡಲು ಅಧಿಕಾರಿಗಳನ್ನು ದೂಷಿಸಲು ಮತ್ತು ಜವಾಬ್ದಾರಿಯಿಂದ ನುಣುಚಿಕೊಳ್ಳಲು ರಾಜ್ಯ ಸರ್ಕಾರ ತಮಗಿಷ್ಟವಾದ ವ್ಯಕ್ತಿಯನ್ನು ನೇಮಿಸಿಕೊಂಡಿದೆ. ರಾಜ್ಯ ಸರ್ಕಾರಕ್ಕೆ ನಾಚಿಕೆ ಇದ್ದರೆ, ಹೈಕೋರ್ಟ್‌ನ ಹಾಲಿ ನ್ಯಾಯಾಧೀಶರಿಂದ ತನಿಖೆ ನಡೆಸುವಂತೆ ನೋಡಿಕೊಳ್ಳಬೇಕು. ಸರ್ಕಾರ ಜವಾಬ್ದಾರಿಯಿಂದನುಣುಚಿಕೊಳ್ಳಲು ಸಾಧ್ಯವಿಲ್ಲ ಎಂದರು.

ವಿಧಾನಸೌಧದ ಮೆಟ್ಟಿಲುಗಳ ಬಳಿ ಚಪ್ಪಲಿ ಮತ್ತು ಕಲ್ಲುಗಳನ್ನು ಎಸೆದ ಆರ್‌ಸಿಬಿ ಅಭಿಮಾನಿಗಳನ್ನು ಟೀಕಿಸಿದ ವಿಜಯೇಂದ್ರ, ನಾಯಕರಿಗೆ ಸೆಲ್ಫಿ ಮತ್ತು ಜನಪ್ರಿಯತೆಯ ಹುಚ್ಚು ಇತ್ತು. ಹೀಗಾಗಿ ಅವರು ರಾಜ್ಯದ ಖ್ಯಾತಿಯನ್ನು ಹಾಳು ಮಾಡಿದ್ದಾರೆ. ರಾಜ್ಯಪಾಲರನ್ನೂ ದಾರಿ ತಪ್ಪಿಸಲಾಯಿತು ಮತ್ತು ಕಾರ್ಯಕ್ರಮದಲ್ಲಿ ಕುಳಿತುಕೊಳ್ಳುವಂತೆ ಮಾಡಲಾಯಿತು ಎಂದು ಅವರು ಹೇಳಿದರು.

ಶ್ರೀರಾಮನ ಅವಹೇಳನ: ಲೇಖಕ ಕೆ.ಎಸ್. ಭಗವಾನ್ ಖುಲಾಸೆ

ಬೆಂಗಳೂರು, ಜೂ.10– 'ರಾಮ ಮಂದಿರ ಏಕೆ ಬೇಡ' ಎಂಬ ತಮ್ಮ ಪುಸ್ತಕದಲ್ಲಿ ಲೇಖಕ ಕೆ.ಎಸ್.ಭಗವಾನ್ ಶ್ರೀರಾಮನನ್ನು ಹೀಯಾಳಿಸಿದ್ದಾರೆ, ಅವಹೇಳನಕಾರಿ ಪದಗಳ ಬಳಕೆ ಮಾಡಿದ್ದಾರೆ. ಈ ಮೂಲಕ ಹಿಂದೂಗಳ ಧಾರ್ಮಿಕ ಭಾವನೆಗಳಿಗೆ ಧಕ್ಕೆ ಉಂಟು ಮಾಡಿದ್ದಾರೆ ಎಂದು ಆರೋಪಿಸಿ ವಕೀಲೆ ಮೀರಾ ರಾಘವೇಂದ್ರ ಅವರು ಸಾಹಿತಿ ಕೆ.ಎಸ್.ಭಗವಾನ್ ವಿರುದ್ಧ ದಾಖಲಿಸಿದ್ದ ಕ್ರಿಮಿನಲ್ ಪ್ರಕರಣವನ್ನು ನ್ಯಾಯಾಲಯ ವಜಾಗೊಳಿಸಿದೆ.



ಈ ಸಂಬಂಧ ಮೀರಾ ರಾಘವೇಂದ್ರ ಅವರು ದಾಖಲಿಸಿದ್ದ ಖಾಸಗಿ ದೂರಿನ ವಿಚಾರಣೆ ನಡೆಸಿದ 37ನೇ ಎಸಿಎಂಎಂ ಕೋರ್ಟ್‌ನ ನ್ಯಾಯಾಧೀಶ ಎಂ.ಸೈಯದ್ ಅರಾಫ಼ತ್ ಇಬ್ರಾಹಿಂ ಅವರು ಸೋಮವಾರ ಭಗವಾನ್ ಅವರನ್ನು ಖುಲಾಸೆಗೊಳಿಸಿ ಆದೇಶಿಸಿದ್ದಾರೆ.

ಇಂತಹುದೇ ಮತ್ತೊಂದು ಪ್ರಕರಣದಲ್ಲಿ ನ್ಯಾಯಾಲಯ ಇತ್ತೀಚೆಗಷ್ಟೇ ಕೆ.ಎಸ್. ಭಗವಾನ್ ಅವರನ್ನು ಖುಲಾಸೆಗೊಳಿಸಿತ್ತು ಎರಡೂ ಪ್ರಕರಣಗಳಲ್ಲಿ ಹಿರಿಯ ವಕೀಲ ಸಿ.ಎಚ್. ಹನುಮಂತರಾಯ ಅವರು ಭಗವಾನ್ ಪರ ವಾದ ಮಂಡಿಸಿದ್ದರು.

ಕೋರ್ಟ್ ಆವರಣದಲ್ಲಿ ಸಾಹಿತಿ ಕೆ.ಎಸ್.ಭಗವಾನ್ ಅವರ ಮುಖಕ್ಕೆ ಮಸಿ ಬಳಿಯುವ ಮೂಲಕ ವಕೀಲೆ ಮೀರಾ ರಾಘವೇಂದ್ರ ಅವರು ವೃತ್ತಿ ದುರ್ನಡತೆ ತೋರಿದ್ದು, ವಕೀಲರ ಶಿಷ್ಟಾಚಾರಗಳಿಗೆ ಅವಮಾನ ಉಂಟು ಮಾಡಿದ್ದಾರೆ. ಈ ಕಾರಣಕ್ಕಾಗಿ ಅವರು ಮೂರು ತಿಂಗಳ ಕಾಲ ದೇಶದ ಯಾವುದೇ ಕೋರ್ಟ್‌ಗಳಲ್ಲಿ ವಕೀಲಿಕೆ ನಡೆಸಬಾರದು ಎಂದು ರಾಜ್ಯ ವಕೀಲರ ಪರಿಷತ್ ಇತ್ತೀಚೆಗಷ್ಟೇ ಆದೇಶಿಸಿದ್ದನ್ನು ಇಲ್ಲಿ ಸ್ಮರಿಸಬಹುದು.

ಭಗವಾನ್ ವಿಚಾರಣೆಗೆ ಹಾಜರಾಗಿದ್ದ ಸಮಯದಲ್ಲಿ ಕೋರ್ಟ್ ಆವರಣದಲ್ಲಿ ತಮ್ಮ ಮುಖಕ್ಕೆ ಮೀರಾ ಮಸಿ ಬಳಿದಿದ್ದಾರೆ ಎಂಬ ಆರೋಪದಡಿ ಕೆ.ಎಸ್. ಭಗವಾನ್ ದಾಖಲಿಸಿದ್ದ ದೂರನ್ನು ರಾಜ್ಯ ವಕೀಲರ ಪರಿಷತ್ತಿನ, ಶಿಸ್ತು ಪಾಲನಾ ಸಮಿತಿ ಅಧ್ಯಕ್ಷ ಎಸ್.ಮಹೇಶ್ ಮತ್ತು ಪರಿಷತ್ ಸದಸ್ಯ ಎಸ್.ಹರೀಶ್ ನೇತೃತ್ವದ ಸಮಿತಿ ವಿಚಾರಣೆ ನಡೆಸಿ ಈ ಕುರಿತಂತೆ ಆದೇಶಿಸಿತ್ತು.

ರೈಲಿಗೆ ಸಿಲುಕಿ ಅಪರಿಚಿತ ವ್ಯಕ್ತಿ ಸಾವು

ಮೈಸೂರು, ಜೂ.10(ಬಿಎಲ್‌ಯು)– ಮೈಸೂರಿನ ಕೆ.ಆರ್.ನಗರ ಹೊಸ ಅಗ್ರಹಾರ ರೈಲು ನಿಲ್ದಾಣಗಳ ನಡುವೆ ವ್ಯಕ್ತಿಯೊಬ್ಬ ರೈಲಿಗೆ ಸಿಕ್ಕಿ ಮೃತಪಟ್ಟಿದ್ದಾನೆ.

ಈತನಿಗೆ 55 ರಿಂದ 60 ವಯಸ್ಸಾಗಿದ್ದು, 5.2 ಅಡಿ ಎತ್ತರ, ಸಾಧಾರಣ ಶರೀರ, ಗೋಧಿ ಮೈಬಣ್ಣ, ಕೋಲುಮುಖ, ಸಣ್ಣ ಮೂಗು, ತಲೆಯಲ್ಲಿ ಒಂದು ಇಂಚು ಕಪ್ಪು–ಬಿಳಿ ಮಿಶ್ರಿತ ಕೂದಲು ಹಾಗೂ ಗಡ್ಡ ಮೀಸೆ ಹೊಂದಿದ್ದಾನೆ.

ಬ್ರೌನ್ ಕಲರ್ ತುಂಬು ತೋಳಿನ ಶರ್ಟ್, ಬಿಳಿ ಬಣ್ಣದ ಪಂಚೆ, ಸಿಮೆಂಟ್ ಬಣ್ಣದ ಒಳ ಉಡುಪು ಧರಿಸಿದ್ದಾನೆ. ಮೃತ ದೇಹ ಮೈಸೂರಿನ ಕೆ.ಆರ್.ಆಸ್ಪತ್ರೆಯ ಶವಾಗಾರದಲ್ಲಿದೆ. ಮೃತ ವಾರಸುದಾರರಿಗೆ ಇವನ ಬಗ್ಗೆ ಮಾಹಿತಿ ತಿಳಿದಲ್ಲಿ ರೈಲ್ವೆ ಪೊಲೀಸರಿಗೆ (0821–2516579 ಅಥವಾ 9480802122) ಸಂಪರ್ಕಿಸಬಹುದು ಎಂದು ರೈಲ್ವೆ ಪೊಲೀಸರು ತಿಳಿಸಿದ್ದಾರೆ.

ಕೆ.ಆರ್.ಸರ್ಕಲ್‌ನ ನಾಲ್ವಡಿ ಪ್ರತಿಮೆಯ ಶಿರವೇರಿ ಕಿಡಿಗೇಡಿ ರಂಪಾಟ ಪ್ರಕರಣದಿಂದ ಎಚ್ಚೆತ್ತ ಪಾಲಿಕೆ

ಮೈಸೂರು ಅರಸರ ಮೂರೂ ಪ್ರತಿಮೆ ಸರ್ಕಲ್‌ಗಳಿಗೆ ಸಿಸಿಟಿವಿ ಕ್ಯಾಮರಾ ಅಳವಡಿಕೆಗೆ ಚಿಂತನೆ



ಕೆ.ಆರ್.ಸರ್ಕಲ್‌ನ ನಾಲ್ವಡಿ ಕೃಷ್ಣರಾಜ ಒಡೆಯರ್ ಪ್ರತಿಮೆ



ಅರಮನೆ ಎದುರಿನ ಚಾಮರಾಜ ಒಡೆಯರ್ ಪ್ರತಿಮೆ



ಹಾರ್ಡಿಂಗ್ ಸರ್ಕಲ್‌ನ ಜಯಚಾಮರಾಜೇಂದ್ರ ಒಡೆಯರ್ ಪ್ರತಿಮೆ

ಮೈಸೂರು, ಜೂ.10(ಆರ್‌ಕೆ)– ಇತ್ತೀಚೆಗೆ ಕಿಡಿಗೇಡಿಯೋರ್ವ ಮೈಸೂರಿನ ಕೆ.ಆರ್.ಸರ್ಕಲ್‌ನ ನಾಲ್ವಡಿ ಕೃಷ್ಣರಾಜ ಒಡೆಯರ್ ಪ್ರತಿಮೆಯ ಶಿರವೇರಿ ರಂಪಾಟ ಮಾಡಿದ ಪ್ರಕರಣದ ಬೆನ್ನಲ್ಲೇ ಎಚ್ಚೆತ್ತ ಮೈಸೂರು ಮಹಾನಗರಪಾಲಿಕೆಯು, ಮೂವರು ಮೈಸೂರು ಅರಸರ ಪ್ರತಿಮೆಗಳಿಗೆ ಸಿಸಿಟಿವಿ ಕ್ಯಾಮರಾಗಳನ್ನು ಅಳವಡಿಸಲು ಮುಂದಾಗಿದೆ.

ಕೆ.ಆರ್.ಸರ್ಕಲ್‌ನ ನಾಲ್ವಡಿ ಕೃಷ್ಣರಾಜ ಒಡೆಯರ್ ಪ್ರತಿಮೆ, ಅರಮನೆ ಉತ್ತರ ದ್ವಾರದೆದುರಿನ ಚಾಮರಾಜ ಒಡೆಯರ್ ಪ್ರತಿಮೆ ಹಾಗೂ ಹಾರ್ಡಿಂಗ್ ಸರ್ಕಲ್‌ನ ಜಯಚಾಮರಾಜ ಒಡೆಯರ್ ಪ್ರತಿಮೆಗಳಿಗೆ ತೀಕ್ಷ್ಣ ನೋಟವುಳ್ಳ ಕ್ಯಾಮರಾಗಳನ್ನು ಅಳವಡಿಸುವುದು ಸೂಕ್ತ ಎಂದು ಸಾರ್ವಜನಿಕರಿಂದ ಸಲಹೆ ಬಂದಿರುವುದರಿಂದ ಈ ಬಗ್ಗೆ ಚಿಂತನೆ ನಡೆಸಲಾಗಿದೆ ಎಂದು ಮೈಸೂರು ಮಹಾನಗರಪಾಲಿಕೆ ಆಯುಕ್ತ ಶೇಖ್ ತನ್ವೀರ್ ಆಸಿಫ್ 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ.

ಪ್ರತಿಮೆಗಳು ಮತ್ತು ಅವುಗಳ ಸುತ್ತಲಿನ ಸನ್ನಿವೇಶ ಸೆರೆ ಹಿಡಿಯುವ ತೀಕ್ಷ್ಣತೆಯುಳ್ಳ ಗುಣಮಟ್ಟದ ಕ್ಯಾಮರಾಗಳನ್ನು ಅಳವಡಿಸಿ ಪಾಲಿಕೆ ಕಂಟ್ರೋಲ್ ರೂಂ ಮತ್ತು ಪೊಲೀಸ್ ಕಂಟ್ರೋಲ್ ರೂಂಗೆ ಸಂಪರ್ಕ ಕಲ್ಪಿಸಿ ನಿಗಾ ವಹಿಸಲು ಸಿದ್ಧತೆ ಮಾಡಬೇಕಿದೆ ಎಂದೂ ತಿಳಿಸಿದರು.

ಮೇ 30ರಂದು ದೂರ ಗ್ರಾಮದ ಶಿವಮೂರ್ತಿ ಎಂಬ ವ್ಯಕ್ತಿ ನಾಲ್ವಡಿ ಕೃಷ್ಣರಾಜ ಒಡೆಯರ್ ಪ್ರತಿಮೆ ಶಿರವೇರಿ ಕುಳಿತು ರಂಪಾಟ ಮಾಡಿದ್ದ. ನಂತರ ಪೊಲೀಸರು ಆತನನ್ನು ಕೆಳಗಿಸಿದಾಗ ಆತ ಪರಾರಿಯಾಗಿದ್ದ. ಕೊನೆಗೆ ಆತನ ಪತ್ತೆ ಹಚ್ಚಿ ವಿಚಾರಣೆ ನಡೆಸಿದಾಗ ನನ್ನ ತಾತನ ರೀತಿ ಅವರು ಕಂಡಿದ್ದರಿಂದ ಪ್ರತಿಮೆ ಮೇಲೇರಿ, ಶಿರದ ಮೇಲೆ ಕುಳಿತಿದ್ದೆ ಎಂದು ಹೇಳಿಕೆ ನೀಡಿದ್ದ.

ಇಂತಹ ಪ್ರಸಂಗಗಳು ಇನ್ನು ಮುಂದೆ ನಡೆಯದಂತೆ ಪ್ರತಿಮೆಗಳನ್ನು ರಕ್ಷಿಸಬೇಕಾಗಿರುವುದರಿಂದ ಸಿಸಿಟಿವಿ ಕ್ಯಾಮರಾ ಅಳವಡಿಕೆ ಸೂಕ್ತ. ಈ ಹಿಂದೆಯೂ ಅರಸರ ಪ್ರತಿಮೆಗಳ ಕತ್ತಿ ತುಂಡರಿಸಿದ ಘಟನೆ ನಡೆದಿದೆ. ಕೆಲವರು, ಪ್ರತಿಮೆಗಳ ಬಳಿ ನಿಂತು ಫೋಟೋಶೂಟ್, ವಿಡಿಯೋ ರೆಕಾರ್ಡಿಂಗ್ ಮಾಡುತ್ತಿರುವುದನ್ನು ತಡೆಯಬೇಕಾಗಿದೆ ಎಂದು ಆಯುಕ್ತರು ತಿಳಿಸಿದ್ದಾರೆ.

ಪೊಲೀಸ್ ಅಧಿಕಾರಿಗಳೊಂದಿಗೆ ಚರ್ಚಿಸಿ ಯಾವ ರೀತಿಯ, ಯಾವ ಸಾಮರ್ಥ್ಯದ ಕ್ಯಾಮರಾ ಅಳವಡಿಸಬೇಕು, ನಿರ್ವಹಣೆ, ಫುಟೇಜ್‌ಗಳನ್ನು ಎಷ್ಟು ಅವಧಿವರೆಗೆ ಸಂಗ್ರಹಿಸಿಡಬೇಕು ಎಂಬುದರ ಬಗ್ಗೆ ಸಲಹೆ, ತಾಂತ್ರಿಕ ಮಾಹಿತಿ ಪಡೆದ ಬಳಿಕ ಈ ಯೋಜನೆ ಅನುಷ್ಠಾನ ಮಾಡುತ್ತೇವೆ ಎಂದು ಶೇಖ್ ತನ್ವೀರ್ ಆಸಿಫ್ ತಿಳಿಸಿದರು.

ಪ್ರಧಾನಿ ಮೋದಿ ನಾಯಕತ್ವದಲ್ಲಿ ಭಾರತ ಈಗ ಜಗತ್ತಿನ ನಾಲ್ಕನೇ ಆರ್ಥಿಕ ಶಕ್ತಿ

- ಕೇಂದ್ರ ಆಹಾರ, ಸಾರ್ವಜನಿಕ ವಿತರಣೆ ಹಾಗೂ ನವೀಕರಿಸಬಹುದಾದ ಇಂಧನ ಸಚಿವ ಪ್ರಹ್ಲಾದ್ ಜೋಶಿ ವಿವರಣೆ
- ದೇಶದಲ್ಲಿನ ಸ್ಥಿರ ಸರ್ಕಾರದಿಂದ ಎಲ್ಲಾ ಕ್ಷೇತ್ರದಲ್ಲಿ ಗಣನೀಯ ಸಾಧನೆ ಸಾಧ್ಯವಾಯ್ತು



ಬೆಂಗಳೂರು, ಜೂ.10(ಕೆಎಂಶಿ)– ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಆಡಳಿತದಲ್ಲಿ ಭಾರತ ಜಗತ್ತಿನ ನಾಲ್ಕನೇ ಅತಿ ದೊಡ್ಡ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮಿದೆ ಎಂದು ಕೇಂದ್ರ ಆಹಾರ ಮತ್ತು ಸಾರ್ವಜನಿಕ ವಿತರಣೆ ಹಾಗೂ ನವೀಕರಿಸಬಹುದಾದ ಇಂಧನ ಸಚಿವ ಪ್ರಹ್ಲಾದ್ ಜೋಶಿ ಇಂದಿಲ್ಲಿ ತಿಳಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಒಂದು ಟ್ರಿಲಿಯನ್ ಆರ್ಥಿಕ ವ್ಯವಸ್ಥೆಯ ದೇಶವಾಗಲು 30 ರಿಂದ 40 ವರ್ಷ ಬೇಕಾಯಿತು. 2 ಟ್ರಿಲಿಯನ್ ಆರ್ಥಿಕ ವ್ಯವಸ್ಥೆ ದೇಶವಾಗಲು 62ರಿಂದ 63 ವರ್ಷ ಬೇಕಾಯಿತು, ಸುದೀರ್ಘ ಆರ್ಥಿಕ ಸ್ಥಿರತೆ ಪರಿಣಾಮ 2 ಟ್ರಿಲಿಯನ್‌ನಿಂದ 4 ಟ್ರಿಲಿಯನ್‌ಗಳಿಗೂ ಹೆಚ್ಚಿನ ಸಾಧನೆ ಮಾಡಿದ್ದೇವೆ ಎಂದರು.

ಸ್ಥಿರತೆಯಿಂದಾಗಿ ಸಮರ್ಥ ಸರ್ಕಾರ ಮತ್ತು ಆಡಳಿತ ನೀಡಲು ಸಾಧ್ಯವಾಗಿದೆ, ಎಲ್ಲ ಕ್ಷೇತ್ರಗಳಲ್ಲಿ ಸಾಧನೆಗೆ ಕಾರಣವಾಗಿದೆ.

ರಕ್ಷಣಾ ವ್ಯವಸ್ಥೆ ಸುಧಾರಣೆಯೂ ಪ್ರಮುಖ ಸಂಗತಿಯಾಗಿದ್ದು, ಗಡಿ ಭಾಗದ ಮೂಲಸೌಕರ್ಯದಿಂದ ಸಿಡಿಎಸ್‌ವರೆಗೆ ಸಮರ್ಥ ನಿರ್ಧಾರ ಕೈಗೊಂಡಿದ್ದೇವೆ. ಆಪರೇಷನ್ ಸಿಂಧೂರ ಕಾರ್ಯಾಚರಣೆಯಿಂದ ಪಾಕಿಸ್ತಾನದ ನಡವಳಿಕೆಗೆ ದಿಟ್ಟ ಉತ್ತರ ನೀಡಲು ಸಾಧ್ಯವಾಯಿತು.

ಪಾಕಿಸ್ತಾನದಲ್ಲಿನ ಭಯೋತ್ಪಾದನಾ ಚಟುವಟಿಕೆಯ 9 ಸ್ಥಳಗಳನ್ನು ಗುರುತಿಸಿ, ನಿರ್ದಿಷ್ಟ ಗುರಿಗಳ ಮೇಲೆ ಕ್ಷಿಪಣಿ ದಾಳಿ ಮಾಡಲಾಗಿದೆ, ಈ ಮೊದಲು ದೇಶ ಎಲ್ಲ ರೀತಿಯ ರಕ್ಷಣಾ ಉತ್ಪನ್ನಗಳನ್ನು ಆಮದು ಮಾಡಿಕೊಳ್ಳುತ್ತಿತ್ತು. ಈಗ 5 ಸಾವಿರ ಉತ್ಪನ್ನಗಳನ್ನು ಮೇಕ್ ಇನ್ ಇಂಡಿಯಾ ಯೋಜನೆಯಡಿ ಉತ್ಪಾದಿಸುತ್ತಿದ್ದೇವೆ. 25 ಸಾವಿರ ಕೋಟಿ ರೂ. ಮೌಲ್ಯಕ್ಕೂ ಹೆಚ್ಚು ಶಸ್ತ್ರಾಸ್ತ್ರ ಮತ್ತಿತರ ರಕ್ಷಣಾ ಉತ್ಪನ್ನಗಳನ್ನು ರಫ್ತು ದೇಶ ಮಾಡುವಷ್ಟು ಸಮರ್ಥವಾಗಿದೆ ಎಂದರು.

ಕಡು ಬಡತನ ಪ್ರಮಾಣ ಶೇ.21ರಿಂದ ಶೇ.5ಕ್ಕೆ ಇಳಿದಿದೆ. 26 ಕೋಟಿ ಕುಟುಂಬಗಳು ಬಡತನ ರೇಖೆಯಿಂದ ಮೇಲಕ್ಕೆ ಬಂದಿವೆ. ಇದು ಭಾರತದ ಏಜೆನ್ಸಿಗಳ ಅಂಕಿ–ಅಂಶವಲ್ಲ, ವಿಶ್ವ ಬ್ಯಾಂಕ್‌ನ ಅಂಕಿ–ಅಂಶಗಳು ಎಂದು ಸ್ಪಷ್ಟಪಡಿಸಿದರು.

ಸಮರ್ಥ ನಾಯಕತ್ವ, ಸ್ಥಿರ ಸರ್ಕಾರದ ಪರಿಣಾಮ ದೇಶದ ರಕ್ಷಣಾ ವ್ಯವಸ್ಥೆ ವಿಷಯದಲ್ಲಿ ನಿರ್ದಿಷ್ಟ ಹಾಗೂ ದಿಟ್ಟ ಹೆಜ್ಜೆ ಇಡುತ್ತಿದೆ. ಇದಕ್ಕೆ ಇತ್ತೀಚಿನ ಆಪರೇಷನ್ ಸಿಂಧೂರ ಉದಾಹರಣೆಯಾಗಿದೆ.

ಗಡಿ ಪ್ರದೇಶ ಹೊರತುಪಡಿಸಿ ಭಯೋತ್ಪಾದನಾ ಕೃತ್ಯಗಳು ಬಹುತೇಕ ಶೂನ್ಯವಾಗಿವೆ ಕಾಶ್ಮೀರದಲ್ಲಿನ ಘಟನೆಗಳಿಗೆ ಅತ್ಯಂತ ಪ್ರಖರ ಮತ್ತು ಸ್ಪಷ್ಟ ಉತ್ತರ ಕೊಟ್ಟಿದ್ದೇವೆ.


ನೇಪಾಳದ ಪಶುಪತಿಯಿಂದ ತಿರುಪತಿವರೆಗೆ ರೆಡ್‌ಕಾರಿಡಾರ್ ಮೂಲಕ ಭಾರತದ ಆಡಳಿತವನ್ನು ನೆಲಕಚ್ಚಿಸುವ ಉದ್ದೇಶ ಉಗ್ರರದ್ದಾಗಿತ್ತು, ದೇಶದಲ್ಲಿ ಶೇ.70ರಷ್ಟು ನಕ್ಸಲ್ ಚಟುವಟಿಕೆ ಕಡಿಮೆಯಾಗಿದ್ದು, 2026ರ ಮಾರ್ಚ್ ವೇಳೆಗೆ ದೇಶದಲ್ಲಿ ನಕ್ಸಲಿಸಂ ಪಿಡುಗಿನಿಂದ ಸಂಪೂರ್ಣ ಮುಕ್ತಿ ಪಡೆಯಲಿದೆ ಎಂಬುದಾಗಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಪ್ರಕಟಿಸಿದ್ದಾರೆ ಎಂದರು.

ಜಗತ್ತಿನ ಯಾವುದೇ ಭಾಗದಲ್ಲಿ ಭಾರತೀಯರಿಗೆ ತೊಂದರೆಯಾದರೂ ರಕ್ಷಣೆಗೆ ಧಾವಿಸಿದ್ದೇವೆ. ರಷ್ಯಾ–ಉಕ್ರೇನ್ ಯುದ್ಧ, ಅಫಘಾನಿಸ್ತಾನ ಸಮಸ್ಯೆ ವೇಳೆ ನಮ್ಮ ಜನರನ್ನು ವಾಪಸ್ ಕರೆಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದೇವೆ.

ಕೋವಿಡ್ ಸಂದರ್ಭದಲ್ಲಿ ಕೈಗೊಂಡ ಕ್ರಮಗಳಿಂದ ಅಪಾಯಕಾರಿ ಹಂತದಿಂದ ಪಾರಾದ್ದೂ ಭಾರತ ಕೋವಿಡೋತ್ತರ ದಿನಗಳಲ್ಲಿ ಅತ್ಯಂತ ವೇಗವಾಗಿ ಬೆಳೆಯುವ ದೇಶವಾಗಿ ಹೊರಹೊಮ್ಮಿದೆ, ಈಗಲೂ ಅದು ಮುಂದುವರೆದಿದೆ ಎಂಬುದಾಗಿ ಪ್ರಧಾನಮಂತ್ರಿಯೇ ಘೋಷಿಸಿದ್ದಾರೆ.

ದೇಶದಲ್ಲಿನ 140 ಕೋಟಿ ಜನರಿಗೆ 240 ಕೋಟಿಗಿಂತ ಹೆಚ್ಚು ಡೋಸ್ ಲಸಿಕೆ ಕೊಟ್ಟ ಏಕೈಕ ದೇಶ ಭಾರತವಾಗಿದೆ. ಅಲ್ಲದೆ ರಫ್ತು ಮಾಡಲೂ ಸಾಧ್ಯವಾಗಿದೆ, ಭಾರತ ಶೀಘ್ರವೇ ಜಗತ್ತಿನ ನಾಲ್ಕನೇ ಅತೀ ದೊಡ್ಡ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಕುಂಬಾರಕೊಪ್ಪಲಿನಲ್ಲಿ ಭಕ್ತಿ–ಭಾವದ ಸಿದ್ದಪ್ಪಾಜಿ ಕಂಡಾಯ ಉತ್ಸವ



ಮೈಸೂರು, ಜೂ.10(ಎಸ್‌ಪಿಎನ್)– ಮೈಸೂರು ಕುಂಬಾರಕೊಪ್ಪಲಿನ ಶ್ರೀ ಸಿದ್ದಪ್ಪಾಜಿ ಅವರ ಕಂಡಾಯ ಉತ್ಸವ ಕುಂಬಾರಕೊಪ್ಪಲು ಅಭ್ಯುದಯ ಸಂಘ ಮತ್ತು ಗ್ರಾಮಸ್ಥರ ಸಮ್ಮುಖದಲ್ಲಿ ಸೋಮವಾರ ಭಕ್ತಿ–ಭಾವದಿಂದ ನೆರವೇರಿತು.

ಸೋಮವಾರ ಶ್ರೀ ಸಿದ್ದಪ್ಪಾಜಿ ಮೂರ್ತಿಯನ್ನು ಅಲಂಕರಿಸಿ, ಕುಂಬಾರಕೊಪ್ಪಲು ಪ್ರಮುಖ ಬೀದಿಗಳಲ್ಲಿ ಜಾನಪದ ಕಲಾತಂಡಗಳೊಂದಿಗೆ ಮೆರವಣಿಗೆ ನಡೆಸಲಾಯಿತು. ಮೆರವಣಿಗೆ ಮುಗಿದ ಬಳಿಕ ಕೆಂಪೇಗೌಡ ಮೈದಾನದಲ್ಲಿ ತಾತ್ಕಾಲಿಕ ಗದ್ದುಗೆ ಸ್ಥಾಪಿಸಿ, ಸಿದ್ದಪ್ಪಾಜಿ ಮೂರ್ತಿಗೆ ಪೂಜೆ ಸಲ್ಲಿಸಲಾಯಿತು.

ಕುಂಬಾರುಕೊಪ್ಪಲು ಅಭ್ಯುದಯ ಸಂಘದ ಅಧ್ಯಕ್ಷ ಕೆ.ಟಿ.ಚೆಲುವೇಗೌಡ, ಕಾರ್ಯದರ್ಶಿಗಳಾದ ಕೆ.ಶಿವಪ್ಪ, ಬೈರಪ್ಪ, ಉಪಾಧ್ಯಕ್ಷರಾದ ಕೆ.ಸಿ.ಮಹದೇವು, ಮಹದೇವು, ಜಂಟಿ ಕಾರ್ಯದರ್ಶಿ ಮಹೇಶ್, ಶಿವಕುಮಾರ್, ಖಜಾಂಚಿ ರಾಜೇಂದ್ರ ಹಾಗೂ ಕಾರ್ಯಕಾರಿ ಸಮಿತಿ ಸದಸ್ಯರ ಉಪಸ್ಥಿತಿಯಲ್ಲಿ ದೇವತಾ ಕಾರ್ಯಗಳು ಜರುಗಿದವು.

ಮಂಗಳವಾರ ಸಿದ್ದಪ್ಪಾಜಿ ಅವರ ಪರದಲ್ಲಿ ಮಾಜಿ ಸಂಸದ ಪ್ರತಾಪ ಸಿಂಹ ಸೇರಿದಂತೆ ಇತರೆ ಜನಪ್ರತಿನಿಧಿಗಳು ಭಾಗವಹಿಸಿದ್ದರು.

ಮೈಸೂರಲ್ಲಿ ತುಂತುರು ಮಳೆ ; ತಂಪಿನ ವಾತಾವರಣ

ಇಂದಿನಿಂದ ಜೂ.15ರವರೆಗೆ ಮೈಸೂರು, ಮಂಡ್ಯ, ಕೊಡಗು, ಚಾಮರಾಜನಗರ ಜಿಲ್ಲೆಗಳಲ್ಲಿ ಸೋನೆ ಸಂಭವ





ಮೈಸೂರಿನ ಜೆಎಲ್‌ಬಿ ರಸ್ತೆಯ ಜಾವಗಲ್ ಶ್ರೀನಾಥ್ ವೃತ್ತದಲ್ಲಿ ಮಳೆ ನೀರಿನ ನಡುವೆ ಸಾಗುತ್ತಿರುವ ವಾಹನಗಳು. ಮತ್ತೊಂದು ಚಿತ್ರದಲ್ಲಿ ಮೈಸೂರಿನ ಎಫ್‌ಟಿಎಸ್ ವೃತ್ತದ ಸಮೀಪ ರಸ್ತೆಬದಿಯಲ್ಲಿ ಬಿದ್ದಿರುವ ಮರದ ಕೊಂಬೆ ತೆರವುಗೊಳಿಸುತ್ತಿರುವುದು.

ಮೈಸೂರು,ಜೂ.10(ಪಿಎಂ)– ನಗರದಲ್ಲಿ ಮೋಡ ಕವಿದ ವಾತಾವರಣದೊಂದಿಗೆ ಮಂಗಳವಾರ ಮಧ್ಯಾಹ್ನದ ನಂತರ ಕೆಲಕಾಲ ತುಂತುರು ಮಳೆಯಾಗಿದೆ. ಭಾರಿ ಮಳೆಯಾಗುವಂತಹ ವಾತಾವರಣ ಇತ್ತಾದರೂ ಜಿಟಿ ಜಿಟಿ ಮಳೆಯಷ್ಟೇ ಸ್ವಲ್ಪ ಸಮಯದವರೆಗೆ ಸುರಿಯಿತು.

ಜಿಲ್ಲೆಯ ವಿವಿಧೆಡೆಯೂ ಮಂಗಳವಾರ ಇದೇ ರೀತಿ ಮಳೆಯಾಗಿದೆ. ಮೈಸೂರು ನಗರದ ವಿವಿಧ ಬಡಾವಣೆಗಳಲ್ಲಿ ಸಾಧಾರಣ ಮಳೆ ಸುರಿದರೆ, ಕೆಲವೆಡೆ ತುಸು ಹೆಚ್ಚಾಗಿಯೇ ಸುರಿಯಿತು. ಕೆಆರ್ ವೃತ್ತ ಸೇರಿದಂತೆ ಪ್ರಮುಖ ವೃತ್ತ ಹಾಗೂ ರಸ್ತೆಗಳನ್ನು ಸಣ್ಣ ಪ್ರಮಾಣದ ಮಳೆ ನೀರು ಆವರಿಸಿತ್ತು. ನಗರದ ಬಹುತೇಕ ಭಾಗಗಳಲ್ಲಿ ಮಧ್ಯಾಹ್ನದಿಂದ ಸಂಜೆಯವರೆಗೂ ಮೋಡ ಕವಿದ ವಾತಾವರಣ ಇದ್ದಾಗ್ಯೂ ಧಾರಾಕಾರ ಮಳೆ ಬರಲಿಲ್ಲ.

ನೆಲಕ್ಕುರುಳಿದ ರೆಂಬೆ: ಸಂಜೆ ವೇಳೆಗೆ ಕೆಲಕಾಲ ಮಳೆ ಜಿಟಿಯಾಗಿ ಹಿಡಿದ ಹಿನ್ನೆಲೆಯಲ್ಲಿ ಶಾಲಾ–ಕಾಲೇಜು ವಿದ್ಯಾರ್ಥಿಗಳು ಮನೆಗೆ ಮರಳಲು ಕೆಲಕಾಲ ತೊಡಕಾಯಿತು. ಇದರ ಹೊರತಾಗಿ ನಗರದ ಜನಜೀವನ ಸಹಜವಾಗಿತ್ತು. ಅಲ್ಲದೆ, ಜೋರು ಗಾಳಿ ಇಲ್ಲದ ಕಾರಣ ಮರಗಳ ರಂಬೆ–ಕೊಂಬೆಗಳು ಮುರಿದು ರಸ್ತೆಗೆ ಬೀಳುವಂತಹ ಪ್ರಮೇಯ ಉಂಟಾಗಲಿಲ್ಲ. ಈ ನಡುವೆ ನಗರದ ಎಫ್‌ಟಿಎಸ್ ವೃತ್ತದ ಸಮೀಪ ರಸ್ತೆಬದಿಯಲ್ಲಿ ಮರದ ಕೊಂಬೆ ನೆಲಕ್ಕುರುಳಿತ್ತು. ಮೈಸೂರು ಮಹಾನಗರ ಪಾಲಿಕೆಯ ಅಭಯ ತಂಡವು ರೆಂಬೆ ಕೊಂಬೆಗಳನ್ನು ತೆರವುಗೊಳಿಸಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಟ್ಟಿತು.

ಜೂ.15ರವರೆಗೆ ಮಳೆ: ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆಯಂತೆ ಮೈಸೂರು, ಮಂಡ್ಯ, ಕೊಡಗು, ಚಾಮರಾಜನಗರ ಜಿಲ್ಲೆಗಳಲ್ಲಿ ಜೂ.11ರಿಂದ 15ರವರೆಗೆ ಮೋಡ ಕವಿದ ವಾತಾವರಣದೊಂದಿಗೆ ತುಂತುರುವಿನಿಂದ ಕೂಡಿದ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ ಎಂದು ನಾಗನಹಳ್ಳಿಯ ಕೃಷಿ ಹವಾಮಾನ ಕ್ಷೇತ್ರ ವಿಭಾಗದ ಪ್ರಕಟಣೆ ತಿಳಿಸಿದೆ.

ಮೈಸೂರು ಜಿಲ್ಲೆಯಲ್ಲಿ ಗರಿಷ್ಠ ಉಷ್ಣಾಂಶ 31ರಿಂದ 32 ಡಿಗ್ರಿ ಸೆಲ್ಸಿಯಸ್, ಕನಿಷ್ಠ ಉಷ್ಣಾಂಶ 20 ಡಿಗ್ರಿ ಸೆಲ್ಸಿಯಸ್‌ವರೆಗೆ ದಾಖಲಾಗುವ ಸಾಧ್ಯತೆ ಇದೆ. ಬೆಳಗಿನ ಗಾಳಿಯ ತೇವಾಂಶ ಶೇ.77ರಿಂದ 79ರವರೆಗೆ ಮತ್ತು ಮಧ್ಯಾಹ್ನದ ತೇವಾಂಶ ಶೇ.61ರಿಂದ 65ರವರೆಗೆ ದಾಖಲಾಗುವ ಹಾಗೂ ಗಾಳಿಯು ಗಂಟೆಗೆ 10ರಿಂದ 14 ಕಿಲೋಮೀಟರ್ ವೇಗದಲ್ಲಿ ಬೀಸುವ ಸಾಧ್ಯತೆ ಇದೆ.

ಮಂಡ್ಯ ಜಿಲ್ಲೆಯಲ್ಲಿ ಗರಿಷ್ಠ ಉಷ್ಣಾಂಶ 30ರಿಂದ 31 ಡಿಗ್ರಿ ಸೆಲ್ಸಿಯಸ್ ಹಾಗೂ ಕನಿಷ್ಠ ಉಷ್ಣಾಂಶ 21ರಿಂದ 22 ಡಿಗ್ರಿ ಸೆಲ್ಸಿಯಸ್‌ವರೆಗೆ ದಾಖಲಾಗುವ ಸಾಧ್ಯತೆ ಇದೆ. ಬೆಳಗಿನ ಗಾಳಿಯ ತೇವಾಂಶ ಶೇ.86ರಿಂದ 88ವರೆಗೆ ಮತ್ತು ಮಧ್ಯಾಹ್ನದ ತೇವಾಂಶ ಶೇ.55ರಿಂದ 66ರವರೆಗೆ ದಾಖಲಾಗುವ ಹಾಗೂ ಗಾಳಿಯು ಗಂಟೆಗೆ 12ರಿಂದ 16 ಕಿಲೋಮೀಟರ್ ವೇಗದಲ್ಲಿ ಬೀಸುವ ಸಾಧ್ಯತೆ ಇದೆ.

ಕೊಡಗು ಜಿಲ್ಲೆಯಲ್ಲಿ ಗರಿಷ್ಠ ಉಷ್ಣಾಂಶ 27ರಿಂದ 28 ಡಿಗ್ರಿ ಸೆಲ್ಸಿಯಸ್ ಮತ್ತು ಕನಿಷ್ಠ ಉಷ್ಣಾಂಶ 19 ಡಿಗ್ರಿ ಸೆಲ್ಸಿಯಸ್‌ವರೆಗೆ ದಾಖಲಾಗುವ ಸಾಧ್ಯತೆ ಇದೆ. ಬೆಳಗಿನ ಗಾಳಿಯ ತೇವಾಂಶ ಶೇ.98ರವರೆಗೆ ಮತ್ತು ಮಧ್ಯಾಹ್ನದ ತೇವಾಂಶ ಶೇ.82ರಿಂದ 85ರವರೆಗೆ ದಾಖಲಾಗುವ ಹಾಗೂ ಗಾಳಿಯು ಗಂಟೆಗೆ 8ರಿಂದ 10 ಕಿಲೋಮೀಟರ್ ವೇಗದಲ್ಲಿ ಬೀಸುವ ಸಾಧ್ಯತೆ ಇದೆ.

ಚಾಮರಾಜನಗರ ಜಿಲ್ಲೆಯಲ್ಲಿ ಗರಿಷ್ಠ ಉಷ್ಣಾಂಶ 30ರಿಂದ 32 ಡಿಗ್ರಿ ಸೆಲ್ಸಿಯಸ್ ಮತ್ತು ಕನಿಷ್ಠ ಉಷ್ಣಾಂಶ 20ರಿಂದ 21 ಡಿಗ್ರಿ ಸೆಲ್ಸಿಯಸ್‌ವರೆಗೆ ದಾಖಲಾಗುವ ಸಾಧ್ಯತೆ ಇದೆ. ಬೆಳಗಿನ ಗಾಳಿಯ ತೇವಾಂಶ ಶೇ.85ರಿಂದ 88ರವರೆಗೆ ಮತ್ತು ಮಧ್ಯಾಹ್ನದ ತೇವಾಂಶ ಶೇ.54ರಿಂದ 65ರವರೆಗೆ ದಾಖಲಾಗುವ ಮತ್ತು ಗಾಳಿಯು ಗಂಟೆಗೆ 10ರಿಂದ 14 ಕಿಲೋಮೀಟರ್ ವೇಗದಲ್ಲಿ ಬೀಸುವ ಸಾಧ್ಯತೆ ಇದೆ.

ಈ ಬಾರಿ ವಾಡಿಕೆಗಿಂತ ಅಧಿಕ ಮಳೆ

ಕಳೆದ ಬಾರಿಗೆ ಹೋಲಿಸಿದರೆ ಈ ವರ್ಷ ಮುಂಗಾರು ಮಳೆ ವಾಡಿಕೆಗಿಂತ ಹೆಚ್ಚಾಗಲಿದೆ. ಕಳೆದ ವರ್ಷ ಕಡಿಮೆ ಪ್ರಮಾಣದಲ್ಲಿತ್ತು. ಈ ಬಾರಿ ಮೇ 24ರಂದೇ ಮುಂಗಾರು ಶುರುವಾಗಿದೆ. ಈ ವರ್ಷದ ಮಳೆಯಲ್ಲಿ ಶೇ.10ರಿಂದ 15ರಷ್ಟು ಹೆಚ್ಚಳ ಆಗಲಿದೆ. ಸೆಪ್ಟೆಂಬರ್‌ವರೆಗೂ ಮುಂಗಾರು ಮಳೆ ಇರಲಿದೆ. ಜೂನ್ ತಿಂಗಳಲ್ಲಿ ಮಳೆ ಸ್ವಲ್ಪ ಕಡಿಮೆ ಪ್ರಮಾಣದಲ್ಲಿ ಆಗುವ ಸಾಧ್ಯತೆ ಇದೆ. ಆದರೆ ಜುಲೈನಲ್ಲಿ ಹೆಚ್ಚಾಗಲಿದ್ದು, ಸೆಪ್ಟೆಂಬರ್ ವೇಳೆಗೆ ಇಳಿಮುಖವಾಗಲಿದೆ.

-ಡಾ.ಸಿ.ಗೋವಿಂದರಾಜು, ನಿವೃತ್ತ ಪ್ರಾಧ್ಯಾಪಕರು, ಕೃಷಿ ಹವಾಮಾನ ಕ್ಷೇತ್ರ ವಿಭಾಗ, ನಾಗನಹಳ್ಳಿ.

ನಕ್ಕರೆ ಅದೇ ಸ್ವರ್ಗ

ಹುಡುಗಿ : ನಾನು ಇವತ್ತು ನಿನ್ ಜೊತೆ ಬೈಕ್ ಮೇಲೆ ಬರೋದನ್ನ ಅಪ್ಪ ನೋಡ್ಬಿಟ್ರು.

ಹುಡುಗ : ಅಯ್ಯೋ! ಆಮೇಲೆ ಏನಾಯ್ತು??

ಹುಡುಗಿ : ನಮ್ದು ತುಂಬಾ ಸ್ಟ್ರಿಕ್ಟ್ ಫ್ಯಾಮಿಲಿ. ಬಸ್ ಪಾಸ್ ಕೇಳಿದ್ರು... ಕೊಟ್ಟೆ ಅಷ್ಟೇ!

ಮೈಸೂರು ಮಿತ್ರ

ಬುಧವಾರ, 11 ಜೂನ್ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ..........

ಜೀವನ ಪೂರ್ತಿ ಪುಸ್ತಕಗಳನ್ನು ಓದಿದೆ ಏನೂ ಕಲಿಯಲಿಕ್ಕೆ ಆಗಲಿಲ್ಲ! ಅದೇ, ಹತ್ತಿರದಿಂದ ಕೆಲವು ಮುಖಗಳ ನೋಡಿದೆ ನೂರಾರು ಪಾಠ ಕಲಿತೆ!!

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಮಂಗ ಮೊಸರು ತಿಂದು ಮೇಕೆ ಬಾಯಿಗೆ ಸವರಿದ ಹಾಗಾಯ್ತು!

ನಿಮ್ಮ ಪತ್ರಗಳು

■ ಸೋಮನಾಥನಗರ ಬಡಾವಣೆ ಸಮಸ್ಯೆಗಳ ಬಗೆಹರಿಸಿ





ಮಾನ್ಯರೆ,

ಮೈಸೂರಿನ ಪ್ರತಿಷ್ಠಿತ ಬಡಾವಣೆಗಳೊಂದಾದ ಸರ್ಕಾರಿ ನೌಕರರ ಗೃಹ ನಿರ್ಮಾಣ ಸಹಕಾರ ಸಂಘ ಅಭಿವೃದ್ಧಿಪಡಿಸಿರುವ ದಟ್ಟಗಳ್ಳಿಗೆ ಅಂಟಿಕೊಂಡ ಸೋಮನಾಥನಗರ ಬಡಾವಣೆಯ ನಿವಾಸಿಗಳು ಎದುರಿಸುತ್ತಿರುವ ಸಮಸ್ಯೆ ಸಾಕಷ್ಟಿವೆ. ಈ ಬಡಾವಣೆ ಬೋಗಾದಿ ಪಟ್ಟಣ ಪಂಚಾಯ್ತಿ ವ್ಯಾಪ್ತಿಗೊಳಪಟ್ಟಿದೆ.

ಡಾಂಬರಿಲ್ಲದೆ ಹದೆಗೆಟ್ಟು ಹೋಗಿರುವ ರಸ್ತೆಗಳು, ವಾಹನ ಸಂಚಾರ ಹಾಗೂ ಕನಿಷ್ಟ ನಡೆದಾಡಲು ಅನುಕೂಲಕರವಾಗಿಲ್ಲ. ಅನೇಕ ಅಪಘಾತಗಳು ಸಹ ಇಲ್ಲಿ ಸಂಭವಿಸಿದ್ದು, ಜೀವ ಹಾನಿ ಕೂಡ ಸಂಭವಿಸಿದೆ. ಮುಖ್ಯ ಹಾಗೂ ಒಳರಸ್ತೆಗಳಲ್ಲಿ ಬೀದಿ ದೀಪಗಳಿಲ್ಲ. ಇದರಿಂದ, ಮನೆ ಕಳ್ಳತನ, ಸರಗಳ್ಳತನ ಹೆಚ್ಚಾಗಿದೆ.

ನೀರಿನ ಸಮಸ್ಯೆಯಂತೂ ಹೇಳತೀರದು. ಪೈಪ್ ಒಡೆದಿದ್ದು ಹಲವಾರು ದಿನಗಳಿಂದ ನೀರಿಲ್ಲದೆ ಜನ ಪರದಾಡುವಂತಾಗಿದೆ. ಮೇಲ್ಕಂಡ ಸಮಸ್ಯೆಗಳ ಬಗ್ಗೆ ಬೋಗಾದಿ ಪಟ್ಟಣ ಪಂಚಾಯಿತಿಯ ಮುಖ್ಯಾಧಿಕಾರಿಗಳು, ಜನಪ್ರತಿನಿಧಿಗಳ ಗಮನಕ್ಕೆ ಹಲವಾರು ಬಾರಿ ತಂದರೂ ಯಾವುದೇ ಪ್ರಯೋಜನವಾಗಿಲ್ಲ. ಸೋಮನಾಥನಗರದ ನಿವಾಸಿಗಳು ಕಾಲಕಾಲಕ್ಕೆ ತೆರಿಗೆಗಳನ್ನು ಸರಿಯಾಗಿ ಪಾವತಿಸುತ್ತಿದ್ದರೂ ಮೂಲಭೂತ ಸೌಕರ್ಯಗಳಿಂದ ವಂಚಿತರಾಗಿದ್ದಾರೆ. ಈ ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು ಗಮನಹರಿಸಿ, ಮೇಲಿನ ಸಮಸ್ಯೆಗಳನ್ನು ಆದಷ್ಟು ಬೇಗ ಸರಿಪಡಿಸಿಕೊಡಬೇಕಾಗಿ ಈ ಮೂಲಕ ಕೇಳಿಕೊಳ್ಳುತ್ತೇನೆ.

–ವೈ.ಎಸ್. ಹರೀಶ್, ಸೋಮನಾಥ ನಗರವಾಸಿ

■ ರಕ್ಷಕರನ್ನು ಶಿಕ್ಷಿಸುವುದು ಸರಿಯಾದ ಕ್ರಮವಲ್ಲ

ಮಾನ್ಯರೆ,

ಆರ್‌ಸಿಬಿ ವಿಜಯೋತ್ಸವದ ವೇಳೆ ಜನರ ನೂಕುನುಗ್ಗಲಿಂದ ಕಾಲು ತುಳಿತಕ್ಕೊಳಗಾಗಿ 11 ಜನ ಅಭಿಮಾನಿಗಳು ಸಾವನ್ನಪ್ಪಿದ್ದಾರೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಂಗಳೂರು ಪೊಲೀಸ್ ಕಮಿಷನರ್ ಸೇರಿದಂತೆ ಐವರು ಪೊಲೀಸ್ ಅಧಿಕಾರಿಗಳನ್ನು ಅಮಾನತುಗೊಳಿಸಿರುವುದು ಸರಿಯಾದ ಕ್ರಮವಲ್ಲ. ಜನ ಮರುಳೋ ಜಾತ್ರೆ ಮರುಳೋ ಎನ್ನುವಂತೆ ಸಾವಿರಾರು ಅಭಿಮಾನಿಗಳು ಒಟ್ಟಿಗೆ ನುಗ್ಗಿದರೆ ಪರಿಸ್ಥಿತಿ ಏನಾಗಬಹುದು. ಇದನ್ನು ಪೊಲೀಸರ ಮೇಲೆ ಹೊಣೆಗಾರಿಕೆ ಮಾಡಲು ಸಾಧ್ಯವಾಗುವುದಿಲ್ಲ. ಪ್ರಕೃತಿ ವಿಕೋಪದಂತೆ ಇದು ಅಂಧ ಅಭಿಮಾನಿಗಳ ಮಾನಸಿಕ ತಳಮಳದ ಅತಿರೇಕದ ಆಚರಣೆ. ಈ ವೇಳೆ ನಡೆದಿರುವ ಘಟನೆ. ಈ ಘಟನೆಯ ಹೊಣೆಗಾರಿಕೆಯನ್ನು ಪೊಲೀಸರ ಮೇಲೆ ಹೇರಿ ಅವರನ್ನು ಅಮಾನತು ಮಾಡಿರುವುದು ಸರಿಯಾದ ಕ್ರಮವಲ್ಲ.

–ಪಿ.ಸಿ.ಕಂಗಾಣಿಸೋಮು, ಕ್ಯಾತಮಾರನಹಳ್ಳಿ, ಮೈಸೂರು.

■ ನಾಡಪ್ರಭು ಕೆಂಪೇಗೌಡರ ಜಯಂತಿಗೆ ಸರ್ಕಾರ ರಜೆ ಘೋಷಣೆ ಮಾಡಲಿ

ಮಾನ್ಯರೆ,

ಪ್ರತಿ ವರ್ಷ, ಜೂನ್ ತಿಂಗಳ 27 ರಂದು ಬೆಂಗಳೂರಿನ ನಿರ್ಮಾತೃ ನಾಡಪ್ರಭು ಕೆಂಪೇಗೌಡರ ಜಯಂತಿಯನ್ನು ರಾಜ್ಯದಲ್ಲಿ ಆಚರಿಸಲಾಗುತ್ತದೆ. ರಾಜ್ಯ ಸರ್ಕಾರ ಈಗಾಗಲೇ ವಿವಿಧ ಮಹನೀಯರ ಜಯಂತಿಯಂದು ಹಲವು ವರ್ಷಗಳಿಂದ ಸರ್ಕಾರಿ ರಜೆ ಘೋಷಿಸುತ್ತಾ ಬಂದಿದೆ. ಆದರೆ ನಾಡಪ್ರಭು ಕೆಂಪೇಗೌಡರ ಜಯಂತಿಗೆ ರಜೆ ಘೋಷಣೆ ಮಾಡಲು ಮೀನಾಮೇಷ ಎಣಿಸಲಾಗುತ್ತಿದೆ. ಇದು ಒಂದು ರೀತಿಯಲ್ಲಿ ಆ ಮಹನೀಯರಿಗೆ ಮಾಡುತ್ತಿರುವ ಅವಮಾನ ಅಲ್ಲವೇ? **–ಬೂಕನಕೆರೆ ವಿಜೇಂದ್ರ, ಕುವೆಂಪುನಗರ, ಮೈಸೂರು**

■ ಆತಿಥ್ಯ ರತ್ನ ಪ್ರಶಸ್ತಿಗೆ ಮೆರುಗು ತಂದ ಉದ್ಯಮಿ ಸಿ.ನಾರಾಯಣಗೌಡ

ಮಾನ್ಯರೇ,

ಕರ್ನಾಟಕ ರಾಜ್ಯ ಹೊಟೇಲ್ ಮಾಲೀಕರ ಸಂಘದ ವತಿಯಿಂದ ಇತ್ತೀಚೆಗೆ



ಬೆಂಗಳೂರಿನಲ್ಲಿ ನಡೆದ ಸಮಾರಂಭದಲ್ಲಿ ಮೈಸೂರಿನ ಉದ್ಯಮಿ ಮತ್ತು ಮೈಸೂರು ಹೊಟೇಲ್ ಮಾಲೀಕರ ಸಂಘದ ಅಧ್ಯಕ್ಷರಾದ ಸಿ.ನಾರಾಯಣಗೌಡರಿಗೆ ಘನತೆವೆತ್ತ ರಾಜ್ಯಪಾಲರು ಹಾಗೂ ಗಣ್ಯರು ಆತಿಥ್ಯ ರತ್ನ ಪ್ರಶಸ್ತಿ ನೀಡಿ ಗೌರವಿಸಿದರು. ಇದು ಅವರ ಕಾರ್ಯ ನಿಷ್ಠೆಗೆ ಸಂದ ಪ್ರತಿಷ್ಠಿತ ಗೌರವವಾಗಿದೆ. ಸಿ.ನಾರಾಯಣ ಗೌಡರು ಆತಿಥ್ಯ ರತ್ನ ಪ್ರಶಸ್ತಿಗೆ ಮೆರುಗು ತಂದಿದ್ದಾರೆ. ಮೈಸೂರು ನಗರದಲ್ಲಿ ಹಲವಾರು ವರ್ಷಗಳಿಂದ ಹೊಟೇಲ್ ಮಾಲೀಕರ ಸಂಘದ ಅಧ್ಯಕ್ಷರಾಗಿ ಸೇವೆ ಸಲ್ಲಿಸುತ್ತಿರುವ ಸಿ.ನಾರಾಯಣಗೌಡರ ಕಾರ್ಯವೈಖರಿಯಿಂದ ಜನಪ್ರಿಯ ರಾಗಿದ್ದಾರೆ. ಕೊರೊನಾ ಸಂದರ್ಭದಲ್ಲಿ ಹೊಟೇಲ್ ಮಾಲೀಕರು ಮತ್ತು ಸಿಬ್ಬಂದಿ ವರ್ಗದವರಿಗೆ ಎಲ್ಲಾ ರೀತಿಯ ಸಹಾಯ, ಸಹಕಾರ ನೀಡಿದ್ದಾರೆ. ಆಹಾರ ಕಿಟ್ ನೀಡುವ ವ್ಯವಸ್ಥೆ ಇವರಿಂದಲೇ ಆರಂಭವಾದುದು. ಮೈಸೂರು ನಗರದ ಹೊಟೇಲ್ ಮಾಲೀಕರಿಗೆ ಯಾವುದೇ ಸಮಸ್ಯೆ ಬಂದರೂ ಅದನ್ನು ಬಗೆಹರಿಸಿದ್ದಾರೆ. ಸರ್ಕಾರ ಹಾಗೂ ನಗರಪಾಲಿಕೆಯಿಂದ ಹೊಟೇಲ್ ಮಾಲೀಕರಿಗೆ ಎಲ್ಲಾ ಕೆಲಸಗಳನ್ನು ಮಾಡಿಸಿಕೊಡಲು ನೆರವಾಗಿದ್ದಾರೆ. ಮೈಸೂರು ನಗರ ಪ್ರವಾಸೋದ್ಯಮ ಅಭಿವೃದ್ಧಿಗೆ ಸಿ.ನಾರಾಯಣಗೌಡರ ಸೇವೆ ಅಪಾರವಾಗಿದೆ. ಆತಿಥ್ಯ ರತ್ನ ಪ್ರಶಸ್ತಿ ಪುರಸ್ಕೃತರಾದ ಸಿ.ನಾರಾಯಣಗೌಡರಿಗೆ ಅಭಿನಂದನೆಗಳು.

–ಎಸ್.ನಾಗರಾಜ, ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರು, ಅರವಿಂದನಗರ, ಮೈಸೂರು



ಡಾ. ಹೆಚ್.ವಿ. ನಾಗರಾಜ ರಾವ್
ಮೈಸೂರು.

ಸಂಸ್ಕೃತಿ ಚಿಂತನಾ

ಶಕ್ತಿ ಪುಂಜವೋ ನೀನು!

ಪ್ರತಿಯೊಬ್ಬ ಮಾನವನಲ್ಲೂ ಶಕ್ತಿಯ ಬುಗ್ಗೆಯಿದೆ. ಅದು ಉಕ್ಕಲು, ತನ್ನ ಅಮೃತಧಾರೆಯನ್ನು ಬಾನಿನೆತ್ತರಕ್ಕೆ ಚಿಮ್ಮಿಸಲು ಸಮಾಜ ಅವಕಾಶವನ್ನು ಕೊಡುವುದಿಲ್ಲ. ಹನುಮಂತನಿಗೆ ತನ್ನ ಶಕ್ತಿಯ ಅರಿವು ಇಲ್ಲದಂತೆ ಶಾಪ ಮಾಡಿಬಿಟ್ಟಿತ್ತು. ಸಾಗರವನ್ನು ಯಾರು ದಾಟಬಲ್ಲರು? ಎಂಬ ಪ್ರಶ್ನೆ ಬಂದಾಗ ಹನುಮಂತ ದೂರದಲ್ಲಿ ಕುಳಿತಿದ್ದ. ಅವನು ಮೂಕನಂತೆ ಮೂಲೆಯನ್ನು ಆಶ್ರಯಿಸಿದ್ದ. ಜಾಂಬವಂತನು ಅವನ ಬಳಿಗೆ ಹೋಗಿ ಅವನ ಶಕ್ತಿಯನ್ನು ನೆನಪಿಸಿದಾಗ ಎದ್ದು ನಿಂತ ಮಾರುತಿ ಸಾಗರವನ್ನು ದಾಟಿದ. ಇದು ಸಾಂಕೇತಿಕವಾದ ಕಥೆ. ನಮ್ಮೆಲ್ಲರಿಗೂ ಅನ್ವಯಿಸುವ ಕಥೆ. ದಾರ್ಶನಿಕ ಕವಿ ಕೆ.ಸಿ. ಶಿವಪ್ಪನವರು ನಮ್ಮಲ್ಲಿ ಪ್ರತಿಯೊಬ್ಬರನ್ನು ಸಂಬೋಧಿಸಿ ಹೇಳುತ್ತಿದ್ದಾರೆ– ಶಕ್ತಿ ಪುಂಜವೊ ನೀನು, ನಿನ್ನಲ್ಲಿರುವ ಶಕ್ತಿಯನ್ನು ಅರಿತುಕೋ, ನೀನು ಸಾಧಿಸಬಲ್ಲುದು ಸಾಕಷ್ಟಿದೆ ಎಂದು. ನನ್ನ ಕೈಲಾಗದು ಎಂದು ಅಳುಕಿ ಕುಳಿತುಕೊಳ್ಳುವವರಿಂದ ಜಗತ್ತಿಗೆ ಯಾವ ಪ್ರಯೋಜನವೂ ಇಲ್ಲ. ಮುದ್ದುರಾಮನ ಮಾತು ಇಂತಿದೆ–

ಆಗದಾಗದು ಎನುತ ಮೂಲೆ ಸೇರುವೆ ಏಕೆ?
ಕುಳಿತು ಅತ್ತರೆ ತಮದಿ ಬೆಳಕು ಮೂಡುವುದೆ?
ನಾವೆ ನೀ ಹಾಯಿಸದೆ ನದಿಯ ದಾಟುವೆ ಹೇಗೆ?
ಕಾರ್ಯಮುಖಿಯಾಗು ನೀ ಮುದ್ದುರಾಮ.

ಮಾನವನು ಎಂದೂ ತನ್ನ ಶಕ್ತಿಯಲ್ಲಿ ನಂಬಿಕೆಯನ್ನು ಕಳೆದುಕೊಳ್ಳಬಾರದು. ಹಿಂದೆ ಪ್ರಯತ್ನಪಟ್ಟು ಸೋತಿದ್ದೆ ಎಂದು ತನ್ನನ್ನೇ ಹಳಿದುಕೊಂಡು ಮೂಲೆ ಸೇರಬಾರದು. ಸಂಸ್ಕೃತದಲ್ಲಿ ಒಂದು ಶ್ಲೋಕವಿದೆ–

ಆತ್ಮಾನಂ ನಾವಮನ್ಯೇತ ಪೂರ್ವಾಭಿರಸಮೃದ್ಧಿಭಿಃ।
ಆ ಮೃತ್ಯೋಃ ಶ್ರೀಯಮನ್ವಿಚ್ಛೇತ್ ನೈನಾಂ ಮನ್ಯೇತ ದುರ್ಲಭಾಮ್॥

'ಹಿಂದೆ ಸೋಲಾಗಿತ್ತು, ಸಮೃದ್ಧಿ ಸಿಕ್ಕಿರಲಿಲ್ಲ ಎಂದು ಮನುಷ್ಯನು ತನಗೆ ಅವಮಾನ ಮಾಡಿಕೊಳ್ಳಬಾರದು. ಸಾವಿನ ಕ್ಷಣದವರೆಗೂ ಲಕ್ಷ್ಮಿ ಒಲಿಯುವಳು ಎಂದು ಆಶಿಸಬೇಕು. ಅದು ದುರ್ಲಭ, ನನಗೆ ಸಿಕ್ಕದು ಎಂದು ಎಂದೂ ಅಂದುಕೊಳ್ಳಬಾರದು' ಎಂದು ಶ್ಲೋಕದ ತಾತ್ಪರ್ಯ. ಅದನ್ನೇ ಮುದ್ದುರಾಮ ಹೇಳಿರುವುದು –ಆಗದು ಎಂದು ಏಕೆ ಮೂಲೆ ಸೇರುವೆ? ನಾವು ಕುಳಿತು ಅತ್ತರೆ ಕತ್ತಲೆಯಳಿದು ಬೆಳಕು ಮೂಡುವುದಿಲ್ಲ. ಎದ್ದು ದೀಪವನ್ನು ಹಚ್ಚಬೇಕು. ಎದುರಿಗೆ ಸಮಸ್ಯೆಯ ನದಿ ಇದೆ. ದೋಣಿಗೆ ಹಾಯಿಯನ್ನು ಕಟ್ಟಿ ಹಾಯಿಸದಿದ್ದರೆ ನದಿಯನ್ನು ದಾಟಲಾಗದು. ಆದ್ದರಿಂದ ದುಃಖ, ಶೋಕಗಳನ್ನು ಬದಿಗೆ ಒತ್ತರಿಸಿ ಕಾರ್ಯಮುಖಿಯಾಗಬೇಕು. ಇದೇ ಸಾಧಕರಿಗೂ ಇತರರಿಗೂ ಇರುವ ವ್ಯತ್ಯಾಸ. ಕಾರ್ಯಮುಖಿಗಳು ಸಾಧಕರು. ದೊಡ್ಡ ಕೆಲಸಗಳು ಕ್ರಮೇಣ ಒಂದೊಂದು ಘಟಕವೂ ಸೇರಿ ಆಗುತ್ತವೆ. ರಾಮಾಯಣ, ಮಹಾಭಾರತದಂತಹ ಮಹಾಗ್ರಂಥಗಳು ತಟಕ್ಕನೆ ರಚನೆಯಾಗಲಿಲ್ಲ. ಒಂದೊಂದು ಶ್ಲೋಕ ಸೇರಿ ಲಕ್ಷ ಶ್ಲೋಕಗಳ ಮಹಾಭಾರತವಾಗಿದೆ. ಒಂದೊಂದು ಶ್ಲೋಕವೂ ಪದಗಳ ಜೋಡಣೆಯಿಂದ ಆಗಿದೆ. ಇದನ್ನು ಮನಸ್ಸಿನಲ್ಲಿಟ್ಟುಕೊಂಡು ಮುದ್ದುರಾಮ ನುಡಿದಿದ್ದಾನೆ–

ಒಂದೊಂದು ಕಿರುಗಲ್ಲು ನೂರು ಸಾವಿರವಾಗಿ
ಸೇತುವೆಯ ನಿರ್ಮಾಣ ಇಂದಲ್ಲ ನಾಳೆ.
ಕೈಯೆ ಕೆಸರಾಗದಿರೆ ಬಾಯಲ್ಲಿ ಮೊಸರೆಲ್ಲಿ
ಹನಿಗೂಡಿದರೆ ಹಳ್ಳ ಮುದ್ದುರಾಮ.

ಸೇತುವೆಯ ನಿರ್ಮಾಣ ಕ್ಷಣದಲ್ಲಿ ಆಗದು. ಶ್ರೀರಾಮನು ಲಂಕೆಗೆ ಸೇತುವೆಯನ್ನು ಕಟ್ಟಿದಾಗ ಒಂದೊಂದು ಕಪಿಯೂ ಕಲ್ಲುಗಳನ್ನು ತಂದು ಹಾಕಿತು. ಒಂದು ನೂರಾಯಿತು, ಸಾವಿರವಾಯಿತು, ಲಕ್ಷವಾಯಿತು, ಸಮುದ್ರದ ಮೇಲೆ ದೊಡ್ಡ ಸೇತುವೆಯಾಯಿತು.

ಅದೇ ರೀತಿಯಾಗಿ ಕಾವ್ಯವಾಗಲಿ, ರಾಜ್ಯವಾಗಲಿ ಒಂದೇ ಕ್ಷಣದಲ್ಲಿ ರಚಿಸಲಾಗದು. ಕೈಗೆ ಕೆಸರಾಗುತ್ತದೆ. ಅದಕ್ಕೆ ಹೆದರಿದರೆ ಸೇತುವೆ ಕನಸು. ಇಲ್ಲಿ ಶಿವಪ್ಪನವರು ಲೋಕರೂಢವಾಗಿರುವ ಗಾದೆಯನ್ನು ಬಳಸಿಕೊಂಡಿದ್ದಾರೆ. ಕೈ ಕೆಸರಾದರೆ ಬಾಯಿ ಮೊಸರು. ಕೈ ಕೆಸರಾಗದಿರೆ ಬಾಯಲ್ಲಿ ಮೊಸರೆಲ್ಲಿ? ಕಾರಣವಿಲ್ಲದಿದ್ದರೆ ಕಾರ್ಯವೂ ಇಲ್ಲ. ಇಲ್ಲಿ ಇನ್ನೊಂದು ಗಾದೆಯೂ ಸೇರಿಕೊಂಡಿದೆ. ಹನಿಹನಿಗೂಡಿದರೆ ಹಳ್ಳ, ತೆನೆ ತೆನೆಗೂಡಿದರೆ ಬಳ್ಳ. ಶಿವಪ್ಪನವರು ಇಪ್ಪತ್ತು ಸಾವಿರಕ್ಕೂ ಹೆಚ್ಚು ಚೌಪದಿಗಳನ್ನು ಬರೆದಿದ್ದಾರೆ. ಒಟ್ಟಿಗೆ ಅಲ್ಲ. ಒಂದೊಂದು ಚೌಪದಿಯನ್ನು ಬರೆದು ಸಂಕಲಿಸಿ ಗ್ರಂಥಗಳನ್ನು ಮಾಡಿದ್ದಾರೆ. ಒಂದೊಂದು ಹೂವನ್ನೂ ತೆಗೆದುಕೊಂಡು ಪೋಣಿಸಿದರೆ ಮಾತ್ರ ಹಾರ.

ಭಗವದ್ಗೀತೆಯಲ್ಲಿ ಏಳು ನೂರು ಶ್ಲೋಕಗಳಿವೆ. ಅವುಗಳಲ್ಲಿ ನನಗೆ ಅತ್ಯಂತ ಇಷ್ಟವಾದುದು ಆರನೆಯ ಅಧ್ಯಾಯದಲ್ಲಿ ಬರುವ ಈ ಶ್ಲೋಕ–

ಉದ್ಧರೇದಾತ್ಮನಾತ್ಮಾನಂ ನಾತ್ಮಾನಮವಸಾದಯೇತ್ ।
ಆತ್ಮೈವ ಹ್ಯಾತ್ಮನೋ ಬಂಧುರಾತ್ಮೈವ ರಿಪುರಾತ್ಮನಃ॥

(ತನ್ನನ್ನು ತಾನೇ ಉದ್ಧರಿಸಿಕೊಳ್ಳಬೇಕು. ತಾನೇ ತನ್ನನ್ನು ಹಾಳು ಮಾಡಿಕೊಳ್ಳಬಾರದು. ಮನುಷ್ಯನು ತನಗೆ ತಾನೇ ಬಂಧು, ತನಗೆ ತಾನೇ ಶತ್ರು)

ಯಾರೋ ಬಂದು ನನ್ನನ್ನು ಮೇಲೆ ಎತ್ತುತ್ತಾರೆ ಎಂದು ಕಾದು ಕುಳಿತಿದ್ದರೆ ಯಾರೂ ಬರುವುದಿಲ್ಲ. ಸ್ವಪ್ರಯತ್ನದಿಂದ ಏಳಲು ಯತ್ನಿಸಿದರೆ ಆಗ ದೇವರೂ ಬೇರೆಯವರೂ ನೆರವನ್ನು ನೀಡುತ್ತಾರೆ. ತನ್ನನ್ನು ತಾನೇ ಹಾಳು ಮಾಡಿಕೊಳ್ಳುವವನಿಗೆ ಯಾರೂ ಸಹಾನುಭೂತಿಯನ್ನು ತೋರಿಸುವುದಿಲ್ಲ. ನಿನಗೆ ನೀನೇ ಬಂಧು, ನೀನೇ ಶತ್ರುವೂ ಆಗಬಹುದು ಎಂದು ಗೀತೆ ಹೇಳಿದೆ. ಅದರ ಮರುಧ್ವನಿ ಎಂಬಂತೆ ಮುದ್ದುರಾಮ ನುಡಿದಿದ್ದಾನೆ –

ನೀನೆ ನೋವಿನ ತಾಣ ನಲಿವಿನಾಗರ ನೀನೆ
ಪರರ ಗುರಿ ಮಾಡದಿರು ನಿನ್ನ ಉಬ್ಬಸಕೆ.
ತೋರ್ಬೆರಳು ನಿನ್ನತ್ತ ಇದ್ದರದು ಬಲುಕ್ಷೇಮ
ನೀನೆ ನಿನ್ನಯ ಮಿತ್ರ ಮುದ್ದುರಾಮ.

ನೀನೆ ನೋವಿನ ತಾಣ. ತಾಣ ಎಂದರೆ ಸ್ಥಾನ. ನೋವನ್ನು ತಂದು ಕೊಡುವ ಕಾರಣ ನೀನೇ, ಬೇರೊಬ್ಬರಲ್ಲ. ಹಾಗೆಯೇ ನಲಿವಿನ ಆಗರ=ಆಕರ= ಗಣಿ ನೀನೆ. ಸಂತಸವನ್ನು ತಂದುಕೊಳ್ಳುವುದು, ಕಷ್ಟವನ್ನು ಆಹ್ವಾನಿಸುವುದೂ ನೀನೇ. ಅದಕ್ಕೆ ಹೊಣೆ ನಿನ್ನದೇ. ನಿನಗೆ ಬರುವ ಉಬ್ಬಸಕ್ಕೆ ನೀನೇ ಕಾರಣ. ಅದಕ್ಕೆ ಬೇರೆಯವರು ಕಾರಣ ಎನ್ನಬೇಡ. ಇವರು ನನ್ನ ಕಷ್ಟಕ್ಕೆ ಕಾರಣ, ಅವರು ನನ್ನ ದುಃಖಕ್ಕೆ ಕಾರಣ ಎಂದು ನಿನ್ನ ಬೆರಳನ್ನು ಬೇರೆಯವರತ್ತ ತೋರಿಸಬೇಡ. ತೋರ್ಬೆರಳು ನಿನ್ನ ಕಡೆಗೇ ತಿರುಗಿದ್ದರೆ ಅದು ಕ್ಷೇಮ. ನಿನ್ನ ಸುಖ ದುಃಖಗಳಿಗೆ ನೀನೇ ಕಾರಣ ಎಂಬ ಅರಿವು ನಿನಗಿದ್ದರೆ ನಿನಗೂ ಕ್ಷೇಮ, ಪರರಿಗೂ ಕ್ಷೇಮ. ನೀನೆ ನಿನ್ನಯ ಮಿತ್ರ, ಗೆಳೆಯ ಬಂಧು. ಅದೇ ರೀತಿ, ನೀನು ಅಡ್ಡದಾರಿಯನ್ನು ಹಿಡಿದರೆ ನೀನೆ ನಿನ್ನ ಹಗೆ, ಶತ್ರು. ಪ್ರಾಯಶಃ ಇದಕ್ಕಿಂತ ಒಳ್ಳೆಯ ಉಪದೇಶ ಲೋಕದಲ್ಲಿಲ್ಲ. ಸ್ವಾವಲಂಬನೆ ಎಷ್ಟು ಮುಖ್ಯವೆಂಬುದು ಇಲ್ಲಿ ಬಿಂಬಿತವಾಗಿದೆ.

ಜಗತ್ತಿನಲ್ಲಿ ಅದ್ಭುತಗಳನ್ನು ಸಾಧಿಸಿದವರೆಲ್ಲ ಕನಸನ್ನು ಕಂಡವರು. I have a dream ಎಂದು ಆರಂಭಿಸಿದವರು. ಕನಸನ್ನು ನನಸು ಮಾಡಿ ತೋರಿಸಿದವರು. ಅವರಿಗೂ ನಮ್ಮಂತೆ ಎರಡೇ ಕಣ್ಣು. ಎರಡೇ ಕೈ. ಯಾರೂ ತ್ರಿನೇತ್ರರೂ ಚತುರ್ಭುಜರೂ ಆಗಿರಲಿಲ್ಲ. ಆದರೆ ಅವರಿಗೆ ಕನಸನ್ನು ನನಸು ಮಾಡುವ ಛಲವಿತ್ತು. ಪರರ ನಿಂದೆಗಳಿಗೆ, ಟೀಕೆಗಳಿಗೆ ಅವರು ಅಂಜಲಿಲ್ಲ, ಅಳುಕಲಿಲ್ಲ. ಇದನ್ನು ಮುದ್ದುರಾಮ ಹೇಳುತ್ತಾನೆ–

ಲೋಕಚರಿತರು ಯಾರೂ ಕನಸುಗಾರರೆ ಅವರು
ಅವರ ಬಾಳಿನ ಸಾರ ಆ ಸ್ವಪ್ನಮಾಲೆ.
ಆ ಕನಸು ನನಸುಗಳೆ ನಾಡವರ ಅಭ್ಯುದಯ
ಉತ್ಥಾನಪಥ ಸ್ವಪ್ನ ಮುದ್ದುರಾಮ.

ಲೋಕಚರಿತರು –ಜಗತ್ ಪ್ರಸಿದ್ಧರು ಅಲೆಕ್ಸಾಂಡರ್, ಅಶೋಕ ಮುಂತಾದ ಚಕ್ರವರ್ತಿಗಳು, ವಾಲ್ಮೀಕಿ, ವ್ಯಾಸ ಮುಂತಾದ ಋಷಿಗಳು, ನ್ಯೂಟನ್, ಐನ್‌ಸ್ಟೀನ್ ಮುಂತಾದ ವಿಜ್ಞಾನಿಗಳು, ಕಾಳಿದಾಸ, ಸರ್ವಜ್ಞ ಮುಂತಾದ ಕವಿಗಳು–ಇವರೆಲ್ಲ ಕನಸುಗಾರರೇ. ದೊಡ್ಡ ಕನಸನ್ನು ಕಂಡು ಅದನ್ನು ನನಸು ಮಾಡಿಕೊಂಡವರು. ಅವರ ಕನಸುಗಳ ಮಾಲೆಯೇ ಅವರ ಜೀವನದ ಸಾರ. ಆ ಕನಸುಗಳು ಸ್ವಾರ್ಥಕ್ಕಾಗಿ ಅಲ್ಲ ನಾಡವರ ಅಭ್ಯುದಯಕ್ಕಾಗಿ ಅಥವಾ ಎಲ್ಲ ಮಾನವ ಕುಲದ ಏಳ್ಗೆಗಾಗಿ. ಇಂತಹ ಸ್ವಪ್ನವೇ ಉತ್ಥಾನಪಥ ಎಂದಿದ್ದಾನೆ ಮುದ್ದುರಾಮ. ಮೇಲೆದ್ದು ಹಾರುವುದು, ಏರುವುದು ಇಲ್ಲಿ ಉತ್ಥಾನ.

ಪುರಂದರದಾಸರ "ತಲ್ಲಣಿಸದಿರು ಕಂಡ್ಯ ತಾಳು ಮನವೆ" ಎಂಬ ಹಾಡಿನ ಪದಗಳನ್ನು ಉಪಯೋಗಿಸಿಕೊಂಡಿರುವ ಮುದ್ದುರಾಮನ ಪದ್ಯ –

ಮೊಳಗುತಿದೆ ಆಗಸದಿ ಅಭಯವಾಣಿ ಅನಂತ
ತಲ್ಲಣಿಸದಿರುವ ಕಂಡ್ಯ ತಾಳು ಓ ಮನಸೆ
ಒಳ ತುಂಬು ಚಣಚಣದಿ ಸಂತಸದ ಮಾರ್ದನಿಯ
ಸತ್ತ್ವ ಪುಂಜವೊ ನೀನು – ಮುದ್ದುರಾಮ.

ಆಗಸ ಎಂದರೆ ಆಕಾಶ. ಆಕಾಶದಲ್ಲಿ ಅಭಯವಾಣಿ ಜೋರಾಗಿ ಮೊಳಗುತ್ತಿದೆ. ತಲ್ಲಣಿಸದಿರು, ಹೆದರಬೇಡ, ಗಾಬರಿಪಡಬೇಡ, ನಿನ್ನ ರಕ್ಷಣೆಗಾಗಿ ನಾನಿದ್ದೇನೆ, ಕಷ್ಟವನ್ನು ತಾಳ್ಮೆಯಿಂದ ಸಹಿಸಿಕೋ ಮನಸ್ಸೇ ಎಂದು ಸಾರಿ ಹೇಳುತ್ತಿದೆ. ಚಣಚಣದಿ ಎಂದರೆ ಕ್ಷಣ ಕ್ಷಣದಲ್ಲೂ ಸಂತೋಷದ ಮಾರ್ದನಿಯನ್ನು, ಎಂದರೆ ಪ್ರತಿಧ್ವನಿಯನ್ನು ಮನಸ್ಸಿನಲ್ಲಿ ತುಂಬಿಸಿಕೊ. ಹಾಗೆ ಮಾಡಿದರೆ ನೀನು ಶಕ್ತಿಯ ಪುಂಜ. ಸತ್ತ್ವದ ರಾಶಿ ಎಂಬ ಭರವಸೆಯನ್ನು ಪ್ರತಿಯೊಬ್ಬರಿಗೂ ಮುದ್ದುರಾಮನು ನೀಡುತ್ತಿದ್ದಾನೆ. ಸೋಮಾರಿತನ ಸಲ್ಲದು, ಹುಮ್ಮಸ್ಸು ತುಂಬಿರಲಿ, ಉತ್ಸಾಹದಿಂದ ಸುಖ ಎಂಬ ಸೂತ್ರಗಳನ್ನು ಕೊಟ್ಟು ಕವಿ ಶಿವಪ್ಪನವರು ಪ್ರತಿಯೊಬ್ಬ ಮಾನವನನ್ನು ಶಕ್ತಿಯ ಪುಂಜವನ್ನಾಗಿ ಮಾಡುತ್ತಾರೆ. ವ್ಯಕ್ತಿತ್ವ ವಿಕಸನಕ್ಕೆ ಮುದ್ದುರಾಮನ ನುಡಿಗಳು ಕೈಪಿಡಿಯಂತಿವೆ.

ಸಂಸ್ಕೃತದ ಅನೇಕ ಸುಭಾಷಿತಗಳು ಶಿವಪ್ಪನವರಲ್ಲಿ ಕನ್ನಡ ವಚನಗಳೇ ಆಗಿವೆ. ಭಾಸನ ನಾಟಕದಲ್ಲಿ ಬರುವ ಒಂದು ಸುಭಾಷಿತ ಇಂತಿದೆ–

ಕಾಷ್ಠಾದಗ್ನಿರ್ಜಾಯತೇ ಮಥ್ಯಮಾನಾತ್
ಭೂಮಿಸ್ತೋಯಂ ಖನ್ಯಮಾನಾ ದದಾತಿ।
ಸೋತ್ಸಾಹಾನಾಂ ನಾಸ್ತ್ಯಸಾಧ್ಯಂ ನರಾಣಾಂ
ಮಾರ್ಗಾರಬ್ಧಾಃ ಸರ್ವ ಯತ್ನಾಃ ಫಲಂತಿ ॥
ಇದನ್ನು ಮುದ್ದುರಾಮನ ವಚನದಲ್ಲಿ ಕೇಳೋಣ–
ಕಾಷ್ಠ ಕಡೆದರೆ ಚೆಂದ ಉದಿಸಿ ಬರುವುದು. ಅಗ್ನಿ
ಭೂಮಿ ಅಗೆದರೆ ಆಳ ಉಕ್ಕುವುದು ನೀರು.
ಆಗದೆನುವುದೆ ಇಲ್ಲಿ ಉತ್ಸಾಹಶೀಲರಿಗೆ
ಯತ್ನದಿಂದಮಿತ ಫಲ ಮುದ್ದುರಾಮ.

ಹಿಂದಿನ ಕಾಲದಲ್ಲಿ ಭಾರತೀಯರು ಯಜ್ಞಗಳನ್ನು ಮಾಡಬೇಕಾದಾಗ ಶಮೀವೃಕ್ಷದ ಅರಣಿಯಿಂದ ಅಗ್ನಿಯನ್ನು ಉತ್ಪಾದಿಸುತ್ತಿದ್ದರು. ಅಧರಾರಣಿಯ ಮೇಲೆ ಉತ್ತರಾರಣಿಯನ್ನಿಟ್ಟು ಜೋರಾಗಿ ಕಡೆದಾಗ ಅಗ್ನಿ ಕಣಗಳು ಉತ್ಪನ್ನವಾಗುತ್ತಿದ್ದುವು. ಕಟ್ಟಿಗೆಯಲ್ಲಿ ಅಗ್ನಿ ಅಡಗಿದೆ, ಕಾಣಿಸುವುದಿಲ್ಲ. ಕಡೆದಾಗ ಮಾತ್ರ ಅದು ಕಾಣಿಸುತ್ತದೆ. ಒಣಭೂಮಿಯಲ್ಲಿ ನೀರು ಕಾಣಿಸದು. ಆದರೆ ಆಳವಾಗಿ ಅಗೆದರೆ ನೀರು ಸಿಕ್ಕುತ್ತದೆ. ಹೀಗೆ ಉತ್ಸಾಹದಿಂದ ಕೆಲಸ ಮಾಡಿದರೆ ಫಲ ದೊರಕುವುದು. ಆಗದು ಎನ್ನುವುದು ಯಾವುದೂ ಇಲ್ಲ. ಸರಿಯಾದ ಮಾರ್ಗದಲ್ಲಿ ಉತ್ಸಾಹದಿಂದ ಮಾಡಿದ ಎಲ್ಲ ಕೆಲಸವೂ ಸಫಲ ಎಂಬುದಿದರ ತಾತ್ಪರ್ಯ. ಮುದ್ದುರಾಮನ ಉಪದೇಶವನ್ನು ಆಚರಣೆಗೆ ತಂದರೆ ಎಲ್ಲರೂ ಸಾಫಲ್ಯವನ್ನು ಕಾಣಬಹುದು.

ಪತಿ ಹತ್ಯೆಗೆ ಸುಪಾರಿ 5 ಲಕ್ಷದಿಂದ 20 ಲಕ್ಷಕ್ಕೆ ಏರಿಸಿದ್ದ 'ಹನಿಮೂನ್ ಹಂತಕಿ'

ಮೃತದೇಹ ಕಂದಕಕ್ಕೆ ಎಸೆಯಲು ಸೋನಂ ಸಹಾಯ

ಮೇಘಾಲಯ, ಜೂ.10 ಸೋನಂ ರಘುವಂಶಿ ತನ್ನ ಪತಿ ರಾಜಾ ರಘುವಂಶಿ ಕೊಲೆಗೆ ಬಾಡಿಗೆ ಹಂತಕರಿಗೆ 5 ಲಕ್ಷ ರೂ. ನೀಡುವುದಾಗಿ ಹೇಳಿದ್ದರು ಎಂದು ಮೂಲಗಳು ತಿಳಿಸಿವೆ. ನಂತರ ಅವರು ಆ ಮೊತ್ತವನ್ನು 20 ಲಕ್ಷ ರೂ.ಗೆ ಹೆಚ್ಚಿಸಿದ್ದಾರೆ. ಉನ್ನತ ಪೊಲೀಸ್ ಮೂಲಗಳ ಪ್ರಕಾರ ಸೋನಂ ರಘುವಂಶಿ ಅವರ ದೇಹವನ್ನು ಮೇಘಾಲಯದ ಪರ್ವತದ ಕೆಳಗೆ ತಳ್ಳಲು ಇತರ ಆರೋಪಿಗಳಿಗೆ ಆಕೆ ಸಹಾಯ ಮಾಡಿದ್ದಾಳೆ.

ರಾಜಾ ರಘುವಂಶಿ ಅವರ ದೇಹ ಜೂ.2 ರಂದು ಪೂರ್ವ ಖಾಸಿ ಬೆಟ್ಟಗಳ ಜಿಲ್ಲೆಯ ಸೊಹ್ರಾ ಪ್ರದೇಶದ (ಚಿರಾಪುಂಜಿ ಎಂದೂ ಕರೆಯುತ್ತಾರೆ) ಜಲಪಾತದ ಬಳಿಯ ಕಣಿವೆಯಲ್ಲಿ ಪತ್ತೆಯಾಗಿತ್ತು. ಅವರು ತಮ್ಮ ಪತ್ನಿ ಸೋನಂ ಅವರೊಂದಿಗೆ ಹನಿಮೂನ್‌ಗಾಗಿ ಮೇಘಾಲಯ ತಲುಪಿದ ಕೆಲವು ದಿನಗಳ ನಂತರ ಈ ಘಟನೆ ನಡೆದಿದೆ.

ಸೋನಂ ನೇಮಿಸಿಕೊಂಡ ಕೊಲೆಗಾರರು ಮೊದಲು ಬೆಂಗಳೂರಿನಲ್ಲಿ ನವವಿವಾಹಿತ ದಂಪತಿಯನ್ನು ಭೇಟಿಯಾದರು. ಅಲ್ಲಿಂದ ಅವರು ಈಶಾನ್ಯಕ್ಕೆ ಸಂಪರ್ಕ ವಿಮಾನದಲ್ಲಿ ಹೋದರು ಎಂದು ಮೂಲಗಳು ತಿಳಿಸಿವೆ. ಸಂತ್ರಸ್ತ ವ್ಯಕ್ತಿ ಮತ್ತು ಆರೋಪಿಗಳು ಒಂದೇ ನಗರದವರಾಗಿರುವುದರಿಂದ ಅವರು ಮಾತನಾಡಿದ್ದರು ಎಂದು ಮೂಲಗಳು ತಿಳಿಸಿವೆ. ಸೋನಂ ತನ್ನ ಪ್ರೇಮಿಯೊಂದಿಗೆ ಇರಲು ಬಯಸಿದ್ದರಿಂದ ತನ್ನ ಪತಿಯನ್ನು ಮುಗಿಸಲು ಕೊಲೆಗಾರರನ್ನು ನೇಮಿಸಿಕೊಂಡಿದ್ದಳು.

ಮೂಲಗಳ ಪ್ರಕಾರ ಸೋನಂ ಮೇ 11 ರಂದು ಇಂದೋರ್‌ನಲ್ಲಿ ರಘುವಂಶಿ ಜೊತೆ ನಡೆದ ವಿವಾಹದ ಕೆಲವೇ ದಿನಗಳ ನಂತರ ತನ್ನ ಪ್ರೇಮಿ ರಾಜ್ ಕುಶ್ವಾಹ 'ನೊಂದಿಗೆ ಸೇರಿ ಕೊಲೆಯನ್ನು ಯೋಜಿಸಿದ್ದಳು. ಹನಿಮೂನ್‌ಗಾಗಿ ಮೇಘಾಲಯಕ್ಕೆ



ಒಂದೇ ಕಡೆ ಟಿಕೆಟ್ ಪಡೆಯುವ ಯೋಜನೆ ಅವರದ್ದಾಗಿತ್ತು ಎಂಬ ಮಾಹಿತಿಯೂ ಈಗ ಲಭ್ಯವಾಗಿದೆ. ಕುಶ್ವಾಹ ಮೇಘಾಲಯಕ್ಕೆ ಪ್ರಯಾಣಿಸದಿದ್ದರೂ ಶಿಲ್ಲಾಂಗ್ ಪೊಲೀಸ್ ಮೂಲಗಳು ತೆರೆಮರೆಯಲ್ಲಿ ಆತನೇ ಯೋಜನೆ ರೂಪಿಸಿ, ಸೋನಂ ಜೊತೆ ಸಂಪರ್ಕದಲ್ಲಿದ್ದರು ಎಂಬುದನ್ನು ಖಚಿತಪಡಿಸಿಕೊಂಡಿದ್ದಾರೆ.

ಮೇ 23 ರಂದು ಸೋನಂ ಮತ್ತು ರಾಜಾ ರಘುವಂಶಿ ಜಲಪಾತವನ್ನು ನೋಡಲು ಕಡಿದಾದ ಶಿಖರಕ್ಕೆ ತೆರಳಿದ್ದರು. ಕೊಲೆಗಾರರು ಅವರ ಹಾದಿಯನ್ನು ಅನುಸರಿಸಿದ್ದರು. ಒಂದು ಹಂತದಲ್ಲಿ ಸೋನಂ ದಣಿದಂತೆ ನಟಿಸಿ, ತನ್ನ ಪತಿ ಮತ್ತು ಹಂತಕರ ಹಿಂದೆ ನಡೆಯಲು ಪ್ರಾರಂಭಿಸಿದ್ದಾಳೆ. ಅವರು ನಿರ್ಜನ ಸ್ಥಳವನ್ನು ತಲುಪಿದಾಗ ಸೋನಂ ತನ್ನ ಪತಿಯನ್ನು ಕೊಲ್ಲಲು ಸುಫಾರಿ ಹಂತಕರಿಗೆ ಸೂಚಿಸಿದ್ದಾಳೆ ಎಂದು ಆರೋಪಿಸಲಾಗಿದೆ.

ಮೂಲಗಳ ಪ್ರಕಾರ ಕೊಲೆಗಾರರು ದಣಿದಿದ್ದಾರೆ ಎಂದು ಹೇಳಿ ಅವರನ್ನು ಕೊಲ್ಲಲು ನಿರಾಕರಿಸಿದರು. ನಂತರ ಸೋನಂ ರಘುವಂಶಿ 5 ಲಕ್ಷ ಇದ್ದ ಸುಪಾರಿ ಆಫರ್ ಅನ್ನು 20 ಲಕ್ಷಕ್ಕೆ ಏರಿಸಿದ್ದಾಳೆ ಎಂಬ ಮಾಹಿತಿ ಬಹಿರಂಗವಾಗಿದೆ.

ಮೂಲಗಳ ಪ್ರಕಾರ ಸೋನಂ ಸಹ ಆರೋಪಿಗೆ ರಾಜಾ ಅವರ ದೇಹವನ್ನು ಕಂದಕಕ್ಕೆ ಎಸೆಯಲು ಸಹಾಯ ಮಾಡಿದ್ದಾಳೆ. ಪ್ರಾಥಮಿಕ ಶವಪರೀಕ್ಷೆಯ ವರದಿಯ ಪ್ರಕಾರ ರಾಜಾ ರಘುವಂಶಿ ಮೇಲೆ 2 ಬಾರಿ ಗುಂಡು ಹಾರಿಸಲಾಗಿದೆ. ಒಮ್ಮೆ ಅವರ ತಲೆಯ ಹಿಂಭಾಗ ಮತ್ತು ಮುಂಭಾಗಕ್ಕೆ ಗುಂಡು ತಗುಲಿದೆ.

ಗೂಗಲ್ ಮ್ಯಾಪ್ ಎಡವಟ್ಟು; ನಿರ್ಮಾಣ ಹಂತದ ಸೇತುವೆ ಮೇಲಿಂದ ಬಿದ್ದ ಕಾರು!

ಲಖನೌ, ಜೂ.10– ಗೂಗಲ್ ಮ್ಯಾಪ್ ನೆಚ್ಚಿಕೊಂಡು ಕಾರು ಚಲಾಯಿಸಿದ ಚಾಲಕನೋರ್ವ ನಿರ್ಮಾಣ ಹಂತದ ಮೇಲ್ಸೇತುವೆ ಮೇಲೆ ಹೋಗಿ ಪೇಚಿಗೆ ಸಿಲುಕಿದ ಘಟನೆ ಉತ್ತರ ಪ್ರದೇಶದಲ್ಲಿ ವರದಿಯಾಗಿದೆ.

ಉತ್ತರ ಪ್ರದೇಶದ ಮಹಾರಾಜ್‌ಗಂಜ್ ಜಿಲ್ಲೆಯಲ್ಲಿ ಈ ಘಟನೆ ನಡೆದಿದ್ದು, ಕಾರೊಂದು ಗೂಗಲ್ ಮ್ಯಾಪ್ ಆಧಾರದ ಮೇಲೆ ನಿರ್ಮಾಣ ಹಂತದಲ್ಲಿರುವ ಫ್ಲೈಓವರ್ ಮೇಲೆ ಬಂದು ಬಿದ್ದಿರುವ ಘಟನೆ ನಡೆದಿದೆ.

ಅದೃಷ್ಟವಶಾತ್ ಕಾರು ಸೇತುವೆ ಮೇಲಿಂದ ಕೆಳಗೆ ಬಿದ್ದಿಲ್ಲ. ಹೀಗಾಗಿ ಕಾರು ಚಾಲಕ ಪ್ರಾಣಾಪಾಯದಿಂದ ಪಾರಾಗಿದ್ದಾನೆ. ವಿಚಾರ ತಿಳಿದ ಕೂಡಲೇ ಘಟನಾ ಸ್ಥಳಕ್ಕೆ ಧಾವಿಸಿದ ಮಹಾರಾಜಾಗಂಜ್ ಪೊಲೀಸರು ಕಾರನ್ನು ಸುರಕ್ಷಿತವಾಗಿ ಕೆಳಗಿಳಿಸಿದ್ದಾರೆ.

ಜೂ.8 ರಂದು ಈ ಘಟನೆ ನಡೆದಿದ್ದು ವರದಿಗಳ ಪ್ರಕಾರ, ಲಕ್ನೋ ನಂಬರ್ ಪ್ಲೇಟ್ ಹೊಂದಿರುವ ಕಾರು ಗೋರಖ್‌ಪುರದಿಂದ ಸೋನೌಲಿ ಗಡಿಗೆ ಪ್ರಯಾಣಿಸುತ್ತಿತ್ತು ಕಾರು ಚಾಲಕ ಸಂಚರಣೆಗಾಗಿ ಗೂಗಲ್ ಮ್ಯಾಪ್ ಅವಲಂಬಿಸಿದ್ದರು. ಅಲ್ಲಿ ಅಪ್ಲಿಕೇಶನ್ ಸೂಚಿಸಿದ ಮಾರ್ಗವನ್ನು ಅನುಸರಿಸುವಾಗ ಚಾಲಕ ಘರೆಂಡಾ ಪೊಲೀಸ್ ಠಾಣೆ ಪ್ರದೇಶದ ಬಳಿ ಗೋರಖ್‌ಪುರ–ಸೋನೌಲಿ ಹೆದ್ದಾರಿಯಲ್ಲಿ ನಿರ್ಮಾಣ ಹಂತದಲ್ಲಿರುವ ಫ್ಲೈಓವರ್ ಮೇಲೆ ತೆರಳಿದ್ದಾನೆ. ಈ



ವೇಳೆ ನೋಡ ನೋಡುತ್ತಲೇ ಕಾರು ಸೇತುವೆಯಿಂದ ಕೆಳಕ್ಕೆ ಉರುಳಿದೆ.

ಫ್ಲೈಓವರ್‌ನ ಒಂದು ಭಾಗ ಮಾತ್ರ ಪೂರ್ಣಗೊಂಡಿದ್ದು, ಇನ್ನೊಂದು ಬದಿ ಅಪೂರ್ಣವಾಗಿಯೇ ಉಳಿದಿದೆ. ಗೂಗಲ್ ಮ್ಯಾಪ್ ತೋರಿಸಿದ ಮಾರ್ಗವು ವಾಹನದ ಚಾಲಕನನ್ನು ಅಪೂರ್ಣ ಭಾಗಕ್ಕೆ ಕೊಂಡೊಯ್ದಿತು. ಕಾರು ಮುಂದೆ ಸಾಗುತ್ತಿದ್ದಂತೆ, ಅದು ಇನ್ನೂ ನಿರ್ಮಾಣ ಹಂತದಲ್ಲಿರುವ ಜಾಗವನ್ನು ತಲುಪಿತು ಮತ್ತು ಅಂತಿಮವಾಗಿ ಸಮತೋಲನವನ್ನು ಕಳೆದುಕೊಂಡಿದೆ.

ಅದು ಮುಂದಕ್ಕೆ ಉರುಳಿತು. ಆದರೆ ಸಂಪೂರ್ಣವಾಗಿ ಬೀಳುವ ಬದಲು ಸೇತುವೆ ಬದಿಯಲ್ಲಿ ಹಾಕಿದ್ದ ಮಣ್ಣಿನ ರಾಶಿ ಮೇಲೆ ಬಿದ್ದಿದೆ. ಹೀಗಾಗಿ ಕಾರು ಸೇತುವೆ ಮೇಲಿಂದ ಕೆಳಗೆ ಬೀಳುವ ಅಪಾಯದಿಂದ ತಪ್ಪಿಸಿಕೊಂಡಿದೆ. ಚಾಲಕ ಕೂಡ ಪ್ರಾಣಾಪಾಯದಿಂದ ಪಾರಾಗಿದ್ದಾನೆ.

ವಾಣಿಜ್ಯ ಕಟ್ಟಡಕ್ಕೆ ಮರೆ: ಮರಕ್ಕೆ ಕಂಟಕ

ಮೈಸೂರು, ಜೂ.10(ಪಿಎಂ)– ನೂತನವಾಗಿ ನಿರ್ಮಿಸುತ್ತಿರುವ ವಾಣಿಜ್ಯ ಕಟ್ಟಡಕ್ಕೆ ಮರೆಯಾಗುವ ಕಾರಣಕ್ಕೆ ರಸ್ತೆಬದಿ ಇದ್ದ ಮರದ ಕೊಂಬೆಗಳನ್ನು ಕತ್ತರಿಸಿರುವ ಆರೋಪ ಕೇಳಿ ಬಂದಿದೆ.

ಮೈಸೂರಿನ ಸರಸ್ವತಿಪುರಂನ ಈಜುಕೊಳದ ರಸ್ತೆಯ 5ನೇ ಮೇನಿನ ಫುಟ್‌ಪಾತ್‌ನಲ್ಲಿರುವ ಮರದ ಕೊಂಬೆಗಳು ಕಟ್ಟಡಕ್ಕೆ ಮರೆಯಾಗುವ ಕಾರಣ, ಅರಣ್ಯ ಇಲಾಖೆಯ ಅನುಮತಿ ಪಡೆಯದೇ ಅವುಗಳನ್ನು ಕತ್ತರಿಸಲಾಗಿದೆ ಎಂದು ಮೈಸೂರು ಗ್ರಾಹಕರ ಪರಿಷತ್‌ನ (ಎಂಜಿಪಿ) ಸಂಚಾಲಕ ಭಾನು ಪ್ರಶಾಂತ್ ಆರೋಪಿಸಿದ್ದಾರೆ.

ಗರ್ಲ್ಸ್ ಪಿಜಿಯೊಂದರ ಪಕ್ಕದಲ್ಲಿ ವಾಣಿಜ್ಯ ಚಟುವಟಿಕೆ ನಡೆಸಲು ಹೊಸದಾಗಿ ಕಟ್ಟಡ ನಿರ್ಮಿಸಲಾಗಿದೆ. ಇದಕ್ಕೆ ಮರದ ಕೊಂಬೆಗಳು ಮರೆಯಾಗುತ್ತಿವೆ ಎಂಬ ಕಾರಣಕ್ಕೆ ಅವುಗಳನ್ನು ಕಡಿಯಲಾಗಿದೆ. ಅಕ್ರಮವಾಗಿ ಕೊಂಬೆಗಳನ್ನು ಕತ್ತರಿಸಿದ ವಿಷಯ ತಿಳಿದು ಪರಿಸರವಾದಿ ಭಾನು ಮೋಹನ್ ಹಾಗೂ ನಾನು ಮಂಗಳವಾರ ಸ್ಥಳಕ್ಕೆ ಭೇಟಿ ನೀಡಿ, ಮರದ ಕೊಂಬೆಗಳನ್ನು ಕಡಿಯುವುದನ್ನು ನಿಲ್ಲಿಸಲು ತಾಕೀತು ಮಾಡಿದೆವು ಎಂದು ತಿಳಿಸಿದರು.

ಬಳಿಕ ಅರಣ್ಯ ಇಲಾಖೆ ಗಮನಕ್ಕೆ ತಂದ ಹಿನ್ನೆಲೆಯಲ್ಲಿ ಡಿಆರ್‌ಎಫ್‌ಓ ಗುರುಮೂರ್ತಿ ಹಾಗೂ ಗಾರ್ಡ್ ಸಂತೋಷ್ ಸ್ಥಳಕ್ಕೆ ಬಂದು ಪರಿಶೀಲಿಸಿದರು. ನಂತರ ಕತ್ತರಿಸಿರುವ ಮರದ ಕೊಂಬೆಗಳನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಿಕೊಂಡಿದ್ದಾರೆ ಎಂದು ತಿಳಿಸಿದರು.

ಇದೇ ಕಟ್ಟಡದ ಮಾಲೀಕರು ಕಟ್ಟಡದ ಹತ್ತಿರ ಇದ್ದ ವಿದ್ಯುತ್ ಕಂಬವನ್ನು ಕೂಡ ಮುಂದಕ್ಕೆ ಸ್ಥಳಾಂತರ ಮಾಡಿಸಿದ್ದಾರೆ. ಈ ವಾಣಿಜ್ಯ ಕಟ್ಟಡ ನಿರ್ಮಾಣಕ್ಕೂ ಮೈಸೂರು ಮಹಾನಗರ ಪಾಲಿಕೆಯಿಂದ ಪರವಾನಗಿ ಪಡೆದಿಲ್ಲ ಎನ್ನಲಾಗುತ್ತಿದೆ. ಹಾಗಾಗಿ ಈ ಸಂಬಂಧ ಪರಿಶೀಲನೆ ನಡೆಸುವಂತೆ ವಲಯ ಕಚೇರಿ 3ರ ವಲಯ ಆಯುಕ್ತರಿಗೆ ಮಾಹಿತಿ ನೀಡಲಾಗಿದೆ ಎಂದರು.



ಮರದ ಕೊಂಬೆ ಕತ್ತರಿಸಿರುವುದು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No.114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮೈಸೂರು ಮಿತ್ರ

ಮೈಸೂರು ಅರಮನೆಯಲ್ಲಿ ಜೂ.21ರಂದು ಅಂತರರಾಷ್ಟ್ರೀಯ ಯೋಗ ದಿನಾಚರಣೆ

ಅಧಿಕಾರಿಗಳ ಸಭೆಯ ನಂತರ ಅಪರ ಜಿಲ್ಲಾಧಿಕಾರಿ ಡಾ.ಶಿವರಾಜ್ ಮಾಹಿತಿ

●15 ಸಾವಿರ ಯೋಗಪಟುಗಳು ಭಾಗಿ ●ಜೂ.15ರಂದು ಪೂರ್ವಾಭ್ಯಾಸ ●ಬೆಳಗ್ಗೆ 6 ಗಂಟೆಗೆ ಯೋಗ ಕಾರ್ಯಕ್ರಮ ಆರಂಭ ●ಟೀ ಶರ್ಟ್, ಟ್ರ್ಯಾಕ್ ಪ್ಯಾಂಟ್ ಧರಿಸುವುದು ಕಡ್ಡಾಯ ●ಲೋಪ ಆಗದಂತೆ ಸರ್ವ ಸಿದ್ಧತೆ





ಮೈಸೂರಿನ ಸಿದ್ದಾರ್ಥ ಬಡಾವಣೆಯ ನೂತನ ಜಿಲ್ಲಾಧಿಕಾರಿ ಕಚೇರಿಯಲ್ಲಿ ಮಂಗಳವಾರ ಅಪರ ಜಿಲ್ಲಾಧಿಕಾರಿ ಡಾ.ಪಿ.ಶಿವರಾಜ್, ಮೈಸೂರಿನಲ್ಲಿ ನಡೆಯುವ ವಿಶ್ವ ಯೋಗ ದಿನಾಚರಣೆಯ ಪೋಸ್ಟರ್ ಬಿಡುಗಡೆ ಮಾಡಿದರು.

ಮೈಸೂರು, ಜೂ.10(ಬಿಎಲ್‌ಯು)– ಮೈಸೂರು ಅರಮನೆ ಆವರಣದಲ್ಲಿ ಜೂನ್ 21ರಂದು ನಡೆಯುವ ಅಂತರ ರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ 15 ಸಾವಿರಕ್ಕೂ ಹೆಚ್ಚು ಯೋಗಪಟುಗಳು ಭಾಗವಹಿಸಲಿದ್ದು, ಇದಕ್ಕೆ ಬೇಕಾದ ಸರ್ವ ಸಿದ್ಧತೆ ಮಾಡಿಕೊಳ್ಳಿ ಎಂದು ಅಪರ ಜಿಲ್ಲಾಧಿಕಾರಿ ಡಾ.ಪಿ.ಶಿವರಾಜ್ ಅಧಿಕಾರಿಗಳಿಗೆ ಸೂಚಿಸಿದರು.

ಮೈಸೂರಿನ ಸಿದ್ಧಾರ್ಥ ಬಡಾವಣೆಯ ನೂತನ ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಮಂಗಳವಾರ ಅಧಿಕಾರಿಗಳ ಸಭೆ ನಡೆಸಿದ ನಂತರ ಈ ವಿಚಾರ ತಿಳಿಸಿದರು.

ಸಾಂಸ್ಕೃತಿಕ ನಗರಿ ಮೈಸೂರು ಯೋಗಕ್ಕೆ ಪ್ರಸಿದ್ಧವಾಗಿದ್ದು, ಈ ಕಾರ್ಯಕ್ರಮಕ್ಕೆ ಹೆಚ್ಚು ಯೋಗಪಟುಗಳು ಆಗಮಿಸಲಿದ್ದಾರೆ. ಅಂದು ಬೆಳಿಗ್ಗೆ 6 ಗಂಟೆಗೆ ಯೋಗ ಕಾರ್ಯಕ್ರಮ ಆರಂಭವಾಗಲಿದೆ. ಸರ್ಕಾರದ ಶಿಷ್ಟಾಚಾರದಂತೆ ಯೋಗ ಕಾರ್ಯಕ್ರಮ ನಡೆಸಲಾಗುವುದು. ಈ ಸಂಬಂಧ ಆಯಾ ಇಲಾಖೆ ಅಧಿಕಾರಿಗಳು ಅಚ್ಚುಕಟ್ಟಾದ ವ್ಯವಸ್ಥೆ ಮಾಡಬೇಕು ಎಂದು ಡಾ.ಶಿವರಾಜ್ ನಿರ್ದೇಶನ ನೀಡಿದರು.

ಯೋಗ ಕಾರ್ಯಕ್ರಮದಲ್ಲಿ ಭಾಗವಹಿಸುವ ಪ್ರತಿಯೊಬ್ಬ ಯೋಗಪಟುಗಳು ಕಡ್ಡಾಯವಾಗಿ ಟೀ ಶರ್ಟ್, ಟ್ರ್ಯಾಕ್ ಪ್ಯಾಂಟ್ ಧರಿಸಬೇಕು. ಯೋಗಕ್ಕೆ ಅವಶ್ಯವಿರುವ ಯೋಗ ಮ್ಯಾಟನ್ನು ಯೋಗ ಪಟುಗಳೇ ತರಬೇಕು. ಯೋಗ ಕಾರ್ಯಕ್ರಮಕ್ಕೂ ಮುನ್ನ ಜೂನ್ 15 ರಂದು ಅರಮನೆ ಆವರಣದಲ್ಲಿ ಪೂರ್ವಾಭ್ಯಾಸ ನಡೆಸಲಾಗುವುದು ಎಂದು ತಿಳಿಸಿದರು.

ಜೆಎಸ್‌ಎಸ್ ಸಂಸ್ಥೆ, ಸಿಸ್ಮಾವ್ ಸ್ಕೂಲ್ ಮ್ಯಾನೇಜ್‌ಮೆಂಟ್, ಯೋಗ ಫೆಡರೇಷನ್, ಯೋಗ ಒಕ್ಕೂಟ, ಯೋಗ ತರಬೇತಿ ಸಂಸ್ಥೆ, ಎನ್‌ಸಿಸಿ, ಎನ್‌ಎಸ್‌ಎಸ್ ಸೇರಿದಂತೆ ಹಲವು ಶಾಲಾ ಕಾಲೇಜಿನ ಸಾವಿರಾರು ವಿದ್ಯಾರ್ಥಿಗಳು ಯೋಗ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ಹೇಳಿದರು.

ಯೋಗ ಕಾರ್ಯಕ್ರಮ ನಡೆಯುವ ಮೈಸೂರು ಅರಮನೆಯಲ್ಲಿ ಆಂಬುಲೆನ್ಸ್, ಅಗ್ನಿಶಾಮಕ ದಳ, ಕುಡಿಯುವ ನೀರು ಸೇರಿದಂತೆ ಇನ್ನಿತರ ವ್ಯವಸ್ಥೆ ಮಾಡಲಾಗುವುದು. ಮೈಸೂರು ನಗರ ಪಾಲಿಕೆಯವರು ಸ್ವಚ್ಛತಾ ಕಾರ್ಯ ಕೈಗೊಳ್ಳಲಿದ್ದಾರೆ ಎಂದು ತಿಳಿಸಿದರು.

ಯೋಗ ಕಾರ್ಯಕ್ರಮದಲ್ಲಿ ಭಾಗವಹಿಸುವವರಿಗೆ ಸರ್ಟಿಫಿಕೇಟ್ ನೀಡಲಾಗುವುದು. ಒಟ್ಟಾರೆ ಯಾವುದೇ ಲೋಪವಿಲ್ಲದೆ ಯೋಗ ಕಾರ್ಯಕ್ರಮದಲ್ಲಿ ಅಚ್ಚುಕಟ್ಟಾದ ವ್ಯವಸ್ಥೆ ಮಾಡಲಾಗುವುದು ಎಂದು ಡಾ.ಶಿವರಾಜ್ ಹೇಳಿದರು.

ಇದೇ ವೇಳೆ ಡಾ.ಶಿವರಾಜ್ ಅವರು ಯೋಗ ಕಾರ್ಯಕ್ರಮದ ಪೋಸ್ಟರ್ ಬಿಡುಗಡೆ ಮಾಡಿದರು. ಅರಮನೆ ಮಂಡಳಿ ಉಪನಿರ್ದೇಶಕ ಸುಬ್ರಹ್ಮಣ್ಯ, ಡಿಡಿಪಿಐ ಜವರೇಗೌಡ, ಆಯುಷ್ ಅಧಿಕಾರಿ ರೇಣುಕಾದೇವಿ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

ಜನರ ಸಾವಿಗೆ ರಾಜ್ಯ ಸರ್ಕಾರದ ನಿರ್ಲಕ್ಷ್ಯವೇ ಕಾರಣ



ಹೇಮಾ ನಂದೀಶ್

ಮೈಸೂರು, ಜೂ. 10– ಬೆಂಗಳೂರಿನಲ್ಲಿ ಆಯೋಜಿಸಿದ್ದ ಆರ್‌ಸಿಬಿ ವಿಜಯೋತ್ಸವ ಕಾರ್ಯಕ್ರಮದಲ್ಲಿ ಕಾಲ್ತುಳಿತಕ್ಕೆ ಸಿಕ್ಕಿ ಹಲವರು ಸಾವಿಗೀಡಾಗಿರುವುದು ಅತ್ಯಂತ ನೋವಿನ ವಿಚಾರ ಎಂದು ಬಿಜೆಪಿ ಮೈಸೂರು ನಗರ ಉಪಾಧ್ಯಕ್ಷೆ ಹೇಮಾ ನಂದೀಶ್ ತಿಳಿಸಿದ್ದಾರೆ.

ಸೂಕ್ತ ವ್ಯವಸ್ಥೆ ಮಾಡಿಕೊಂಡು ಮತ್ತೊಂದು ದಿನ ಸಂಭ್ರಮಾಚರಣೆ ಹಮ್ಮಿಕೊಳ್ಳಬಹುದಿತ್ತು ಆದರೆ, ಪೂರ್ವ ತಯಾರಿ ಇಲ್ಲದೇ ತರಾತುರಿಯಲ್ಲಿ ಕಾರ್ಯಕ್ರಮ ಆಯೋಜಿಸಿದ್ದರಿಂದಲೇ ಇಂತಹ ಅವಘಡ ಸಂಭವಿಸಿದೆ. ವಿಜಯೋತ್ಸವದ ವೇಳೆ ನಿರೀಕ್ಷೆಗೂ ಮೀರಿ ಜನರು ಬಂದಿದ್ದಾರೆ. ಕಾಲ್ತುಳಿತಕ್ಕೆ ಸಿಕ್ಕಿ ಹಲವರು ಪ್ರಾಣ ಕಳೆದುಕೊಂಡಿದ್ದಾರೆ. ಕೆಲವರು ಸಾವು–ಬದುಕಿನ ನಡುವೆ ಹೋರಾಟ ನಡೆಸುತ್ತಿದ್ದಾರೆ. ಇದು ರಾಜ್ಯ ಸರ್ಕಾರದ ನಿರ್ಲಕ್ಷ್ಯ ಹಾಗೂ ಬೇಜವಾಬ್ದಾರಿತನದಿಂದಲೇ ಸಂಭವಿಸಿದೆ. ಈ ಘಟನೆ ಬಗ್ಗೆ ತನಿಖೆ ಆಗಬೇಕು ಎಂದು ಒತ್ತಾಯಿಸಿದ್ದಾರೆ.

ಶ್ರೀಮತಿ ಗಂಗಮ್ಮ ಸೋಮಪ್ಪ ಬೊಮ್ಮಾಯಿ ಟ್ರಸ್ಟ್ ವತಿಯಿಂದ ಪುಸ್ತಕ ಪ್ರಶಸ್ತಿ ಪ್ರಕಟ



ಗಂಗಮ್ಮ ಬೊಮ್ಮಾಯಿ

ಹುಬ್ಬಳ್ಳಿ, ಜೂ.10– ಶ್ರೀಮತಿ ಗಂಗಮ್ಮ ಸೋಮಪ್ಪ ಬೊಮ್ಮಾಯಿ ಟ್ರಸ್ಟ್ ವತಿಯಿಂದ 2023–24ನೇ ಸಾಲಿನಲ್ಲಿ ಸಾಹಿತ್ಯದ ವಿವಿಧ ಪ್ರಕಾರಗಳಲ್ಲಿ ಪ್ರಕಟವಾದ ಅತ್ಯುತ್ತಮ ಪುಸ್ತಕಗಳನ್ನು ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

ಶ್ರೀಮತಿ ಗಂಗಮ್ಮ ಸೋಮಪ್ಪ ಬೊಮ್ಮಾಯಿ ಟ್ರಸ್ಟ್ ಕಳೆದ ಹಲವಾರು ವರ್ಷಗಳಿಂದ ಸಾಹಿತ್ಯದ ವಿವಿಧ ಪ್ರಕಾರಗಳಲ್ಲಿ ಪ್ರಕಟವಾದ ಅತ್ಯುತ್ತಮ ಪುಸ್ತಕಗಳನ್ನು ಪ್ರಶಸ್ತಿಗೆ ಆಯ್ಕೆ ಮಾಡಲಾಗುತ್ತಿದೆ. ಅದರಂತೆ 2023–24ನೇ ಸಾಲಿಗೆ ಲೇಖಕಿಯರಿಗೆ ಮೀಸಲಾದ 'ಅಕ್ಕ ಪ್ರಶಸ್ತಿ' ಡಾ.ಗೀತಾ ಸೀತಾರಾಮ್ ರಚಿಸಿದ 'ಅಹಲ್ಯಾಬಾಯಿ ಹೋಳ್ಕರ್' ಕೃತಿಗೆ, 18 ವರ್ಷದ ವಯೋಮಾನದೊಳಗಿನ ಮಕ್ಕಳಿಗೆ ಮೀಸಲಾದ 'ಅರಳು ಮೊಗ್ಗು' ಪ್ರಶಸ್ತಿಯು ಕುಮಾರಿ ನವ್ಯ ಆರ್.ಕತ್ತಿ ಅವರು ರಚಿಸಿದ 'ಮಾಯಾ ಗುಹೆ ಮತ್ತು ಇತರ ಮಕ್ಕಳ ಕತೆಗಳು' ಕೃತಿಗೆ ಜಾನಪದ ಸಾಹಿತ್ಯಕ್ಕೆ ಮೀಸಲಾದ 'ಜಾನಪದ ಸಿರಿ' ಪ್ರಶಸ್ತಿ, ಶರೀಫ ಮಾಕಪ್ಪನವರ 'ಜನಪದ ಕಲಾವಿದರು ಸುಧಾರಿಸಿಕೊಳ್ಳಬಹುದಾದ ಮಾರ್ಗೋಪಾಯಗಳು' ಕೃತಿಗೆ ಲಭಿಸಿದೆ. ಪ್ರಶಸ್ತಿಯು ತಲಾ ರೂ. 25,000 ನಗದು ಹಾಗೂ ಪ್ರಶಸ್ತಿ ಪತ್ರವನ್ನು ಒಳಗೊಂಡಿರುತ್ತದೆ ಎಂದು ಟ್ರಸ್ಟ್ ಅಧ್ಯಕ್ಷ ಬಸವರಾಜ ಬೊಮ್ಮಾಯಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೈಸೂರಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿ



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಕನ್ನಡ ಚಳವಳಿ ಕೇಂದ್ರ ಸಮಿತಿ ವತಿಯಿಂದ ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿ ಆಚರಿಸಲಾಯಿತು. ಚಿತ್ರದಲ್ಲಿ ಮಾಜಿ ಸಂಸದ ಪ್ರತಾಪ್ ಸಿಂಹ, ಡಾ.ಹೆಳವರಹುಂಡಿ ಸಿದ್ದಪ್ಪ, ಬಿ.ಆರ್.ನಟರಾಜ ಜೋಯಿಸ್, ಅಂಶಿ ಪ್ರಸನ್ನಕುಮಾರ್, ಬಿ.ಎಸ್.ತುಳಸೀರಾಮ್, ಮೂಗೂರು ನಂಜುಂಡಸ್ವಾಮಿ ಇನ್ನಿತರರಿದ್ದಾರೆ.

ಮೈಸೂರು, ಜೂ.10 (ಜಿಎ)– ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಕನ್ನಡ ಚಳವಳಿ ಕೇಂದ್ರ ಸಮಿತಿ ವತಿಯಿಂದ ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿ ಆಚರಿಸಲಾಯಿತು.

ಮಾಜಿ ಸಂಸದ ಪ್ರತಾಪ್ ಸಿಂಹ, ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ.ಹೆಳವರಹುಂಡಿ ಸಿದ್ದಪ್ಪ, ಸಂಧ್ಯಾ ಸುರಕ್ಷ ಟ್ರಸ್ಟ್‌ನ ಅಧ್ಯಕ್ಷ ಬಿ.ಆರ್.ನಟರಾಜ ಜೋಯಿಸ್, ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಹಿರಿಯ ಟೆನ್ನಿಸ್ ಆಟಗಾರ ಬಿ.ಎಸ್.ತುಳಸೀರಾಮ್, ಕನ್ನಡ ಚಳವಳಿ ಕೇಂದ್ರ ಸಮಿತಿ ಅಧ್ಯಕ್ಷ ಮೂಗೂರು ನಂಜುಂಡಸ್ವಾಮಿ ಅವರು ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿದರು.

ನಂತರ ಮಾಜಿ ಸಂಸದ ಪ್ರತಾಪ್ ಸಿಂಹ ಮಾತನಾಡಿ, ರಾಜ್ಯ ಸರ್ಕಾರದ ವತಿಯಿಂದ 2015ರಲ್ಲಿ ಟಿಪ್ಪು ಜಯಂತಿ ಆಚರಣೆ ಮಾಡಲು ಮುಂದಾದಾಗ ನಾನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಹೇಳಿದ್ದೆ. ರಾಜ್ಯದ ಜನರು, ಮೈಸೂರು ಜನರು ಅನ್ನ ತಿನ್ನುತ್ತಾ ಇರುವುದು ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಕೊಡುಗೆಯಿಂದ. ಅನ್ನ, ವಿದ್ಯೆ ನೀಡಿದವರು ಕೃಷ್ಣರಾಜ ಒಡೆಯರ್ ಅವರು ನಾಡಿಗೆ ಆದರ್ಶಪ್ರಾಯ ವ್ಯಕ್ತಿ. ಕನ್ನಂಬಾಡಿ ಕಟ್ಟೆಯಿಂದ ಚಿತ್ರದುರ್ಗ ತನಕ, ಮೈಸೂರಿನಿಂದ ಭದ್ರಾವತಿ ತನಕ ಕೈಗಾರಿಕೆ ಎಲ್ಲವೂ ಕೂಡ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಕೊಡುಗೆ. ಅಂತವರ ಜಯಂತಿ ವಿಜೃಂಭಣೆಯಿಂದ ಆಚರಣೆ ಆಗಬೇಕು ಎಂದು ಆಗ್ರಹಿಸಿದ್ದೆ ಎಂದರು.

ಇತ್ತೀಚೆಗೆ ಕನ್ನಡಪರ ಹೋರಾಟಗಾರ ನಾರಾಯಣಗೌಡ, ಸಂಸದ ಯದುವೀರ್ ಒಡೆಯರ್ ಅವರನ್ನು ಟೀಕೆ ಮಾಡುವ ಭರದಲ್ಲಿ ಮೈಸೂರು ಸಂಸ್ಥಾನವನ್ನು ಎಳೆದು ತಂದರು. ಅಂತಹ ಸಂದರ್ಭದಲ್ಲಿ ನಾನು ನಾರಾಯಣಗೌಡರಿಗೆ ಸಂಸ್ಥಾನವನ್ನು ಎಳೆದು ತರಬೇಡಿ ಎಂದು ಮನವಿ ಮಾಡಿ, ರಾಜ್ಯಕ್ಕೆ ಮೈಸೂರು ಸಂಸ್ಥಾನದ ಕೊಡುಗೆ ಅಪಾರ ಎಂದು ಹೇಳಿದ್ದೆ. ಕನ್ನಡವನ್ನು ಆಡಳಿತ ಭಾಷೆ ಮಾಡಿದವರು ಅವರು ಎಂದು ತಿಳಿಸಿದ್ದೆ ಎಂದು ಮೈಸೂರು ಸಂಸ್ಥಾನದ ಬಗ್ಗೆ ವಿವರಿಸಿದರು.

ಇಂದಿನ ರಾಜಕಾರಣಿಗಳು ನಾಲ್ವಡಿ ಕೃಷ್ಣರಾಜ ಒಡೆಯರ್ ಅವರನ್ನು ಮೇಲ್ಪಂಕ್ತಿಯಾಗಿ ತೆಗೆದುಕೊಳ್ಳಬೇಕು. ಅವರ ಕೆಲಸ ಕಾರ್ಯ ನಮಗೆ ಆದರ್ಶವಾಗಿವೆ. ನಮಗೆಲ್ಲ ಧನ್ಯತಾಭಾವ ಇರಬೇಕು. ಸದಾ ಕಾಲ ನಾಲ್ವಡಿ ಅವರನ್ನು ನೆನೆಯಬೇಕು ಎಂದು ಹೇಳಿದರು.

ಕೆ.ಆರ್.ಕ್ಷೇತ್ರದ ವಾರ್ಡ್‌ಗಳಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಜನ್ಮ ದಿನಾಚರಣೆ



ಕೆ.ಆರ್.ಕ್ಷೇತ್ರ ಶಾಸಕ ಟಿ.ಎಸ್.ಶ್ರೀವತ್ಸ, ಅಗ್ರಹಾರದ 101 ಗಣಪತಿ ದೇವಸ್ಥಾನದ ಮುಂಭಾಗದಲ್ಲಿ ಅನ್ನದಾನಕ್ಕೆ ಚಾಲನೆ ನೀಡಿದರು.

ಮೈಸೂರು, ಜೂ. 10– ಮೈಸೂರಿನ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸಿದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ 141ನೇ ಜಯಂತಿ ಪ್ರಯುಕ್ತ ಸಂಸದ ಯದುವೀರ್ ಒಡೆಯರ್ ಹಲವಾರು ಸೇವಾ ಕಾರ್ಯ ಹಮ್ಮಿಕೊಂಡಿದ್ದರು.

ಕೃಷ್ಣರಾಜ ಕ್ಷೇತ್ರದ ವಿವಿಧ ವಾರ್ಡ್‌ಗಳಲ್ಲಿ ಒಟ್ಟು 10ಕ್ಕೂ ಹೆಚ್ಚು ಭಾಗದಲ್ಲಿ ಅನ್ನದಾನ ಏರ್ಪಡಿಸಲಾಗಿತ್ತು. ಶಾಸಕ ಟಿ.ಎಸ್.ಶ್ರೀವತ್ಸ ಅಗ್ರಹಾರದ 101 ಗಣಪತಿ ದೇವಸ್ಥಾನದ ಮುಂಭಾಗದಲ್ಲಿ ಅನ್ನದಾನಕ್ಕೆ ಚಾಲನೆ ನೀಡಿದರು.

ಶಾಸಕ ಶ್ರೀವತ್ಸ ಮಾತನಾಡಿ, ನಾಲ್ವಡಿ ಕೃಷ್ಣರಾಜ ಒಡೆಯರು ಮೈಸೂರು ರಾಜ್ಯಕ್ಕೆ ನೀಡಿದ ಅಮೂಲ್ಯ ಕೊಡುಗೆ ಎಂದರೆ, ಸ್ಥಳೀಯ ಸಂಸ್ಥೆಗಳನ್ನು ರಚಿಸಿ, ಆಡಳಿತ ವಿಕೇಂದ್ರೀಕರಣಕ್ಕೆ ಅನುವು ಮಾಡಿಕೊಟ್ಟದ್ದು. ರಾಜ್ಯದ ಸಣ್ಣ ಸಣ್ಣ ಪಟ್ಟಣಗಳಲ್ಲಿಯೂ ಸ್ಥಳೀಯ ಸಂಸ್ಥೆಗಳು ರಚನೆಯಾದವು. ಹಳ್ಳಿಗಳಲ್ಲಿ ಪ್ರಥಮ ಬಾರಿಗೆ ಗ್ರಾಮ ಪಂಚಾಯಿತಿಗಳು ಕಾರ್ಯ ನಿರ್ವಹಿಸಲು ಆರಂಭ ಮಾಡಿದುದರಿಂದ, ಗ್ರಾಮೀಣ ಪ್ರದೇಶಗಳಲ್ಲಿ ಆಡಳಿತದಲ್ಲಿ ಜನರ ಭಾಗವಹಿಸುವಿಕೆಗೆ ಅಪಾರ ಉತ್ತೇಜನ ನೀಡಲಾಯಿತು. ಈ ವೇಳೆ ನಗರಪಾಲಿಕೆ ಮಾಜಿ ಸದಸ್ಯ ಬಿ.ವಿ. ಮಂಜುನಾಥ್, ಸೌಮ್ಯ ಉಮೇಶ್, ವಿದ್ಯಾ ಅರಸ್, ಬಿಜೆಪಿ ಪದಾಧಿಕಾರಿಗಳಾದ ವಿಶ್ವೇಶ್ವರಯ್ಯ, ಸರ್ವಮಂಗಳ, ಕಾವೇರಿ ನಾಗರಾಜ್, ಎಂ.ವಿ.ರೇಖಾ, ಅನ್ನಪೂರ್ಣ, ರೂಪ, ಶಾಂತ, ವೆಂಕಟೇಶ್, ಶಂಕರ್, ಅರ್ಜುನ್, ಗುರುಮಲ್ಲೇಶ್ ಹಾಜರಿದ್ದರು.

ಇಂದು ಹಾರೋಹಳ್ಳಿಯಲ್ಲಿ ದಕ್ಷಿಣ ಭಾರತದ ಬುದ್ಧ ಗಯಾ ಸ್ಮಾರಕ ನಿರ್ಮಾಣಕ್ಕೆ ಜಾಗೃತಿ ಸಮಾವೇಶ



ಪುರುಷೋತ್ತಮ್

ಮೈಸೂರು, ಜೂ.10(ಜಿಎ)–ಮೈಸೂರಿನ ಜಯಪುರ ಹೋಬಳಿ ಹಾರೋಹಳ್ಳಿ ಗ್ರಾಮದಲ್ಲಿ ಜೂ.11ರಂದು ಬೆಳಗ್ಗೆ 11ಗಂಟೆಗೆ 2569ನೇ ಬುದ್ಧ ಪೂರ್ಣಿಮೆ ಅಂಗವಾಗಿ ದಕ್ಷಿಣ ಭಾರತದ ಬುದ್ಧ ಗಯಾ ಸ್ಮಾರಕ ನಿರ್ಮಾಣಕ್ಕಾಗಿ ಧಮ್ಮ ಸಂಕಲ್ಪ ಜಾಗೃತಿ ಸಮಾವೇಶ ಆಯೋಜಿಸಲಾಗಿದೆ ಎಂದು ಮಾಜಿ ಮೇಯರ್ ಪುರುಷೋತ್ತಮ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಸ್ಮಾರಕ ನಿರ್ಮಾಣಕ್ಕಾಗಿ ಗ್ರಾಮದ ದಲಿತ ಮುಖಂಡರಾದ ಜಯಮ್ಮ ಹಾಗೂ ಅವರ ಕುಟುಂಬದವರು ಭೂಮಿಯನ್ನು ಸ್ವಇಚ್ಛೆಯಿಂದ ದಾನವಾಗಿ ನೀಡುತ್ತಿದ್ದಾರೆ. ಬೌದ್ಧ ಪರಂಪರೆ ಈ ಭೂಮಿ ಮೇಲಿನ ಮನುಷ್ಯರು ಒಳಗೊಂಡಂತೆ ಎಲ್ಲ ಜೀವಿಗಳ ಸುಖ, ಶಾಂತಿ, ನೆಮ್ಮದಿ ಬಯಸುತ್ತದೆ. ಇಂತಹ ಮಾನವೀಯತೆ, ಸಮಾನತೆಯ ಆಶಯಗಳ ಬೌದ್ಧ ಧರ್ಮವನ್ನು ಉಳಿಸಿಕೊಳ್ಳಲು ಮೈಸೂರಲ್ಲಿ ದಕ್ಷಿಣ ಭಾರತದ ಬುದ್ಧ ಗಯಾ ಸ್ಮಾರಕ ನಿರ್ಮಾಣ ಮಾಡಲಾಗುತ್ತಿದೆ ಎಂದು ಹೇಳಿದರು.

ಈಗ ಉತ್ತರಭಾರತದಲ್ಲಿರುವ ಬುದ್ಧ ಗಯಾವನ್ನು ಎಲ್ಲಾ ಮನುವಾದಿಗಳು ಆಕ್ರಮಿಸಿಕೊಂಡಿದ್ದಾರೆ. ಹೀಗಾಗಿ ದಕ್ಷಿಣ ಭಾರತದಲ್ಲಿ ಇದನ್ನು ನಿರ್ಮಿಸಲಾಗುತ್ತಿದೆ. ಅಲ್ಲದೆ, ಆ ಭಾಗದಲ್ಲಿ ದಕ್ಷಿಣ ಆಯೋಧ್ಯೆ ನಿರ್ಮಾಣಕ್ಕೆ ಎಲ್ಲ ಸಂಘಟನೆಗಳು ವಿರೋಧ ವ್ಯಕ್ತಪಡಿಸಿ ಅಡ್ಡಿಪಡಿಸಿವೆ. ಜಮೀನು ನೀಡುತ್ತಿದ್ದಾರೆಂದು ಹೇಳಲಾಗಿದ್ದ ಕುಟುಂಬಕ್ಕೆ ಮನವರಿಕೆ ಮಾಡಿಕೊಡಲಾಗಿದೆ ಎಂದು ತಿಳಿಸಿದರು.

ದಲಿತ ಮುಖಂಡರಾದ ಚೋರನಹಳ್ಳಿ ಶಿವಣ್ಣ, ತಾಪಂ ಮಾಜಿ ಸದಸ್ಯ ಸುರೇಶ್‌ಕುಮಾರ್, ಹರಿಹರ ಆನಂದ ಸ್ವಾಮಿ ಮೊದಲಾದವರು ಇದ್ದರು.

ಐಪಿಎಸ್ ಅಧಿಕಾರಿ ಬಿ.ದಯಾನಂದ್ ಅಮಾನತು ಹಿಂಪಡೆಯಲು ಆಗ್ರಹ



ಬಿ.ದಯಾನಂದ್, ಐಪಿಎಸ್ ಅಧಿಕಾರಿ

ಮೈಸೂರು, ಜೂ.10(ಜಿಎ)–ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣ ಬಳಿ ಸಂಭವಿಸಿದ ಕಾಲ್ತುಳಿತ ಘಟನೆ ಹಿನ್ನೆಲೆಯಲ್ಲಿ ದಕ್ಷ ಪೊಲೀಸ್ ಅಧಿಕಾರಿ ಬಿ.ದಯಾನಂದ್ ಅವರನ್ನು ಅಮಾನತುಗೊಳಿಸಿರುವುದು ಸರಿಯಲ್ಲ. ಕೂಡಲೇ ಸರ್ಕಾರ ಈ ಆದೇಶ ಹಿಂಪಡೆಯದಿದ್ದರೆ ರಾಜ್ಯಾದ್ಯಂತ ಎಲ್ಲಾ ಸಂಘಟನೆ ಸೇರಿ ಹೋರಾಟ ನಡೆಸಬೇಕಾಗುತ್ತದೆ ಎಂದು ಮಹರ್ಷಿ ವಾಲ್ಮೀಕಿ ಗುರುಕುಲ ಸೇವಾ ಟ್ರಸ್ಟ್ ಎಚ್ಚರಿಸಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಪ್ರಧಾನ ಕಾರ್ಯದರ್ಶಿ ದ್ಯಾವಪ್ಪ ನಾಯಕ ಮಾತನಾಡಿ, ದಯಾನಂದ್ ಅವರು ಸರ್ಕಾರದ ವಿವಿಧ ಇಲಾಖೆಗಳಲ್ಲಿ ಸೇವೆ ಸಲ್ಲಿಸಿರುವುದಲ್ಲದೆ ಪೊಲೀಸ್ ಇಲಾಖೆಯಲ್ಲಿ ಸುದೀರ್ಘವಾಗಿ ಸಮರ್ಪಕ, ದಕ್ಷತೆ ಪ್ರಾಮಾಣಿಕತೆಯಿಂದ ಜನಸ್ನೇಹಿ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ್ದಾರೆ. ಆದರೆ ಬೆಂಗಳೂರಿನಲ್ಲಿ ನಡೆದ ಆರ್‌ಸಿಬಿ ವಿಜಯೋತ್ಸವ ವೇಳೆ ಆದ ಅಹಿತಕರ ಘಟನೆ ಹಿನ್ನೆಲೆಯಲ್ಲಿ ಇವರ ಅಮಾನತು ಸರಿಯಲ್ಲ ಎಂದರು.

ಪೊಲೀಸ್ ಇಲಾಖೆಯ ನಿರ್ದೇಶನ ಪಾಲಿಸದೇ, ಪೊಲೀಸ್ ಇಲಾಖೆಯ ಪೂರ್ವಾನುಮತಿ ಇಲ್ಲದೇ ವಿಜಯೋತ್ಸವ ಆಚರಿಸಲಾಯಿತು. ಹೀಗಾಗಿ ಇದರಲ್ಲಿ ಆಯೋಜಕರು ತಪ್ಪು ಇದೆ. ಹೀಗಿದ್ದರೂ ದಯಾನಂದ್ ಅವರನ್ನು ಅಮಾನತುಗೊಳಿಸಿರುವುದು ಖಂಡನೀಯವಾಗಿದೆ. ಆದ್ದರಿಂದ ಸರ್ಕಾರ ಈ ವಿಚಾರವನ್ನು ಸೂಕ್ಷ್ಮವಾಗಿ ಹಾಗೂ ಗಂಭೀರವಾಗಿ ಪರಿಗಣಿಸಿ 7 ದಿನಗಳೊಳಗೆ ಅಮಾನತು ರದ್ದುಪಡಿಸಬೇಕು. ಇಲ್ಲದಿದ್ದರೆ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು. ಸುದ್ದಿಗೋಷ್ಠಿಯಲ್ಲಿ ಪದಾಧಿಕಾರಿಗಳಾದ ಸಿ.ಜಯಕುಮಾರ್, ಪ್ರಭಾಕರ್ ಹುಣಸೂರು, ಮಣಿನಾಯಕ, ತಾಯೂರು ಪ್ರಕಾಶ್, ದೇವರಾಜ್ ಉಪಸ್ಥಿತರಿದ್ದರು.

ಪ್ರತಿಭಾ ಪುರಸ್ಕಾರಕ್ಕೆ ಅರ್ಹರಿಂದ ಅರ್ಜಿ ಆಹ್ವಾನ

ಮೈಸೂರು, ಜೂ.10(ಜಿಎ)–ಕರ್ನಾಟಕ ರಾಜ್ಯ ಶಿವಾರ್ಚಕ ಕ್ಷೇಮಾಭಿವೃದ್ಧಿ ಟ್ರಸ್ಟ್‌ನಿಂದ 2024–25ನೇ ಸಾಲಿನ ಎಸ್‌ಎಸ್‌ಎಲ್‌ಸಿ, ಪಿಯುಸಿ ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆದ ಸಮುದಾಯದ ವಿದ್ಯಾರ್ಥಿಗಳಿಂದ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಟ್ರಸ್ಟ್‌ನ ಸಂಘಟನಾ ಕಾರ್ಯದರ್ಶಿ ತಗಡೂರು ಗಣೇಶ್ ಈ ವಿಷಯ ತಿಳಿಸಿ, ಎಸ್‌ಎಸ್‌ಎಲ್‌ಸಿಯಲ್ಲಿ ಶೇ.90ಕ್ಕಿಂತ, ಪಿಯುನಲ್ಲಿ ಶೇ.85ಕ್ಕಿಂತ ಅಧಿಕ ಅಂಕ ಪಡೆದವರು ಅಂಕಪಟ್ಟಿ, ಆಧಾರ್ ಜೆರಾಕ್ಸ್, ಎರಡು ಭಾವಚಿತ್ರಗಳೊಂದಿಗೆ ಅರ್ಜಿ ಸಲ್ಲಿಸಬಹುದು. ನಗದು ಪುರಸ್ಕಾರ ನೀಡಲಾಗುತ್ತದೆ. ಜು.13ರಂದು ಬೆಳಗ್ಗೆ 10.30ಕ್ಕೆ ನಟರಾಜ ಪ್ರತಿಷ್ಠಾನ ಸಭಾಂಗಣದಲ್ಲಿ ಕಾರ್ಯಕ್ರಮ ನಡೆಯಲಿದ್ದು, ಮಾಹಿತಿಗೆ ಮೊ.ಸಂ. 99649 67554 ಸಂಪರ್ಕಿಸಬಹುದು ಎಂದರು. ಗೋಷ್ಠಿಯಲ್ಲಿ ಟ್ರಸ್ಟ್ ಸಹ ಕಾರ್ಯದರ್ಶಿ ಎಂ.ಮನೋಹರ್, ಖಜಾಂಚಿ ಈ.ವಾಮದೇವ, ಕಾನೂನು ಸಲಹೆಗಾರ ಕೆ.ಎ.ಪಂಚಲಿಂಗಯ್ಯ ಉಪಸ್ಥಿತರಿದ್ದರು.

ಅಪರಿಚಿತ ವ್ಯಕ್ತಿಗೆ ವಾಹನ ಡಿಕ್ಕಿ

ಮೈಸೂರು, ಜೂ.10(ಬಿಎಲ್‌ಯು)– ವಾಹನವೊಂದು ಅಪರಿಚಿತ ವ್ಯಕ್ತಿಗೆ ಡಿಕ್ಕಿ ಹೊಡೆದು ಪರಾರಿಯಾಗಿರುವ ಘಟನೆ ಮೈಸೂರಿನ ಮಾದೇಗೌಡನ ಹುಂಡಿಯ ಬಳಿ ಸಂಭವಿಸಿದೆ. ಮೈಸೂರಿನ ಶ್ರೀರಾಂಪುರ ವಾಸಿ ಎನ್.ಎಸ್.ಕೀರ್ತಿ ಅವರು ಬನ್ನೂರಲ್ಲಿ ಕೆಲಸ ಮುಗಿಸಿ ಬರುವಾಗ ಮಳವಳ್ಳಿ ಮುಖ್ಯ ರಸ್ತೆಯ ಮಾದೇಗೌಡನ ಹುಂಡಿ ಬಳಿ ಅಪರಿಚಿತ ವ್ಯಕ್ತಿಗೆ ಅಪರಿಚಿತ ವಾಹನ ಡಿಕ್ಕಿ ಹೊಡೆದಿದೆ. ತಕ್ಷಣವೇ ಆಂಬುಲೆನ್ಸ್‌ಗೆ ಕರೆ ಮಾಡಿ ಕೆ.ಆರ್. ಆಸ್ಪತ್ರೆಗೆ ದಾಖಲಿಸಿದ್ದಾರೆ.

ವಾರಸುದಾರರು ಇಲ್ಲದ ಕಾರಣ ಕೀರ್ತಿ ಅವರೇ ವೈದ್ಯಕೀಯ ವೆಚ್ಚ ನೀಡಿದ್ದಾರೆ. ಈ ಸಂಬಂಧ ವರುಣ ಪೊಲೀಸ್ ಠಾಣೆಗೆ ದೂರು ನೀಡಿದ್ದು, ಅಪರಿಚಿತ ವಾಹನ ಪತ್ತೆಯ ಮಾಡುವಂತೆ ಕೋರಿದ್ದಾರೆ. ಈ ಅಪರಿಚಿತ ವ್ಯಕ್ತಿಗೆ 60 ರಿಂದ 65 ವರ್ಷ ವಯಸ್ಸಾಗಿದ್ದು, ಕೋಲು ಮುಖ, ಎಣ್ಣೆಗೆಂಪು ಮೈ ಬಣ್ಣ, ಸಾಧಾರಣ ಮೈಕಟ್ಟು, ಬಿಳಿ ಕೂದಲು ಇದ್ದು, ಅರ್ಧ ತೋಳಿನ ಕೆಂಪು ಬಣ್ಣದ ಟೀ ಶರ್ಟ್ ಧರಿಸಿರುತ್ತಾರೆ. ಈತನ ಬಗ್ಗೆ ಮಾಹಿತಿ ಇದ್ದರೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿ, ಪೊಲೀಸ್ ಕಂಟ್ರೋಲ್ ರೂಂ, ವರುಣ ಪೊಲೀಸ್ ಠಾಣೆಯನ್ನು (0821– 2520040– 0821–2444800, 0821–2594411, 9480805052) ಸಂಪರ್ಕಿಸಿ ಮಾಹಿತಿ ನೀಡಬಹುದು.

ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

ಮೈಸೂರು, ಜೂ.10–ಕರ್ನಾಟಕ ಸವಿತಾ ಸಮಾಜ ಅಭಿವೃದ್ಧಿ ನಿಗಮದ ವತಿಯಿಂದ 2025–26ನೇ ಸಾಲಿನಲ್ಲಿ ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಅರಿವು–ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ (ವಾಣಿಜ್ಯ ಬ್ಯಾಂಕುಗಳ ಸಹಯೋಗದೊಂದಿಗೆ), ಸ್ವಾತಂತ್ರ್ಯ ಅಮೃತ ಮಹೋತ್ಸವದ ಮುನ್ನಡೆ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಸೌಲಭ್ಯಗಳನ್ನು ಪಡೆಯಲು ಇಚ್ಛಿಸುವ ಹಿಂದುಳಿದ ವರ್ಗಗಳ ಸವಿತಾ ಮತ್ತು ಅದರ ಉಪ ಜಾತಿಗಳಿಗೆ ಸೇರಿದ ಅರ್ಜಿದಾರರು http://sevasindhu.karnataka.gov.in ಮುಖಾಂತರ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಜೂ.30ರೊಳಗೆ ಅರ್ಜಿ ಸಲ್ಲಿಸಬಹುದು. ಮಾಹಿತಿಗಾಗಿ www.kssd.karnataka.gov.in ಅಥವಾ ದೂ.ಸಂ:080–22374832, 8050770004, 8050770005, ಮೈಸೂರು ಜಿಲ್ಲಾ ಕಚೇರಿಯ ದೂ.: 0821–2341194 ಸಂಪರ್ಕಿಸಿ.

ಪ್ರತಿಯೊಬ್ಬರು ಪರಿಸರ ಸಂರಕ್ಷಣೆಗೆ ಕೈ ಜೋಡಿಸಬೇಕು

ಶಾಸಕ ರಮೇಶ್ ಬಂಡಿಸಿದ್ದೇಗೌಡ ಕರೆ



ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ (ಸೆಸ್ಕ್), ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ (ಕವಿಪ್ರನಿನಿ) ಹಾಗೂ ಮೈಸೂರು ವ್ಯಾಪ್ತಿಯ ಸಂಘ–ಸಂಸ್ಥೆಗಳ ಒಕ್ಕೂಟದ ವತಿಯಿಂದ ಕೆಸರೆಯಲ್ಲಿರುವ ಚಾವಿಸಾನಿನಿ ಕಾಲೋನಿಯಲ್ಲಿ ವಿಶ್ವ ಪರಿಸರ ದಿನದ ಅಂಗವಾಗಿ ಸಸಿ ನೆಡಲಾಯಿತು.

ಮೈಸೂರು, ಜೂ.10(ಜಿಎ)–ಪ್ರತಿಯೊಬ್ಬರು ದೈಹಿಕ ಆರೋಗ್ಯವನ್ನು ಕಾಪಾಡಿಕೊಳ್ಳುವುದರ ಜೊತೆಗೆ ಸುತ್ತಲಿನ ಪರಿಸರವನ್ನು ಉತ್ತಮವಾಗಿ ಇರಿಸಿಕೊಳ್ಳಲು ಪ್ರಯತ್ನ ಮಾಡುವ ಮೂಲಕ ಪರಿಸರ ಸಂರಕ್ಷಣೆಗೆ ಕೈಜೋಡಿಸಬೇಕಿದೆ ಎಂದು ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ(ಸೆಸ್ಕ್) ಅಧ್ಯಕ್ಷರೂ ಆದ ಶಾಸಕ ರಮೇಶ್ ಬಂಡಿಸಿದ್ದೇಗೌಡ ತಿಳಿಸಿದರು.

ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ (ಸೆಸ್ಕ್), ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ (ಕವಿಪ್ರನಿನಿ) ಹಾಗೂ ಮೈಸೂರು ವ್ಯಾಪ್ತಿಯ ಸಂಘ–ಸಂಸ್ಥೆಗಳ ಒಕ್ಕೂಟದ ವತಿಯಿಂದ ನಗರದ ಕೆಸರೆಯಲ್ಲಿರುವ ಚಾವಿಸಾನಿನಿ ಕಾಲೋನಿಯಲ್ಲಿ ವಿಶ್ವ ಪರಿಸರ ದಿನದ ಅಂಗವಾಗಿ ಆಯೋಜಿಸಿದ್ದ ಸಸಿ ನೆಡುವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ನಾವೆಲ್ಲರೂ ದಿನನಿತ್ಯದ ಬೇಕು ಬೇಡಗಳ ನಡುವೆ ಪರಿಸರದ ಮೇಲೆ ಗದಾಪ್ರಹಾರ ಮಾಡುತ್ತಿದ್ದೇವೆ. ಪರಿಸರ ಉಳಿಸುವ ಪ್ರಯತ್ನಗಳ ನಡುವೆಯೂ ನಮ್ಮ ಅರಿವಿಗೆ ಬಾರದಂತೆ ಅದಕ್ಕೆ ಹಾನಿಯಾಗುವ ಕಾರ್ಯಕ್ರಮಗಳನ್ನು ನಡೆಸುತ್ತಿದ್ದೇವೆ. ಇದರಿಂದಾಗಿ ಪರಿಸರದ ಮೇಲೆ ಸಾಕಷ್ಟು ಪರಿಣಾಮಗಳು ಉಂಟಾಗುತ್ತಿದೆ ಎಂದು ವಿಷಾದ ವ್ಯಕ್ತಪಡಿಸಿದರು.

ಈ ಹಿಂದೆ ಆಧುನಿಕತೆ ಇಲ್ಲದಿದ್ದರೂ ನಮ್ಮ ಪೂರ್ವಿಕರು ಉತ್ತಮ ಆಹಾರ ಸೇವನೆ ಮಾಡುತ್ತಾ, ಆರೋಗ್ಯವಂತರಾಗಿದ್ದರು. ನಮ್ಮ ಆರೋಗ್ಯವೂ ಒಂದು ಪರಿಸರವಾಗಿದ್ದು, ಯಾವುದೇ ಕಾಯಿಲೆಗೆ ತುತ್ತಾಗದೆ, ಔಷಧ ಬಳಸದೆ ಬದುಕಬೇಕಿದೆ. ಪರಿಸರ ಉತ್ತಮವಾಗಿದ್ದರೆ ನಮ್ಮ ಆರೋಗ್ಯ ಉತ್ತಮವಾಗಿರಲಿದ್ದು, ಈ ನಿಟ್ಟಿನಲ್ಲಿ ನಾವು ಚೆನ್ನಾಗಿರುವ ಜೊತೆಗೆ ನಮ್ಮ ಸುತ್ತಲಿನ ಪರಿಸರವನ್ನು ಉತ್ತಮವಾಗಿ ಇರಿಸಿಕೊಳ್ಳಬೇಕಿದೆ. ಸೆಸ್ಕ್ ಕುಟುಂಬದಲ್ಲಿರುವ ಎಂಟು ಸಾವಿರ ಅಧಿಕಾರಿ ಮತ್ತು ಸಿಬ್ಬಂದಿ ತಲಾ ಎರಡು ಸಸಿಗಳನ್ನು ನೆಟ್ಟು ಪರಿಸರ ಕಾಪಾಡಬೇಕಿದ್ದು, ಇದಕ್ಕಾಗಿ ಸೆಸ್ಕ್ ವತಿಯಿಂದ ಉಚಿತವಾಗಿ ಸಸಿಗಳನ್ನು ನೀಡಲಾಗುವುದು ಎಂದರು.

ಸೆಸ್ಕ್ ವ್ಯವಸ್ಥಾಪಕ ನಿರ್ದೇಶಕ ಕೆ.ಎಂ.ಮುನಿಗೋಪಾಲ್ ರಾಜು ಮಾತನಾಡಿ, ವಿಶ್ವ ಪರಿಸರ ದಿನದ ಹಿನ್ನೆಲೆಯಲ್ಲಿ ಸೆಸ್ಕ್ ವ್ಯಾಪ್ತಿಯ ಎಲ್ಲ ಕಚೇರಿಗಳಲ್ಲಿ ಒಂದು ವಾರ ಕಾಲ ಕಾರ್ಯಕ್ರಮ ನಡೆಸುವಂತೆ ಅಧಿಕಾರಿಗಳಿಗೆ ತಿಳಿಸಲಾಗಿದೆ. ಪರಿಸರ ದಿನವನ್ನು ಆಚರಿಸುವ ಜೊತೆಗೆ ಪ್ರತಿ ಕಚೇರಿ ಆವರಣದಲ್ಲಿ ಕನಿಷ್ಠ 5 ಸಸಿಗಳನ್ನು ನೆಡಬೇಕಿದೆ. ಇದಕ್ಕಾಗಿ ನಿಗಮ ಕಚೇರಿಯಲ್ಲಿ 50ಕ್ಕೂ ಹೆಚ್ಚು ಮಹಾಘನಿ ಸಸಿಗಳನ್ನು ಇರಿಸಿದ್ದು, ಅಗತ್ಯವಿರುವವರು ನಿಗಮ ಕಚೇರಿಯಿಂದ ಸಸಿಗಳನ್ನು ಪಡೆದು, ತಮ್ಮ ಕಚೇರಿ ಆವರಣದಲ್ಲಿ ಮಹಾಘನಿ ಸಸಿಗಳನ್ನು ನೆಡಬೇಕಿದೆ. ಆ ಮೂಲಕ ನಾವೆಲ್ಲರೂ ಒಗ್ಗೂಡಿ ಪರಿಸರ ದಿನವನ್ನು ಆಚರಿಸಿ, ಪರಿಸರ ಸಂರಕ್ಷಣೆಗೆ ಮುಂದಾಗೋಣ ಎಂದರು.

ಇದಕ್ಕೂ ಮುನ್ನ ವಿಶ್ವ ಪರಿಸರ ದಿನ ಕಾರ್ಯಕ್ರಮದ ಅಂಗವಾಗಿ ನಿಗಮದ ಅಧ್ಯಕ್ಷರು, ವ್ಯವಸ್ಥಾಪಕ ನಿರ್ದೇಶಕರು ಸೇರಿದಂತೆ ಇತರ ಅಧಿಕಾರಿಗಳು ಮತ್ತು ಸಿಬ್ಬಂದಿ ಸಸಿಗಳನ್ನು ನೆಡುವ ಮೂಲಕ ಪರಿಸರ ದಿನವನ್ನು ಅರ್ಥಪೂರ್ಣವಾಗಿ ಆಚರಿಸಿದರು.

ಕಾರ್ಯಕ್ರಮದಲ್ಲಿ ತೋಟಗಾರಿಕೆ ಇಲಾಖೆ ನಿವೃತ್ತ ಉಪನಿರ್ದೇಶಕ ಡಾ.ಬೆಲವಲ ರಾಮಕೃಷ್ಣ, ಮೈಸೂರು ವಲಯದ ಮುಖ್ಯ ಇಂಜಿನಿಯರ್ ಡಿ.ಜೆ. ದಿವಾಕರ್, ಅಧೀಕ್ಷಕ ಇಂಜಿನಿಯರುಗಳಾದ ಸೋಮಶೇಖರ್, ಸುನೀಲ್‌ಕುಮಾರ್, ಸೆಸ್ಕ್ ಪ್ರಧಾನ ವ್ಯವಸ್ಥಾಪಕಿ (ತಾಂತ್ರಿಕ) ಶರಣಮ್ಮ ಎಸ್.ಜಂಗಿನ, ಪ್ರಧಾನ ವ್ಯವಸ್ಥಾಪಕ ಕೆ.ಎಲ್.ಲೋಕೇಶ್ ಉಪಸ್ಥಿತರಿದ್ದರು.

ಒಂದೇ ವರ್ಷದಲ್ಲಿ ಮಂಡ್ಯದಲ್ಲಿ 57 ಬಾಲ್ಯ ವಿವಾಹ

ತಡೆಯದ ಅಧಿಕಾರಿಗಳಿಗೆ ನೋಟಿಸ್ ನೀಡಲು ಜಿಲ್ಲಾಧಿಕಾರಿ ಸೂಚನೆ



ಜಿಲ್ಲಾ ಮಕ್ಕಳ ರಕ್ಷಣಾ ಸಮಿತಿ ಸಭೆಯಲ್ಲಿ ಮಾತನಾಡುತ್ತಿರುವ ಜಿಲ್ಲಾಧಿಕಾರಿ ಡಾ.ಕುಮಾರ್.

ಮಂಡ್ಯ, ಜೂ.10– ಮಂಡ್ಯ ಜಿಲ್ಲೆಯಲ್ಲಿ 2024–25ನೇ ಸಾಲಿನಲ್ಲಿ 57 ಬಾಲ್ಯ ವಿವಾಹ ನಡೆದು ಎಫ್ಐಆರ್ ದಾಖಲಿಸಲಾಗಿದೆ. ಬಾಲ್ಯ ವಿವಾಹ ನಡೆಯುವ ಮೊದಲೇ ಅಧಿಕಾರಿಗಳು ಪತ್ತೆ ಹಚ್ಚಿ ತಡೆಗಟ್ಟಬೇಕಿತ್ತು. ಬಾಲ್ಯ ವಿವಾಹ ತಡೆಗಟ್ಟಲು ವಿಫಲರಾದ ಅಧಿಕಾರಿಗಳಿಗೆ ನೋಟಿಸ್ ಜಾರಿ ಮಾಡುವಂತೆ ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದರು.

ಮಂಗಳವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಸಮಿತಿ ಸೇರಿದಂತೆ ವಿವಿಧ ವಿಷಯಗಳ ಕುರಿತು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಗ್ರಾಮೀಣ ಪ್ರದೇಶದಲ್ಲಿ ನಡೆಯುವ ಮದುವೆಯ ಬಗ್ಗೆ ಅಂಗನವಾಡಿ, ಆಶಾ ಕಾರ್ಯಕರ್ತೆಯರು, ಆಯಾ ಗ್ರಾಮದ ಪಿ.ಡಿ.ಓ, ಶಾಲೆಯ ಮುಖ್ಯೋಪಾಧ್ಯಾಯರ ಗಮನಕ್ಕೆ ಬರುತ್ತಿಲ್ಲ ಎಂದರೆ ನಂಬಲು ಸಾಧ್ಯವಾಗುತ್ತಿಲ್ಲ. ಪ್ರೌಢ ಶಾಲೆಯ ಹೆಣ್ಣು ಮಗು 3 ದಿನಕ್ಕಿಂತ ಹೆಚ್ಚು ಶಾಲೆಗೆ ಬರುತ್ತಿಲ್ಲ ಎಂದರೆ ಪರಿಶೀಲನೆ ನಡೆಸಬೇಕು ಎಂದರು.

ಮಂಡ್ಯ ಜಿಲ್ಲೆಯು ತಲಾದಾಯದಲ್ಲಿ ಆರನೇ ಸ್ಥಾನದಲ್ಲಿದೆ. ತಲಾದಾಯ ಪ್ರತಿ ವರ್ಷಕ್ಕೆ ಅಂದಾಜು 2,32,000ರೂ. ಇದೆ. ಆದರೂ ಸಹ ಜಿಲ್ಲೆಯಲ್ಲಿ ಬಾಲ್ಯ ವಿವಾಹಗಳು ನಡೆಯುತ್ತಿದೆ ಎಂದರೆ ಚಿಂತಿಸಬೇಕಾದ ಸಂಗತಿಯಾಗಿದೆ. ಬಾಲ್ಯ ವಿವಾಹ ನಡೆದಿರುವ 5 ವರ್ಷಗಳ ಪ್ರಕರಣಗಳ ಬಗ್ಗೆ ಸಾಮಾಜಿಕ ಅಧ್ಯಯನ ನಡೆಸಿ ಇದರಿಂದ ಸಮಸ್ಯೆಯ ಮೂಲವನ್ನು ತಿಳಿಯಬಹುದು ಎಂದು ತಿಳಿಸಿದರು.

2024– 25ನೇ ಸಾಲಿನಲ್ಲಿ ಜಿಲ್ಲೆಯಲ್ಲಿ ನಡೆದಿರುವ 57 ಬಾಲ್ಯ ವಿವಾಹ ಪ್ರಕರಣಗಳಲ್ಲಿ ಬಹಳಷ್ಟು ನಡೆದಿರುವುದು ಸರ್ಕಾರಿ ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದ ವಿದ್ಯಾರ್ಥಿನಿಯರದು. ಬಾಲ್ಯ ವಿವಾಹ ನಡೆದರೆ ವಿದ್ಯಾರ್ಥಿನಿಯರ ಶಿಕ್ಷಣದ ಹಕ್ಕು ಕಸಿದುಕೊಂಡಂತೆ ಎಂಬುದು ತಿಳಿದಿರಲಿ. ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ತಮ್ಮ ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಪ್ರೌಢಶಾಲಾ ಹೆಣ್ಣು ಮಕ್ಕಳ ಹಾಜರಾತಿಯಲ್ಲಿ ಕೊರತೆ ಉಂಟಾದರೆ ತಕ್ಷಣ ಪರಿಶೀಲನೆ ನಡೆಸಿ. ತಮ್ಮ ವ್ಯಾಪ್ತಿಯ ಅಂಗನವಾಡಿ ಕಾರ್ಯಕರ್ತೆಯರಿಗೆ ಚುರುಕಾಗಿ ಕಾರ್ಯನಿರ್ವಹಿಸಲು ತಿಳಿಸಿ ಇದರಿಂದ ಜಿಲ್ಲೆಯಲ್ಲಿ ಬಾಲ್ಯ ವಿವಾಹ ನಡೆಯದಂತೆ ತಡೆಗಟ್ಟಬಹುದು. ಗ್ರಾಮಗಳಲ್ಲಿ ನಡೆಯುವ ಮಕ್ಕಳ ಗ್ರಾಮ ಸಭೆಗಳಲ್ಲಿ ಹೆಚ್ಚಿನ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಿ ಎಂದರು.

ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಜಮೂರ್ತಿ, ಉಪವಿಭಾಗಾಧಿಕಾರಿ ಶಿವಮೂರ್ತಿ, ಎಎಸ್ಪಿ ಗಂಗಾಧರ ಸ್ವಾಮಿ, ಮಕ್ಕಳ ರಕ್ಷಣಾಧಿಕಾರಿ ರಶ್ಮಿ ಸೇರಿದಂತೆ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಶ್ರೀ ಸಣ್ಣಕ್ಕಿರಾಯಸ್ವಾಮಿ ಬಸವಪ್ಪನಿಗೆ ಮುದ್ರಾಧಾರಣೆ, ಲಿಂಗಧಾರಣೆ ದೀಕ್ಷೆ



ಬಸವ ಸಮಿತಿ ವತಿಯಿಂದ ಮುದ್ರಾಧಾರಣೆ ಮತ್ತು ಲಿಂಗಧಾರಣೆ ದೀಕ್ಷೆ ಕಾರ್ಯಕ್ರಮ ಜರುಗಿತು.

ಭಾರತೀನಗರ, ಜೂ.10– ಇಲ್ಲಿಗೆ ಸಮೀಪದ ದೊಡ್ಡರಸಿನಕೆರೆ ಗ್ರಾಮದಲ್ಲಿ ಶ್ರೀ ಸಣ್ಣಕ್ಕಿರಾಯಸ್ವಾಮಿ ಬಸವಪ್ಪನಿಗೆ ಶ್ರೀ ಸಣ್ಣಕ್ಕಿರಾಯ ಬಸವ ಸಮಿತಿ ವತಿಯಿಂದ ಮುದ್ರಾಧಾರಣೆ ಮತ್ತು ಲಿಂಗಧಾರಣೆ ದೀಕ್ಷೆ ಕಾರ್ಯಕ್ರಮ ಜರುಗಿತು.

ಬಸವಪ್ಪನಿಗೆ ದೀಕ್ಷೆ ಕಾರ್ಯಕ್ರಮವನ್ನು ಕನಕಪುರ ತಾಲೂಕಿನ ಗುರುವಿನ ಪುರ ಮಠದ ಶ್ರೀಜಗದೀಶ್ ಶಿವಾಚಾರ್ಯ ಸ್ವಾಮೀಜಿ ನೆರವೇರಿಸಿಕೊಟ್ಟರು.

ಕಾರ್ಯಕ್ರಮದ ಅಂಗವಾಗಿ ದೇವರಹಳ್ಳಿ ಕಾಲುವೆಯಿಂದ ಹೂ–ಹೊಂಬಾಳೆಯ ಸಮೇತ ತಮಟೆ ನಗಾರಿಗಳೊಂದಿಗೆ ಬಸವಪ್ಪನನ್ನು ಶ್ರೀಸಣ್ಣಕ್ಕಿರಾಯಸ್ವಾಮಿ ದೇವಾಲಯಕ್ಕೆ ಕರೆತರಲಾಯಿತು.

ದೇವರಿಗೆ ವಿಶೇಷ ಪೂಜೆ ಸಲ್ಲಿಸಿದ ಬಳಿಕ ಬಸವಪ್ಪನಿಗೆ ಅಭಿಷೇಕ, ರುದ್ರಹೋಮ, ಶಾಂತಿ ಹೋಮ, ಜಯಾದಿ ಹೋಮ, ಪ್ರಾಯಶ್ಚಿತ ಹೋಮದ ಮೂಲಕ ಲಿಂಗಧಾರಣೆ ಮತ್ತು ಮುದ್ರಾಧಾರಣೆ ಮಾಡಲಾಯಿತು.

ಲಿಂಗಧಾರಣೆ ದೀಕ್ಷೆ ನಂತರ ದೊಡ್ಡರಸಿನಕೆರೆಯ ತೇರಿನ ಬೀದಿಯಲ್ಲಿ ಉಪದಾನ ಮಾಡಿಕೊಂಡು ಬಸವಪ್ಪನ ಮನೆಗೆ ಪ್ರವೇಶಿಸಲಾಯಿತು. ಇದೇ ವೇಳೆ ಪೂಜಾರಿ ರೇಣುಕಾಸ್ವಾಮಿ ಮಾತನಾಡಿ, ಲೋಕ ಕಲ್ಯಾಣದ ಅಂಗವಾಗಿ ಶ್ರೀ ಸಣ್ಣಕ್ಕಿರಾಯಸ್ವಾಮಿ ದೇವರಿಗೆ ಬಸವಪ್ಪನನ್ನು ಬಿಡಲಾಗುತ್ತಿದ್ದು, ಮಾ.18, 2024 ರಂದು ಹಿಂದಿನ ಬಸವ ಶಿವೈಕ್ಯಗೊಂಡ ಹಿನ್ನೆಲೆಯಲ್ಲಿ ಕನಕಪುರ ತಾಲೂಕಿನ ಮುರ್ಲೆತಿಮ್ಮನದೊಡ್ಡಿಯಿಂದ ಬಸವನನ್ನು ತಂದು ಲಿಂಗಧಾರಣೆ ಮತ್ತು ಮುದ್ರಾಧಾರಣೆ ಮಾಡಲಾಗಿದೆ. ಈ ಪೂಜೆಯ ಅಂಗವಾಗಿ 48 ದಿನಗಳ ಕಾಲ ಮಂಡಲ ಪೂಜೆ ನೆರವೇರಿಸಲಾಗುವುದು. ಜು.27 ರಂದು ಬೃಹತ್ ಅನ್ನಸಂತರ್ಪಣೆ ಕಾರ್ಯಕ್ರಮ, ಹಾಗೂ ಏಳೂರಮ್ಮ, ಕಾಳಮ್ಮ, ಶ್ರೀಕಾಲಭೈರವೇಶ್ವರ ಬಸವಪ್ಪ, ಶ್ರೀ ಸಣ್ಣಕ್ಕಿರಾಯಸ್ವಾಮಿ ಬಸವಪ್ಪ ಎಲ್ಲಾ ಪೂಜೆಗಳ ಮೆರವಣಿಗೆಯನ್ನು ಹಮ್ಮಿಕೊಳ್ಳಲಾಗುವುದೆಂದು ಶ್ರೀ ಸಣ್ಣಕ್ಕಿರಾಯಸ್ವಾಮಿ ಬಸವ ಸಮಿತಿಯ ಪದಾಧಿಕಾರಿಗಳು, ಪೂಜಾರಿಗಳು ಮತ್ತು ಯಜಮಾನರುಗಳು ತಿಳಿಸಿದ್ದಾರೆ.

ಸಾಧನೆಯ ಹಾದಿಯಲ್ಲಿ ಅಭಿವೃದ್ಧಿಯ ತೋರಣ ಕಿರು ಹೊತ್ತಿಗೆ ಬಿಡುಗಡೆ



ಕೆಆರ್.ಪೇಟೆ, ಜೂ.10– ಪ್ರತಿಯೊಬ್ಬರಿಗೂ ತಮ್ಮ ಹುಟ್ಟೂರಿನ ಅಭಿವೃದ್ಧಿಯ ಬಗ್ಗೆ ಸಾಮಾಜಿಕ ಕಾಳಜಿ ಇರಬೇಕು. ಕೆಲವರಿಗೆ ಸಾಧಿಸುವ ಸಂಕಲ್ಪ ಮತ್ತು ಕಾಳಜಿ ಎರಡೂ ಇರುತ್ತದೆ. ಈ ಪೈಕಿ ತಮ್ಮ ರಾಜೇನಹಳ್ಳಿ ಗ್ರಾಮಕ್ಕೆ ಬರೋಬ್ಬರಿ 1 ಕೋಟಿ 29ಲಕ್ಷ ರೂಪಾಯಿಗಳನ್ನು ವಿವಿಧ ಜನಪ್ರತಿನಿಧಿಗಳಿಂದ ಅನುದಾನ ತಂದು ಕೊಟ್ಟಿರುವ ರಾಜೇನಹಳ್ಳಿ ಕುಮಾರಸ್ವಾಮಿ ಅವರ ಸಾಮಾಜಿಕ ಕಳಕಳಿ ಶ್ಲಾಘನೀಯವಾದುದು ಎಂದು ಶಾಸಕ ಹೆಚ್.ಟಿ.ಮಂಜು ಹೇಳಿದರು.

ಅವರು ಪಟ್ಟಣದ ಪ್ರವಾಸಿ ಮಂದಿರದಲ್ಲಿ ತಾಲೂಕಿನ ಬೂಕನಕೆರೆ ಹೋಬಳಿ ರಾಜೇನಹಳ್ಳಿ ಗ್ರಾಮದ ಪ್ರಗತಿಗೆ ಶ್ರಮಿಸಿದ ಕುಮಾರಸ್ವಾಮಿಯವರ ಕುರಿತಾಗಿ ಮೈಸೂರಿನ ಲೇಖಕ ಅರುಣ್‌ನಾಯಕ್ ಹೊರ ತಂದಿರುವ "ಸಾಧನೆಯ ಹಾದಿಯಲ್ಲಿ ಅಭಿವೃದ್ಧಿಯ ತೋರಣ" ಎಂಬ ಕಿರು ಹೊತ್ತಿಗೆಯನ್ನು ಲೋಕಾರ್ಪಣೆ ಮಾಡಿ ಮಾತನಾಡಿದರು.

ಈ ಸಂದರ್ಭದಲ್ಲಿ ಮೈಸೂರು ವಿವಿ ಮಾಜಿ ಸಿಂಡಿಕೇಟ್ ಸದಸ್ಯ ಬಿ.ಎಂ. ರಾಮಚಂದ್ರನ್, ತಾ.ಪಂ. ಮಾಜಿ ಸದಸ್ಯ ಹೆಳವೇಗೌಡ, ರಾಜ್ಯ ಯುವ ಜೆಡಿಎಸ್ ಪ್ರಧಾನ ಕಾರ್ಯದರ್ಶಿ ಕುರುಬಹಳ್ಳಿ ನಾಗೇಶ್, ಮುಖಂಡರಾದ ಸೋಮಶೇಖರ್, ಲೇಖಕ ಪ್ರೇಮ್‌ನಾಯಕ್, ಗ್ರಾಮದ ಮುಖಂಡರು ಸೇರಿದಂತೆ ಹಲವು ಗ್ರಾಮಸ್ಥರು ಭಾಗವಹಿಸಿದ್ದರು.

ಇಂದು ಮೇಲುಕೋಟೆ ಪ್ರಗತಿ ಪರಿಶೀಲನಾ ಸಭೆ

ಮಂಡ್ಯ, ಜೂ.10– ಮೇಲುಕೋಟೆ ಶಾಸಕರ ಅಧ್ಯಕ್ಷತೆಯಲ್ಲಿ ಮೇಲುಕೋಟೆ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಪಟ್ಟಂತೆ ಪ್ರಗತಿ ಪರಿಶೀಲನಾ ಸಭೆಯನ್ನು ಜಿಪಂನ ಕಾವೇರಿ ಸಭಾಂಗಣದಲ್ಲಿ ಜೂನ್ 11 ರಂದು ಬೆಳಿಗ್ಗೆ 10:30 ಗಂಟೆಗೆ ಆಯೋಜಿಸಲಾಗಿದೆ. ಸಭೆಗೆ ಅಧಿಕಾರಿಗಳು ಸಿಬ್ಬಂದಿಗಳನ್ನು ನಿಯೋಜಿಸದೆ ಅಗತ್ಯ ಮಾಹಿತಿಗಳೊಂದಿಗೆ ಖುದ್ದು ಹಾಜರಾಗಲು ತಾಪಂನ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಾಳೆ ವಿದ್ಯುತ್ ವ್ಯತ್ಯಯ

ಮಂಡ್ಯ, ಜೂ.10– ಮಂಡ್ಯ ವಿದ್ಯುತ್ ವಿತರಣಾ ಕೇಂದ್ರದಿಂದ ಹೊರಹೊಮ್ಮುವ ವಿದ್ಯುತ್ ಮಾರ್ಗದಲ್ಲಿ ತುರ್ತು ಕಾಮಗಾರಿ ಹಮ್ಮಿಕೊಂಡಿರುವುದರಿಂದ ಗಾಂಧಿನಗರ, ಶಂಕರನಗರ, ಅನ್ನಪೂರ್ಣೇಶ್ವರಿನಗರ 2ನೆ ಹಂತ, ಕುವೆಂಪುನಗರ, ಹೌಸಿಂಗ್ ಬೋರ್ಡ್ 2ನೇ ಹಂತ, ವಿನಾಯಕ ಬಡಾವಣೆ 3ನೇ ಹಂತ, ಕೆ.ಇ.ಬಿ ಕಾಲೋನಿ ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ಜೂನ್ 12 ರಂದು ಬೆಳಗ್ಗೆ 9 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದೆ.

ಮನ್‌ಮುಲ್ ಅಧ್ಯಕ್ಷರಾಗಿ ಉಮ್ಮಡಹಳ್ಳಿ ಶಿವಪ್ಪ ಅಧಿಕಾರ ಸ್ವೀಕಾರ

ಹಾಲು ಒಕ್ಕೂಟ ಹಾಗೂ ಹೈನುಗಾರರ ಶ್ರೇಯೋಭಿವೃದ್ಧಿಗೆ ಶ್ರಮಿಸುವ ಭರವಸೆ



ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ ಯು.ಸಿ.ಶಿವಕುಮಾರ್ .

ಮಂಡ್ಯ ಜೂ.10– ಜಿಲ್ಲಾ ಹಾಲು ಒಕ್ಕೂಟ (ಮನ್‌ಮುಲ್)ದ ನೂತನ ಅಧ್ಯಕ್ಷರಾಗಿ ಯು.ಸಿ.ಶಿವಕುಮಾರ್ (ಉಮ್ಮಡಹಳ್ಳಿ ಶಿವಪ್ಪ) ಸೋಮವಾರ ಅಧಿಕಾರ ಸ್ವೀಕರಿಸಿದರು.

ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಅಧಿಕಾರಿಗಳೊಂದಿಗೆ ಇಂದೇ ಸಭೆ ನಡೆಸಿ ಸಂಸ್ಥೆಯ ಉನ್ನತಿಗೆ ಯೋಜನೆ ರೂಪಿಸಲಾಗುವುದು. ಬೆಂಗಳೂರು ಮಾರುಕಟ್ಟೆ ವಿಸ್ತಾರಕ್ಕೆ ವಿಶೇಷ ಗಮನ ಹರಿಸುವುದು, ಬಿಡದಿಯಲ್ಲಿರುವ ಯು.ಹೆಚ್.ಟಿ (ಅಲ್ಟ್ರಾ ಹೈ ಟೆಂಪರೇಚರ್) ಘಟಕವನ್ನು ಉನ್ನತೀಕರಿಸಿ, ಗುಡ್ ಲೈಫ್ ಹಾಲಿನ ಉತ್ಪನ್ನಗಳನ್ನು ಫಿನೋ ಹಾಗೂ ಬ್ರಿಕ್ ಮಾದರಿಯಲ್ಲಿ ಪ್ಯಾಕೇಜಿಂಗ್ ಮಾಡುವ ವ್ಯವಸ್ಥೆಯನ್ನು 1 ಲಕ್ಷ ಲೀಟರ್ ನಿಂದ 1.50 ಲಕ್ಷ ಲೀಟರ್ ಸಾಮರ್ಥ್ಯಕ್ಕೆ ಬಲಗೊಳಿಸಲು ಪ್ರಯತ್ನಿಸಲಾಗುವುದೆಂದರು.

ಅಧಿಕ ಹಾಲು ಉತ್ಪಾದನೆ: ಹಾಲು ಉತ್ಪಾದಕರನ್ನು ಪ್ರೋತ್ಸಾಹಿಸಲು ರಾಜ್ಯ ಸರ್ಕಾರ ಲೀಟರ್ ಹಾಲಿಗೆ 4 ರೂ ದರ ಹೆಚ್ಚಳ ಮಾಡಿದ ಹಿನ್ನೆಲೆಯಲ್ಲಿ ಪ್ರತಿದಿನ ಈ ಹಿಂದೆ ಶೇಖರಣೆ ಆಗುತ್ತಿದ್ದ 8.50 ಲಕ್ಷ ಲೀಟರ್ ಹಾಲಿನ ಬದಲು 13 ಲಕ್ಷ ಲೀಟರ್ ಹಾಲು ಉತ್ಪಾದನೆಯಾಗುತ್ತಿದ್ದು, ನಮ್ಮ ಮಾರಾಟ ವ್ಯವಸ್ಥೆಯಿಂದ 5.50 ಲಕ್ಷ ಲೀಟರ್ ಹಾಲು ಮಾರಾಟವಾಗುತ್ತಿದ್ದು, ಹೆಚ್ಚುವರಿ ಹಾಲನ್ನು ಹಾಲಿನ ಪೌಡರ್ ಮತ್ತು ಉತ್ಪನ್ನಗಳನ್ನಾಗಿ ಪರಿವರ್ತಿಸಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಶ್ರೀರಂಗಪಟ್ಟಣ ತಾಲೂಕಿನ ಕೋಡಿಶೆಟ್ಟಿಪುರ ಬಳಿ ಇರುವ ಸಂಸ್ಥೆಯ ಜಮೀನಿನಲ್ಲಿ ಶಿಕ್ಷಣ ಸಂಸ್ಥೆ ತೆರೆದು ಹೈನುಗಾರರ ಮಕ್ಕಳಿಗೆ ರಿಯಾಯಿತಿ ದರದಲ್ಲಿ ಉತ್ತಮ ಶಿಕ್ಷಣ ನೀಡುವ ಚಿಂತನೆ ಇದ್ದು, ಆಡಳಿತ ಮಂಡಳಿ ಸಭೆಯಲ್ಲಿ ಚರ್ಚಿಸಿ ಸೂಕ್ತ ನಿರ್ಧಾರಕ್ಕೆ ಬರಲಾಗುವುದು ಎಂದು ತಿಳಿಸಿದರು.

ಹಾಲು ಉತ್ಪಾದಕರ ಸಹಕಾರ ಸಂಘಗಳಲ್ಲಿ ಹಾಲಿನ ಉತ್ಪನ್ನಗಳನ್ನೂ ಮಾರಾಟ ಮಾಡಲು ಸೂಚಿಸಲಾಗಿದ್ದು, ಜಿಲ್ಲೆಯ ಕೀಲಾರ, ಅರಕೆರೆ, ಚಂದಗಾಲು ಗ್ರಾಮಗಳ ಹಾಲು ಉತ್ಪಾದಕ ಕೇಂದ್ರಗಳಲ್ಲಿ ಪ್ರಸ್ತುತ ಹಾಲಿನ ಉತ್ಪನ್ನಗಳು ಮಾರಾಟವಾಗುತ್ತಿವೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಸಮಾರಂಭದಲ್ಲಿ ಮನ್‌ಮುಲ್ ಉಪಾಧ್ಯಕ್ಷ ಡಿ.ಕೃಷ್ಣೇಗೌಡ, ನಿರ್ದೇಶಕರಾದ ಬಿ.ಬೋರೇಗೌಡ, ಎಸ್.ಎನ್.ಲಕ್ಷ್ಮಿ ನಾರಾಯಣ್, ಎಂ.ಕೆ.ಹರೀಶ್‌ಬಾಬು, ಎಂ.ಬಿ.ಹರೀಶ್, ಸಿ.ಶಿವಕುಮಾರ್, ಎಸ್.ಪಿ.ಸ್ವಾಮಿ, ಆರ್.ಎನ್.ವಿಶ್ವಾಸ್, ಜಿಲ್ಲಾ ಸಹಕಾರ ಸಂಘಗಳ ಉಪ ನಿಬಂಧಕ ಎಚ್.ಆರ್.ನಾಗಭೂಷಣ್, ವ್ಯವಸ್ಥಾಪಕ ನಿರ್ದೇಶಕ ಡಾ.ಪಿ.ಆರ್. ಮಂಜೇಶ್ ಇತರರು ಉಪಸ್ಥಿತರಿದ್ದರು. ವಿವಿಧ ಗ್ರಾಮಗಳ ಮುಖಂಡರು ಮತ್ತು ಸಂಘ ಸಂಸ್ಥೆಗಳ ಪದಾಧಿಕಾರಿಗಳು ಶುಭ ಕೋರಿದರು.

ಹೈಕೋರ್ಟ್‌ನಲ್ಲಿದ್ದ ವಿವಾದ: ಕಳೆದ ಮೇ 20ರಂದು ಜಿಲ್ಲಾ ಹಾಲು ಒಕ್ಕೂಟದ 12 ನಿರ್ದೇಶಕ ಸ್ಥಾನಗಳಿಗೆ ಚುನಾವಣೆ ನಡೆದಿತ್ತು, ಈ ಪೈಕಿ ಮದ್ದೂರು, ಮಳವಳ್ಳಿ ಹಾಗೂ ಕೆ.ಆರ್.ಪೇಟೆ ತಾಲೂಕಿನ ನಿರ್ದೇಶಕ ಸ್ಥಾನದ ವಿವಾದ ಹೈಕೋರ್ಟ್ ಮೆಟ್ಟಿಲೇರಿತ್ತು. ಹಲವು ದಿನಗಳ ಹಿಂದೆ ಕೆ.ಆರ್.ಪೇಟೆ ಮತ್ತು ಮದ್ದೂರು ತಾಲೂಕಿನ ನಿರ್ದೇಶಕ ಸ್ಥಾನದ ವಿವಾದ ಬಗೆಹರಿದು ಫಲಿತಾಂಶ ಪ್ರಕಟವಾಗಿತ್ತು. ಮಳವಳ್ಳಿ ತಾಲೂಕಿನ ನಿರ್ದೇಶಕ ಸ್ಥಾನದ ವಿಚಾರ ಬಗೆಹರಿಯದ ಹಿನ್ನೆಲೆಯಲ್ಲಿ ಉಪಾಧ್ಯಕ್ಷ ಕೃಷ್ಣೇಗೌಡ ಹೊರತುಪಡಿಸಿ, ಇತರೆ 11 ನಿರ್ದೇಶಕ ಸ್ಥಾನ ಹಾಗೂ ಅಧ್ಯಕ್ಷ ಸ್ಥಾನದ ಘೋಷಣೆಗೆ ಕೋರ್ಟ್ ಅನುಮತಿ ನೀಡಿದ ಹಿನ್ನೆಲೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಸಿ. ಶಿವಾನಂದ ಮೂರ್ತಿ ಇಂದು ಅಧಿಕಾರ ಹಸ್ತಾಂತರಿಸಿದರು.

ಸುಮಾ ನಿಧನ



ಕೆ.ಆರ್.ಪೇಟೆ, ಜೂ.10– ತಾಲೂಕಿನ ಶೀಳನೆರೆ ಹೋಬಳಿ ಚಟ್ಟಂಗೆರೆ ಗ್ರಾಮದ ನಿವಾಸಿ (ಹಾಲಿ ವಾಸ ಜಯನಗರ ಕೆ.ಆರ್. ಪೇಟೆ ಟೌನ್) ಸುಮಾ(44) ನಿಧನರಾಗಿದ್ದಾರೆ.

ಮೃತರು ಪತಿ ಹೇಮಗಿರಿ ಸಕ್ಕರೆ ನೌಕರ ಸ್ವಾಮಿ, ಇಬ್ಬರು ಪುತ್ರಿಯರು, ಓರ್ವ ಪುತ್ರ ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯು ಮಂಗಳವಾರ ಚಟ್ಟಂಗೆರೆ ಗ್ರಾಮದಲ್ಲಿ ನಡೆಯಿತು. ಇವರ ನಿಧನಕ್ಕೆ ತಾಲೂಕಿನ ವಿವಿಧ ಗಣ್ಯರು ಸಂತಾಪ ಸೂಚಿಸಿದ್ದಾರೆ.

ಒಂದನೇ ಪುಟದಿಂದ

ಮತ್ತೆ ಜಾತಿಗಣತಿ

ನ್ಯಾಯಮೂರ್ತಿ ನೇತೃತ್ವದ ಏಕ ಸದಸ್ಯ ಆಯೋಗ ರಚನೆ, ಐದು ಪೊಲೀಸ್ ಅಧಿಕಾರಿಗಳ ಅಮಾನತು, ಗುಪ್ತಚರ ಇಲಾಖೆಯ ಮುಖ್ಯಸ್ಥರ ಬದಲಾವಣೆ, ರಾಜಕೀಯ ಕಾರ್ಯದರ್ಶಿಗಳ ಬದಲಾವಣೆಯಂತಹ ಸರ್ಕಾರದ ಕ್ರಮಗಳು ಸಮರ್ಪಕವಾಗಿರುವ ಬಗ್ಗೆ ವರಿಷ್ಠರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಏಕಸದಸ್ಯ ಆಯೋಗದ ತನಿಖಾ ವರದಿಯನ್ನು ಆಧರಿಸಿ ತಪ್ಪಿತಸ್ಥರ ಮೇಲೆ ಕಠಿಣ ಕ್ರಮ ತೆಗೆದುಕೊಳ್ಳಲಾಗುವುದು ಎಂದರು.

ಸಂಪುಟ ಪುನರ್ರಚನೆಯ ಬಗ್ಗೆ ಚರ್ಚೆಯಾಗಿಲ್ಲ: ಜೂ.13ರಂದು 16ನೇ ಹಣಕಾಸಿನ ಆಯೋಗದ ಅಧ್ಯಕ್ಷರನ್ನು ಭೇಟಿಯಾಗಲು ನವದೆಹಲಿಗೆ ಆಗಮಿಸಲಿದ್ದೇನೆ. ಸಚಿವ ಸಂಪುಟ ಪುನರ್ರಚನೆಯ ಬಗ್ಗೆ ಯಾವುದೇ ಚರ್ಚೆಯಾಗಿಲ್ಲ ಎಂದರು. ಸಂಸತ್‌ನಲ್ಲಿ ಬೆಂಗಳೂರಿನ ಕಾಲ್ತುಳಿತದ ಘಟನೆ ಚರ್ಚೆಗೆ ಬರುವ ಸಾಧ್ಯತೆಯಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಕೇಂದ್ರ ಸರ್ಕಾರ ಮೊದಲು ಕುಂಭಮೇಳದಲ್ಲಿ ನಡೆದ ಕಾಲ್ತುಳಿತ, ಪ್ರಧಾನಿಯವರು ಉದ್ಘಾಟಿಸಿದ ಸೇತುವೆ ಕುಸಿದು ಜನ ಮೃತಪಟ್ಟ ಘಟನೆ ಬಗ್ಗೆ ಸಂಸತ್ತಿನಲ್ಲಿ ಚರ್ಚೆ ನಡೆಸಲಿ. ಬೆಂಗಳೂರಿನಲ್ಲಿ ಘಟನೆ ನಡೆದಿರುವುದು ಸರ್ಕಾರಕ್ಕೆ ದುಃಖದ ಸಂಗತಿಯಾಗಿದೆ. ಯುವ ಜನರ ಸಾವು ಎಲ್ಲರಿಗೂ ನೋವು ತರುವ ವಿಚಾರ. ಕುಂಭಮೇಳದ ಘಟನೆಯಲ್ಲಿ ಜನರ ಸಾವು ಪ್ರಕರಣದಲ್ಲಿ ಮುಖ್ಯಮಂತ್ರಿ ಯೋಗಿ ಆದಿತ್ಯನಾಥರ ಜವಾಬ್ದಾರಿಯಲ್ಲವೇ ಎಂದು ಪ್ರಶ್ನಿಸಿದರು.

ಮುಡಾ ಕೇಸ್‌ಗೆ ಸಂಬಂಧಿಸಿದಂತೆ 100 ಕೋಟಿ ಮೌಲ್ಯದ ಆಸ್ತಿಯನ್ನು ಇಡಿ ಮುಟ್ಟುಗೋಲು ಹಾಕಿಕೊಂಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಕಾನೂನು ಕ್ರಮ ತೆಗೆದುಕೊಂಡಿರುವುದಕ್ಕೆ ಯಾವುದೇ ಆಕ್ಷೇಪವಿಲ್ಲ ಎಂದರು.

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಸ್ವಾಗತ

ಬೆಂಗಳೂರು, ಜೂ. 10– ಮತ್ತೆ ಜಾತಿಗಣತಿ ಮಾಡುವ ರಾಜ್ಯ ಸರ್ಕಾರದ ನಿರ್ಧಾರವನ್ನು ಅಖಿಲ ಭಾರತ ವೀರಶೈವ ಮಹಾಸಭಾ ಸ್ವಾಗತಿಸಿದೆ. ಜಾತಿಗಣತಿಯು ವೈಜ್ಞಾನಿಕವಾಗಿರಬೇಕು, ಆಧಾರ್ ಹಾಗೂ ಎಐ ಆಧರಿತ ತಂತ್ರಜ್ಞಾನ ಬಳಸಿ ಗಣತಿ ನಡೆಸುವ ಮೂಲಕ ಎಲ್ಲಾ ಸಮುದಾಯದವರಿಗೂ ನ್ಯಾಯ ಒದಗಿಸಬೇಕು ಎಂದು ಮಹಾಸಭಾ ಅಭಿಪ್ರಾಯಪಟ್ಟಿದೆ.

ಕುಂಬಾರ ಜನಾಂಗದ ವಿದ್ಯಾರ್ಥಿಗಳಿಗೆ ಉಚಿತ ವಸತಿ ಸೌಕರ್ಯಕ್ಕೆ ಅರ್ಜಿ ಆಹ್ವಾನ

ಮೈಸೂರು, ಜೂ.10(ಬಿಎಲ್‌ಯು)– ಮೈಸೂರಿನ ನ್ಯೂ ಕಾಂತರಾಜ ಅರಸ್ ರಸ್ತೆಯಲ್ಲಿರುವ ಕುಂಬಾರರ ಸಾರ್ವಜನಿಕ ವಿದ್ಯಾರ್ಥಿ ನಿಲಯದಲ್ಲಿ ಉಚಿತ ವಸತಿ ಸೌಕರ್ಯಕ್ಕಾಗಿ ಕುಂಬಾರ ಜನಾಂಗದ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಬಿಎಸ್ಸಿ, ಎಂಎಸ್ಸಿ, ಬಿಇ, ಎಂಟೆಕ್, ಎಂಬಿಬಿಎಸ್ ಹಾಗೂ ತಾಂತ್ರಿಕ ಮತ್ತು ವೈದ್ಯಕೀಯ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು.

ಅರ್ಜಿ ನಮೂನೆ, ಕಾಲೇಜಿನ ವ್ಯಾಸಂಗ ದೃಢೀಕರಣ ಪತ್ರ, ಜಾತಿ ಪ್ರಮಾಣ ಪತ್ರ, ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ಬಗ್ಗೆ ದಾಖಲಾತಿ ಗುರುತಿನ ಚೀಟಿ, ಎರಡು ಭಾವಚಿತ್ರದೊಂದಿಗೆ ಜುಲೈ 1ರೊಳಗೆ ಅರ್ಜಿ ಸಲ್ಲಿಸಬೇಕು. ಕಳೆದ ವರ್ಷದ ವಿದ್ಯಾರ್ಥಿಗಳು ಕೂಡ ಪ್ರಸಕ್ತ ವರ್ಷದ ಪ್ರವೇಶಾತಿಗಾಗಿ ಅರ್ಜಿ ಸಲ್ಲಿಸಬೇಕು. ಅರ್ಜಿ ಫಾರಂಗಳನ್ನು ವಿದ್ಯಾರ್ಥಿನಿಲಯದಿಂದ ಪಡೆದುಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಟ್ರಸ್ಟ್ ಕಾರ್ಯದರ್ಶಿ ಟಿ.ರಾಜು ಅವರನ್ನು ಮೊ. 9611599514 ಅಥವಾ 9686180254 ಸಂಪರ್ಕಿಸಬಹುದಾಗಿದೆ.

'ಸರ್ಕಾರಿ' ಆಗಬೇಕಿತ್ತಾ...!

ಸಂಭ್ರಮಾಚರಣೆಯಲ್ಲಿ ಪಾಲ್ಗೊಂಡಿದ್ದು ಭಾರೀ ಮುಜುಗರವಾಗಿದೆ ಎಂದು ಶಿವಕುಮಾರ್ ಅವರ ಬಗ್ಗೆ ಕಿಡಿಕಾರಿದ್ದಾರೆ.

ನೀವು ಉಪಮುಖ್ಯಮಂತ್ರಿ ಅಷ್ಟೇ ಅಲ್ಲ, ಪ್ರದೇಶ ಕಾಂಗ್ರೆಸ್ ಅಧ್ಯಕ್ಷರೂ ಹೌದು. ನೀವೇ ಕಾರ್ಯಕ್ರಮದ ಸಾರಥ್ಯ ವಹಿಸಿದರೆ, ನಾವು ರಾಷ್ಟ್ರಮಟ್ಟದಲ್ಲಿ ಏನು ಉತ್ತರ ನೀಡುವುದು. ಮುಂದಿನ ದಿನಗಳಲ್ಲಿ ಸಂಸತ್ ಅಧಿವೇಶನ ಆರಂಭವಾಗುತ್ತಿದೆ. ಅಧಿವೇಶನದಲ್ಲಿ ಮಹಾಕುಂಭ ಮೇಳದ ಕಾಲ್ತುಳಿತ ಹಾಗೂ ಕಾಶ್ಮೀರ ಘಟನೆಗಳನ್ನು ಮುಂದಿಟ್ಟುಕೊಂಡು ಹೋರಾಟ ಮಾಡಲು ಮುಂದಾಗಿದ್ದೆವು. ಆದರೆ, ಕರ್ನಾಟಕದಲ್ಲಿನ ದುರಂತ ನಮ್ಮನ್ನು ತಲೆ ತಗ್ಗಿಸುವಂತೆ ಮಾಡಿದೆ.

ನಿಮ್ಮ ಸಂಪುಟ ಸಚಿವರಲ್ಲೇ ಸಾಮರಸ್ಯವಿಲ್ಲ. ಇದರಿಂದ ಯಾವುದೇ ಕಾರ್ಯಕ್ರಮವನ್ನು ಒಮ್ಮತದಿಂದ ಮಾಡಲಾಗದು. ನಿಮ್ಮ ಗ್ಯಾರಂಟಿ ಯೋಜನೆಗಳನ್ನು ಇಡೀ ರಾಷ್ಟ್ರದಲ್ಲಿ ಅಸ್ತ್ರ ಮಾಡಿಕೊಂಡು ವಿರೋಧಿಗಳನ್ನು ಹತ್ತಿಕ್ಕುತ್ತಿದ್ದೆವು. ಆದರೆ, ಇತ್ತೀಚಿನ ಬೆಳವಣಿಗೆಗಳು ನಮ್ಮ ಕೈ ಕಟ್ಟಿಹಾಕಿವೆ. ನಾವು ಕೆಲವು ದೃಢ ನಿರ್ಧಾರಗಳನ್ನು ತೆಗೆದುಕೊಳ್ಳುವಂತಹ ಸನ್ನಿವೇಶ ಎದುರಾಗಿದೆ ಎಂದು ಸಿದ್ದರಾಮಯ್ಯ ಮತ್ತು ಶಿವಕುಮಾರ್ ಅವರುಗಳಿಗೆ ರಾಹುಲ್ ಗಾಂಧಿ ತಿಳಿಸಿದ್ದಾರೆ.

ಆನ್‌ಲೈನ್ ಮೂಲಕವೂ ಮಾಹಿತಿ ನೀಡಬಹುದು




ಬೆಂಗಳೂರು: ಜಾತಿ ಗಣತಿ ವಿಚಾರವಾಗಿ ಎದ್ದಿರುವ ಅಪಸ್ವರ, ಸಮುದಾಯಗಳ ಅಂಕಿಅಂಶಗಳ ಬಗ್ಗೆ ಇರುವ ಗೊಂದಲ ನಿವಾರಣೆಗೆ ತೀರ್ಮಾನಿಸಲಾಗಿದೆ. ಮನೆ ಮನೆ ಸಮೀಕ್ಷೆ ಹಾಗೂ ಆನ್‌ಲೈನ್ ಮೂಲಕ ಎಲ್ಲರಿಗೂ ತಮ್ಮ ಮಾಹಿತಿಯನ್ನು ಮತ್ತೊಮ್ಮೆ ಸಲ್ಲಿಸಲು ಅವಕಾಶ ನೀಡಲಾಗುವುದು. ಈ ಪ್ರಕ್ರಿಯೆಯನ್ನು ಪಾರದರ್ಶಕವಾಗಿ ನಡೆಸಲಾಗುವುದು ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದರು.

ಜಾತಿ ಗಣತಿ ವಿಚಾರವಾಗಿ ಇದೇ ತಿಂಗಳ 12ರಂದು ನಡೆಯಲಿರುವ ಸಚಿವ ಸಂಪುಟ ಸಭೆಯಲ್ಲಿ ಅಂತಿಮ ತೀರ್ಮಾನ ಮಾಡಲು ನಿರ್ಧರಿಸಿದ್ದೆವು. ಈ ವಿಚಾರವಾಗಿ ಸಂಸದರು, ಶಾಸಕರು, ಸಂಘ–ಸಂಸ್ಥೆಗಳು ನಮ್ಮ ವರಿಷ್ಠರ ಜತೆ ಚರ್ಚೆ ಮಾಡಿದ್ದಾರೆ. ಕೆಲವು ಸಂಘಟನೆಗಳು ಹಾಗೂ ಸಮಾಜಗಳಿಂದ ಈ ಜಾತಿ ಗಣತಿಗೆ ಅಪಸ್ವರ ಬಂದಿರುವ ಹಿನ್ನೆಲೆಯಲ್ಲಿ ಎಲ್ಲರಿಗೂ ನ್ಯಾಯಬದ್ಧವಾಗಿ ಅವಕಾಶ ಕಲ್ಪಿಸಿಕೊಡಬೇಕು ಎಂದು ವರಿಷ್ಠರು ನಮಗೆ ಮಾರ್ಗದರ್ಶನ ನೀಡಿದ್ದಾರೆ. ಈ ಜಾತಿ ಗಣತಿ ಯಾರನ್ನೂ ಬಿಡಬಾರದು, ಎಲ್ಲರನ್ನೂ ಒಳಗೊಳ್ಳಬೇಕು ಎಂದು ತೀರ್ಮಾನಿಸಲಾಗಿದೆ. ಯಾರ ಅಪಸ್ವರವೂ ಇಲ್ಲದಂತೆ ನೋಡಿಕೊಳ್ಳಲು ಮುಖ್ಯಮಂತ್ರಿಗಳಿಗೆ ನಿರ್ದೇಶನ ನೀಡಿದ್ದಾರೆ ಎಂದು ಮಾಹಿತಿ ನೀಡಿದರು.

ಸಾರ್ವಜನಿಕರು ನ್ಯಾಯಬದ್ಧವಾಗಿ ಯಾವ ಸಮಾಜಕ್ಕೆ ಸೇರಿದ್ದೀರಿ ಎಂಬುದನ್ನು ವ್ಯಕ್ತಪಡಿಸಿಕೊಳ್ಳಬೇಕು. ಈ ಅವಕಾಶವನ್ನು ಎಲ್ಲರೂ ಬಳಸಿಕೊಳ್ಳಬೇಕು. ಸಮಾಜದ ಮುಖಂಡರು ಹಾಗೂ ಮಠಾಧೀಶರು ಇದಕ್ಕೆ ಸಹಕರಿಸಬೇಕು ಎಂದು ಮನವಿ ಮಾಡಿದರು. ನಮ್ಮ ರಾಜ್ಯದವರು ಎಲ್ಲೇ ಇದ್ದರೂ ಈ ಬಗ್ಗೆ ಆನ್‌ಲೈನ್ ಮೂಲಕ ಮಾಹಿತಿ ನೀಡಲು ಅವಕಾಶ ಕಲ್ಪಿಸಲಾಗುವುದು ಎಂದು ತಿಳಿಸಿದರು.

ಜೂ.22ರಿಂದ ಮಂಡ್ಯ–ಮೈಸೂರು, ಚಾಮರಾಜನಗರ, ಹಾಸನ ಜಿಲ್ಲೆಯಲ್ಲಿ ಕಬ್ಬು ಅರೆಯುವ ಕಾರ್ಯ ಆರಂಭ

- ರಾಜ್ಯದ ಇನ್ನಿತರೆ ಕಡೆ ನ.1ರಿಂದ ಕಬ್ಬು ಅರೆಯುವಿಕೆಗೆ ಚಾಲನೆ
- ಸಕ್ಕರೆ ಸಚಿವ ಶಿವಾನಂದ ಪಾಟೀಲ್ ಪ್ರಕಟ
- ಕಬ್ಬು ಪೂರೈಸಿದ 14 ದಿನದೊಳಗೆ ಬಿಲ್ ಪಾವತಿ ನಿಯಮ ಪಾಲನೆಗೆ ಸೂಚನೆ



ಶಿವಾನಂದ ಪಾಟೀಲ್



ಬೆಂಗಳೂರು, ಜೂ.10(ಕೆಎಂಶಿ)– ಮಂಡ್ಯ, ಮೈಸೂರು, ಚಾಮರಾಜನಗರ, ಹಾಸನ ಜಿಲ್ಲೆ ಹೊರತುಪಡಿಸಿ, ರಾಜ್ಯದ ಇತರ ಜಿಲ್ಲೆಗಳಲ್ಲಿ ನವೆಂಬರ್ 1ರಿಂದ ಕಬ್ಬು ಅರೆಯುವಿಕೆ ಆರಂಭಿಸಲು ನಿರ್ಧರಿಸಲಾಗಿದೆ ಎಂದು ಕಬ್ಬು, ಸಕ್ಕರೆ ಅಭಿವೃದ್ಧಿ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ಇಂದಿಲ್ಲಿ ತಿಳಿಸಿದ್ದಾರೆ.

ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಕಬ್ಬು ನಿಯಂತ್ರಣ ಮಂಡಳಿ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದ್ದು, ಮಂಡ್ಯ, ಮೈಸೂರು, ಚಾಮರಾಜನಗರ ಮತ್ತು ಹಾಸನ ಜಿಲ್ಲೆಗಳಲ್ಲಿ ಜೂನ್ 22ರಿಂದ ಕಬ್ಬು ಅರೆಯುವಿಕೆಗೆ ಈಗಾಗಲೇ ಆದೇಶ ಹೊರಡಿಸಲಾಗಿದೆ ಎಂದರು.

ಈ ಬಾರಿ ಮಳೆ ಉತ್ತಮವಾಗಿದ್ದು, ಕಬ್ಬು ಇಳುವರಿ ಸಹ ಚೆನ್ನಾಗಿದೆ. ಈ ಹಿನ್ನೆಲೆಯಲ್ಲಿ ಮುಂಚಿತವಾಗಿಯೇ ಕಬ್ಬು ಅರೆಯುವಿಕೆ ಆರಂಭಕ್ಕೆ ರೈತ ಮುಖಂಡರನ್ನು ಒಳಗೊಂಡ ಕಬ್ಬು ನಿಯಂತ್ರಣ ಮಂಡಳಿ ಸದಸ್ಯರು ಸಹಮತ ವ್ಯಕ್ತಪಡಿಸಿದ್ದಾರೆ.

ತೂಕದಲ್ಲಿ ವಂಚನೆ ತಡೆ, ಕಬ್ಬು ಪೂರೈಸಿದ ರೈತರಿಗೆ ನಿಗದಿತ ಸಮಯದಲ್ಲಿ ಬಿಲ್ ಪಾವತಿ ಕುರಿತು ಸಭೆಯಲ್ಲಿ ಚರ್ಚೆ ನಡೆದು, ಕಳೆದ ಮೂರು ಹಂಗಾಮಿನಲ್ಲಿ ಕಬ್ಬು ಪೂರೈಕೆ ಮಾಡಿದ ರೈತರಿಗೆ ಪೂರ್ಣ ಪ್ರಮಾಣದಲ್ಲಿ ಬಿಲ್ ಪಾವತಿಯಾಗಿದೆ.

ಕಬ್ಬು ಪೂರೈಸಿದ 14 ದಿನಗಳೊಳಗೆ ಬಿಲ್ ಪಾವತಿ ಮಾಡಬೇಕು ಎಂಬ ನಿಯಮವಿದೆ, ಕೆಲವು ಕಾರ್ಖಾನೆಗಳು ವಿಳಂಬ ಮಾಡಿರಬಹುದು, ಆದರೆ, ಪೂರ್ಣ ಪ್ರಮಾಣದಲ್ಲಿ ಬಿಲ್ ಪಾವತಿ ಮಾಡಿವೆ, ಕಬ್ಬಿನ ಬಾಕಿ ಬಿಲ್ ಪಾವತಿ ವಿಚಾರದಲ್ಲಿ ಇತರೆ ಕಬ್ಬು ಬೆಳೆಯುವ ರಾಜ್ಯಗಳಿಗೆ ಕರ್ನಾಟಕ ಮಾದರಿಯಾಗಿದೆ ಎಂದರು.

ಉತ್ತರಪ್ರದೇಶದಲ್ಲಿ ಕಬ್ಬು ಪೂರೈಕೆದಾರರಿಗೆ ಸಕ್ಕರೆ ಕಾರ್ಖಾನೆಗಳು 594 ಕೋಟಿ ರೂ., ಮಹಾರಾಷ್ಟ್ರ 123 ಕೋಟಿ ಬಾಕಿ ಉಳಿಸಿಕೊಂಡಿವೆ, ಕರ್ನಾಟಕ ಸರ್ಕಾರ ಸಕ್ಕರೆ ಕಾರ್ಖಾನೆಗಳ ಮೇಲೆ ಒತ್ತಡ ಹಾಕಿ ಬಿಲ್ ಪಾವತಿಗೆ ಕ್ರಮ ಕೈಗೊಂಡಿದೆ

2025–26ನೇ ಸಾಲಿನ ಹಂಗಾಮಿಗೆ ಎಫ್‌ಆರ್‌ಪಿ ದರವನ್ನು ಪ್ರತಿಶತ 9.5ರಷ್ಟು ಸಕ್ಕರೆ ಇಳುವರಿಗೆ ಪ್ರತಿ ಮೆಟ್ರಿಕ್ ಟನ್‌ಗೆ 4440 ರೂ. ಅಥವಾ 4200 ರೂ. ನಿಗದಿಪಡಿಸಬೇಕೆಂದು ಕೇಂದ್ರ ಸರ್ಕಾರಕ್ಕೆ ಕಳೆದ ಜನವರಿಯಲ್ಲೇ ರಾಜ್ಯ ಮನವಿ ಮಾಡಿತ್ತು.

ಕೇಂದ್ರ ಸರ್ಕಾರ ಪ್ರತಿಶತ 10.25 ಸಕ್ಕರೆ ಇಳುವರಿಗೆ ಪ್ರತಿಟನ್‌ಗೆ 3,550 ರೂ., ಪ್ರತಿಶತ 10.25ಕ್ಕೂ ಮೇಲ್ಪಟ್ಟ ಇಳುವರಿಗೆ ನಂತರದ ಶೇಕಡ 1ರಷ್ಟು ಇಳುವರಿಗೆ ಪ್ರತಿ ಮೆಟ್ರಿಕ್ ಟನ್‌ಗೆ 46 ರೂ. ಹೆಚ್ಚುವರಿ ಬೆಲೆ ನಿಗದಿಪಡಿಸಿದೆ.

ಪ್ರತಿಶತ 10.25ಕ್ಕಿಂತ ಕಡಿಮೆ ಹಾಗೂ ಪ್ರತಿಶತ 9.5ಕ್ಕೆ ಮೇಲ್ಪಟ್ಟ ಇಳುವರಿ ಹೊಂದಿರುವ ಸಕ್ಕರೆ ಕಾರ್ಖಾನೆಗಳಿಗೆ ಪ್ರತಿ ಮೆಟ್ರಿಕ್ ಟನ್‌ಗೆ 346 ರೂ. ಸರಾಸರಿಯಂತೆ ನ್ಯಾಯ ಮತ್ತು ಲಾಭದಾಯಕ ಬೆಲೆ ಕಡಿಮೆ ಮಾಡಬೇಕು, ಪ್ರತಿಶತ 9.5 ಅಥವಾ ಪ್ರತಿಶತ 9.50ಕ್ಕಿಂತ ಕಡಿಮೆ ಇಳುವರಿ ಹೊಂದಿರುವ ಸಕ್ಕರೆ ಕಾರ್ಖಾನೆಗಳಿಗೆ ಪ್ರತಿ ಮೆಟ್ರಿಕ್ ಟನ್‌ಗೆ 3290.5 ರೂ. ನ್ಯಾಯ ಮತ್ತು ಲಾಭದಾಯಕ ಬೆಲೆ ನಿಗದಿಪಡಿಸಿದೆ ಎಂದರು.

2024–25ನೇ ಹಂಗಾಮಿನಲ್ಲಿ ಕಬ್ಬು ಬಿಲ್ ಬಾಕಿ ಉಳಿಸಿಕೊಂಡಿರುವ ಸಕ್ಕರೆ ಕಾರ್ಖಾನೆಗಳಿಗೆ ಸಂಬಂಧಪಟ್ಟ ಜಿಲ್ಲಾಧಿಕಾರಿಗಳ ಮೂಲಕ ವಸೂಲಾತಿ ಪ್ರಮಾಣ ಪತ್ರ ಜಾರಿಗೊಳಿಸಲಾಗಿದೆ, ಕೆಲವು ಕಾರ್ಖಾನೆಗಳು ಎಫ್‌ಆರ್‌ಪಿ ದರದಂತೆ ಸಂಪೂರ್ಣ ಹಣ ಪಾವತಿ ಮಾಡಿದ್ದರೂ ಕಬ್ಬು (ನಿಯಂತ್ರಣ) ಆದೇಶದ ಅನ್ವಯ ವಿಳಂಬದ ಅವಧಿಗೆ ರೈತರಿಗೆ ಪ್ರತಿಶತ 15ರಂತೆ ಬಡ್ಡಿ ವಿತರಿಸಿರುವ ಬಗ್ಗೆ ಮಾಹಿತಿ ನೀಡಿಲ್ಲ. ಕೆಲವು ಕಾರ್ಖಾನೆಗಳು ಅಸಲು ಮೊತ್ತ ಬಾಕಿ ಉಳಿಸಿಕೊಂಡಿವೆ. ಈ ಹಿನ್ನೆಲೆಯಲ್ಲಿ ಕಾರ್ಖಾನೆಗಳಿಂದ ಬರಬೇಕಾದ ಬಾಕಿ ಮೊತ್ತದ ವಿಚಾರವಾಗಿ ಕಬ್ಬು ಬೆಳೆಗಾರರ ಸಭೆ ಕರೆದು ಕಬ್ಬಿನ ಬಾಕಿ ಬಿಲ್ ಪಾವತಿ ಬಗ್ಗೆ ಖಚಿತಪಡಿಸಕೊಳ್ಳಲು ಹಾಗೂ ಅನುಪಾಲನಾ ವರದಿ ಸಲ್ಲಿಸಲು ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.

ತೂಕದಲ್ಲಿ ವಂಚನೆ ತಡೆಗೆ ರಾಜ್ಯದ ಎಲ್ಲ ಸಕ್ಕರೆ ಕಾರ್ಖಾನೆಗಳಲ್ಲಿ ಅನಲಾಗ್ ತೂಕಯಂತ್ರಗಳ ಬದಲಿಗೆ ಡಿಜಿಟಲ್ ತೂಕಯಂತ್ರಗಳ ಅಳವಡಿಕೆಗೆ ಕ್ರಮ ಕೈಗೊಳ್ಳಲಾಗಿದೆ. ಕೇವಲ 4 ಕಾರ್ಖಾನೆಗಳಲ್ಲಿ ಮಾತ್ರ ಈ ಕಾರ್ಯ ಬಾಕಿ ಇದೆ, ಪ್ರಸಕ್ತ ಹಂಗಾಮು ಆರಂಭದೊಳಗೆ ಬಾಕಿ ಇರುವ ಸಕ್ಕರೆ ಕಾರ್ಖಾನೆಗಳಲ್ಲೂ ಡಿಜಿಟಲ್ ತೂಕಯಂತ್ರ ಅಳವಡಿಸಲು ಮಾಪನ ಇಲಾಖೆ ಅಧಿಕಾರಿಗಳಿಗೆ ಸಚಿವರು ನಿರ್ದೇಶನ ನೀಡಿದರು.

ರಾಜ್ಯದಲ್ಲಿ 2025ರ ಮೇ ಅಂತ್ಯಕ್ಕೆ ಸಕ್ಕರೆ ಕಾರ್ಖಾನೆಗಳು 521.38 ಲಕ್ಷ ಮೆಟ್ರಿಕ್ ಟನ್ ಕಬ್ಬು ನುರಿಸಿ 41.81 ಲಕ್ಷ ಮೆಟ್ರಿಕ್ ಟನ್ ಸಕ್ಕರೆ ಉತ್ಪಾದನೆ ಮಾಡಿವೆ, ಕೇಂದ್ರ ಸರ್ಕಾರ ನಿಗದಿಪಡಿಸಿರುವ ಎಫ್‌ಆರ್‌ಪಿ ದರದಂತೆ ಒಟ್ಟು 18221.88 ಕೋಟಿ ರೂ. ಬಿಲ್ ಪಾವತಿ ಮಾಡಬೇಕಿದ್ದು, 18872.47 ಕೋಟಿ ರೂ. ಪಾವತಿ ಮಾಡಿವೆ. 14 ಸಕ್ಕರೆ ಕಾರ್ಖಾನೆಗಳು ರೂ 245.62 ಕೋಟಿ ಬಾಕಿ ಉಳಿಸಿಕೊಂಡಿದ್ದು, ಅಂತಹ ಸಕ್ಕರೆ ಕಾರ್ಖಾನೆ ಆಡಳಿತ ಮಂಡಳಿಗಳಿಗೆ ಈಗಾಗಲೇ ಜಿಲ್ಲಾಧಿಕಾರಿಗಳು ವಸೂಲಾತಿ ಪ್ರಮಾಣಪತ್ರ ಹೊರಡಿಸಿದ್ದಾರೆ, ಕೆಲವು ಕಾರ್ಖಾನೆಗಳು ಎಫ್‌ಆರ್‌ಪಿ ದರಕ್ಕಿಂತ ಹೆಚ್ಚಿನ ಬಿಲ್ ಪಾವತಿ ಮಾಡಿವೆ ಎಂದರು.

ಜಲಜಾ ಗಂಗೂರ್ ಮಹಿಳಾ ಹರಿದಾಸ ಪ್ರಶಸ್ತಿಗೆ ಡಾ.ಟಿ.ಎನ್.ನಾಗರತ್ನ ಆಯ್ಕೆ



ಮೈಸೂರು, ಜೂ. 10– ಲೇಖಿಕಾ ಸಾಹಿತ್ಯ ವೇದಿಕೆ ಮತ್ತು ಸತ್ಯಜ್ಞಾನ ಪ್ರಕಾಶನ ಕೊಡಮಾಡುವ 'ಜಲಜಾ ಗಂಗೂರ್ ಮಹಿಳಾ ಹರಿದಾಸ ಪ್ರಶಸ್ತಿ– 2025'ಕ್ಕೆ ಹರಿದಾಸ ಸಾಹಿತ್ಯದ ವಿದ್ವಾಂಸರಾದ ಡಾ. ನಾಗರತ್ನ ಟಿ.ಎನ್. ಭಾಜನರಾಗಿದ್ದಾರೆ. ದಾಸ ಸಾಹಿತ್ಯದ ಮೌಲ್ಯಯುತ ಕೃತಿಗಳನ್ನು ಹೊರತಂದಿರುವ ಶೋಭಾ ದೇಶಪಾಂಡೆ, ಧಾರವಾಡ ಮತ್ತು ಡಾ.ಪ್ರಭಾವತಿ, ಬೆಂಗಳೂರು ಅವರು ಶಾಲು ಮತ್ತು ಫಲ ತಾಂಬೂಲದ ಗೌರವಕ್ಕೆ ಭಾಜನರಾಗಿದ್ದಾರೆ. ಪ್ರಶಸ್ತಿ ಪ್ರದಾನ ಕಾರ್ಯಕ್ರಮ ಜು.13 ರಂದು ಬೆಂಗಳೂರಿನಲ್ಲಿ ಆಯೋಜಿಸಲಾಗುತ್ತದೆ ಎಂದು ಲೇಖಿಕಾ ಸಾಹಿತ್ಯ ವೇದಿಕೆ ಸಂಚಾಲಕಿ ಶೈಲಜಾ ಸುರೇಶ್ ತಿಳಿಸಿದ್ದಾರೆ. ಆಯ್ಕೆ ಸಮಿತಿಯಲ್ಲಿ ಮುಕುಂದ ಗಂಗೂರ್ ಮತ್ತು ಶೈಲಜಾ ಸುರೇಶ್ ಭಾಗವಹಿಸಿದ್ದರು.

ಲೋಕಸಭೆ ಉಪಸಭಾಪತಿ ಆಯ್ಕೆ ಪ್ರಕ್ರಿಯೆ ಆರಂಭಿಸಿ

ಪ್ರಧಾನಿ ಮೋದಿಗೆ ಖರ್ಗೆ ಪತ್ರ

ನವದೆಹಲಿ, ಜೂ.10– ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಮಂಗಳವಾರ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದು, ಲೋಕ ಸಭೆಯ ಉಪಸಭಾಪತಿಯನ್ನು ಆಯ್ಕೆ ಮಾಡುವ ಪ್ರಕ್ರಿಯೆ ಆರಂಭಿಸುವಂತೆ ಒತ್ತಾಯಿಸಿದ್ದಾರೆ.

ಉಪಸಭಾಪತಿ ಸ್ಥಾನವನ್ನು ಖಾಲಿ ಬಿಡುವುದು ಭಾರತದ ಪ್ರಜಾಪ್ರಭುತ್ವ ರಾಜಕೀಯಕ್ಕೆ ಒಳ್ಳೆಯದಲ್ಲ ಮತ್ತು ಸಂವಿಧಾನದ ನಿಬಂಧನೆಗಳ ಉಲ್ಲಂಘನೆಯಾಗುತ್ತದೆ ಎಂದು ಕಾಂಗ್ರೆಸ್ ಅಧ್ಯಕ್ಷರು ಹೇಳಿದ್ದಾರೆ. ಆತ್ಮೀಯ ಪ್ರಧಾನ ಮಂತ್ರಿಗಳೇ, ಖಾಲಿ ಇರುವ ಲೋಕಸಭೆಯ ಉಪಸಭಾಪತಿಯ ಹುದ್ದೆಗೆ ಸಂಬಂಧಿಸಿದಂತೆ ಚಾಲ್ತಿಯಲ್ಲಿರುವ ಅತ್ಯಂತ ಕಳವಳಕಾರಿ ವಿಷಯವನ್ನು ನಿಮ್ಮ ಗಮನಕ್ಕೆ ತರಲು ನಾನು ಈ ಪತ್ರ ಬರೆಯುತ್ತಿದ್ದೇನೆ. ಭಾರತದ ಸಂವಿಧಾನದ 93ನೇ ವಿಧಿಯು ಲೋಕಸಭೆಯ ಸ್ಪೀಕರ್ ಮತ್ತು ಉಪಸಭಾಪತಿ ಇಬ್ಬರನ್ನೂ ಆಯ್ಕೆ ಮಾಡುವುದನ್ನು ಕಡ್ಡಾಯಗೊಳಿಸುತ್ತದೆ. ಸಾಂವಿಧಾನಿಕವಾಗಿ, ಉಪಸಭಾಪತಿ, ಸ್ಪೀಕರ್ ನಂತರ ಸದನದ ಎರಡನೇ ಅತ್ಯುನ್ನತ ಸಭಾಧ್ಯಕ್ಷರಾಗಿದ್ದಾರೆ ಎಂದು ಹೇಳಿದ್ದಾರೆ. ಹೊಸದಾಗಿ ರಚನೆಯಾದ ಲೋಕಸಭೆಯ ಎರಡನೇ ಅಥವಾ ಮೂರನೇ ಅಧಿವೇಶನದಲ್ಲಿ ಉಪಸಭಾಪತಿಯನ್ನು ಆಯ್ಕೆ ಮಾಡುವುದು ಸಂಪ್ರದಾಯ ಎಂದು ಖರ್ಗೆ ಪತ್ರದಲ್ಲಿ ತಿಳಿಸಿದ್ದಾರೆ

ಕಾಲ್ತುಳಿತ ಪ್ರಕರಣದ ತನಿಖೆಯಲ್ಲಿ ಕಾಂಗ್ರೆಸ್ ಮೂಗು ತೂರಿಸಲ್ಲ

ಬೆಂಗಳೂರು: ಆರ್‌ಸಿಬಿ ಚೊಚ್ಚಲ ಐಪಿಎಲ್ ಟ್ರೋಫಿ ಗೆಲುವಿನ ಸಂಭ್ರಮಾಚರಣೆ ವೇಳೆ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಸಂಭವಿಸಿದ ಕಾಲ್ತುಳಿತ ಪ್ರಕರಣದ ನ್ಯಾಯಾಂಗ ತನಿಖೆಯ ಸಮಯದಲ್ಲಿ ಕಾಂಗ್ರೆಸ್ ಹಸ್ತಕ್ಷೇಪ ಮಾಡುವುದಿಲ್ಲ ಎಂದು ಕಾಂಗ್ರೆಸ್ ಹೈಕಮಾಂಡ್ ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿ.ಕೆ.ಶಿವಕುಮಾರ್‌ಗೆ ತಿಳಿಸಿದೆ. ಎಐಸಿಸಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ನವ ದೆಹಲಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿ, ಬೆಂಗಳೂರಿನಲ್ಲಿ ನಡೆದ ದುರಾದೃಷ್ಟಕರ ಮತ್ತು ದುರಂತ ಕಾಲ್ತುಳಿತ ಘಟನೆ ಸೇರಿದಂತೆ ಪ್ರಸ್ತುತ ರಾಜಕೀಯ ಪರಿಸ್ಥಿತಿಯ ಬಗ್ಗೆ ನಾವು ಚರ್ಚಿಸಿದ್ದೇವೆ. ಮುಖ್ಯಮಂತ್ರಿ ಮತ್ತು ಪ್ರದೇಶ ಕಾಂಗ್ರೆಸ್ ಸಮಿತಿ (ಪಿಸಿಸಿ) ಅಧ್ಯಕ್ಷರು ಘಟನೆಯ ಬಗ್ಗೆ ಮತ್ತು ಘಟನೆಯ ನಂತರ ಕರ್ನಾಟಕ ಸರ್ಕಾರ ತೆಗೆದುಕೊಂಡ ಕ್ರಮಗಳ ಬಗ್ಗೆ ಹೈಕಮಾಂಡ್‌ಗೆ ವಿವರಿಸಿದರು.

ಖಂಡಿತ ನಾವು ಪ್ರತಿಯೊಬ್ಬ ಮಾನವ ಜೀವದ ಬಗ್ಗೆಯೂ ತುಂಬಾ ಕಾಳಜಿ ವಹಿಸುತ್ತೇವೆ. ಪ್ರತಿಯೊಂದು ಜೀವವೂ ಹೆಚ್ಚು ಮುಖ್ಯ ಎಂದು ನಂಬುವ ಪಕ್ಷ ನಮ್ಮದು, ಒಂದು ದುರಾದೃಷ್ಟಕರ ಘಟನೆ ಸಂಭವಿಸಿದೆ. ನಿಖರವಾಗಿ ಏನಾಯಿತು ಎಂಬುದನ್ನು ಕಂಡುಹಿಡಿಯಲು ಸರ್ಕಾರ ಈಗಾಗಲೇ ನ್ಯಾಯಾಂಗ ತನಿಖೆಗೆ ಆದೇಶಿಸಿದೆ ಎಂದು ಕೆ.ಸಿ.ವೇಣುಗೋಪಾಲ್ ಹೇಳಿದರು.

ನ್ಯಾಯಾಂಗ ವಿಚಾರಣೆಯ ಸಮಯದಲ್ಲಿ, ಪಕ್ಷವು ಈ ವಿಷಯದ ಸೂಕ್ಷ್ಮತೆಯನ್ನು ಪರಿಶೀಲಿಸಲು ಬಯಸುವುದಿಲ್ಲ. ಆದರೆ, ಸಾಮಾನ್ಯವಾಗಿ ಈ ಬಗ್ಗೆ ಸ್ಪಷ್ಟವಾದ ಜನಪರ ಮನೋಭಾವ ಇರಬೇಕು ಎಂದು ಪಕ್ಷವು ನಂಬಿದೆ ಎಂದು ವೇಣುಗೋಪಾಲ್ ಒತ್ತಿ ಹೇಳಿದರು.

ನಿಖಿಲ್ ಸೋಸಲೆಗೆ ಮಧ್ಯಂತರ ಪರಿಹಾರ ನಿರಾಕರಿಸಿದ ಕೋರ್ಟ್

ಬೆಂಗಳೂರು: ಆರ್‌ಸಿಬಿ ಸಂಭ್ರಮಾಚರಣೆ ವೇಳೆ ಜೂ.4ರಂದು ಚಿನ್ನಸ್ವಾಮಿ ಸ್ಟೇಡಿಯಂ ಹೊರಗೆ ಸಂಭವಿಸಿದ ಕಾಲ್ತುಳಿತದಲ್ಲಿ 11 ಜನರು ಮೃತಪಟ್ಟ ಪ್ರಕರಣದಲ್ಲಿ



ರಾಯಲ್ ಚಾಲೆಂಜರ್ಸ್ ಬೆಂಗಳೂರು (ಆರ್‌ಸಿಬಿ) ತಂಡದ ಮಾರ್ಕೆಟಿಂಗ್ ಮುಖ್ಯಸ್ಥ ನಿಖಿಲ್ ಸೋಸಲೆ ಅವರಿಗೆ ಯಾವುದೇ ಮಧ್ಯಂತರ ಪರಿಹಾರ ನೀಡಲು ಕರ್ನಾ ಟಕ ಹೈಕೋರ್ಟ್ ನಿರಾಕರಿಸಿದೆ. ನ್ಯಾಯಾಲಯವು ಅವರ ಅರ್ಜಿಯ ಮೇಲಿನ ಆದೇಶವನ್ನು ಜೂ.11 ರವರೆಗೆ ಕಾಯ್ದಿರಿಸಿದೆ. ತಮ್ಮ ಬಂಧನ ಕಾನೂನುಬಾಹಿರ, ಪೊಲೀಸ್ ಕ್ರಮವು ರಾಜಕೀಯ ನಿರ್ದೇಶನಗಳಿಂದ ಪ್ರಭಾವಿತವಾಗಿದೆ ಎಂದು ನಿಖಿಲ್ ಸೋಸಲೆ ಆರೋಪಿಸಿದ್ದಾರೆ. ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಜೂ.6ರಂದು ಆರ್‌ಸಿಬಿ ಮಾರುಕಟ್ಟೆ ವಿಭಾಗದ ಮುಖ್ಯಸ್ಥ ನಿಖಿಲ್ ಸೋಸಲೆ, ಡಿಎನ್‌ಎ ಮ್ಯಾನೇಜ್‌ಮೆಂಟ್ ಸಿಬ್ಬಂದಿ ಸುನೀಲ್ ಮ್ಯಾಥ್ಯು, ಕಿರಣ್ ಮತ್ತು ಸುಮಂತ್ ಎಂಬುವವರನ್ನು ಕೇಂದ್ರ ಅಪರಾಧ ದಳ (ಸಿಸಿಬಿ) ಬಂಧಿಸಿತ್ತು.

ನಾಳೆಗೆ ವಿಚಾರಣೆ ಮುಂದೂಡಿದ ಕೋರ್ಟ್

ಮುಚ್ಚಿದ ಲಕೋಟೆಯಲ್ಲಿ ಉತ್ತರ ಸಲ್ಲಿಸುವಂತೆ ಸರ್ಕಾರಕ್ಕೆ ಸೂಚನೆ

ಬೆಂಗಳೂರು: ಚಿನ್ನಸ್ವಾಮಿ ಸ್ಟೇಡಿಯಂ ಹೊರಗೆ ಸಂಭವಿಸಿದ ಕಾಲ್ತುಳಿತದಲ್ಲಿ 11 ಜನರು ಸಾವಿಗೀಡಾದ ಘಟನೆಗೆ ಸಂಬಂಧಿಸಿದಂತೆ ಸ್ವಯಂಪ್ರೇರಿತವಾಗಿ ದಾಖಲಿಸಿಕೊಂಡಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಿಚಾರಣೆಯನ್ನು ಜೂ.12ಕ್ಕೆ ಕರ್ನಾಟಕ ಹೈಕೋರ್ಟ್ ಮುಂದೂಡಿದೆ. ಮುಚ್ಚಿದ ಲಕೋಟೆಯಲ್ಲಿ ಉತ್ತರ ಸಲ್ಲಿಸುವಂತೆ ಅಡ್ವೊಕೇಟ್ ಜನರಲ್ ಶಶಿಕಿರಣ್ ಶೆಟ್ಟಿ ಅವರಿಗೆ ನ್ಯಾಯಾಲಯ ಆದೇಶಿಸಿದೆ. ವಿಚಾರಣೆ ವೇಳೆ ಅಡ್ವೊಕೇಟ್ ಜನರಲ್ ಶಶಿಕಿರಣ್ ಶೆಟ್ಟಿ, ನಮ್ಮ ಪ್ರತಿಕ್ರಿಯೆಯನ್ನು ನಾವಿನ್ನೂ ಸಲ್ಲಿಸಿಲ್ಲ. ಕಾಲ್ತುಳಿತಕ್ಕೆ ಸಂಬಂಧಿಸಿದಂತೆ ಹೈಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ನೇತೃತ್ವದಲ್ಲಿ ವಿಚಾರಣಾ ಆಯೋಗ ರಚಿಸಿದ್ದು, ಅದು ವರದಿ ನೀಡಲು 1 ತಿಂಗಳ ಕಾಲಾವಕಾಶ ನೀಡಲಾಗಿದೆ ಎಂದು ವಾದಿಸಿ ದರು. ಘಟನೆಗೆ ಸಂಬಂಧಿಸಿದಂತೆ ಬೆಂಗಳೂರು ಪೊಲೀಸ್ ಆಯುಕ್ತರು ಸೇರಿದಂತೆ ಐವರು ಪೊಲೀಸ್ ಅಧಿಕಾರಿಗಳನ್ನು ಅಮಾನತುಗೊಳಿಸಲಾಗಿದೆ.

ಭಾವಚಿತ್ರ ವಿಕೃತಗೊಳಿಸಿ ಮಾನಹಾನಿ

ವ್ಯಕ್ತಿ ವಿರುದ್ಧ ಎಂಎಲ್ಸಿ ಡಾ.ತಿಮ್ಮಯ್ಯ ಪೊಲೀಸರಲ್ಲಿ ದೂರು ದಾಖಲು

ಮೈಸೂರು, ಜೂ.10– ವಿಧಾನಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ ಭಾವಚಿತ್ರವನ್ನು ವಿಕೃತವಾಗಿ ಸೃಷ್ಟಿಸಿ, ಮಾನಹಾನಿ ಮಾಡಿರುವ ಆರೋಪದಡಿ ವ್ಯಕ್ತಿಯೊಬ್ಬನ ವಿರುದ್ಧ ಮೈಸೂರಿನ ಕುವೆಂಪುನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಡಾ.ಡಿ.ತಿಮ್ಮಯ್ಯ ಅವರೇ ಸ್ವತಃ ಲೋಕೇಶ್ ಕೊಳ್ಳೆಗಾಲ ವಿರುದ್ಧ ದೂರು ನೀಡಿದ್ದು, ಈತ ತಮ್ಮ ಭಾವಚಿತ್ರ ವಿಕೃತವಾಗಿ ಎಡಿಟ್ ಮಾಡಿ, ಸಾಮಾಜಿಕ ಮಾಧ್ಯಮ ಜಾಲತಾಣದಲ್ಲಿ ಹಂಚಿಕೊಳ್ಳುವ ಮೂಲಕ ತೇಜೋವಧೆ ಹಾಗೂ ಮಾನಹಾನಿ ಮಾಡಿದ್ದಾನೆ ಎಂದು ಆರೋಪಿಸಿದ್ದಾರೆ. ಅಲ್ಲದೆ ಒಳಮೀಸಲಾತಿ ಪರ ಮಾತನಾಡುವವನಂತೆ ಗುಂಪುಗಳ ನಡುವೆ ಸಂಘರ್ಷ ಸೃಷ್ಟಿಸಿ, ಸಾಮರಸ್ಯ ಹಾಳುಮಾಡುವ ಸಮಾಜಘಾತುಕನಾಗಿದ್ದು, ಈತನ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ದೂರಿನಲ್ಲಿ ತಿಳಿಸಿದ್ದಾರೆ.

ಭಾಸ್ಕರ್ ಪ್ರಸಾದ್ ಹಾಗೂ ಆತನ ಸಹಚರರು ಮೈಸೂರು ಭಾಗದಲ್ಲಿ ಪಾದಯಾತ್ರೆ ನಡೆಸಿ, ಒಳಮೀಸಲಾತಿ ಹೋರಾಟಗಾರರಂತೆ ಬಿಂಬಿಸಿಕೊಂಡು ಸರ್ಕಾರ, ಮುಖ್ಯಮಂತ್ರಿಗಳು ಹಾಗೂ ಸಚಿವರುಗಳ ಬಗ್ಗೆ ಅವಹೇಳನಕಾರಿಯಾಗಿ ಭಾಷಣ ಮಾಡುತ್ತಿದ್ದುದ್ದರ ಬಗ್ಗೆ ಈಗಾಗಲೇ ಅವರುಗಳ ವಿರುದ್ಧ ಪ್ರಕರಣ ದಾಖಲಾಗಿದೆ.

ಶಾಂತಿಯುತವಾಗಿ ನಡೆಯಬೇಕಾಗಿರುವ ಚಳವಳಿಯನ್ನು ದಿಕ್ಕುತಪ್ಪಿಸುವ ಹುನ್ನಾರ ಮತ್ತು ಸರ್ಕಾರದ ಬಗ್ಗೆ ವಿರೋಧಿ ಭಾವನೆ ಬರುವಂತೆ ಜನಸಾಮಾನ್ಯರನ್ನು ಪ್ರಚೋದಿಸುತ್ತಿದ್ದ ಹಿನ್ನೆಲೆಯಲ್ಲಿ ಸರ್ಕಾರದ ಭಾಗವಾಗಿ ವಿಧಾನಪರಿಷತ್ ಸದಸ್ಯನಾಗಿರುವ ನಾನು ಜವಾಬ್ದಾರಿಯುತವಾಗಿ ಪತ್ರಿಕಾಗೋಷ್ಠಿ ನಡೆಸಿ ಅವರುಗಳ ವರ್ತನೆಯನ್ನು ವಿರೋಧಿಸಿ, ನಮ್ಮ ಜನಾಂಗದವರು ಯಾವುದೇ ಪ್ರಚೋಧನೆಗೆ ಒಳಗಾಗದಂತೆ ಮನವಿ ಮಾಡಿದ್ದೆ. ಇದನ್ನು ಸಹಿಸದ ಭಾಸ್ಕರ್ ಪ್ರಸಾದ್ ಅನುಯಾಯಿ ಲೋಕೇಶ್ ಕೊಳ್ಳೆಗಾಲ, ನನ್ನ ಭಾವಚಿತ್ರವನ್ನು ವಿಕೃತಗೊಳಿಸಿ, ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಳ್ಳುವ ದುಷ್ಕೃತ್ಯವೆಸಗಿದ್ದಾನೆ. ವಿಕೃತಗೊಳಿಸಿರುವ ಫೋಟೋವನ್ನು ನಿಟ್ರೆ ಮಹದೇವಯ್ಯ ಅವರ ಮೊಬೈಲ್‌ಗೂ ಕಳುಹಿಸಿದ್ದಾನೆ ಎಂದು ಪೊಲೀಸರಿಗೆ ನೀಡಿರುವ ದೂರಿನಲ್ಲಿ ವಿವರಿಸಿದ್ದಾರೆ.

ಮೆಡಿಕಲ್ ಸೀಟ್ ಫಾರ್ ಸೇಲ್; ನೀಟ್‌ನಲ್ಲಿ ರ್‍ಯಾಂಕ್ ಇಲ್ಲದೆ ಇದ್ದರೂ ಕೋಟಿ ಕೊಟ್ಟರೆ ಮೆಡಿಕಲ್ ಸೀಟ್ ಕನ್ಫರ್ಮ್!!!

● ಭಾರತದಲ್ಲಿ 1 ಕೋಟಿ, ರಷ್ಯಾ ಇತರೆ ದೇಶದಲ್ಲಿ 25 ಲಕ್ಷ ● ಲೇಟ್ ಆಗಿ ಹೋದರೆ ಒಂದೂವರೆ ಕೋಟಿ ಡಿಮ್ಯಾಂಡ್ ● ಏಜೆನ್ಸಿಗಳಿಂದ ಮೆಡಿಕಲ್, ಇಂಜಿನಿಯರಿಂಗ್ ಸೀಟ್‌ಗೆ ಓಪನ್ ಆಫರ್

●ಬಾಪುಲಿಂಗರಾಜ್ ಅರಸ್

ಮೈಸೂರು, ಜೂ.10– ಮುಕ್ತ ಮಾರುಕಟ್ಟೆಯಲ್ಲಿ ವಸ್ತುಗಳನ್ನು ಮಾರಾಟ ಮಾಡುವಂತೆ ಈಗ ಎಂಬಿಬಿಎಸ್ ಹಾಗೂ ಬಿಇ ಸೀಟ್‌ಗಳು ಮಾರಾಟಕ್ಕಿವೆ. ನೀಟ್ ಅಥವಾ ಸಿಇಟಿಯಲ್ಲಿ ರ್‍ಯಾಂಕ್ ಬರದಿದ್ದರೂ ಪರ್ವಾಗಿಲ್ಲ. ಹಣ ಕೊಟ್ಟರೆ ಸಾಕು ಎಂಬಿಬಿಎಸ್ ಹಾಗೂ ಬಿಇ ಸೀಟ್‌ಗಳು ಸುಲಭವಾಗಿ ಸಿಗುತ್ತವೆ. ಹಣ ಸುರಿದರೆ ಡಾಕ್ಟರ್ ಇಲ್ಲ ಇಂಜಿನಿಯರ್ ಆಗುವುದು ಕಷ್ಟದ ಮಾತಲ್ಲ.

ಇತ್ತೀಚಿಗೆ ಕೆಲಸಕ್ಕೆ ಸೇರುವುದಿರಲಿ, ಮೊದಲು ಶಾಲಾ–ಕಾಲೇಜುಗಳಲ್ಲಿ ಸೀಟ್ ಪಡೆಯುವುದು ಮಹಾ ಸವಾಲಿನ ಸಂಗತಿ. ಮೈಸೂರಿನ ಶಾಲೆಗಳಲ್ಲಿ ಪ್ರವೇಶ ಪಡೆಯಲು ಶುಲ್ಕ, ಡೊನೇಷನ್ ಅಂತಾ ಲಕ್ಷ ಲಕ್ಷವಾದರೆ, ಸಿಲಿಕಾನ್ ಸಿಟಿ ಬೆಂಗಳೂರಿನ ಶಾಲೆಗಳಲ್ಲಿ ಎರಡೂವರೆಯಿಂದ ಮೂರು ಲಕ್ಷ ರೂಪಾಯಿ ಆಗಲಿದೆ. ಅದರಲ್ಲಿ ಸ್ಟೇಟ್ ಸಿಲಬಸ್, ಸಿಬಿಎಸ್‌ಇ ಅಂತಾ ವ್ಯತ್ಯಾಸ ಬೇರೆ.

ಇನ್ನು ಎಂಬಿಬಿಎಸ್ ಸೀಟ್ ಅಂತೂ ಕೆಲವರ ಪಾಲಿಗೆ ಮರೀಚಿಕೆಯೇ ಸರಿ. ನೀಟ್‌ನಲ್ಲಿ ಉತ್ತಮ ರ್‍ಯಾಂಕ್ ಸಿಗಲಿಲ್ಲವೆಂದರೆ ಪೇಮೆಂಟ್ ಸೀಟ್ ಪಡೆಯಬೇಕು. ಹಣವಂತರೇನೋ ಕೋಟಿ ಕೊಟ್ಟು ಎಂಬಿಬಿಎಸ್ ಸೀಟ್ ಪಡೆಯುತ್ತಾರೆ. ಆದರೆ ನೀಟ್‌ನಲ್ಲಿ ಉತ್ತಮ ರ್‍ಯಾಂಕ್ ಬರದಿದ್ದರೆ ಪೇಮೆಂಟ್ ಕೋಟಾದಲ್ಲಿ ಪ್ರವೇಶ ಪಡೆಯುವುದು ಸಾಮಾನ್ಯ ಜನರಿಗೆ ಸಾಧ್ಯವಾಗದ ಮಾತು. ಆದರೆ ಹಣವಂತರು ಎಂಬಿಬಿಎಸ್ ಹಾಗೂ ಬಿಇ ಸೀಟ್ ಪಡೆಯಲು ಲಕ್ಷದಿಂದ ಕೋಟಿ ತನಕ ಹಣ ಸುರಿಯುತ್ತಾರೆ. ತಮ್ಮ ಮಕ್ಕಳಿಗೆ ಕಡಿಮೆ ಅಂಕ ಬಂದರೂ ಪರ್ವಾಗಿಲ್ಲ ಡಾಕ್ಟರ್ ಆಗಬೇಕು. ಇಲ್ಲವೆ ಇಂಜಿನಿಯರ್ ಆಗಬೇಕೆಂಬ ಅಭಿಲಾಷೆ ಹೊಂದಿರುತ್ತಾರೆ.

ಎಂಬಿಬಿಎಸ್ ಸೀಟ್ ಪಡೆಯಲು ಕೋಟಿ ಹಣ ನೀಡುತ್ತೇವೆ ಎಂದರೂ ಸೀಟ್ ಪಡೆಯುವುದು ಕಷ್ಟ, ಪೇಮೆಂಟ್ ಕೋಟಾದಡಿ ಸೀಟ್ ಗಿಟ್ಟಿಸಲು ಪ್ರಾಪರ್ ಚಾನೆಲ್ ಗೊತ್ತಿರಬೇಕು. ಇದು ಒಂದು ರೀತಿಯ ದಂಧೆ ಆಗಿರುವ ಕಾರಣ ಮೆಡಿಕಲ್ ಹಾಗೂ ಇಂಜಿನಿಯರಿಂಗ್ ಕಾಲೇಜಲ್ಲಿ ಸಾಮಾನ್ಯವಾಗಿ ನೇರಾ ನೇರ ವ್ಯವಹರಿಸಿ ಸೀಟ್ ಗಿಟ್ಟಿಸಲು ಸಾಧ್ಯವಿಲ್ಲ.


ಹಾಗಾಗಿ ಮೆಡಿಕಲ್ ಸೀಟ್ ಹಾಗೂ ಇಂಜಿನಿಯರಿಂಗ್ ಸೀಟ್‌ಗೆ ಈಗ ಏಜೆನ್ಸಿಗಳು ಹುಟ್ಟಿಕೊಂಡಿವೆ. ಇವುಗಳ ಜಾಲ ತಿಳಿಯದವರಿಗೆ ಎಂಬಿಬಿಎಸ್ ಅಥವಾ ಬಿಇ ಸೀಟ್ ಪಡೆಯುವುದು ಕಷ್ಟಕರ ಸಂಗತಿ. ಆದರೆ, ಈಗ ಏಜೆನ್ಸಿಗಳು ಮಾರುಕಟ್ಟೆಯಲ್ಲಿ ವಸ್ತುಗಳನ್ನು ಮಾರಾಟ ಮಾಡಿದಂತೆ ಎಂಬಿಬಿಎಸ್ ಹಾಗೂ ಬಿಇ ಸೀಟ್‌ಗಳನ್ನು ಮಾರಾಟ ಮಾಡುತ್ತಿವೆ. ಕಾಲೇಜಿನ ಆಡಳಿತ ಮಂಡಳಿಯ ಜೊತೆ ಒಪ್ಪಂದ ಮಾಡಿಕೊಂಡು ಸೀಟ್ ಕೊಡಿಸುವುದಾಗಿ ಏಜೆನ್ಸಿಗಳು ಸೋಷಿಯಲ್ ಮೀಡಿಯಾ ಮೂಲಕ ಆಫರ್ ನೀಡುತ್ತಿವೆ.

ವೈದ್ಯಕೀಯ ಕ್ಷೇತ್ರ ಹಣ ಮಾಡುವ ದಂಧೆ!

'ವೈದ್ಯೋ ನಾರಾಯಣ ಹರಿ' ಎನ್ನುತ್ತಾರೆ. ಅಂದರೆ, ರೋಗಿಗಳ ಪಾಲಿಗೆ ದೇವರಿದ್ದಂತೆ ಎನ್ನುತ್ತಾರೆ. ಆದರೆ ಈಗ ರೋಗಿಗಳ ಸೇವೆ ಮಾಡುವ ವೈದ್ಯಕೀಯ ಕ್ಷೇತ್ರ ಹಣ ಮಾಡುವ ದಂಧೆಯಾಗಿ ಪರಿಣಮಿಸಿದೆ.

ವೈದ್ಯನಾದವನು ವಿಷಯ ಪ್ರಾವೀಣ್ಯತೆ ಹೊಂದಿರಬೇಕು. ಅಂತಹವರು ಉತ್ತಮ ರೀತಿ ವೈದ್ಯಕೀಯ ಸೇವೆ ಮಾಡಬಲ್ಲರು. ಆದರೆ ಈಗ ಕೋಟಿ ಹಣ ಕೊಟ್ಟು ಮೆಡಿಕಲ್ ಸೀಟ್ ಗಿಟ್ಟಿಸುವವರು ವೈದ್ಯನಾದರೆ ಅವನಿಂದ ವೈದ್ಯ ವೃತ್ತಿಯಲ್ಲಿ ಏನು ನಿರೀಕ್ಷೆ ಮಾಡಲು ಸಾಧ್ಯ ಎಂಬ ಆತಂಕ ಸಹಜವಾಗಿ ಸೃಷ್ಟಿಯಾಗುತ್ತದೆ.

ಕೋಟಿ ಕೊಟ್ಟು ಮೆಡಿಕಲ್ ಸೀಟ್ ಪಡೆಯುವವನು ವೈದ್ಯಕೀಯ ಪದವಿ ಪಡೆದು, ಹಾಕಿರುವ ಬಂಡವಾಳ ವಾಪಸು ಪಡೆಯಲು ಒಂದು ವೇಳೆ ಸರ್ಕಾರಿ ವೈದ್ಯರಾದರೆ 'ಮಾಮೂಲಿ' ಇಲ್ಲ ಖಾಸಗಿಯಾಗಿ ಪ್ರಾಕ್ಟೀಸ್ ಮಾಡಿದರೂ ಹಣ ಮಾಡದೇ ಇರುತ್ತಾರೆಯೇ...!? ಈ ಮಾರ್ಗದಲ್ಲಿ ವೈದ್ಯಕೀಯ ಸೀಟು ಪಡೆಯುವವರಿಗೆ ನಿರ್ದಿಷ್ಟ ಅಂಕ ಗಳಿಸಿರಲೇಬೇಕು ಎಂಬ ನಿಯಮವೇನು ಸಾಮಾನ್ಯವಾಗಿ ಇರಲ್ಲ. ಹಾಗಾಗಿ, ಇಂತಹವರು ವೈದ್ಯಕೀಯ ಪದವಿ ಪಡೆದರೆ ಅವರಿಂದ ಗುಣಮಟ್ಟದ ಸೇವೆಯನ್ನು ಯಾವ ರೀತಿ ನಿರೀಕ್ಷಿಸಬಹುದು? ನೆನೆಸಿಕೊಂಡರೆ ಯಾರಿಗಾದರೂ ಆತಂಕವಾಗದೇ ಇರದು.



ಕರ್ನಾಟಕ, ಪ್ಯಾನ್ ಇಂಡಿಯಾದಲ್ಲಿ ಸೀಟ್ ಲಭ್ಯ

ಕರ್ನಾಟಕ ಮತ್ತು ಪ್ಯಾನ್ ಇಂಡಿಯಾ ವೈದ್ಯಕೀಯ ಸೀಟುಗಳು ಸುಲಭ ರೀತಿ ಲಭ್ಯವಿರುವಾಗ ದೀರ್ಘಾವಧಿ ಪ್ರಕ್ರಿಯೆಯು ನೀಟ್ ಮೇಲೆ ಅವಲಂಬಿತರಾಗಿರುವುದೇಕೆ ಎಂದು ಏಜೆನ್ಸಿಗಳು ಪ್ರಶ್ನಿಸಿವೆ. ಇಲ್ಲಿ ನಿಮಗೆ ಬೇಕಾದ ಕಾಲೇಜಿನಲ್ಲಿ ಮೆಡಿಕಲ್, ಇಂಜಿನಿಯರಿಂಗ್ ಸೀಟ್ ಕೊಡಿಸುತ್ತೇವೆ ಎಂದು ಏಜೆನ್ಸಿಗಳು ಆಫರ್ ನೀಡುತ್ತಿವೆ. ದೇಶಾದ್ಯಂತ ಬಹುತೇಕ ವೈದ್ಯಕೀಯ ಕಾಲೇಜುಗಳೊಂದಿಗೆ ನಾವು ಸಂಪರ್ಕ ಹೊಂದಿರುವ ಕಾರಣ ನಿಮಗೆ ಶೇಕಡ 100 ಭರವಸೆಯೊಂದಿಗೆ ಸೀಟ್ ಖಾತರಿ ನೀಡುತ್ತೇವೆ. ಮೆಡಿಕಲ್ ಕಾಲೇಜುಗಳ ಅಧಿಕೃತ ಬ್ಯಾಂಕ್ ಖಾತೆಗಳಿಗೆ ಡಿಡಿ, ಚೆಕ್ ಮೂಲಕ ಹಣ ಸಂದಾಯ ಮಾಡುವುದರಿಂದ ನಿಮ್ಮ ಹಣಕ್ಕೆ ಭದ್ರತೆ ಇರುತ್ತದೆ. ನಾವು ಅಡ್ವಾನ್ಸ್ ಆಗಿ ನಿಮ್ಮ ಬಳಿ ಹಣ ಕೇಳುವುದಿಲ್ಲ. ಆದರೆ ಸೀಟ್ ದೊರೆತ ನಂತರ ಪ್ರೀಮಿಯಂ ಕೌನ್ಸೆಲಿಂಗ್ ಸರ್ವಿಸ್ ಚಾರ್ಜ್ ಪಡೆಯುತ್ತೇವೆ. ಇದು ನಿಮ್ಮ ಪಾಲಿಗೆ ಪಾಕೆಟ್ ಸ್ನೇಹಿಯಾಗಿದೆ ಎಂದು ಏಜೆನ್ಸಿಗಳು ಭರವಸೆ ನೀಡುತ್ತಿವೆ.

ಭಾರತದ ಮೆಡಿಕಲ್ ಕಾಲೇಜುಗಳಲ್ಲಿ ಎಂಬಿಬಿಎಸ್ ಸೀಟ್ ಒಂದು ಕೋಟಿ ರೂಪಾಯಿಯಾದರೆ, ರಷ್ಯಾ ಸೇರಿದಂತೆ ಕೆಲವು ರಾಷ್ಟ್ರಗಳಲ್ಲಿ 25 ಲಕ್ಷವಾಗಲಿದೆ. ಕಾಲೇಜಿನ ಆಡಳಿತ ಮಂಡಳಿ ಜೊತೆ ಒಪ್ಪಂದ ಮಾಡಿಕೊಂಡಿರುವ ಇಂತಹ ಏಜೆನ್ಸಿಗಳು ಎಂಬಿಬಿಎಸ್ ಮತ್ತು ಬಿಇ ಸೀಟ್‌ಗಳನ್ನು ಮಾರಾಟಕ್ಕಿಟ್ಟಿವೆ.

ಎಂಬಿಬಿಎಸ್ ಸೀಟ್‌ಗಾಗಿ ಮೆಡಿಕಲ್ ಕಾಲೇಜುಗಳಿಗೆ ಅಲೆಯಬೇಡಿ. ನಮಗೆ ಹಣ ಕೊಟ್ಟರೆ ಸುಲಭವಾಗಿ ಸೀಟ್ ಕೊಡಿಸುತ್ತೇವೆ ಎಂದು ಏಜೆನ್ಸಿಗಳು ಆಫರ್ ನೀಡುತ್ತಿವೆ. ಪೇಮೆಂಟ್ ಕೋಟಾದಲ್ಲಿ ತಾವು ಸೀಟ್ ಕೊಡಿಸುವ ಮೆಡಿಕಲ್ ಕಾಲೇಜುಗಳ ಪಟ್ಟಿಯನ್ನು ಈ ಏಜೆನ್ಸಿಗಳು ನೀಡುತ್ತಿವೆ ಮೆಡಿಕಲ್ ಸೀಟ್‌ಗೆ ಒಂದು ಕೋಟಿ, ಆರಂಭದಲ್ಲೇ ಹಣ ಕೊಟ್ಟು ಸೀಟ್ ಬುಕ್ ಮಾಡಬೇಕು. ತಡವಾಗಿ ಬಂದರೆ ಒಂದೂವರೆ ಕೋಟಿ ರೂಪಾಯಿಯಾಗಲಿದೆ ಎಂದು ತರಾತುರಿ ಬೇರೆ ಮಾಡುತ್ತಿವೆ.

ಒಳಮೀಸಲಾತಿ ಜಾರಿವರೆಗೆ ಬಡ್ತಿಗೆ ತಡೆ ನೀಡಲು ಸಿಎಂ ನಕಾರ; ಒಳಮೀಸಲಾತಿ ಹೋರಾಟಗಾರರ ಆಕ್ರೋಶ

ಮುಖ್ಯಮಂತ್ರಿ ಸಿದ್ದರಾಮಯ್ಯ 'ಉಲ್ಟಾ' ನಿಲುವಿಗೆ ಬೇಸರ



ಬೆಂಗಳೂರಿನ ಫ್ರೀಡಂಪಾರ್ಕ್‌ನಲ್ಲಿ ಸೋಮವಾರ ಮಾದಿಗ ಒಳಮೀಸಲಾತಿ ಹೋರಾಟ ಸಮಿತಿ ನೇತೃತ್ವದಲ್ಲಿ ಬಡ್ತಿ ನಿಲ್ಲಿಸಿ, ಒಳಮೀಸಲಾತಿ ಜಾರಿಗಾಗಿ ಒತ್ತಾಯಿಸಿ ಮಾದಿಗರ ಕ್ರಾಂತಿಕಾರಿ ಸಂಘರ್ಷ ಸಮಾವೇಶ ನಡೆಯಿತು.

ಮೈಸೂರು, ಜೂ.10– ಪರಿಶಿಷ್ಟ ಜಾತಿ ಒಳಮೀಸಲಾತಿ ವರ್ಗೀಕರಣ ಜಾರಿಯಾಗುವವರೆಗೆ ಎಸ್‌ಸಿ ಮೀಸಲಾತಿಯಡಿ ಸರ್ಕಾರಿ ನೌಕರರ ಬಡ್ತಿ ಪ್ರಕ್ರಿಯೆ ಸ್ಥಗಿತಗೊಳಿಸುವುದಾಗಿ ತಿಳಿಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮಾತು ತಪ್ಪಿರುವ ಕಾರಣ ವಾರದ ನಂತರ ಮಾದಿಗ ಜನಾಂಗದ ಹೋರಾಟ ಮುಂದುವರೆಯಲಿದೆ ಎಂದು ಕರ್ನಾಟಕ ರಾಜ್ಯ ಸಾಮಾಜಿಕ ನ್ಯಾಯಪರ ವಕೀಲರ ವೇದಿಕೆ ಅಧ್ಯಕ್ಷರೂ ಆದ ಮೈಸೂರಿನ ಹಿರಿಯ ವಕೀಲ ಎಸ್.ಅರುಣ್‌ಕುಮಾರ್ ತಿಳಿಸಿದ್ದಾರೆ.

ಮಾದಿಗ ಒಳಮೀಸಲಾತಿ ಹೋರಾಟ ಸಮಿತಿ ನೇತೃತ್ವದಲ್ಲಿ ಬೆಂಗಳೂರಿನಲ್ಲಿ ನಿನ್ನೆ ನಡೆದ ಮಾದಿಗರ ಕ್ರಾಂತಿಕಾರಿ ಸಂಘರ್ಷ ಸಮಾವೇಶದ ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯನವ ರೊಂದಿಗೆ ನಡೆದ ಚರ್ಚೆಯಲ್ಲಿ ನಮ್ಮ ಜನಾಂಗಕ್ಕೆ ನ್ಯಾಯದ ಭರವಸೆ ಸಿಕ್ಕಿಲ್ಲ. ಈ ಹಿನ್ನೆಲೆಯಲ್ಲಿ ವಾರದ ನಂತರ ಹೋರಾಟ ಮುಂದುವರೆಸಲು ನಿರ್ಧರಿಸಲಾಗಿದೆ ಎಂದರು.

ಪರಿಶಿಷ್ಟ ಜಾತಿಯಲ್ಲಿ ಒಳಮೀಸಲಾತಿ ವರ್ಗೀಕರಣ ಆಗುವವರೆಗೂ ಹೊಸ ನೇಮಕಾತಿ, ಬ್ಯಾಕ್‌ಲಾಗ್ ಹುದ್ದೆ ಭರ್ತಿ ಹಾಗೂ ಪರಿಶಿಷ್ಟ ಜಾತಿಗೆ ಸಂಬಂಧಿಸಿದ ಸರ್ಕಾರಿ ನೌಕರರ ಬಡ್ತಿಯನ್ನು ಸ್ಥಗಿತಗೊಳಿಸಬೇಕು ಎಂಬುದು ನಮ್ಮ ಬೇಡಿಕೆ. ಒಳಮೀಸಲಾತಿ ಬಗ್ಗೆ 2024ರ ಆ.1ರಂದು ಸುಪ್ರೀಂಕೋರ್ಟ್ ತೀರ್ಪು ಪ್ರಕಟಿಸಿದ ಎರಡು ದಿನಗಳಲ್ಲೇ ಒಳಮೀಸಲಾತಿ ಜಾರಿಗೆ ಕರ್ನಾಟಕ ರಾಜ್ಯ ನ್ಯಾಯಪರ ವಕೀಲರ ವೇದಿಕೆ ಹೋರಾಟ ಆರಂಭಿಸಿತು. ನಂತರದಲ್ಲಿ ರಾಜ್ಯಾದ್ಯಂತ ಹೋರಾಟಗಳು ನಡೆದವು. ಒಳಮೀಸಲಾತಿ ವರ್ಗೀಕರಣಕ್ಕೆ ಎಷ್ಟು ಸಮಯಾವಕಾಶ ತೆಗೆದುಕೊಂಡರೂ ಆಕ್ಷೇಪವಿಲ್ಲ, ಆದರೆ ಅಲ್ಲಿಯವರೆಗೂ ಮೀಸಲಾತಿ ಬಡ್ತಿ ನಿಲ್ಲಿಸಬೇಕು ಎಂಬ ನಮ್ಮ ಮನವಿಗೆ ಸ್ಪಂದಿಸಿಲ್ಲ.



ಅರುಣ್‌ಕುಮಾರ್

ಆದ್ದರಿಂದ ನಿನ್ನೆ ಸಮಾವೇಶದ ನಂತರ ಮುಖ್ಯಮಂತ್ರಿಗಳು ಭೇಟಿಯಾಗಬೇಕು ಇಲ್ಲದಿದ್ದರೆ ವಿಧಾನಸೌಧಕ್ಕೆ ಮುತ್ತಿಗೆ ಹಾಕುತ್ತೇವೆ ಎಂದು ಪಟ್ಟು ಹಿಡಿದೆವು. ಪರಿಸ್ಥಿತಿ ಬಿಗಡಾಯಿಸಿದ್ದರಿಂದ ಗೃಹ ಕಚೇರಿ ಕೃಷ್ಣದಲ್ಲಿ ಮುಖ್ಯಮಂತ್ರಿಗಳ ಭೇಟಿಗೆ ಸಮಯ ನಿಗದಿಪಡಿಸಿದರು. ನಾನು, ಭಾಸ್ಕರ್ ಪ್ರಸಾದ್ ಸೇರಿ ಹತ್ತು ಮುಖಂಡರು ಸಿಎಂ ಭೇಟಿಯಾದೆವು. ಆ ವೇಳೆ ಸಿಎಂ ಪ್ರಾಯೋಗಿಕ ದತ್ತಾಂಶವುಳ್ಳ ಎಂಪಿರಿಕಲ್ ಡಾಟಾ ಇಲ್ಲ ಎಂದರು. ಆದರೆ ಸದಾಶಿವ ಆಯೋಗ, ಎ.ಜೆ.ಮಾಧುಸ್ವಾಮಿ ಕಮಿಟಿ, ಕಾಂತರಾಜ ಆಯೋಗ, ಹಾವನೂರು ಆಯೋಗ ಹೀಗೆ ಎಲ್ಲಾ ಆಯೋಗಗಳ ವರದಿಯಲ್ಲಿ ಎಂಪಿರಿಕಲ್ ಡಾಟಾ ಇದೆ. ಅದರಲ್ಲೂ ಸದಾಶಿವ ಆಯೋಗ ಹಾಗೂ ಮಾಧುಸ್ವಾಮಿ ವರದಿಯಲ್ಲಿ ಪರಿಶಿಷ್ಟ ಜಾತಿ ಬಗ್ಗೆ ಪ್ರತ್ಯೇಕ ಮಾಹಿತಿಯೂ ಇದೆ ಎಂದು ತಿಳಿಸಿದೆವು.

ಆಗ ಮುಖ್ಯಮಂತ್ರಿಗಳು, ಸದಾಶಿವ ಆಯೋಗದ ವರದಿಯನ್ನು ಬಿಜೆಪಿಯವರು ಮುಚ್ಚಿದ್ದಾರೆ ಎಂದರು. ಯಾವುದೇ ಸರ್ಕಾರ ಯಾವ ಆಯೋಗದ ವರದಿಯನ್ನೂ ಮುಚ್ಚಲು ಸಾಧ್ಯವಿಲ್ಲ ಆ ವರದಿಯಲ್ಲಿದ್ದ ಪರಿಶಿಷ್ಟ ಜಾತಿ ಮೀಸಲಾತಿಯನ್ನು ಶೇ.15ರಿಂದ 17ಕ್ಕೆ ಮಾಧುಸ್ವಾಮಿ ಕಮಿಟಿ ಹೆಚ್ಚಿಸಿ, ಶಿಫಾರಸು ಮಾಡಿತ್ತು. ಇದರ ಹೊರತಾಗಿ ವರದಿ ಮುಚ್ಚಿಲ್ಲ ಎಂದು ತಿಳಿಸಿದೆ. ನಂತರ ಆ ಬಗ್ಗೆ ಮಾಹಿತಿ ಪಡೆದು ಸುಮ್ಮನಾದರು.

ಇನ್ನು ಕಳೆದ ಏಪ್ರಿಲ್ 5ರಂದು ಬಾಬು ಜಗಜೀವನ್‌ರಾಂ ಜಯಂತಿ ಸರ್ಕಾರಿ ಕಾರ್ಯಕ್ರಮದಲ್ಲಿ ನೀವು, ಒಳಮೀಸಲಾತಿ ಸಮೀಕ್ಷೆ ವರದಿ ಬರುವವರೆಗೆ ಬಡ್ತಿ ನಿಲ್ಲಿಸುವುದಾಗಿ ಹೇಳಿದ್ದೀರಿ. ಆದರೆ ಬಡ್ತಿ ಪ್ರಕ್ರಿಯೆ ನಡೆಯುತ್ತಲೇ ಇದೆ. ಹೈದರಾಬಾದ್ ಕರ್ನಾಟಕಕ್ಕೆ ವಿಶೇಷ ಸ್ಥಾನಮಾನ ಕಲ್ಪಿಸುವ ಆರ್ಟಿಕಲ್ 371 ಜೆ ಜಾರಿಯಾಗುವವರೆಗೆ, ಬಡ್ತಿಗೆ ಸಂಬಂಧಿಸಿದ ಪವಿತ್ರ ಪ್ರಕರಣ ನ್ಯಾಯಾಲಯದಲ್ಲಿ ವಿಚಾರಣೆ ನಡೆಯುವಾಗ, ನಾಗಮೋಹನ್ ದಾಸ್ ಶಿಫಾರಸು ಸಿದ್ಧಪಡಿಸುವಾಗ ಸೇರಿದಂತೆ ಹಲವು ಸಂದರ್ಭಗಳಲ್ಲಿ ಬಡ್ತಿ ನಿಲ್ಲಿಸಲಾಗಿತ್ತು. ಆದರೆ ಮಾದಿಗರಿಗೆ ಅನ್ಯಾಯವಾಗುವಾಗ ಈಗ ಏಕೆ ಬಡ್ತಿ ನಿಲ್ಲಿಸುತ್ತಿಲ್ಲ? ಎಂದು ಪ್ರಶ್ನಿಸಿದ್ದಕ್ಕೆ, ಬಡ್ತಿ ನಿಲ್ಲಿಸುವುದು ಕಾನೂನು ಬಾಹಿರ. ನಾನು ಹಾಗೆ ಹೇಳಿಯೇ ಇಲ್ಲ. ಏನಾದರೂ ಹೇಳಿದ್ದರೆ ನನ್ನಿಂದ ತಪ್ಪಾಗಿದೆ ಎಂದು ಸಿಎಂ ಸಮರ್ಥಿಸಿಕೊಂಡರು.

ಒಳಮೀಸಲಾತಿ ಸಮೀಕ್ಷೆ ಅವಧಿಯನ್ನು ವಿಸ್ತರಿಸಿಕೊಂಡು ಬರಲಾಗುತ್ತಿದೆ ಏಪ್ರಿಲ್ 5ರಿಂದ 20ರವರೆಗೆ ಮೊದಲ ಹಂತದ ಸಮೀಕ್ಷೆಯನ್ನು ಏ.25ಕ್ಕೆ ನಂತರ ಮೇ 1, ಜೂ.9, ಈಗ ಜೂ.22ರವರೆಗೆ ವಿಸ್ತರಣೆ ಮಾಡಿದ್ದಾರೆ. ಯಾವ ಅಂಶದ ಆಧಾರದಲ್ಲಿ ಶೇ.80 ರಷ್ಟು ಸಮೀಕ್ಷೆ ಮುಗಿದಿದೆ ಎನ್ನುತ್ತಿದ್ದಾರೆ ಎನ್ನುವುದೇ ಯಕ್ಷಪ್ರಶ್ನೆ, ನಾಗ ಮೋಹನ್ ದಾಸ್ ಅವರ ಮಧ್ಯಂತರ ವರದಿ ಆಧಾರದಲ್ಲಿ ಒಳಮೀಸಲಾತಿ ಜಾರಿಗೊಳಿಸಿ, ಕೇಂದ್ರದ ಸಮೀಕ್ಷಾ ವರದಿ ಬಂದ ನಂತರ ಮುಂದಿನ ಕ್ರಮ ಕೈಗೊಳ್ಳಬಹುದಲ್ಲವೇ ಎಂದರೂ ಸ್ಪಷ್ಟ ಉತ್ತರ ಸಿಗಲಿಲ್ಲ. ಸದಾಶಿವ ಆಯೋಗವನ್ನು ಬಿಜೆಪಿ ಸರ್ಕಾರ ಮುಚ್ಚಿದೆ ಎನ್ನುವುದಾದರೆ 2023ರ ಚುನಾವಣೆಯ ಕಾಂಗ್ರೆಸ್ ಪ್ರಣಾಳಿಕೆಯಲ್ಲಿ ನಾವು ಅಧಿಕಾರಕ್ಕೆ ಬಂದರೆ ಮೊದಲ ಸಭೆಯಲ್ಲೇ ಸದಾಶಿವ ಆಯೋಗದ ವರದಿ ಜಾರಿಗೊಳಿಸುತ್ತೇವೆ ಎಂದು ಏಕೆ ಭರವಸೆ ನೀಡಿದ್ದೀರಿ? ಎಂದು ಎಸ್.ಅರುಣ್‌ಕುಮಾರ್ ಪ್ರಶ್ನಿಸಿದರು.

ಬಡ್ತಿ ನೇಮಕಾತಿಯಲ್ಲಿ ಭ್ರಷ್ಟಾಚಾರ; ಒಳಮೀಸಲಾತಿ ಹೋರಾಟಗಾರ ಭಾಸ್ಕರ್ ಪ್ರಸಾದ್ ಆರೋಪ

ಮೈಸೂರು, ಜೂ.10– ಸರ್ಕಾರಿ ನೌಕರರ ಬಡ್ತಿ ನೇಮಕಾತಿಯಲ್ಲಿ ಭ್ರಷ್ಟಾಚಾರ ಅಡಗಿರುವುದರಿಂದಲೇ ಪರಿಶಿಷ್ಟ ಜಾತಿ ಒಳಮೀಸಲಾತಿ ಜಾರಿಗೆ ರಾಜ್ಯ ಸರ್ಕಾರ ಹಿಂದೇಟು ಹಾಕುತ್ತಿದೆ ಎಂದು ಒಳಮೀಸಲಾತಿ ಹೋರಾಟಗಾರ ಬಿ.ಆರ್.ಭಾಸ್ಕರ್ ಪ್ರಸಾದ್ ಆರೋಪಿಸಿದ್ದಾರೆ.



ಬೆಂಗಳೂರಲ್ಲಿ ನಿನ್ನೆ ಮಾದಿಗ ಜನಾಂಗದ ಮುಖಂಡರು ಮುಖ್ಯಮಂತ್ರಿಗಳೊಂದಿಗೆ ಚರ್ಚೆ ನಡೆಸಿದ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಬಾಬು ಜಗಜೀವನ್‌ರಾಂ ಅವರ ಜಯಂತಿ ಕಾರ್ಯಕ್ರಮದಲ್ಲಿ ಬಡ್ತಿ ನಿಲ್ಲಿಸುವುದಾಗಿ ಭರವಸೆ ನೀಡಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಈಗ ಉಲ್ಟಾ ಹೊಡೆದಿದ್ದಾರೆ. ನ್ಯಾ.ನಾಗಮೋಹನ್ ದಾಸ್ ಆಯೋಗದ ಸಮೀಕ್ಷೆಗೆ ಅವಧಿ ವಿಸ್ತರಣೆ ಮಾಡುವ ಮೂಲಕ ಮಾದಿಗ ಸಮುದಾಯಕ್ಕೆ ಅನ್ಯಾಯ ಮಾಡುತ್ತಿದ್ದಾರೆ. ಬಡ್ತಿ ಖಾಲಿ ಮಾಡುವವರೆಗೂ ಒಳಮೀಸಲಾತಿ ಜಾರಿ ಮಾಡುವುದಿಲ್ಲ. ಬಡ್ತಿ ನೇಮಕಾತಿಯಲ್ಲಿ ಭ್ರಷ್ಟಾಚಾರ ಅಡಗಿರುವುದರಿಂದಲೇ ಹೀಗೆ ವಿಳಂಬ ಮಾಡುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಯಾವುದೇ ಸಮುದಾಯದ ಸರ್ಕಾರಿ ನೌಕರರನ್ನು ಅನ್ಯಾಯಕ್ಕೊಳಪಡಿಸಿದರೆ ಆ ಸಮುದಾಯದ ಅಭಿವೃದ್ಧಿ ಸಾಧ್ಯವೇ ಇಲ್ಲ. ಯಾವ ರಾಜ್ಯಗಳಲ್ಲಿ ಒಳಮೀಸಲಾತಿ ಜಾರಿಯಲ್ಲಿದೆ ಎಂಬ ಮಾಹಿತಿಯೂ ಮುಖ್ಯಮಂತ್ರಿಗಳಿಗಿಲ್ಲ. ನಾವು ಏನೇ ಹೇಳಿದರೂ ಒಪ್ಪುವ ಮನಃಸ್ಥಿತಿ ಅವರಿಗಿಲ್ಲ. ಒಳಮೀಸಲಾತಿ ಜಾರಿಯಾಗುವರೆಗೆ ಬಡ್ತಿ ನಿಲ್ಲಿಸುವುದಾಗಿ ನಾನು ಹೇಳಿದ್ದರೆ ಅದು ತಪ್ಪಾಗಿದೆ ಎಂದು ಸಲೀಸಾಗಿ ಹೇಳುತ್ತಾರೆ. ಮಾದಿಗ ಸಮುದಾಯದ ಗೋಳು, ಶಾಪ ಸರ್ಕಾರಕ್ಕೆ ತಟ್ಟುತ್ತದೆ. ಮುಂದಿನ ಚುನಾವಣೆಯಲ್ಲಿ ಅವರ ಕಣ್ಣಲ್ಲಿ ನೀರಲ್ಲ, ರಕ್ತ ಹರಿಯುವಂತೆ ನಾವು ಮಾಡುತ್ತೇವೆ ಎಂದು ಹೇಳಿದ್ದಾರೆ.

ದೇಶ – ವಿದೇಶ

ಅಮೆರಿಕದ ವಿಮಾನ ನಿಲ್ದಾಣದಲ್ಲಿ ಭಾರತೀಯ ವಿದ್ಯಾರ್ಥಿ ಕೈಗೆ ಕೋಳ ಹಾಕಿ ಚಿತ್ರಹಿಂಸೆ

ನ್ಯೂಜೆರ್ಸಿ: ಅಮೆರಿಕದ ವಿಮಾನ ನಿಲ್ದಾಣವೊಂದರಲ್ಲಿ



ಭಾರತೀಯ ವಿದ್ಯಾರ್ಥಿಯೊಬ್ಬನ ಕೈಗೆ ಕೋಳ ಹಾಕಿ, ನೆಲಕ್ಕೆ ಕೆಡವಿ, ಹಿಂಸೆ ಕೊಟ್ಟಿರುವ ವಿಡಿಯೋಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ. ನ್ಯೂಜೆರ್ಸಿಯ ನ್ಯೂಯಾರ್ಕ್ ವಿಮಾನ ನಿಲ್ದಾಣದಲ್ಲಿ ಈ ಅಮಾನವೀಯ ಘಟನೆ ನಡೆದಿದ್ದು, ವಿಮಾನ ನಿಲ್ದಾಣದ ಅಧಿಕಾರಿಗಳು ಭಾರತೀಯ ವಿದ್ಯಾರ್ಥಿಯನ್ನು ಗಡಿಪಾರು ಮಾಡುವ ಮುನ್ನ ಆತನ ಕೈಗೆ ಕೋಳ ಹಾಕಿ ನೆಲಕ್ಕೆ ಒತ್ತುವ ವೀಡಿಯೊಗಳು ವೈರಲ್ ಆಗಿದ್ದು, ಸಾಮಾಜಿಕ ಜಾಲತಾಣ ಬಳಕೆದಾರರು ತೀವ್ರ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

ಭಾರತೀಯ–ಅಮೆರಿಕನ್ ಉದ್ಯಮಿ ಕುನಾಲ್ ಜೈನ್ ಎಂಬವರು ಈ ವೀಡಿಯೋ ಹಂಚಿಕೊಂಡಿದ್ದಾರೆ. ಅದರಲ್ಲಿ ನಾಲ್ವರು ಅಧಿಕಾರಿಗಳು ವಿದ್ಯಾರ್ಥಿಯನ್ನು ಹಿಡಿದಿಟ್ಟುಕೊಂಡಿದ್ದಾರೆ. ಅವರಲ್ಲಿ ಇಬ್ಬರು ತಮ್ಮ ಮೊಣಕಾಲುಗಳನ್ನು ವಿದ್ಯಾರ್ಥಿ ಬೆನ್ನಿನ ಮೇಲೆ ಇಟ್ಟುಕೊಂಡಿದ್ದು, ವಿದ್ಯಾರ್ಥಿಯ ಕಾಲುಗಳು ಮತ್ತು ಕೈಗಳನ್ನು ಕಟ್ಟಿ ಹಾಕಿದ್ದಾರೆ. ವಿಷಯದ ಬಗ್ಗೆ ತನಿಖೆ ಮಾಡಲು ಮತ್ತು ವಿದ್ಯಾರ್ಥಿಗೆ ಸಹಾಯ ಮಾಡಲು ಅಮೆರಿಕದಲ್ಲಿರುವ ಭಾರತೀಯ ರಾಯಭಾರ ಕಚೇರಿಗೆ ಜೈನ್ ಮನವಿ ಮಾಡಿಕೊಂಡಿದ್ದಾರೆ.

ಮಾನ್ಸೂನ್ ವಿರಾಮದಿಂದ ಶೇ.25ರಷ್ಟು ಮಳೆ ಕೊರತೆ

ನವದೆಹಲಿ: 4 ದಿನ ಮುಂಚಿತವಾಗಿಯೇ ಭಾರತಕ್ಕೆ



ಕಾಲಿಟ್ಟಿದ್ದ ಮಾನ್ಸೂನ್ ಮಾರುತಗಳು ಈ ಬಾರಿ ನಿರೀಕ್ಷೆಗಿಂತ ಹೆಚ್ಚು ಮಳೆ ಸುರಿಸುತ್ತವೆ ಎಂದು ವರದಿಯಾಗಿತ್ತು. ಆದರೆ ಮಾನ್ಸೂನ್ ಮಾರುತಗಳ ದಿಢೀರ್ ವಿರಾಮದಿಂದಾಗಿ ದೇಶದಲ್ಲಿ ಶೇ.25ರಷ್ಟು ಕೊರತೆ ಎದುರಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ನೈಋತ್ಯ ಮಾನ್ಸೂನ್ ಮುಖ್ಯ ಭೂಭಾಗಕ್ಕೆ ಬಲವಾದ ಪ್ರವೇಶ ಮಾಡಿದ ನಂತರ ವಿರಾಮ ತೆಗೆದುಕೊಂಡಿದೆ. ಇದರ ಪರಿಣಾಮವಾಗಿ 2025ರ ಋತುವಿನ ಮೊದಲ ವಾರದಲ್ಲಿ ಸುಮಾರು 25 ಪ್ರತಿಶತದಷ್ಟು ಕೊರತೆ ಉಂಟಾಗಿದೆ ಎಂದು ಹೇಳಿದೆ. ಜೂನ್ 1ರಿಂದ ಜೂನ್ 8ರವರೆಗೆ ಮಳೆ 20.4 ಮಿ.ಮೀ ದಾಖಲಾಗಿದೆ. ಆದರೆ ಈ ಅವಧಿಯಲ್ಲಿ ಸಾಮಾನ್ಯ ಮಟ್ಟ ಅಂದರೆ ಸುಮಾರು 27.2 ಮಿಮೀ ಮಳೆಯಾಗುತ್ತಿತ್ತು. ಜೂನ್ 12 ಮತ್ತು 15ರ ನಡುವೆ ಕರ್ನಾಟಕದ ಮೇಲೆ ಮತ್ತು ಜೂನ್ 13 ಮತ್ತು 15ರ ನಡುವೆ ಕೊಂಕಣ ಮತ್ತು ಗೋವಾದಲ್ಲಿ ಭಾರೀ ಮಳೆ ಮತ್ತು ಪ್ರತ್ಯೇಕವಾದ ಭಾರೀ ಮಳೆಯಾಗುತ್ತದೆ. ಪ್ರಮುಖ ಖಾರಿಫ್ ಬೆಳೆಗಳಲ್ಲಿ (ಅಕ್ಕಿ, ದ್ವಿದಳ ಧಾನ್ಯಗಳು ಮತ್ತು ಎಣ್ಣೆಬೀಜಗಳು) ಹಣದುಬ್ಬರವನ್ನು ನಿಯಂತ್ರಣದಲ್ಲಿಡಲು ಈ ಋತುವಿನಲ್ಲಿ ಮಳೆಯ ಪ್ರಾದೇಶಿಕ ಮತ್ತು ಸಕಾಲಿಕ ವಿತರಣೆಯು ನಿರ್ಣಾಯಕವಾಗಿರುತ್ತದೆ ಎಂದು ಹೇಳಿದೆ.

ಭಾರತ–ಚೀನಾ ನಡುವಿನ ಉದ್ವಿಗ್ನತೆ ತಗ್ಗಿದೆ: ರಷ್ಯಾ



ಸೆರ್ಗಿ ಲಾವ್ರೊವ್

ಮಾಸ್ಕೊ: ಭಾರತ ಮತ್ತು ಚೀನಾ ನಡುವಿನ ಉದ್ವಿಗ್ನತೆಯು ಗಮನಾರ್ಹವಾಗಿ ಕಡಿಮೆಯಾಗಿದೆ. ಹೀಗಾಗಿ ರಷ್ಯಾ, ಭಾರತ ಹಾಗೂ ಚೀನಾಗಳ (ಆರ್‌ಐಸಿ) ಸ್ಥಗಿತ ಗೊಂಡಿರುವ ಮಾತುಕತೆಯನ್ನು ಪುನರಾರಂಭಿಸಬಹುದು ಎಂದು ರಷ್ಯಾ ವಿದೇಶಾಂಗ ಸಚಿವ ಸೆರ್ಗಿ ಲಾವ್ರೊವ್ ಹೇಳಿದ್ದಾರೆ. ಇಲ್ಲಿ 'ಫೋರಂ ಆಫ್ ದಿ ಫ್ಯೂಚರ್–2050' ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಆರ್‌ಐಸಿಗಳ ಜಂಟಿ ಕೆಲಸವು ಮರುಸ್ಥಾಪನೆಗೊಂಡರೆ, ಅದು ಯುರೇಷಿಯನ್‌ನ (ಯುರೋಪ್ ಮತ್ತು ಏಷ್ಯಾ) ಸಂಬಂಧದ ಮೊದಲ ಹೆಜ್ಜೆಯಾಗಲಿದೆ ಎಂದರು. ಕೆಲವು ವರ್ಷಗಳಿಂದ ನಾವು ವಿದೇಶಾಂಗ ಸಚಿವರ ಮಟ್ಟದಲ್ಲಿ ಸಭೆ ಸೇರಿಲ್ಲ. ಈ ಸಮಸ್ಯೆ ಬಗ್ಗೆ ಚೀನಾದ ಸಹೋದ್ಯೋಗಿ ಹಾಗೂ ಭಾರತದ ವಿದೇಶಾಂಗ ಸಚಿವಾಲಯದ ಮುಖ್ಯಸ್ಥರೊಂದಿಗೆ ಚರ್ಚಿಸುತ್ತಿದ್ದೇವೆ. ಭಾರತ ಮತ್ತು ಚೀನಾ ಗಡಿಯಲ್ಲಿ ಉದ್ವಿಗ್ನತೆ ಕಡಿಮೆಯಾಗಿದೆ ಮತ್ತು ಪರಿಸ್ಥಿತಿ ಸ್ಥಿರವಾಗಿದೆ ಎಂದು ನಾನು ಭಾವಿಸುತ್ತೇನೆ. ಹೀಗಾಗಿ ಮೂರು ದೇಶಗಳು ಮಾತುಕತೆ ಪುನರಾರಂಭಿಸಬಹುದು ಎಂದರು.

ಅಪಾರ್ಟ್‌ಮೆಂಟ್‌ನಲ್ಲಿ ಬೆಂಕಿ; ಜಿಗಿದು ಮಕ್ಕಳೊಂದಿಗೆ ತಂದೆ ಸಾವು

ದೆಹಲಿ: ರಾಷ್ಟ್ರ ರಾಜಧಾನಿಯ ಅಪಾರ್ಟ್‌ಮೆಂಟ್



ವೊಂದರಲ್ಲಿ ಭಾರಿ ಅಗ್ನಿ ಅವಘಡ ಸಂಭವಿಸಿದ್ದು, ಇಬ್ಬರು ಮಕ್ಕಳೊಂದಿಗೆ ತಂದೆ ಸಾವನ್ನಪ್ಪಿರುವ ಘಟನೆ ನಡೆದಿದೆ. ದ್ವಾರಕಾ ಸೆಕ್ಟರ್ 13ರಲ್ಲಿನ ಸಾಬಾದ್ ಅಪಾರ್ಟ್‌ಮೆಂಟ್‌ನ ಏಳನೇ ಮಹಡಿಯಲ್ಲಿರುವ ಫ್ಲಾಟ್ ವೊಂದರಲ್ಲಿ ಬೆಂಕಿ ಕಾಣಿಸಿಕೊಂಡಿದ್ದು, ಧಗಧಗನೇ ಹೊತ್ತಿ ಉರಿದಿದೆ. ಇದರಿಂದ ಆತಂಕಗೊಂಡ ವ್ಯಕ್ತಿಯೊಬ್ಬರು ತನ್ನ 10 ವರ್ಷದ ಇಬ್ಬರು ಮಕ್ಕಳೊಂದಿಗೆ ಕಟ್ಟಡದಿಂದ ಜಿಗಿದು ಸಾವನ್ನಪ್ಪಿದ್ದಾರೆ. ಅಗ್ನಿ ಅವಘಡಕ್ಕೆ ಕಾರಣ ತಿಳಿದುಬಂದಿಲ್ಲ. ಶಾರ್ಟ್ ಸರ್ಕಿಟ್‌ನಿಂದ ಬೆಂಕಿ ಉಂಟಾಯಿತೇ ಅಥವಾ ಬೇರೆ ಕಾರಣದಿಂದ ಬೆಂಕಿ ಹೊತ್ತಿಕೊಂಡಿತ್ತೆ ಎಂಬುದರ ಕುರಿತು ತನಿಖೆ ನಡೆಯುತ್ತಿದೆ. ದ್ವಾರಕಾದ ಎಂಆರ್‌ವಿ ಶಾಲೆ ಬಳಿ ಇರುವ ಸಬಾದ್ ಅಪಾರ್ಟ್‌ಮೆಂಟ್‌ನಿಂದ ಬೆಳಿಗ್ಗೆ 10.01ಕ್ಕೆ ಬೆಂಕಿ ಹೊತ್ತಿಕೊಂಡಿರುವ ಬಗ್ಗೆ ಕರೆ ಬಂದಿತು. ಆರಂಭದಲ್ಲಿ ಎಂಟು ಅಗ್ನಿಶಾಮಕ ವಾಹನಗಳು ಸ್ಥಳಕ್ಕೆ ಧಾವಿಸಿದವು. ಬೆಂಕಿಯ ಪ್ರಮಾಣ ಹೆಚ್ಚಾಗುತ್ತಿದ್ದಂತೆಯೇ ಮತ್ತಷ್ಟು ಅಗ್ನಿಶಾಮಕ ಸಿಬ್ಬಂದಿಯನ್ನು ನಿಯೋಜಿಸಲಾಯಿತು. ಗಾಯಾಳುಗಳ ಬಗ್ಗೆ ಯಾವುದೇ ಮಾಹಿತಿ ತಿಳಿದುಬಂದಿಲ್ಲ ಎಂದು ದೆಹಲಿ ಅಗ್ನಿಶಾಮಕ ಸೇವೆ ಇಲಾಖೆ ತಿಳಿಸಿದೆ.


ನ್ಯಾಟೋ ರಕ್ಷಣಾ ವೆಚ್ಚ ಶೇ.400ರಷ್ಟು ಹೆಚ್ಚಿಸಲು ಸಿದ್ಧತೆ

ಲಂಡನ್: ರಷ್ಯಾದ ಬೆದರಿಕೆಗೆ ತಿರುಗೇಟು ನೀಡಲು ಉತ್ತರ ಅಟ್ಲಾಂಟಿಕ್ ಟ್ರೀಟಿ ಆರ್ಗನೈಸೇಷನ್ (ನ್ಯಾಟೋ ಶಾಂತಿ ಕಾಲದ ಮಿಲಿಟರಿ ಮೈತ್ರಿ) ಸದಸ್ಯ ರಾಷ್ಟ್ರಗಳು ತಮ್ಮ ವಾಯು ಮತ್ತು ಕ್ಷಿಪಣಿ ಸೇನಾ ಸಾಮರ್ಥ್ಯವನ್ನು ಶೇ.400ರಷ್ಟು ಹೆಚ್ಚಳ ಮಾಡಿಕೊಳ್ಳುವ ಅಗತ್ಯ ಇದೆ ಎಂದು ನ್ಯಾಟೋ ಸಮ್ಮೇಳನದಲ್ಲಿ ಸೇನಾ ಮೈತ್ರಿಯ ಮುಖ್ಯಸ್ಥರು ಪ್ರಸ್ತಾಪಿಸಲು ತಯಾರಿ ನಡೆಸಿದ್ದಾರೆ.



ಲಂಡನ್‌ಗೆ ಭೇಟಿ ನೀಡಿದ ಸಂದರ್ಭದಲ್ಲಿ ನ್ಯಾಟೋ ಪ್ರಧಾನ ಕಾರ್ಯದರ್ಶಿ ಮಾರ್ಕ್ ರಟ್ ಈ ಅಂಶವನ್ನು ಹೇಳಲಿದ್ದಾರೆ. ತೀವ್ರಗೊಳ್ಳುತ್ತಿರುವ ಅಭದ್ರತೆ ಮತ್ತು ಬೆದರಿಕೆಗಳನ್ನು ಎದುರಿಸಲು ನ್ಯಾಟೋ ಸದಸ್ಯ ರಾಷ್ಟ್ರಗಳು ಭದ್ರತೆ ವಿಷಯದಲ್ಲಿ ಸಂಘಟಿತರಾಗಿ ತುರ್ತು ಹೆಜ್ಜೆ ಇಡುವ ಅಗತ್ಯ ಇದೆ ಎಂಬ ಪ್ರಮುಖ ಅಂಶ ಇರುವ ಮಾರ್ಕ್ ರಟ್ ಭಾಷಣದ ತುಣುಕನ್ನು ನ್ಯಾಟೋ ಬಿಡುಗಡೆ ಮಾಡಿದೆ. ನೆದರ್‌ಲ್ಯಾಂಡ್‌ನ ಹೇಗ್‌ನಲ್ಲಿ ಜೂನ್ 24 ಮತ್ತು 25ರಂದು ನ್ಯಾಟೋ ಸಮ್ಮೇಳನ ನಡೆಯಲಿದೆ. ಸಮ್ಮೇಳನದಲ್ಲಿ 32 ಸದಸ್ಯ ರಾಷ್ಟ್ರಗಳ ಒಕ್ಕೂಟ ನ್ಯಾಟೋ ಸೇನಾ ವೆಚ್ಚವನ್ನು ಭಾರಿ ಪ್ರಮಾಣದಲ್ಲಿ ಹೆಚ್ಚಿಸಲು ಬದ್ಧತೆ ತೋರಲಿದೆ. ಅದಕ್ಕೂ ಮುನ್ನ, ಸಮ್ಮೇಳನದ ಅಧ್ಯಕ್ಷತೆ ವಹಿಸಲಿರುವ ರಟ್ ಅವರು ಇಂಗ್ಲೆಂಡ್ ಪ್ರಧಾನಿ ಕೀರ್ ಸ್ಟಾರ್ಮರ್ ಅವರನ್ನು ಭೇಟಿಯಾಗಲಿದ್ದಾರೆ.

ನೆಲಜಿ ಗ್ರಾಮದಲ್ಲಿ ಕಾಡಾನೆಗಳು ಪ್ರತ್ಯಕ್ಷ



ನೆಲಜಿ ಗ್ರಾಮದಲ್ಲಿ ಕಾಡಾನೆಗಳ ಹಿಂಡು ರಸ್ತೆ ದಾಟುವ ದೃಶ್ಯ.

ನಾಪೋಕ್ಲು, ಜೂ.10– ಸಮೀಪದ ನೆಲಜಿ ಗ್ರಾಮದಲ್ಲಿ ಕಾಡಾನೆಗಳ ಹಿಂಡು ಪ್ರತ್ಯಕ್ಷವಾಗಿದೆ. ನೆಲಜಿ ಗ್ರಾಮದಿಂದ ಕಕ್ಕಬ್ಬೆ ಗ್ರಾಮಕ್ಕೆ ತೆರಳುವ ಮುಖ್ಯ ರಸ್ತೆಯಲ್ಲಿ ಕಾಡಾನೆಗಳ ಹಿಂಡು ರಸ್ತೆ ದಾಟುವ ದೃಶ್ಯ ಕಂಡು ಬಂದಿದ್ದು ಸ್ಥಳೀಯರು ಮೊಬೈಲ್‌ನಲ್ಲಿ ಸೆರೆಹಿಡಿದಿದ್ದಾರೆ. ಹಾಡು ಹಗಲೇ ಕಾಡಾನೆಗಳನ್ನು ಕಂಡು ಗ್ರಾಮಸ್ಥರಲ್ಲಿ ಆತಂಕಕ್ಕೆಡೆ ಮಾಡಿದೆ. ನೆಲಜಿ ಗ್ರಾಮದ ಚೇಯಕ ಪೂವಂಡ ಉಮೇಶ್, ಅಚ್ಚಾಂಡಿರ ಕುಟುಂಬ ಮತ್ತು ಮಣವಟ್ಟೀರ ಕುಟುಂಬಗಳ ತೋಟಗಳಿಗೆ ಕಾಡಾನೆಗಳು ಲಗ್ಗೆ ಇಟ್ಟಿದ್ದು, ಕಾಫಿ ಮತ್ತು ಇತರ ಗಿಡಗಳಿಗೆ ಹಾನಿಯಾಗಿದೆ. ಸ್ಥಳೀಯರು ಅರಣ್ಯ ಇಲಾಖೆಗೆ ಮಾಹಿತಿ ತಿಳಿಸಿದ ಮೇರೆಗೆ ಸ್ಥಳಕ್ಕೆ ಧಾವಿಸಿದ ಭಾಗಮಂಡಲ ಕಕ್ಕಬೆ ಉಪವಲಯ ಅರಣ್ಯ ಅಧಿಕಾರಿ ಕಾಳೇಗೌಡ, ಗಸ್ತು ಅರಣ್ಯಪಾಲಕ ಶರತ್, ಅರಣ್ಯ ವೀಕ್ಷಕ ಸಚಿನ್ ಹಾಗೂ ಆರ್ ಆರ್ ಟಿ ಸಿಬ್ಬಂದಿಗಳು ಗ್ರಾಮಕ್ಕೆ ಭೇಟಿ ನೀಡಿ ಸೂಕ್ತ ಕ್ರಮ ಕೈಗೊಂಡಿದ್ದಾರೆ.

ಯೋಗದ ಮಹತ್ವ ಕುರಿತು ಜಾಗೃತಿ ಜಾಥಾ

ಮಡಿಕೇರಿ, ಜೂ.10– ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಯುಷ್ ಇಲಾಖೆ, ಯೋಗ ಸಂಸ್ಥೆ ಸಹಯೋಗದಲ್ಲಿ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಪ್ರಯುಕ್ತ ಹಸಿರು ಯೋಗ, ಶ್ರಮದಾನ, ಸ್ವಚ್ಛತಾ ಅಭಿಯಾನ ಮತ್ತು ಸಸಿ ನೆಡುವ ಕಾರ್ಯಕ್ರಮವು ನಡೆಯಿತು.

ನಗರದ ಗಾಂಧಿ ಮೈದಾನದಲ್ಲಿ ಸ್ವಚ್ಛತಾ ಅಭಿಯಾನಕ್ಕೆ ನಗರಸಭಾ ಸದಸ್ಯ ಚಂದ್ರಶೇಖರ್ ಚಾಲನೆ ನೀಡಿದರು. ಗಾಂಧಿ ಮೈದಾನದಿಂದ ಯೋಗದ ಮಹತ್ವ ಕುರಿತು 'ಜಾಗೃತಿ ಜಾಥಾ' ಜರುಗಿತು. ಗಾಂಧಿ ಭವನದ ಆವರಣದಲ್ಲಿ ಗಿಡ ನೆಟ್ಟು ಅರಿವು ಮೂಡಿಸಲಾಯಿತು. ಜೊತೆಗೆ ಯೋಗ ಶಿಕ್ಷಕ ಮಹೇಶ್ ನೇತೃತ್ವದಲ್ಲಿ ಯೋಗ ಪ್ರದರ್ಶನ ನಡೆಯಿತು.



ಗಾಂಧಿ ಭವನದ ಆವರಣದಲ್ಲಿ ಯೋಗ ಪ್ರದರ್ಶನ ನಡೆಯಿತು

ವೈದ್ಯಕೀಯ ಜ್ಞಾನ ಸಂಸ್ಥೆಯ ಮಕ್ಕಳ ವಿಭಾಗದ ಮುಖ್ಯಸ್ಥ ಡಾ.ಪುರುಷೋತ್ತಮ ಮಾತನಾಡಿ ಪ್ರತಿಯೊಬ್ಬರ ಆರೋಗ್ಯಕ್ಕೆ ಯೋಗ ಅತ್ಯಗತ್ಯ, ಆ ನಿಟ್ಟಿನಲ್ಲಿ ಪ್ರತಿ ನಿತ್ಯ ಅರ್ಧಗಂಟೆಯಾದರೂ ವ್ಯಾಯಾಮ ಮಾಡುವಂತಾಗಬೇಕು ಎಂದು ಸಲಹೆ ನೀಡಿದರು.

ಜಿಲ್ಲಾ ಆಯುಷ್ ಅಧಿಕಾರಿ ಡಾ.ಶೈಲಜಾ ಮಾತನಾಡಿ, ಪ್ರತಿದಿನ ಯೋಗಾಭ್ಯಾಸದಲ್ಲಿ ತೊಡಗಿಸಿಕೊಂಡಲ್ಲಿ ಚಲನಶೀಲತೆ ಮತ್ತು ಕ್ರಿಯಾಶೀಲತೆಯಿಂದ ಕೂಡಿರಬಹುದೆಂದು ಅಭಿಪ್ರಾಯ ವ್ಯಕ್ತಪಡಿಸಿದರು. ಯೋಗ ಶಿಕ್ಷಕ ಮಹೇಶ್ ಕುಮಾರ್ ಮಾತನಾಡಿ, ಹಸಿರು ಯೋಗ ಪ್ರಯುಕ್ತ ಪ್ರಕೃತಿಯೊಂದಿಗೆ ಬೆರೆತು ಯೋಗಾಭ್ಯಾಸ ಮಾಡಲಾಗುತ್ತಿದೆ. ಯೋಗದ ಮಹತ್ವವನ್ನು ಎಲ್ಲೆಡೆ ಪಸರಿಸಲಾಗುತ್ತಿದೆ ಎಂದರು. ಆಯುಷ್ ವೈದ್ಯಾಧಿಕಾರಿ ಡಾ.ಅರುಣ್ ಮಾತನಾಡಿ ಜೂನ್, 21 ರಂದು 11 ನೇ ಯೋಗ ದಿನಾಚರಣೆ ಪ್ರಯುಕ್ತ ವಿವಿಧ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು. ಪಿಎಸ್ಐ ಅನ್ನಪೂರ್ಣ ಮಾತನಾಡಿದರು. ಎಎಸ್ಐ ಶಿವಾನಂದ, ಆಯುಷ್ ವೈದ್ಯಾಧಿಕಾರಿ ಡಾ.ಶುಭ, ಶಾಲಾ ಶಿಕ್ಷಣ ಇಲಾಖೆಯ ದೈಹಿಕ ಶಿಕ್ಷಣಾಧಿಕಾರಿ ಗಾಯತ್ರಿ, ಕೊಡಗು ವೈದ್ಯಕೀಯ "ಜ್ಞಾನ ಸಂಸ್ಥೆ, ಸ್ಕೌಟ್ಸ್ ಮತ್ತು ಗೈಡ್ಸ್, ಎನ್‌ಸಿಸಿ, ಎನ್‌ಎಸ್‌ಎಸ್ ವಿದ್ಯಾರ್ಥಿಗಳು, ವಿವಿಧ ಇಲಾಖೆ ಅಧಿಕಾರಿಗಳು, ಸಿಬ್ಬಂದಿಗಳು ಇದ್ದರು.

ನಾಳೆಯಿಂದ ವ್ಯಾಪಕ ಮಳೆ: 'ರೆಡ್ ಅಲರ್ಟ್' ಘೋಷಣೆ



ಮಡಿಕೇರಿ, ಜೂ.10– ಜಿಲ್ಲೆಯಾದ್ಯಂತ ಗುರುವಾರದಿಂದ ಭಾನುವಾರದವರೆಗೆ ವ್ಯಾಪಕ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಈ ಹಿನ್ನೆಲೆಯಲ್ಲಿ ಜಿಲ್ಲೆಯಾದ್ಯಂತ 'ರೆಡ್ ಅಲರ್ಟ್' ಘೋಷಿಸಲಾಗಿದೆ. ಈ ಅವಧಿಯಲ್ಲಿ 204 ಮಿ.ಮೀ ಅಧಿಕ ಮಳೆಯಾಗುವ ಸಾಧ್ಯತೆಗಳಿದ್ದು, ಸಾರ್ವಜನಿಕರು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಲಾಗಿದೆ.

ಭಾರತೀಯ ಹವಾಮಾನ ಇಲಾಖೆ ಭಾರಿ ಮಳೆ ಮುನ್ನೆಚ್ಚರಿಕೆ ನೀಡಿರುವ ಕಾರಣ ಜಿಲ್ಲೆಗೆ ಆಗಮಿಸಿರುವ ಎನ್‌ಡಿಆರ್‌ಎಫ್ ಯೋಧರ ತಂಡ ಪ್ರವಾಹ ಪೀಡಿತ ಅಮ್ಮತ್ತಿ ಹೋಬಳಿ ಸಿದ್ದಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕರಡಿಗೋಡು ಮತ್ತು ಗುಹ್ಯ ಗ್ರಾಮಗಳಿಗೆ ತೆರಳಿ ಪರಿಶೀಲನೆ ನಡೆಸಿತು. ಕಾವೇರಿ ನದಿಯಲ್ಲಿ ನೀರಿನ ಮಟ್ಟ ಏರಿಕೆಯಾಗಿದ್ದು, ಭಾರಿ ಮಳೆ ಸುರಿದಲ್ಲಿ ಪ್ರವಾಹ ಏರ್ಪಡುವ ಎಲ್ಲಾ ಸಾಧ್ಯತೆಗಳಿವೆ. ಕಾವೇರಿ ನದಿ ತಟದ ನಿವಾಸಿಗಳಿಗೆ ಸ್ಥಳೀಯಾಡಳಿತ ಈಗಾಗಲೇ ನೋಟಿಸ್‌ಗಳನ್ನು ಕೂಡ ನೀಡಿದ್ದು, ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಸೂಚಿಸಿದೆ. ಎನ್‌ಡಿಆರ್‌ಎಫ್ ತಂಡ ಭೇಟಿ ನೀಡಿದ ಸಂದರ್ಭ ನೋಡಲ್ ಅಧಿಕಾರಿಗಳು, ಕಂದಾಯ ಪರಿವೀಕ್ಷಕರು ಹಾಗೂ ಪೊಲೀಸ್ ಇಲಾಖೆ ಅಧಿಕಾರಿಗಳು ಹಾಜರಿದ್ದರು.

ಮೃತರ ಕುಟುಂಬಕ್ಕೆ ಸಂಸದ ಯದುವೀರ್ ಸಾಂತ್ವನ

ಸಿದ್ದಾಪುರ, ಜೂ.10–ಇತ್ತೀಚೆಗೆ ಕಾಡಾನೆ ದಾಳಿಗೆ ತುತ್ತಾಗಿ ಮೃತಪಟ್ಟ ಸಿದ್ದಾಪುರ ಕಾಫಿ ಬೆಳೆಗಾರ ಕುಕ್ಕುನೂರು ಪುರುಷೋತ್ತಮ ಮನೆಗೆ ಸಂಸದ ಯದುವೀರ್ ಮಂಗಳವಾರ ಭೇಟಿ ನೀಡಿ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು.

ಇದೇ ರೀತಿ ಬಸವನಹಳ್ಳಿ ಹಾಡಿಯ ಕಾಫಿ ಬೆಳೆಗಾರ ಸೊಳ್ಳೆಕೋಡಿ ಚಿಣ್ಣಪ್ಪನವರ ಮನೆಗೆ ಹಾಗೂ ಭಾರಿ ಮಳೆಗೆ ಮರ ಬಿದ್ದು ಸಾವಿಗೀಡಾಗಿದ್ದ ಸಿದ್ದಾಪುರ ಸಮೀಪದ ವಾಲ್ದಾರೆಯ ಜನತಾ ಕಾಲೋನಿಯ ನಿವಾಸಿ ಗ್ರಾಮ ಪಂಚಾಯತ್ ಮಾಜಿ ಸದಸ್ಯ ಪೊನ್ನಚಂಡ ಬೆಳ್ಳಿಯಪ್ಪನವರ ಮನೆಗೆ ಭೇಟಿ ನೀಡಿದ್ದರು.



ಮೃತರ ಮನೆಗಳಿಗೆ ಸಂಸದ ಯದುವೀರ್ ಭೇಟಿ ನೀಡಿ ಸಾಂತ್ವನ ಹೇಳಿದರು

ಜಿಲ್ಲಾ ಭಾರತೀಯ ಜನತಾ ಪಕ್ಷದ ಅಧ್ಯಕ್ಷ ನಾಪಂಡ ರವಿ ಕಾಳಪ್ಪ, ಮಂಡಲ ಅಧ್ಯಕ್ಷ ಗಣಪತಿ, ಮಂಡಲ ಪ್ರಧಾನ ಕಾರ್ಯದರ್ಶಿ ಅಜಿತ್ ಕರುಂಬಯ್ಯ, ಸಿದ್ದಾಪುರ ಮಾಜಿ ಗ್ರಾ. ಪಂ.ಅಧ್ಯಕ್ಷೆ ರೀನಾ ತುಳಸಿ, ಮುಂತಾದವರು ಹಾಜರಿದ್ದರು.

ಇಂದು ಲೋಕಾಯುಕ್ತರಿಂದ ದೂರು ಅರ್ಜಿ ಸ್ವೀಕಾರ

ಮಡಿಕೇರಿ, ಜೂ.10– ಮಡಿಕೇರಿಯ ಲೋಕಾಯುಕ್ತ ಅಧಿಕಾರಿಗಳು ಜೂನ್ 11ರ ಬೆಳಗ್ಗೆ 11 ಗಂಟೆಯಿಂದ 1 ಗಂಟೆಯವರೆಗೆ ತಹಶೀಲ್ದಾರ್ ಕಚೇರಿ ಸಭಾಂಗಣದಲ್ಲಿ ದೂರು ಅರ್ಜಿ ವಿತರಿಸಲಿರುವರು. ಭರ್ತಿ ಮಾಡಿದ ಮತ್ತು ನೋಟರಿಯಿಂದ ಅಫಿಡವಿಟ್ ಮಾಡಿಸಿದ ಅರ್ಜಿ ಸ್ವೀಕರಿಸಲಾಗುವುದು.

ಹೆಚ್ಚಿನ ವಿವರಗಳಿಗೆ ಮಡಿಕೇರಿ ಲೋಕಾಯುಕ್ತ ಪೊಲೀಸ್ ಕಚೇರಿ, ಗೌಳಿಬೀದಿ ದೂ.ಸಂ.08272-295297 ನ್ನು ಸಂಪರ್ಕಿಸ ಬಹುದು ಎಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ಉಪಾಧೀಕ್ಷಕರು ತಿಳಿಸಿದ್ದಾರೆ.

ಆವಂದೂರು ಶ್ರೀ ಗೋಪಾಲಕೃಷ್ಣ ದೇವಸ್ಥಾನ ಗರ್ಭವಿನ್ಯಾಸ ಕಾರ್ಯಕ್ರಮ



ಅವಂದೂರು ಗ್ರಾಮದ ಶ್ರೀ ಗೋಪಾಲಕೃಷ್ಣ ದೇವಸ್ಥಾನದಲ್ಲಿ ನಿರ್ಮಾಣ ಹಂತದಲ್ಲಿರುವ ಗರ್ಭಗುಡಿ ಮತ್ತು ತೀರ್ಥ ಮಂಟಪ.

ನಾಪೋಕ್ಲು, ಜೂ.10– ಅವಂದೂರು ಗ್ರಾಮದ ಶ್ರೀ ಗೋಪಾಲಕೃಷ್ಣ ದೇವಸ್ಥಾನದ ಗರ್ಭಗುಡಿ ಮತ್ತು ತೀರ್ಥ ಮಂಟಪದ ಗರ್ಭ ವಿನ್ಯಾಸ ಕಾರ್ಯಕ್ರಮ ನಿನ್ನೆ ಸಂಪನ್ನಗೊಂಡಿತು.

ಪುರಾತನ ಇತಿಹಾಸ ಪ್ರಸಿದ್ಧ ಆವಂದೂರು ಗ್ರಾಮದ ಶ್ರೀ ಗೋಪಾಲಕೃಷ್ಣ ದೇವಸ್ಥಾನದ ಗರ್ಭಗುಡಿ ಮತ್ತು ತೀರ್ಥ ಮಂಟಪದ ಗರ್ಭವಿನ್ಯಾಸ, ಹೋಮ, ಹವನ ಮತ್ತು ಬಲಿ ಪೂಜೆ ವಿಧಿ ವಿಧಾನಗಳನ್ನು ಕಾಸರಗೋಡಿನ ಶ್ರೀ ನೀಲೇಶ್ವರ ಪದ್ಮನಾಭ ತಂತ್ರಿ ಮತ್ತು ತಂಡದ ಮುರಾರಿ, ಮಧು, ಪ್ರಸನ್ನ, ಶರತ್, ಸುಪ್ರೀತ್ ನೆರವೇರಿಸಿದರು.

ಕ್ಷೇತ್ರಕ್ಕೆ ಆಗಮಿಸಿದ ತಂತ್ರಿಗಳನ್ನು ಜೀರ್ಣೋದ್ಧಾರ ಸಮಿತಿಯ ಪದಾಧಿಕಾರಿಗಳು ಮತ್ತು ಗ್ರಾಮಸ್ಥರ ಉಪಸ್ಥಿತಿಯಲ್ಲಿ ಧಾರ್ಮಿಕ ಸಂಪ್ರದಾಯದಂತೆ ಗೌರವಯುತವಾಗಿ ಶಿವ ಸ್ವರೂಪ ಪೂರ್ಣಕುಂಭ ಕಲಶದ ಮೆರವಣಿಗೆಯೊಂದಿಗೆ ಮುತ್ತೈದೆಯರು ಬರಮಾಡಿಕೊಂಡರು.

ಶ್ರೀ ಗೋಪಾಲಕೃಷ್ಣ ದೇವಸ್ಥಾನದ ಪ್ರಧಾನ ಅರ್ಚಕರಾದ ದಿನೇಶ್ ಭಟ್, ದೇವಸ್ಥಾನ ಜೀರ್ಣೋದ್ಧಾರ ಸಮಿತಿಯ ಅಧ್ಯಕ್ಷರು ಕಡ್ಯದ ಸೋಮಣ್ಣ, ಉಪಾಧ್ಯಕ್ಷರು ಚೊಕ್ಕಾಡಿ ಅಪ್ಪಯ್ಯ, ಕಾರ್ಯದರ್ಶಿ ಪಟ್ಟಡ ಸುಗುಣ ಕುಮಾರ್, ಖಜಾಂಚಿ ಬೆಳ್ಯನ ಚಂದ್ರ ಪ್ರಕಾಶ್, ಜೀರ್ಣೋದ್ಧಾರ ಸಮಿತಿಯ ಪದಾಧಿಕಾರಿಗಳು, ದೇವಸ್ಥಾನ ಜೀರ್ಣೋದ್ಧಾರದ ಮೂಲ ಸಮಿತಿ, ಗ್ರಾಮದ ಮುಖ್ಯಸ್ಥರು, ಗ್ರಾಮದ ಕಾರ್ಯ ದರ್ಶಿ ಹಾಗೂ ಅವಂದೂರು ಗ್ರಾಮದ ಸದಸ್ಯರು ಭಾಗಿಯಾಗಿ ಶ್ರೀ ದೇವರ ದರ್ಶನ ಪಡೆದು ಪ್ರಸಾದವನ್ನು ಸ್ವೀಕರಿಸಿದರು.

ಕೊಡವ ನ್ಯಾಷನಲ್ ಕೌನ್ಸಿಲ್ ಸಂಘಟನೆಯಿಂದ ವಿಚಾರ ಸಂಕಿರಣ

ಮಡಿಕೇರಿ, ಜೂ.10– ಕೊಡವ ಲ್ಯಾಂಡ್ ಭೂರಾಜಕೀಯ ಸ್ವಾಯತ್ತತೆ, ಸ್ವ-ಆಡಳಿತ, ಆಂತರಿಕ ರಾಜಕೀಯ ಸ್ವ-ನಿರ್ಣಯದ ಹಕ್ಕುಗಳು ಸೇರಿದಂತೆ ಕೊಡವರ ಪರವಾದ ಕಾನೂನು ಬದ್ಧ ಹಕ್ಕುಗಳ ಪ್ರತಿಪಾದನೆ ಕುರಿತಂತೆ ವಿಚಾರ ಸಂಕಿರಣ ಕೊಡವ ನ್ಯಾಷನಲ್ ಕೌನ್ಸಿಲ್ ಸಂಘಟನೆ ವತಿಯಿಂದ ಜೂ.18ರಂದು ಮಡಿಕೇರಿ ಹೊರವಲಯದ ಕ್ಯಾಪಿಟಲ್ ವಿಲೇಜ್‌ನಲ್ಲಿ ನಡೆಯಲಿದೆ. ಬೆಳಗ್ಗೆ 10.30 ಗಂಟೆಗೆ ನಡೆಯುವ ವಿಚಾರ ಸಂಕಿರಣದಲ್ಲಿ ಸುಪ್ರೀಂಕೋರ್ಟ್ ವಕೀಲ ವಿಕ್ರಮ್ ಹೆಗ್ಡೆ ಉಪನ್ಯಾಸ ನೀಡಲಿದ್ದು, ಅವರ ಪತ್ನಿ ಕಾನೂನು ತಜ್ಞೆ ಹಿಮಾ ಲಾರೆನ್ಸ್ ಉಪಸ್ಥಿತರಿರುವರೆಂದು ಸಿಎನ್‌ಸಿ ಅಧ್ಯಕ್ಷ ಎನ್.ಯು. ನಾಚಪ್ಪ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ವಿದ್ಯಾರ್ಥಿಯ ಅಜಾಗರೂಕತೆ ಚಾಲನೆ: ಬಾಲಕ ಸಾವು

ವಿರಾಜಪೇಟೆ, ಜೂ.10–ಮನೆಗೆ ಹೋಗುವ ಆತುರದಲ್ಲಿ ಯುವಕ ಅಜಾಗರೂಕತೆಯಿಂದ ಬೈಕ್ ಓಡಿಸಿ ಪುಟ್ಟ ಬಾಲಕನೊಬ್ಬನನ್ನು ಬಲಿ ತೆಗೆದುಕೊಂಡ ಘಟನೆಯೊಂದು ಬಿಳುಗುಂದ ನಲ್ವತೊಕ್ಲು ಗ್ರಾಮದಲ್ಲಿ ಸಂಭವಿಸಿದೆ.



ತಾಲೂಕಿನ ಬಿಳುಗುಂದ ಗ್ರಾಮ ಪಂಚಾಯತಿ ವ್ಯಾಪ್ತಿಯ ನಲ್ವತೊಕ್ಲು ಗ್ರಾಮದ ನಿವಾಸಿ ಎ.ವಿ. ಹನೀಫ್ ಎಂಬವರ ಕೊನೆ ಮಗ ಕಾವೇರಿ ಆಂಗ್ಲ ಮಾಧ್ಯಮ ಶಾಲೆಯ 3 ನೇ ತರಗತಿ ವಿದ್ಯಾರ್ಥಿ ಮಹಮ್ಮದ್ ಅಫ್ನಾಸ್ (8 ವರ್ಷ) ಅಪಘಾತದಲ್ಲಿ ಮೃತನಾದ ದುರ್ದೈವಿ ಬಾಲಕ. ಇದೇ ಗ್ರಾಮದ ನಿವಾಸಿ ಎಂ.ವಿ. ವಿನೋದ್ ಚೆಂಗಪ್ಪ ಅವರ ಪುತ್ರ ಮತ್ತು ಇಂಜಿನಿಯರಿಂಗ್ ಕಾಲೇಜ್ ವಿದ್ಯಾರ್ಥಿ ಎಂ.ವಿ.ಚಮನ್ ಅಯ್ಯಣ್ಣ ಅಪಘಾತವೆಸಗಿದ ಆರೋಪಿ. ಚಮನ್ ತನ್ನ ರಾಯಲ್ ಎನ್‌ಫೀಲ್ಡ್ ಹಿಮಾಲಯನ್ ಬೈಕ್ (ಕೆಎ–12 ಡಬ್ಲ್ಯೂ–7778) ನಲ್ಲಿ ಕಾಲೇಜಿನಲ್ಲಿ ಪರೀಕ್ಷೆ ಮುಗಿಸಿ ಮನೆಗೆ ಹಿಂದಿರುಗುತ್ತಿದ್ದಾಗ ಹಾತೂರು ನಲ್ವತೊಕ್ಲು ರಸ್ತೆಯಲ್ಲಿ ಮನೆ ಮುಂದಿನ ಅಂಗಳದಲ್ಲಿ ಆಟವಾಡುತ್ತಿದ್ದ ಬಾಲಕ ಹಠಾತ್ತನೇ ರಸ್ತೆಗೆ ಓಡಿ ಬಂದನೆನ್ನಲಾಗಿದೆ. ಬಾಲಕ ರಸ್ತೆ ದಾಟುತ್ತಿದ್ದ ಸಮಯದಲ್ಲೇ ಎದುರಿನಿಂದ ಬಂದ ಬೈಕ್ ಡಿಕ್ಕಿಯಾದ ಪರಿಣಾಮ ಬಾಲಕನನ್ನು ಸ್ವಲ್ಪ ದೂರಕ್ಕೆ ತಳ್ಳಿಕೊಂಡು ಹೋದ ಪರಿಣಾಮ ಬಲಕಾಲಿನ ಮೂಳೆ ಮುರಿದು, ಮರ್ಮಾಂಗಕ್ಕೆ ತಲೆ ಮತ್ತು ಇತರ ಭಾಗಗಳಿಗೆ ಗಂಭೀರ ಗಾಯಗಳಾಗಿವೆ. ಸ್ಥಳೀಯರು ಕೂಡಲೇ ಗಾಯಾಳು ಬಾಲಕನನ್ನು ಸರ್ಕಾರಿ ಆಸ್ಪತ್ರೆಗೆ ದಾಖಲಿಸಿದರು. ಹೆಚ್ಚಿನ ಚಿಕಿತ್ಸೆಗಾಗಿ ಮಂಗಳೂರಿಗೆ ಕರೆದೊಯ್ಯುತ್ತಿದ್ದಾಗ ಮಾರ್ಗ ಮಧ್ಯೆ ಬಾಲಕ ಅಸುನೀಗಿದನೆನ್ನಲಾಗಿದೆ. ಮೃತ ಬಾಲಕನ ತಂದೆ ಹನೀಫ್ ನೀಡಿರುವ ದೂರಿನ ಮೇರೆಗೆ ವಿರಾಜಪೇಟೆ ಗ್ರಾಮಾಂತರ ಠಾಣೆ ಪೊಲೀಸರು ಮೊಕದ್ದಮೆ ದಾಖಲಿಸಿಕೊಂಡು ಬೈಕ್ ಸವಾರನನ್ನು ಬಂಧಿಸಿ ಮುಂದಿನ ಕ್ರಮ ಜರುಗಿಸಿದ್ದಾರೆ.

ಡಿ.ಎಂ.ಪುಟ್ಟರಾಜು ನಿಧನ

ನಾಪೋಕ್ಲು, ಜೂ.10– ವಿರಾಜಪೇಟೆ ತೆಲುಗರ ಬೀದಿಯ ನಿವಾಸಿ ಡಿ.ಎಂ. ಪುಟ್ಟರಾಜು (83) ಮಂಗಳವಾರ ನಿಧನರಾದರು,



ಅಂತ್ಯಕ್ರಿಯೆ ಬುಧವಾರ ವಿರಾಜಪೇಟೆ ಅರಸು ನಗರದ ಹಿಂದೂ ರುದ್ರಭೂಮಿಯಲ್ಲಿ ನಡೆಯಲಿದೆ. ಮೃತರು ಪತ್ನಿ, ಇಬ್ಬರು ಗಂಡು ಮಕ್ಕಳು ಹಾಗೂ ಪುತ್ರಿಯನ್ನು ಅಗಲಿದ್ದಾರೆ.

ಕೆ.ದೇವರಹಳ್ಳಿ ಸುತ್ತಮುತ್ತ ಆನೆಗಳ ಉಪಟಳ: ಸ್ಥಳಕ್ಕೆ ಬಾರದ ಅರಣ್ಯ ಅಧಿಕಾರಿಗಳು

ಯಳಂದೂರು, ಜೂ.10– ಶ್ರೀ ಬಿಳಿಗಿರಿರಂಗನಾಥ ಸ್ವಾಮಿ ಬೆಟ್ಟದ ಕಾಡಂಚಿನಲ್ಲಿರುವ ಕೃಷಿ ಜಮೀನಿಗೆ ಆನೆಗಳು ದಾಳಿ ನಡೆಸಿ ಬಾಳೆ ಫಸಲನ್ನು ನಾಶಪಡಿಸಿರುವ ಘಟನೆ ನಿನ್ನೆ ರಾತ್ರಿ ನಡೆದಿದೆ.

ಶ್ರೀ ಬಿಳಿಗಿರಂಗನಾಥ ಸ್ವಾಮಿ ಹುಲಿ ಸಂರಕ್ಷಿತ ಅರಣ್ಯದಲ್ಲಿರುವ ಕೆ. ದೇವರಹಳ್ಳಿ ಗ್ರಾಮದ ಕಾರ್ತಿಕ್ ಹೆಗ್ಗಡೆ ಎಂಬವರಿಗೆ ಸೇರಿದ ಕೃಷಿ ಜಮೀನಿಗೆ ರಾತ್ರಿ ಆನೆಗಳ ಹಿಂಡು ಜಮೀನು ರಕ್ಷಣೆಗೆ ಹಾಕಲಾಗಿದ್ದ ಸೋಲಾರ್ ಬೇಲಿಯನ್ನು ಮುರಿದು ಒಳಗೆ ಬಂದು ಬಾಳೆ ಫಸಲನ್ನು ತುಳಿದು ನಾಶಮಾಡಿವೆ. ಕಳೆದ ತಿಂಗಳಿಂದ ಸತತವಾಗಿ ಆನೆಗಳು ಸೋಲಾರ್ ತಂತಿಗಳನ್ನು ಮುರಿದು ದಾಳಿ ನಡೆಸಿದ್ದರಿಂದ ಲಕ್ಷಾಂತರ ರೂಗಳ ಫಸಲು ನಷ್ಟವಾಗಿದೆ.



ತಾಲೂಕಿನ ಕೆ.ದೇವರಹಳ್ಳಿ ಗ್ರಾಮದ ಬಳಿ ಇರುವ ಕೃಷಿ ಜಮೀನಿಗೆ ಆನೆಗಳು ದಾಳಿ ನಡೆಸಿ ಫಸಲು ನಾಶಪಡಿಸಿರುವುದು.

ಹಲವಾರು ಬಾರಿ ಕಾಡುಪ್ರಾಣಿಗಳಾದ ಆನೆ, ಜಿಂಕೆ, ಕಾಡೆಮ್ಮೆ ಸೇರಿದಂತೆ ಕಾಡುಹಂದಿಗಳು ದಾಳಿ ನಡೆಸುತ್ತಿರುವ ಬಗ್ಗೆ ಅರಣ್ಯ ಇಲಾಖೆಗೆ ಮಾಹಿತಿ ನೀಡಿದರೂ ಕೂಡ ಅರಣ್ಯ ಇಲಾಖೆಯವರು ಕಾಡುಪ್ರಾಣಿ ಹಾವಳಿ ತಪ್ಪಿಸಲು ನಿರ್ಲಕ್ಷ ವಹಿಸಿದ್ದಾರೆ.

ಏಕಾಏಕಿ ಕಾಡಾನೆ ಇಂದು ಕೃಷಿ ಜಮೀನಿಗೆ ನುಗ್ಗುವುದರಿಂದ ರೈತರು ಆತಂಕಗೊಂಡು ಪ್ರಾಣಭೀತಿಯಿಂದ ಓಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ.

ದೂರಿಗೆ ಸ್ಪಂದಿಸದ ಅರಣ್ಯ ಅಧಿಕಾರಿಗಳು: ಕೃಷಿ ಜಮೀನಿಗೆ ಹಲವಾರು ಬಾರಿ ಆನೆಗಳು ದಾಳಿ ನಡೆಸಿ ಫಸಲು ನಾಶಪಡಿಸಿದ್ದು, ಹಾವಳಿ ತಪ್ಪಿಸುವಂತೆ ಲಿಖಿತವಾಗಿ ದೂರು ನೀಡಿದ್ದರೂ ಕೂಡ ಅಧಿಕಾರಿಗಳು ಮಾತ್ರ ನಿರ್ಲಕ್ಷ್ಯ ತಾಳಿದ್ದಾರೆ. ಇದೇ ರೀತಿ ಮುಂದುವರೆದರೆ ಅರಣ್ಯ ಇಲಾಖೆ ಮುಂದೆ ಪ್ರತಿಭಟನೆ ನಡೆಸುವುದರ ಜೊತೆಗೆ ಹಿರಿಯ ಅಧಿಕಾರಿಗಳಿಗೆ ದೂರು ನೀಡುವುದಾಗಿ ರೈತ ಕಾರ್ತಿಕ್ ಹೆಗ್ಡೆ ಎಚ್ಚರಿಕೆ ನೀಡಿದ್ದಾರೆ.

ಕೇವಲ 6 ಗಂಟೆ ಅಂತರದಲ್ಲೇ ಇಬ್ಬರ ಮೇಲೆ ಹುಲಿ ದಾಳಿ

ಮಹಿಳೆ ಸಾವು, ಯುವಕನಿಗೆ ತೀವ್ರ ಗಾಯ

● ಕೆಲವೇ ಗಂಟೆಯಲ್ಲಿ ಹುಲಿ ಸೆರೆ ಹಿಡಿದ ಅರಣ್ಯ ಸಿಬ್ಬಂದಿ ● ಬಿಆರ್‌ಟಿ ಅರಣ್ಯದ ಬೇಡುಗುಳಿ ಬಳಿ ಘಟನೆ

ಚಾಮರಾಜನಗರ, ಜೂ.10– ಕೇವಲ ಆರು ಗಂಟೆಗಳ ಅಂತರದಲ್ಲಿ ಬಹಿರ್ದೆಸೆಗೆ ತೆರಳಿದ್ದ ಮಹಿಳೆ ಹಾಗೂ ಯುವಕನ ಮೇಲೆ ಹುಲಿ ದಾಳಿ ನಡೆಸಿದ್ದು, ಈ ದಾಳಿಯಲ್ಲಿ ಮಹಿಳೆ ಸಾವನ್ನಪ್ಪಿದ್ದು, ಯುವಕ ತೀವ್ರವಾಗಿ ಗಾಯಗೊಂಡಿದ್ದಾನೆ.

ತಾಲೂಕಿನ ಬಿಆರ್‌ಟಿ ಅರಣ್ಯ ವ್ಯಾಪ್ತಿಯ ಬೇಡುಗುಳಿ ಬಳಿಯ ರಾಮಯ್ಯನ ಪೋಡಿನ ಗಿರಿಜನ ಕಾಲೋನಿಯ ನಿವಾಸಿ ರಂಗಮ್ಮ (55) ಹುಲಿ ದಾಳಿಯಿಂದ ಸಾವನ್ನಪ್ಪಿದ್ದರೆ, ಇದೇ ಕಾಲೋನಿಯ ನಿವಾಸಿ ರವಿ (35) ಗಾಯಗೊಂಡು ಸಿಮ್ಸ್‌ನಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಪ್ರಾಣಾಪಾಯದಿಂದ ಪಾರಾಗಿದ್ದಾನೆ.

ನಿನ್ನೆ ರಾತ್ರಿ ಬಹಿರ್ದೆಸೆಗೆಂದು ಹೋಗಿದ್ದ ರವಿಯ ಮೇಲೆ ದಾಳಿ ನಡೆಸಿದಾಗ ಆತನ ತಲೆ ಮತ್ತು ಕಾಲಿಗೆ ತೀವ್ರ ಗಾಯವಾಗಿದೆ. ಇದಾದ 6 ಗಂಟೆಯ ಅವಧಿಯಲ್ಲೇ ಇಂದು ಮುಂಜಾನೆ ಇದೇ ಪೋಡಿನ ನಿವಾಸಿಯಾದ ರಂಗಮ್ಮ ಬಹಿರ್ದೆಸೆಗೆ ಹೋಗಿದ್ದಾಗ ಏಕಾಏಕಿ ಹುಲಿ ದಾಳಿ ನಡೆಸಿದ ಪರಿಣಾಮ ಆಕೆ ಸ್ಥಳದಲ್ಲೇ ಸಾವನ್ನಪ್ಪಿದ್ದಾಳೆ.



ಗಾಯಾಳು ರವಿ

ಹುಲಿಯ ಸೆರೆ: ಘಟನೆ ನಡೆದ ಕೆಲವೇ ಗಂಟೆಗಳಲ್ಲಿ ಹುಲಿಯನ್ನು ಅರಣ್ಯ ಇಲಾಖೆ ಸಿಬ್ಬಂದಿ ಸೆರೆ ಹಿಡಿಯುವಲ್ಲಿ ಯಶಸ್ವಿಯಾಗಿದ್ದು, ಸುಮಾರು 10 ವರ್ಷದ ಗಂಡು ಹುಲಿ ಎಂದು ಗುರುತಿಸಲಾಗಿದೆ. ಸೋಮವಾರ ರಾತ್ರಿ ಹಾಗೂ ಮಂಗಳವಾರ ಮುಂಜಾನೆ ರಾಮಯ್ಯನ ಪೋಡಿನ ಗಿರಿಜನ ಕಾಲೋನಿಯ ಇಬ್ಬರ ಮೇಲೆ ಹುಲಿ ದಾಳಿ ನಡೆಸಿರುವ ವಿಚಾರ ತಿಳಿದು ಕೂಡಲೇ ಕಾರ್ಯಪ್ರವೃತ್ತರಾದ ಅರಣ್ಯ ಇಲಾಖೆ ಸಿಬ್ಬಂದಿ ಘಟನಾ ಸ್ಥಳಕ್ಕೆ ತೆರಳಿ ಪರಿಶೀಲಿಸಿ, ಕಾರ್ಯಾಚಾರಣೆ ಆರಂಭಿಸಿದರು. ಈ ವೇಳೆ ಪೋಡಿನ ಅಸುಪಾಸಿನ ನಾಲೆಯಲ್ಲಿ ಹುಲಿ ಓಡಾಡುತ್ತಿರುವ ಬಗ್ಗೆ ದೊರೆತ ಖಚಿತ ಮಾಹಿತಿ ಆಧರಿಸಿದ ಸಿಬ್ಬಂದಿ ಹುಲಿಗೆ ಅರವಳಿಕೆ ಚುಚ್ಚುಮದ್ದು ನೀಡಿ ಸೆರೆ ಹಿಡಿಯುವಲ್ಲಿ ಯಶಸ್ವಿಯಾಗಿದ್ದಾರೆ.

ಒಂದೇ ಹುಲಿಯಿಂದ ದಾಳಿ: ರಂಗಮ್ಮ ಹಾಗೂ ರವಿ ಮೇಲೆ ದಾಳಿ ನಡೆಸಿರುವ ಹುಲಿ ಒಂದೇ ಆಗಿದ್ದು, ಕಾರ್ಯಾಚಾರಣೆ ಮೂಲಕ ಸೆರೆ ಹಿಡಿಯಲಾಗಿದೆ ಎಂದು ಬಿಆರ್‌ಟಿ ಉಪ ಅರಣ್ಯ ಸಂರಕ್ಷಣಾಧಿಕಾರಿ ಬಿ.ಎಸ್. ಶ್ರೀಪತಿ ತಿಳಿಸಿದರು. ಶಾಸಕ ಸಿ. ಪುಟ್ಟರಂಗಶೆಟ್ಟಿ ಭೇಟಿ ನೀಡಿ ಗಾಯಾಳು ರವಿಯ ಆರೋಗ್ಯವನ್ನು ವಿಚಾರಿಸಿದರು.

ಸೂಕ್ತ ಪರಿಹಾರಕ್ಕೆ ಸಚಿವರ ಸೂಚನೆ: ರಾಮಯ್ಯನ ಪೋಡುವಿನಲ್ಲಿ ಹುಲಿ ದಾಳಿಯಿಂದ ರಂಗಮ್ಮ ಮೃತಪಟ್ಟಿರುವ ಬಗ್ಗೆ ಅರಣ್ಯ ಸಚಿವ ಈಶ್ವರ ಬಿ.ಖಂಡ್ರೆ ಸಂತಾಪ ವ್ಯಕ್ತಪಡಿಸಿದ್ದು, ಇವರ ಕುಟುಂಬಕ್ಕೆ ಸೂಕ್ತ ಪರಿಹಾರ ನೀಡುವಂತೆ ಅರಣ್ಯ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಹಾಗೂ ಗಾಯಾಳು ರವಿಯ ಚಿಕಿತ್ಸಾ ವೆಚ್ಚ ಭರಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು. ಕಾಡಿನಂಚಿನ ಜನರು ರಾತ್ರಿಯ ವೇಳೆ ಮತ್ತು ಮುಂಜಾನೆ ಅರಣ್ಯ ಪ್ರದೇಶದಲ್ಲಿ ಸಂಚರಿಸುವಾಗ ಎಚ್ಚರಿಕೆಯಿಂದ ಇರಬೇಕು ಎಂದು ಮನವಿ ಮಾಡಿದ್ದಾರೆ.



ಸೆರೆಯಾದ ಹುಲಿ

ಛಲವಾದಿ ನಾರಾಯಣಸ್ವಾಮಿ ವಿರುದ್ಧ ದಸಂಸ ಪ್ರತಿಭಟನೆ



ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಅಸಂವಿಧಾನಿಕ ಪದ ಬಳಕೆ ಮಾಡಿರುವುದನ್ನು ಖಂಡಿಸಿ ರಾಜ್ಯ ದಸಂಸ ಡಿ.ಜಿ.ಸಾಗರ್ ಬಣದ ಜಿಲ್ಲಾ ಸಮಿತಿ ನಗರದ ಜಿಲ್ಲಾಡಳಿತ ಭವನದ ಎದುರು ಪ್ರತಿಭಟನೆ ನಡೆಸಲಾಯಿತು.


ಚಾಮರಾಜನಗರ, ಜೂನ್ 10 – ಸಚಿವ ಪ್ರಿಯಾಂಕ್ ಖರ್ಗೆ ಅವರ ವಿರುದ್ಧ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅಸಂವಿಧಾನಿಕ ಪದ ಬಳಕೆ ಮಾಡಿರುವುದನ್ನು ಖಂಡಿಸಿ ರಾಜ್ಯ ದಲಿತ ಸಂಘರ್ಷ ಸಮಿತಿಯ ಡಿ.ಜಿ. ಸಾಗರ್ ಬಣ ನಗರದ ಜಿಲ್ಲಾಡಳಿತ ಭವನದ ಎದುರು ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನೆ ನೇತೃತ್ವ ವಹಿಸಿದ ಸಿ.ಎಂ. ಶಿವಣ್ಣ ಮಾತನಾಡಿ, ಬಿಜೆಪಿ ಎತ್ತಿಕಟ್ಟಿ ಜಾತ್ಯಾತೀತ ಅಂಬೇಡ್ಕರ್‌ವಾದಿ ಸಚಿವ ಪ್ರಿಯಾಂಕ ಖರ್ಗೆ ವಿರುದ್ಧ ಅಸಂವಿಧಾನಿಕ ಪದ ಬಳಕೆ ಮಾಡಿ ಹೇಳಿಕೆ ನೀಡಿಸುವ ಕೆಲಸ ಮಾಡುತ್ತಿರುವುದು ಸರಿಯಲ್ಲ. ಕೂಡಲೇ ಛಲವಾದಿ ನಾರಾಯಣಸ್ವಾಮಿ, ಎನ್ .ರವಿಕುಮಾರ್ ಎಂಎಲ್‌ಸಿ ಸ್ಥಾನದಿಂದ ವಜಾಗೊಳಿಸಬೇಕು ಎಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ತಾಲೂಕು ಅಧ್ಯಕ್ಷ ಕೊತ್ತಲವಾಡಿ ಶಿವು, ಯಳಂದೂರು ತಾಲೂಕು ಅಧ್ಯಕ್ಷ ಮಲ್ಲಿಕಾರ್ಜುನ, ಮಧು, ಮಹಾದೇವಸ್ವಾಮಿ, ಆಟೋ ಉಮೇಶ್, ಉಮೇಶ್ ಕುಮಾರ್, ಪ್ರಕಾಶ್, ಪುಟ್ಟನಂಜಮ್ಮ.ಮಹದೇವಮ್ಮ, ಗೌರಮ್ಮ, ಇತರರು ಭಾಗವಹಿಸಿದ್ದರು.

ಮುದ್ದೆ ಉಂಡಿದ್ದೀರ!

ಕೊಳ್ಳೇಗಾಲ, ಜೂ.10– ತಾಲೂಕಿನ ಪಾಳ್ಯ ಗ್ರಾಮದಲ್ಲಿ ರಾತ್ರಿ ಕೋಳಿ ಸಾಂಬಾರಿನ ಜೊತೆ ರಾಗಿ ಮುದ್ದೆ, ತಿನ್ನುವ ವಿಭಿನ್ನ ರೀತಿಯ ಸ್ಪರ್ಧೆ ನಡೆಯಿತು. ಸ್ಪರ್ಧೆಯಲ್ಲಿ ಕೋಳಿ ಸಾರಿನ ಜೊತೆ 11 ರಾಗಿ ಮುದ್ದೆ ಸೇವಿಸಿದ ಕುನ್ನನಾಯಕ ಪ್ರಥಮ ಸ್ಥಾನಕ್ಕೆ ಭಾಜನರಾದರು.

ಗ್ರಾಮೀಣ ಸೊಗಡು, ಆಹಾರ ಪದ್ಧತಿ ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಸ್ಪರ್ಧೆಯನ್ನು ಆಯೋಜಿಸಲಾಗಿದ್ದು ತಲಾ 250 ಗ್ರಾಂ ತೂಕದ 200 ಮುದ್ದೆ ಹಾಗೂ 30 ಕೆಜಿ ಕೋಳಿ ಸಾಂಬಾರನ್ನು ತಯಾರಿಸಲಾಗಿದ್ದು ಈ ಸ್ಪರ್ಧೆಯಲ್ಲಿ 18 ಪುರುಷರು ಹಾಗೂ ಐವರು ಮಹಿಳೆಯರು ಭಾಗವಹಿಸಿದ್ದರು. ಪಾಲ್ಗೊಂಡವರನ್ನು ಹಾಗೂ ಆಯೋಜಕ ರವಿಕುಮಾರ್‌ರನ್ನು ಮಾಜಿ ಶಾಸಕ ಆರ್. ನರೇಂದ್ರ ಬಹುಮಾನ ವಿತರಿಸಿ ಪ್ರಶಂಸಿಸಿದರು.



ತಾಲೂಕಿನ ಪಾಳ್ಯ ಗ್ರಾಮದಲ್ಲಿ ರಾಗಿ ಮುದ್ದೆ ಉಣ್ಣುವ ಸ್ಪರ್ಧೆಯಲ್ಲಿ ಮೊದಲ ಬಹುಮಾನ ಗೆದ್ದ ಕುನ್ನನಾಯಕನಿಗೆ ಮಾಜಿ ಶಾಸಕ ನರೇಂದ್ರ ಬಹುಮಾನ ವಿತರಿಸಿದರು.

ಪುರುಷ ವಿಭಾಗದಲ್ಲಿ ಪ್ರಥಮ ಸ್ಥಾನ ಗಳಿಸಿದ ಕುನ್ನಸೀಗ ನಾಯಕರಿಗೆ 5 ಸಾವಿರ ರೂ. ನಗದು, ರಾಮರಾಜ್ ಕಂಪನಿಯ ಒಂದು ಸೆಟ್ ಬಟ್ಟೆ ವಿತರಿಸಲಾಯಿತು. 9 ರಾಗಿಮುದ್ದೆ ಮತ್ತು ನಾಟಿ ಕೋಳಿ ಸಾಂಬಾರು ಸವಿದು ದ್ವಿತೀಯ ಸ್ಥಾನ ಗಳಿಸಿದ ನಾಗಮಲ್ಲರಿಗೆ 2.5 ಸಾವಿರ ರೂ. ನಗದು, ಮತ್ತು ಬಟ್ಟೆ ವಿತರಿಸಲಾಯಿತು

ಮಹಿಳೆಯರ ವಿಭಾಗದ ಸ್ಪರ್ಧೆಯಲ್ಲಿ 5 ರಾಗಿ ಮುದ್ದೆ, ಕೋಳಿ ಸಾಂಬಾರು ಸವಿದು ಪ್ರಥಮ ಸ್ಥಾನ ಗಳಿಸಿದ ಮಹದೇವಮ್ಮರವರಿಗೆ 2.5 ಸಾವಿರ ನಗದು, ಸೀರೆ ಹಾಗೂ ಮೂರೂವರೆ ಮುದ್ದೆ, ಸವಿದು ದ್ವಿತೀಯ ಸ್ಥಾನ ಗಳಿಸಿದ ಸ್ಫೂರ್ತಿರವರಿಗೆ 2 ಸಾವಿರ ನಗದು, ಮತ್ತು ಸೀರೆಯನ್ನು ಬಹುಮಾನವಾಗಿ ನೀಡಿ ಮಾಜಿ ಶಾಸಕರ ನರೇಂದ್ರ ಮೆಚ್ಚುಗೆ ವ್ಯಕ್ತಪಡಿಸಿದರು.

ಡಿವೈಡರ್‌ಗೆ ಬೈಕ್ ಡಿಕ್ಕಿ: ಸವಾರ ಸಾವು

ಹಿಂಬದಿ ಸವಾರನಿಗೆ ತೀವ್ರ ಗಾಯ

ಕೊಳ್ಳೇಗಾಲ, ಜೂ.10– ಕೆರೆ ಸುತ್ತಲೂ ಅಳವಡಿಸಿರುವ ತಡೆಗೋಡೆಗೆ ಬೈಕ್ ಡಿಕ್ಕಿಯಾದ ಪರಿಣಾಮ ಬೈಕ್ ಸವಾರ ಅಸು ನೀಗಿ ಹಿಂಬದಿ ಸವಾರ ತೀವ್ರವಾಗಿ ಗಾಯಗೊಂಡಿರುವ ಘಟನೆ ನಡೆದಿದೆ.

ಕಾಮಗೆರೆ ಗ್ರಾಮದ ನಿವಾಸಿ ಪವನ್(20) ಸಾವಿಗೀಡಾಗಿರುವ ದುರ್ದೈವಿಯಾಗಿದ್ದು, ಬೈಕ್‌ನ ಹಿಂಬದಿ ಬೈಕ್ ಸವಾರ ವಿಶ್ವ(20) ತೀವ್ರವಾಗಿ ಗಾಯಗೊಂಡಿದ್ದು, ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ಕೊಡಿಸಿ ಹೆಚ್ಚಿನ ಚಿಕಿತ್ಸೆಗಾಗಿ ಮೈಸೂರಿನ ಕೆ.ಆರ್.ಆಸ್ಪತ್ರೆಗೆ ದಾಖಲು ಮಾಡಲಾಗಿದೆ.

ನೆನ್ನೆ ರಾತ್ರಿ ಕೊಳ್ಳೇಗಾಲದಿಂದ ಕಾಮಗೆರೆಗೆ ಬೈಕ್‌ನಲ್ಲಿ ತೆರಳುತ್ತಿದ್ದ ವೇಳೆ ಚಾಲಕನ ನಿಯಂತ್ರಣ ತಪ್ಪಿ ಮಧುವನಹಳ್ಳಿ ಹೊರವಲಯದ ಕೆರೆಗೆ ಅಳವಡಿಸಿದ್ದ ತಡೆಗೋಡೆಗೆ ಬೈಕ್ ಡಿಕ್ಕಿ ಹೊಡೆದಿದೆ.



ಬೈಕ್ ಸವಾರ ಪವನ್

ಗಾಯಾಳುಗಳನ್ನು ತಕ್ಷಣ ಸ್ಥಳೀಯರು ಆಸ್ಪತ್ರೆಗೆ ಕರೆತಂದು ಪ್ರಾಥಮಿಕ ಚಿಕಿತ್ಸೆ ಕೊಡಿಸಿ ಹೆಚ್ಚಿನ ಚಿಕಿತ್ಸೆಗಾಗಿ ಮೈಸೂರಿನ ಕೆ.ಆರ್.ಆಸ್ಪತ್ರೆಗೆ ಕಳುಹಿಸಲಾಗಿತ್ತು. ಆದರೆ ನೆನ್ನೆ ಮಧ್ಯರಾತ್ರಿ ಚಿಕಿತ್ಸೆ ಫಲಕಾರಿಯಾಗದೆ ಗಾಯಾಳು ಪವನ್ ಕೊನೆಯುಸಿರೆಳೆದಿದ್ದಾನೆ.

ಈ ಸಂಬಂಧ ಕೊಳ್ಳೇಗಾಲ ಗ್ರಾಮಾಂತರ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ

ನಾಳೆ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ

ಚಾಮರಾಜನಗರ, ಜೂ. 10 – ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕಾರ್ಮಿಕ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸೈಟಿ ಹಾಗೂ ವಿವಿಧ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆಯನ್ನು ಜೂನ್ 12ರಂದು ನಗರದಲ್ಲಿ ಹಮ್ಮಿಕೊಳ್ಳಲಾಗಿದೆ.

ಬೆಳಿಗ್ಗೆ 9.30 ಗಂಟೆಗೆ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ಜಾಥಾ ಕಾರ್ಯಕ್ರಮವನ್ನು ನಗರದ ಚಾಮರಾಜೇಶ್ವರ ದೇವಸ್ಥಾನದ ಮುಂಭಾಗ ಏರ್ಪಡಿಸಲಾಗಿದ್ದು, ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ಜಿ. ಪ್ರಭಾವತಿ ಜಾಥಾಗೆ ಚಾಲನೆ ನೀಡಿ ನಂತರ ಸಭೆಯನ್ನು ಉದ್ಘಾಟಿಸುವರು. ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಸಭೆಯ ಅಧ್ಯಕ್ಷತೆ ವಹಿಸುವರು.

ಕಾಲ್ತುಳಿತ ಪ್ರಕರಣ; ಬೆಂಗಳೂರು ಪಂದ್ಯಗಳನ್ನು ಸ್ಥಳಾಂತರಿಸಿದ ಬಿಸಿಸಿಐ



ಬೆಂಗಳೂರು, ಜೂ.10– ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕಳೆದ ಬುಧವಾರ ನಡೆದ ಕಾಲ್ತುಳಿತ ಘಟನೆ ನಂತರ ಕೆಎಸ್‌ಸಿಎಗೆ ದೊಡ್ಡ ಪೆಟ್ಟು ಬಿದ್ದಿದೆ. ಬೆಂಗಳೂರಿನ ಕ್ರಿಕೆಟ್ ಆತಿಥ್ಯಕ್ಕೆ ಭಾರಿ ಹೊಡೆತ ಬಿದ್ದಿದ್ದು ಬೆಂಗಳೂರಿನಲ್ಲಿ ನಡೆಯಬೇಕಿದ್ದ ಪಂದ್ಯಗಳನ್ನು ಬಿಸಿಸಿಐ ಸ್ಥಳಾಂತರಿಸಿದೆ.

ನವೆಂಬರ್ 13 ರಿಂದ 19ರವರೆಗೆ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯಬೇಕಿದ್ದ ಭಾರತ 'ಎ' ಮತ್ತು ದಕ್ಷಿಣ ಆಫ್ರಿಕಾ 'ಎ' ನಡುವಿನ ಏಕದಿನ ಸರಣಿಯ ಮೂರು ಪಂದ್ಯಗಳನ್ನು ಬಿಸಿಸಿಐ ಸ್ಥಳಾಂತರಿಸಿದೆ. ಯಾವುದೇ ನಿರ್ದಿಷ್ಟ ಕಾರಣ ನೀಡದೇ, ಬಿಸಿಸಿಐ ಪತ್ರಿಕಾ ಪ್ರಕಟಣೆಯನ್ನು ಬಿಡುಗಡೆ ಮಾಡಿ, ಬೆಂಗಳೂರು ಪಂದ್ಯಗಳನ್ನು ರಾಜ್‌ಕೋಟ್‌ಗೆ ಸ್ಥಳಾಂತರಿಸಲಾಗಿದೆ ಎಂದು ತಿಳಿಸಿದೆ. ಕೆಎಸ್‌ಸಿಎ ಅಧ್ಯಕ್ಷರು ಕಾರಣಗಳ ಬಗ್ಗೆ ಮಾತನಾಡಲಿಲ್ಲ. ಆದರೆ ಕಾಲ್ತುಳಿತ ಮತ್ತು ಸ್ಥಳಗಳ ಬದಲಾವಣೆಗೆ ಸಂಬಂಧವಿಲ್ಲ ಎಂದು ಸಮರ್ಥಿಸಿಕೊಂಡರು. ಗುರುವಾರ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಕೆಎಸ್‌ಸಿಎಗೆ ತಿಳಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

ಮೂಲಗಳ ಪ್ರಕಾರ, ಬಿಸಿಸಿಐ ಮತ್ತು ಅಂತರರಾಷ್ಟ್ರೀಯ ಕ್ರಿಕೆಟ್ ಮಂಡಳಿ (ಐಸಿಸಿ) ಸೆಪ್ಟೆಂಬರ್ ಮತ್ತು ನವೆಂಬರ್ ನಡುವೆ ಬೆಂಗಳೂರಿನಲ್ಲಿ ನಡೆಯಲಿರುವ ಐಸಿಸಿ ಮಹಿಳಾ ವಿಶ್ವಕಪ್ ಪಂದ್ಯಗಳ ಮೇಲೂ ಪರಿಣಾಮ ಬೀರುವ ಸಾಧ್ಯತೆ ಇದೆ.

ಚಿನ್ನಸ್ವಾಮಿ ಕ್ರೀಡಾಂಗಣವು ಭಾರತದ ಐದು ಕ್ರೀಡಾಂಗಣದಲ್ಲಿ ಒಂದಾಗಿದೆ. ಇಲ್ಲಿ ಭಾರತ (ಸೆಪ್ಟೆಂಬರ್ 30 ರಂದು) ಭಾಗವಹಿಸುವ ಉದ್ಘಾಟನಾ ಪಂದ್ಯ, ಒಂದು ಸೆಮಿಫೈನಲ್ (ಅಕ್ಟೋಬರ್ 30) ಮತ್ತು ಪಾಕಿಸ್ತಾನ ಅರ್ಹತೆ ಪಡೆಯದಿದ್ದರೆ ಫೈನಲ್ (ನವೆಂಬರ್ 2) ಪಂದ್ಯಗಳಿಗೆ ಬೆಂಗಳೂರಿನ ಕ್ರೀಡಾಂಗಣವನ್ನು ಮೀಸಲಿಡಲಾಗಿದೆ. ಒಂದು ವೇಳೆ ಪಾಕ್ ಫೈನಲ್‌ಗೆ ಬಂದರೆ ಈ ಪಂದ್ಯವನ್ನು ಕೊಲಂಬೊಗೆ ಸ್ಥಳಾಂತರಿಸಲಾಗುತ್ತದೆ.

50 ವರ್ಷಗಳಿಂದ ಅಭಿಮಾನಿಗಳಿಗೆ ಸಂತೋಷವನ್ನು ಉಣಬಡಿಸುತ್ತಿರುವ ಕ್ರೀಡಾಂಗಣದಲ್ಲಿ ನಡೆದ ದುರಂತವನ್ನು ನಾನು ಇನ್ನೂ ಅರಗಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ. ಮಹಿಳಾ ವಿಶ್ವಕಪ್ ಪಂದ್ಯಗಳನ್ನು ಬೆಂಗಳೂರಿನಿಂದ ಹೊರಗೆ ಸ್ಥಳಾಂತರಿಸಿದರೆ, ಅದು ರಾಜ್ಯದಲ್ಲಿ ಕ್ರಿಕೆಟ್‌ಗೆ ದೊಡ್ಡ ಹೊಡೆತವಾಗುತ್ತದೆ. ಮಹಿಳಾ ಕ್ರಿಕೆಟ್‌ಗೆ ಸಂಬಂಧಿಸಿದಂತೆ, ಕಳೆದ ಎರಡೂವರೆ ವರ್ಷಗಳಲ್ಲಿ ನಾವು ಹೆಚ್ಚಿನ ಬೆಳವಣಿಗೆಯನ್ನು ಕಂಡಿಲ್ಲ. ಇದು ನಮ್ಮನ್ನು ಮತ್ತಷ್ಟು ಹಿನ್ನಡೆಗೆ ತಳ್ಳುತ್ತದೆ ಎಂದು ಭಾರತದ ಮಾಜಿ ನಾಯಕಿ ಶಾಂತಾ ರಂಗಸ್ವಾಮಿ ಹೇಳಿದರು.

ಮೂಲಗಳ ಪ್ರಕಾರ, ಕೆಎಸ್‌ಸಿಎ ಸ್ವಲ್ಪ ಸಮಯದವರೆಗೆ ಪ್ರಮುಖ ಕ್ರಿಕೆಟ್ ಪಂದ್ಯವನ್ನು ಆಯೋಜಿಸುವ ಸಾಧ್ಯತೆಯಿಲ್ಲ. ಮೊದಲಿಗೆ, ಕ್ರೀಡಾಂಗಣವನ್ನು ನವೀಕರಿಸಬೇಕಾಗಿದೆ. ಕಾಲ್ತುಳಿತದ ದಿನ ಅಭಿಮಾನಿಗಳ ಗದ್ದಲದ ಪರಿಣಾಮವಾಗಿ ಕಾಂಪೌಂಡ್ ಗೋಡೆಗಳು, ರೇಲಿಂಗ್‌ಗಳು, ಮೆಟ್ಟಿಲುಗಳು ಮತ್ತು ನೈರ್ಮಲ್ಯ ಸೇರಿದಂತೆ ರಚನೆಗೆ ಗಮನಾರ್ಹ ಹಾನಿಯಾಗಿದೆ.

ಆಪರೇಷನ್ ಸಿಂಧೂರ್ ನಿಯೋಗ ವಿದೇಶದಿಂದ ಭಾರತಕ್ಕೆ ವಾಪಸ್

ಪ್ರಧಾನಿ ಮೋದಿ ಜೊತೆ ತಮ್ಮ ಅನುಭವ ಹಂಚಿಕೊಂಡ ಸದಸ್ಯರು



ನವದೆಹಲಿ, ಜೂ.10– ಆಪರೇಷನ್ ಸಿಂಧೂರ್ ನಂತರ ಪಾಕಿಸ್ತಾನದ ಭಯೋತ್ಪಾದನೆಯ ವಿರುದ್ಧ ಭಾರತದ ಕಠಿಣ ನಿಲುವನ್ನು ಪ್ರಸ್ತುತಪಡಿಸಲು ಜಾಗತಿಕ ರಾಜಧಾನಿಗಳಿಗೆ ಭೇಟಿ ನೀಡಿದ್ದ ಬಹುಪಕ್ಷೀಯ ನಿಯೋಗದ ಸದಸ್ಯರು ಭಾರತಕ್ಕೆ ವಾಪಸಾಗಿದ್ದಾರೆ. ಈ ಕಾರ್ಯಾಚರಣೆಯಲ್ಲಿ ಪ್ರಸ್ತುತ ಸಂಸದರು, ಮಾಜಿ ಸಂಸದರು ಮತ್ತು ಮಾಜಿ ರಾಜತಾಂತ್ರಿಕರು ಸೇರಿದ್ದಾರೆ. ನಿಯೋಗವು ಪಾಕಿಸ್ತಾನ ಪ್ರಾಯೋಜಿತ ಭಯೋತ್ಪಾದನೆಯ ಸತ್ಯವನ್ನು ಹೊಸ ಸಂಕಲ್ಪದೊಂದಿಗೆ ಜಗತ್ತಿಗೆ ಪ್ರಸ್ತುತಪಡಿಸಿತು.

ಈ ನಿಯೋಗವು ಪ್ರಧಾನಿ ಮೋದಿಯವರೊಂದಿಗೆ ತನ್ನ ಅನುಭವಗಳನ್ನು ಹಂಚಿಕೊಂಡಿತು. ಎಲ್ಲರೂ ಪ್ರಧಾನಿಗೆ ತಮ್ಮ ಪ್ರತಿಕ್ರಿಯೆಯನ್ನು ನೀಡಿದರು. 50ಕ್ಕೂ ಹೆಚ್ಚು ಜನರನ್ನು ಒಳಗೊಂಡ ಈ ಏಳು ನಿಯೋಗಗಳ ಕೆಲಸವನ್ನು ಕೇಂದ್ರ ಸರ್ಕಾರ ಈಗಾಗಲೇ ಶ್ಲಾಘಿಸಿದೆ. ನಿಯೋಗವು 33 ವಿದೇಶಿ ರಾಜಧಾನಿಗಳು ಮತ್ತು ಯುರೋಪಿಯನ್ ಒಕ್ಕೂಟಕ್ಕೆ ಭೇಟಿ ನೀಡಿತ್ತು. ವಿದೇಶಾಂಗ ಸಚಿವ ಎಸ್.ಜೈಶಂಕರ್ ಕೂಡ ಈಗಾಗಲೇ ಈ ನಿಯೋಗಗಳನ್ನು ಭೇಟಿ ಮಾಡಿ ಅವರ ಪ್ರಯತ್ನಗಳನ್ನು ಶ್ಲಾಘಿಸಿದ್ದಾರೆ. ಇದು ಪಾಕಿಸ್ತಾನ ಪ್ರಾಯೋಜಿತ ಭಯೋತ್ಪಾದನೆಯ ವಿರುದ್ಧ ಭಾರತದ ಬಲವಾದ ನಿಲುವನ್ನು ಜಾಗತಿಕ ಮಟ್ಟಕ್ಕೆ ಕೊಂಡೊಯ್ದಿದೆ.

ಆಡಳಿತ ಒಕ್ಕೂಟದ ನಾಲ್ಕು ನಿಯೋಗಗಳ ನೇತೃತ್ವವನ್ನು ಬಿಜೆಪಿಯ ಇಬ್ಬರು ಸಂಸದರು, ಜೆಡಿ(ಯು)ನ ಒಬ್ಬರು ಮತ್ತು ಶಿವಸೇನೆಯ ಒಬ್ಬರು ವಹಿಸಿದ್ದರು. ಕಾಂಗ್ರೆಸ್, ಡಿಎಂಕೆ ಮತ್ತು ಎನ್‌ಸಿಪಿ (ಎಸ್‌ಪಿ) ಸದಸ್ಯರು ಸೇರಿದಂತೆ ಮೂರು ನಿಯೋಗಗಳ ನೇತೃತ್ವವನ್ನು ವಿರೋಧ ಪಕ್ಷದ ಸಂಸದರು ವಹಿಸಿದ್ದರು. ಬಿಜೆಪಿಯ ರವಿಶಂಕರ್ ಪ್ರಸಾದ್ ಮತ್ತು ಬೈ ಜಯಂತ್ ಪಾಂಡ, ಕಾಂಗ್ರೆಸ್‌ನ ಶಶಿ ತರೂರ್, ಜೆಡಿ(ಯು)ನ ಸಂಜಯ್ ಝಾ, ಶಿವಸೇನೆಯ ಶ್ರೀಕಾಂತ್ ಶಿಂಧೆ, ಡಿಎಂಕೆಯ ಕನಿಮೋಳಿ ಮತ್ತು ಎನ್‌ಸಿಪಿ (ಎಸ್‌ಪಿ) ನ ಸುಪ್ರಿಯಾ ಸುಳೆ ಅವರು ತಮ್ಮ ನಿಯೋಗಗಳ ನೇತೃತ್ವ ವಹಿಸಿ ವಿಶ್ವದ ವಿವಿಧ ಭಾಗಗಳಲ್ಲಿ ಭಯೋತ್ಪಾದನೆಯ ಬಗ್ಗೆ ಭಾರತದ ನಿಲುವನ್ನು ಮಂಡಿಸಿದರು.

ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ರಾಷ್ಟ್ರೀಯ ಏಕತೆಯ ಸಂದೇಶವನ್ನು ನೀಡುವುದು ಈ ನಿಯೋಗದ ಉದ್ದೇಶವಾಗಿತ್ತು. ಇದರಲ್ಲಿ, ಕಾಂಗ್ರೆಸ್‌ನ ಶಶಿ ತರೂರ್ ಮತ್ತು ಎಐಎಂಐಎಂನ ಅಸಾದುದ್ದೀನ್ ಓವೈಸಿ ಅವರಂತಹ ನಾಯಕರು ವಿದೇಶಗಳಲ್ಲಿ ಭಾರತದ ಹಿತಾಸಕ್ತಿಗಳನ್ನು ಪ್ರತಿಪಾದಿಸಲು ಆಡಳಿತ ಒಕ್ಕೂಟದ ಸದಸ್ಯರೊಂದಿಗೆ ಸೇರಿಕೊಂಡರು. ನಿಯೋಗದಲ್ಲಿ ಮಾಜಿ ಕೇಂದ್ರ ಸಚಿವ ಗುಲಾಮ್ ನಬಿ ಆಜಾದ್ ಮತ್ತು ಸಲ್ಮಾನ್ ಖುರ್ಷಿದ್ ಅವರಂತಹ ಪ್ರಮುಖ ಮಾಜಿ ಸಂಸದರು ಸಹ ಇದ್ದರು. ಅವರು ತಮ್ಮ ಅನುಭವದೊಂದಿಗೆ ಈ ಪ್ರಯತ್ನವನ್ನು ಬಲಪಡಿಸಿದರು.

ಕಾಶಿ ವಿಶ್ವನಾಥ ದೇಗುಲದಲ್ಲಿ ಅರ್ಚಕರ ಸೋಗಿನಲ್ಲಿದ್ದ 21 ಮಂದಿ ಬಂಧನ



ವಾರಣಾಸಿ, ಜೂ.10– ಕಾಶಿ ವಿಶ್ವನಾಥ ದೇಗುಲದಲ್ಲಿ ಸುಗಮವಾಗಿ ಪೂಜೆ, ದರ್ಶನ ವ್ಯವಸ್ಥೆ ಮಾಡಿಸುತ್ತೇವೆಂದು ಅರ್ಚಕರ ಸೋಗಿನಲ್ಲಿ ಭಕ್ತರಿಂದ ಸುಲಿಗೆ ಮಾಡುತ್ತಿದ್ದ 21 ಮಂದಿಯನ್ನು ಬಂಧಿಸಲಾಗಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಗಳು ಮಂಗಳವಾರ ತಿಳಿಸಿದ್ದಾರೆ.

ದೇಗುಲದ ಆವರಣದಲ್ಲಿ ಹಲವರು ಭಕ್ತರೊಂದಿಗೆ ಅನುಚಿತವಾಗಿ ವರ್ತಿಸುತ್ತಿರುವ ಬಗ್ಗೆ ಹಾಗೂ ಪೂಜೆ, ದರ್ಶನಕ್ಕೆ ವ್ಯವಸ್ಥೆ ಮಾಡಿಸುತ್ತೇವೆ ಎಂದು ನಂಬಿಸಿ ಭಕ್ತರಿಂದ ಹಣ ವಸೂಲಿ ಮಾಡುತ್ತಿರುವ ಬಗ್ಗೆ ಕಳೆದ ಕೆಲವು ದಿನಗಳಿಂದ ದೂರುಗಳು ಬರುತ್ತಿದ್ದವು. ಈ ಹಿನ್ನೆಲೆ ತನಿಖೆಗೆ ದಶಾಶ್ವಮೇಧ ಮತ್ತು ಚೌಕ ಪೊಲೀಸ್ ಠಾಣೆಯ ಪೊಲೀಸರನ್ನೊಳಗೊಂಡ ಜಂಟಿ ತಂಡ ರಚನೆ ಮಾಡಲಾಗಿತ್ತು. ತನಿಖೆ ನಡೆಸಿದ ವೇಳೆ ದಶಾಶ್ವಮೇಧ ಪೊಲೀಸರಿಗೆ 15 ಮಂದಿ ಹಾಗೂ ಚೌಕ ಠಾಣಾ ಪೊಲೀಸರಿಗೆ 6 ಜನ ನಕಲಿ ಅರ್ಚಕರು ಸಿಕ್ಕಿಬಿದ್ದಿದ್ದಾರೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಆರೋಪಿಗಳನ್ನು ವಶಕ್ಕೆ ಪಡೆದಿದ್ದು, ನ್ಯಾಯಾಂಗ ಪ್ರಕ್ರಿಯೆ ನಡೆಸಲಾಗುತ್ತಿದೆ. ದೇಗುಲದ ಆವರಣದಲ್ಲಿ ನಮ್ಮ ತಂಡ ಕಾರ್ಯಾಚರಣೆಯನ್ನು ಮುಂದುವರಿಸಿದ್ದು, ಇನ್ನಷ್ಟು ಇರಬಹುದಾದ ನಕಲಿ ಅರ್ಚಕರನ್ನು ಬಂಧಿಸಲಾಗುವುದು ಎಂದು ಸ್ಥಳೀಯ ಎಸಿಪಿ ವಿವರಿಸಿದ್ದಾರೆ.

ಬಸವಮಾರ್ಗ ಕುಡಿತ ಬಿಡಿಸುವ ಉಚಿತ ಶಿಬಿರ ಸಮಾರೋಪ

ಕುಡಿತದಿಂದ ಕೌಟುಂಬಿಕ, ಸಾಮಾಜಿಕ ಸಂಬಂಧ ಹಾಳು

ಆಯುಷ್ ಸಹಾಯಕ ನಿರ್ದೇಶಕ ಲಕ್ಷ್ಮಿನಾರಾಯಣ ಶೆಣೈ ಎಚ್ಚರಿಕೆ

ಮೈಸೂರು, ಜೂ.10– ಮದ್ಯ ವ್ಯಸನದಿಂದ ಆರೋಗ್ಯ ಮಾತ್ರವಲ್ಲದೆ ಕೌಟುಂಬಿಕ ಹಾಗೂ ಸಾಮಾಜಿಕ ಸಂಬಂಧ ಹಾಳಾಗುತ್ತದೆ ಎಂದು ಆಯುಷ್ ಇಲಾಖೆಯ ಸರ್ಕಾರಿ ಆಯುರ್ವೇದ ಸಂಶೋಧನಾ ಕೇಂದ್ರದ ಸಹಾಯಕ ನಿರ್ದೇಶಕ ಲಕ್ಷ್ಮಿನಾರಾಯಣ ಶೆಣೈ ಹೇಳಿದರು.

ಮೈಸೂರಿನ ಹೆಬ್ಬಾಳದಲ್ಲಿರುವ ಬಸವ ಮಾರ್ಗ ವ್ಯಸನ ಮುಕ್ತ ಕೇಂದ್ರದ ವತಿಯಿಂದ ಹಮ್ಮಿಕೊಂಡಿದ್ದ 10 ದಿನಗಳ 'ಕುಡಿತ ಬಿಡಿಸುವ ಉಚಿತ ಶಿಬಿರ'ದ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ತಾತ್ಕಾಲಿಕ ಉನ್ಮಾದ ನೀಡುವ ಕುಡಿತಕ್ಕೆ ಬಲಿಯಾಗಬೇಡಿ ಎಂದು ಸಲಹೆ ನೀಡಿದರು.

ಕುಟುಂಬದ ಒಬ್ಬ ಸದಸ್ಯ ಕುಡಿತಕ್ಕೆ ದಾಸನಾದರೆ ಉಳಿದೆಲ್ಲಾ ಸದಸ್ಯರು ಅದರ ದುಷ್ಪರಿಣಾಮ ಅನುಭವಿಸುತ್ತಾರೆ. ಒಬ್ಬನ ದುಶ್ಚಟದಿಂದ ಇಡೀ ಕುಟುಂಬ ಕಣ್ಣೀರಿನಲ್ಲಿ ಕೈ ತೊಳೆಯುವಂತಾಗುತ್ತದೆ ಎನ್ನುವುದನ್ನು ಮರೆಯಬಾರದು. ಕುಡಿತ ಬಿಡುವುದು ಅಸಾಧ್ಯ ಎಂಬ ಭಾವನೆಯಿಂದ ಹೊರಬಂದು, ನಿಮ್ಮ ಮನಸ್ಸನ್ನು ನಿಯಂತ್ರಣದಲ್ಲಿ ಇಟ್ಟುಕೊಳ್ಳಿ. ಜೀವನದಲ್ಲಿ ಶಿಸ್ತು ರೂಢಿಸಿಕೊಂಡು ಬದಲಾವಣೆ ಕಡೆಗೆ ಮುನ್ನುಗ್ಗಿ. ದೃಢ ಮನಸ್ಸಿನಿಂದ ಎಲ್ಲವೂ ಸಾಧ್ಯ ಎಂದು ಕಿವಿಮಾತು ಹೇಳಿದರು.

ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯದ ವಿಜಯನಗರ ಶಾಖೆಯ



ಮೈಸೂರಿನ ಬಸವ ಮಾರ್ಗ ವ್ಯಸನ ಮುಕ್ತ ಕೇಂದ್ರದ ವತಿಯಿಂದ ಹಮ್ಮಿಕೊಂಡಿದ್ದ 10 ದಿನಗಳ ಕುಡಿತ ಬಿಡಿಸುವ ಉಚಿತ ಶಿಬಿರ ಮಂಗಳವಾರ ಸಮಾರೋಪಗೊಂಡಿತು. ಈ ವೇಳೆ ಮಾತಾಜಿ ಬಿ.ಕೆ.ಸಂಧ್ಯಾ ಗಿಡಕ್ಕೆ ನೀರೆರೆದು ಕಾರ್ಯಕ್ರಮ ಉದ್ಘಾಟಿಸಿದರು. ಬಸವಮಾರ್ಗ ಸಂಸ್ಥೆಯ ಸಂಸ್ಥಾಪಕ ಬಸವಣ್ಣ ಹಾಗೂ ಸರ್ಕಾರಿ ಆಯುರ್ವೇದ ಸಂಶೋಧನಾ ಕೇಂದ್ರದ ಸಹಾಯಕ ನಿರ್ದೇಶಕ ಲಕ್ಷ್ಮಿನಾರಾಯಣ ಶೆಣೈ ಹಾಜರಿದ್ದರು.

ಉಸ್ತುವಾರಿ ಮಾತಾಜಿ ಬಿ.ಕೆ.ಸಂಧ್ಯಾ ಮಾತನಾಡಿ, ಹಲವು ಜನ್ಮಾಂತರದ ಬಳಿಕ ನಮಗೆ ಮಾನವ ಜನ್ಮ ಸಿಕ್ಕಿದೆ. ವ್ಯಸನಕ್ಕೆ ಬಲಿಯಾಗಿ ಈ ಶ್ರೇಷ್ಠ ಜನ್ಮವನ್ನು ಹಾಳು ಮಾಡಿಕೊಳ್ಳುವುದರಲ್ಲಿ ಯಾವುದೇ ಅರ್ಥವಿಲ್ಲ. ಮಾಡುವ ಕೆಲಸದಲ್ಲಿ ಶ್ರದ್ಧೆ ಇಟ್ಟು, ಪರಮಾತ್ಮನ ಧ್ಯಾನ ಮಾಡಿದರೆ ಜೀವನದಲ್ಲಿ ಮುಕ್ತಿ ದೊರೆಯುತ್ತದೆ ಎಂದು ಹೇಳಿದರು.

ಜಿಎಸ್‌ಎಸ್ ಸಂಸ್ಥೆಯ ಮುಖ್ಯಸ್ಥ ಶ್ರೀಹರಿ ಮಾತನಾಡಿ, ಬಸವ ಮಾರ್ಗ ಸಂಸ್ಥೆ ವತಿಯಿಂದ 10 ದಿನ ಶಿಬಿರ ನಡೆದಿದೆ. ಈ ವೇಳೆ ಹಲವರು ಉಪನ್ಯಾಸ ನೀಡಿದ್ದಾರೆ. ಉತ್ತಮ ಮಾರ್ಗದರ್ಶನ ಸಿಕ್ಕಿದೆ. ಇದನ್ನು ಸದ್ಬಳಕೆ ಮಾಡಿಕೊಳ್ಳಬೇಕು. ಇಂದಿನಿಂದ ಹೊಸ ಮನುಷ್ಯರಾಗಿ ಬದುಕಬೇಕು ಎಂದು ಸಲಹೆ ನೀಡಿದರು.

ಬಸವಮಾರ್ಗ ಸಂಸ್ಥೆಯ ಸಂಸ್ಥಾಪಕ ಬಸವಣ್ಣ ಮಾತನಾಡಿ, ಶಿಬಿರದ ಹತ್ತು ದಿನವೂ ಯೋಗ, ಧ್ಯಾನ, ಸಂಗೀತ, ತರಗತಿಗಳು, ವಿಶೇಷ ಆಹ್ವಾನಿತರ ಉಪನ್ಯಾಸ, ವಿಶೇಷ ಆಹಾರ ಪದ್ಧತಿಯ ಮಾಹಿತಿ ಸೇರಿದಂತೆ ವಿವಿಧ ಕಾರ್ಯಕ್ರಮಗಳು ನಡೆದಿವೆ. ಇದನ್ನೆಲ್ಲಾ ತಮ್ಮ ಬದುಕಲ್ಲಿ ಅಳವಡಿಸಿಕೊಂಡಾಗ ಮಾತ್ರ ನಮ್ಮ ಪ್ರಯತ್ನ ಸಾರ್ಥಕವಾಗುತ್ತದೆ. ಹಾಗಾಗಿ ನಾಳೆಯಿಂದ ನೀವು ಹೊಸ ಬದುಕನ್ನು ಪ್ರಾರಂಭಿಸಬೇಕು ಎಂದು ತಿಳಿಸಿದರು.

ಸಸಿ ವಿತರಣೆ: ಇದೇ ವೇಳೆ ವಿಶ್ವ ಪರಿಸರ ದಿನದ ಅಂಗವಾಗಿ ಜಿಎಸ್‌ಎಸ್ ಸಂಸ್ಥೆಯಿಂದ ಶಿಬಿರಾರ್ಥಿಗಳಿಗೆ ವಿವಿಧ ಸಸಿಗಳನ್ನು ವಿತರಣೆ ಮಾಡಲಾಯಿತು. ಕಾರ್ಯಕ್ರಮದಲ್ಲಿ ತರಬೇತುದಾರ ಬಾಲಸುಬ್ರಹ್ಮಣ್ಯಂ, ಯೋಗ ಶಿಕ್ಷಕ ಹೆಚ್.ಪಿ.ನವೀನ್ ಕುಮಾರ್, ಸಂಜಯ್ ಮತ್ತಿತರರು ಉಪಸ್ಥಿತರಿದ್ದರು.

ಬೆಂಗಳೂರಿನ ವೃದ್ಧ ದಂಪತಿಗೆ ಸಿಬಿಐ ಹೆಸರಲ್ಲಿ ಒಂದೂವರೆ ತಿಂಗಳು ಡಿಜಿಟಲ್ ಅರೆಸ್ಟ್

4.70 ಕೋಟಿ ರೂ.ವಂಚಿಸಿದ್ದ ಇಬ್ಬರ ಬಂಧನ

ಬೆಂಗಳೂರು, ಜೂ.10– ಸಿಬಿಐ ಅಧಿಕಾರಿಗಳ ಸೋಗಿನಲ್ಲಿ ವೃದ್ಧ ದಂಪತಿಗೆ ಒಂದೂವರೆ ತಿಂಗಳು ಡಿಜಿಟಲ್ ಅರೆಸ್ಟ್ ಮಾಡಿ ಬರೋಬ್ಬರಿ 4.70 ಕೋಟಿ ರೂ. ವಂಚಿಸಿದ್ದ ಸೈಬರ್ ವಂಚಕ ಜಾಲದ ಇಬ್ಬರು ಆರೋಪಿಗಳನ್ನು ಆಗ್ನೇಯ ವಿಭಾಗದ ಸೈಬರ್ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಆಂಧ್ರಪ್ರದೇಶ ಮೂಲದ ಈಶ್ವರ್ ಸಿಂಗ್ (45), ಪರಮೇಶ್ ರಾಮ್‌ಚರಣ್ (46) ಬಂಧಿತರು. ಆರೋಪಿಗಳ ಬ್ಯಾಂಕ್ ಖಾತೆಗಳಲ್ಲಿ ವಂಚನೆಗೆ ಸಂಬಂಧಿಸಿದ 2 ಕೋಟಿ ರೂ. ವಹಿವಾಟು ನಡೆದಿರುವುದು ತನಿಖೆಯಲ್ಲಿ ಬೆಳಕಿಗೆ ಬಂದಿದೆ. ಆರೋಪಿಗಳನ್ನು ಹೆಚ್ಚಿನ ವಿಚಾರಣೆ ಸಲುವಾಗಿ ಕಸ್ಟಡಿಗೆ ಪಡೆದಿರುವ ಪೊಲೀಸರು, ವಂಚನಾ ಜಾಲದ ಸೂತ್ರದಾರರ ಪತ್ತೆಗೆ ತನಿಖೆ ಮುಂದುವರಿಸಿದ್ದಾರೆ.

ನಕಲಿ ಕಾಲ್‌ಗೆ ಯಾಮಾರಿದ ದಂಪತಿ: ಜೆ.ಪಿ. ನಗರದ ಮನೋಹರ್ (ಹೆಸರು ಬದಲಿಸಲಾಗಿದೆ) ವೃತ್ತಿಯಲ್ಲಿ ಎಂಜಿನಿಯರ್ ಆಗಿದ್ದು, ನೈಜೀರಿಯಾದಲ್ಲಿ 31 ವರ್ಷಗಳ ಕಾಲ ಕೆಲಸ ಮಾಡಿದ್ದರು. ಕೆಲ ವರ್ಷಗಳ ಹಿಂದೆ ನಗರಕ್ಕೆ ವಾಪಸ್ಸಾಗಿದ್ದ ಮನೋಹರ್ ಪತ್ನಿ ಜತೆ ವಾಸವಿದ್ದರು. ಮಾರ್ಚ್ 19 ರಂದು ಅಪರಿಚಿತನೊಬ್ಬ ಮನೋಹರ್ ಅವರಿಗೆ ದೂರವಾಣಿ ಕರೆ ಮಾಡಿ ತಾನು ಎಸ್‌ಬಿಐ ಗ್ರಾಹಕ ಸೇವಾ ಪ್ರತಿನಿಧಿ ಎಂದು ಪರಿಚಯಿಸಿಕೊಂಡಿದ್ದ. ಬಳಿಕ ನಿಮ್ಮ ಹೆಸರಿನಲ್ಲಿನ ಕ್ರೆಡಿಟ್ ಕಾರ್ಡ್ ಹಾಗೂ ಬ್ಯಾಂಕ್ ಖಾತೆಗಳಲ್ಲಿ ಕೋಟ್ಯಾಂತರ ರೂ. ಅಕ್ರಮ ಹಣ ವರ್ಗಾವಣೆಯಾಗಿದ್ದು, ನಿಮ್ಮ ವಿರುದ್ಧ ಸಿಬಿಐ ಅಧಿಕಾರಿಗಳು ತನಿಖೆ ನಡೆಸುತ್ತಿದ್ದಾರೆ ಎಂದು ತಿಳಿಸಿದ್ದ.

ಇದಾದ ಬಳಿಕ ಸಿಬಿಐ ಅಧಿಕಾರಿ ಸೋಗಿನಲ್ಲಿ ಕರೆ ಮಾಡಿದ್ದ ಅಪರಿಚಿತ, ನಕಲಿ ಪೊಲೀಸ್ ಠಾಣೆಯ ಬ್ಯಾಕ್‌ಗ್ರೌಂಡ್‌ನಲ್ಲಿ ಮಾತನಾಡಿದ್ದ. ಗಂಡ – ಹೆಂಡತಿ ಇಬ್ಬರ ಬ್ಯಾಂಕ್ ಖಾತೆಗಳಲ್ಲೂ ಅಕ್ರಮ ಹಣ ವರ್ಗಾವಣೆಯಾಗಿದೆ. ನಿಮ್ಮನ್ನು ಬಂಧಿಸಲು ಕೋರ್ಟ್ ವಾರಂಟ್ ನೀಡಿದೆ ಎಂದು ಬೆದರಿಸಿದ್ದ. ಇದರಿಂದ ದಿಕ್ಕು ತೋಚದಂತಾದ ಮನೋಹರ್ ದಂಪತಿ ಕಂಗಾಲಾಗಿದ್ದರು.

4.70 ಕೋಟಿ ರೂ. ವರ್ಗಾವಣೆ: ಬಂಧನ ಭೀತಿಯಿಂದ ಹೆದರಿದ್ದ ಮನೋಹರ್ ದಂಪತಿಗೆ ಸಹಾಯ ಮಾಡುವುದಾಗಿ ತಿಳಿಸಿದ ನಕಲಿ ಸಿಬಿಐ ಅಧಿಕಾರಿ, ಬ್ಯಾಂಕ್ ಖಾತೆಗಳ ವಿವರ ಹಾಗೂ ಹಣ ವರ್ಗಾವಣೆ ಮಾಡಿದ್ದರೆ ಪರಿಶೀಲಿಸುತ್ತೇನೆ. ಒಂದು ವೇಳೆ ಅವ್ಯವಹಾರ ಕಂಡು ಬರದಿದ್ದರೆ ನಿಮ್ಮನ್ನು ಬಿಟ್ಟು ಬಿಡುತ್ತೇನೆ ಎಂದು ನಂಬಿಸಿದ್ದ. ಅಲ್ಲದೆ, ಈ ವಿಚಾರವನ್ನು ಬೇರೆ ಯಾರಿಗಾದರೂ ತಿಳಿಸಿದರೆ ಮನೆಯ ಹೊರಗಡೆ ಇರುವ ಅಧಿಕಾರಿಗಳು ನಿಮ್ಮನ್ನು ಕೂಡಲೇ ಬಂಧಿಸುತ್ತಾರೆ ಎಂದಿದ್ದ.

ಡಿಜಿಟಲ್ ಅರೆಸ್ಟ್‌ಗೆ ಒಳಗಾಗಿದ್ದ ಮನೋಹರ್ ದಂಪತಿ, ವಂಚಕರು ಹೇಳಿದ ಬ್ಯಾಂಕ್ ಖಾತೆಗಳಿಗೆ ಹಂತ – ಹಂತವಾಗಿ ತಮ್ಮ ಮೂರು ಖಾತೆಗಳಲ್ಲಿದ್ದ ಹಣವನ್ನು ವರ್ಗಾಯಿಸಿದ್ದರು. ಮೇ 12 ರವರೆಗೂ ಒಟ್ಟು 4.70 ಕೋಟಿ ರೂ. ವರ್ಗಾಯಿಸಿದ್ದರು ಎಂದು ಪೊಲೀಸರು ಹೇಳಿದ್ದಾರೆ.

ಬ್ಯಾಂಕ್ ಖಾತೆಗಳಲ್ಲಿದ್ದ ಹಣ ಖಾಲಿಯಾದ ಬಳಿಕವೂ ವಂಚಕರು ಮತ್ತಷ್ಟು ಹಣಕ್ಕೆ ಬೇಡಿಕೆ ಇಟ್ಟಿದ್ದರಿಂದ ಅಸಹಾಯಕರಾಗಿದ್ದ ಮನೋಹರ್ ದಂಪತಿ ಸುಮ್ಮನಾಗಿದ್ದಾರೆ. ಅಂತಿಮವಾಗಿ ಈ ವಿಚಾರವನ್ನು ತಮ್ಮ ಸಂಬಂಧಿಕರ ಬಳಿ ಹೇಳಿಕೊಂಡಾಗ ಡಿಜಿಟಲ್ ವಂಚಕರ ಜಾಲಕ್ಕೆ ಸಿಲುಕಿರುವುದು ಗೊತ್ತಾಗಿದೆ. ಬಳಿಕ ಪೊಲೀಸರಿಗೆ ದೂರು ನೀಡಿದ್ದರು ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ಹೇಳಿದರು.

ಕ್ರೈಂ ಬಾಕ್ಸ್

ದುಬೈನಲ್ಲಿ ಕೃತ್ಯದ ಕಿಂಗ್‌ಪಿನ್?: ಮನೋಹರ್ ನೀಡಿದ ದೂರಿನ ಅನ್ವಯ ಪ್ರಕರಣ ದಾಖಲಿಸಿಕೊಂಡು ಹಣ ವರ್ಗಾವಣೆ ಆಗಿದ್ದ ಬ್ಯಾಂಕ್ ಖಾತೆಗಳ ವಿವರ ಪರಿಶೀಲಿಸಲಾಯಿತು. ಈ ವೇಳೆ ಈಶ್ವರ್ ಸಿಂಗ್ ಖಾತೆಗೆ 10 ಲಕ್ಷ ರೂ. ಹಾಗೂ ರಾಮ್‌ಚರಣ್ ಖಾತೆಗೆ 1.80 ಕೋಟಿ ರೂ. ವರ್ಗಾವಣೆ ಆಗಿರುವುದು ಕಂಡುಬಂದಿತ್ತು. ಈ ಸುಳಿವಿನ ಬೆನ್ನಲ್ಲೇ ಆಂಧ್ರಪ್ರದೇಶಕ್ಕೆ ತೆರಳಿ ಆರೋಪಿಗಳನ್ನು ಬಂಧಿಸಿ ನಗರಕ್ಕೆ ಕರೆತರಲಾಗಿದೆ.

ಆರೋಪಿಗಳಿಬ್ಬರ ಬ್ಯಾಂಕ್ ಖಾತೆಗಳನ್ನು ಫ್ರೀಜ್ ಮಾಡಿಸಲಾಗಿದೆ. ಆರೋಪಿ ರಾಮ್‌ಚರಣ್, ತನ್ನ ಖಾತೆಗೆ ಸಂದಾಯವಾಗಿದ್ದ ಹಣವನ್ನು ಸ್ವಲ್ಪ ಪ್ರಮಾಣದಲ್ಲಿ ಡ್ರಾ ಮಾಡಿಕೊಂಡು ಶ್ರೀಲಂಕಾದ ಕ್ಯಾಸಿನೊದಲ್ಲಿ ಕಳೆದಿದ್ದಾನೆ. ಈಶ್ವರ್ ಸಿಂಗ್ ಖಾತೆಯಲ್ಲಿ 10 ಲಕ್ಷ ರೂ. ಹಾಗೆಯೇ ಉಳಿದಿದೆ. ಆರೋಪಿಗಳು ಕಮಿಷನ್ ಆಸೆಗೆ ಅಪರಿಚಿತ ಸೈಬರ್ ವಂಚಕರಿಗೆ ತಮ್ಮ ಬ್ಯಾಂಕ್ ಖಾತೆ ವಿವರಗಳನ್ನು ನೀಡಿದ್ದಾಗಿ ವಿಚಾರಣೆ ವೇಳೆ ತಿಳಿಸಿದ್ದಾರೆ. ವಂಚನಾ ಜಾಲದ ಸೂತ್ರದಾರ ದುಬೈನಲ್ಲಿರುವ ಶಂಕೆಯಿದೆ. ಜಾಲದಲ್ಲಿ ಭಾಗಿಯಾಗಿರುವ ಇತರ ಆರೋಪಿಗಳ ಪತ್ತೆಗೆ ಕ್ರಮ ವಹಿಸಲಾಗಿದೆ ಎಂದು ಅಧಿಕಾರಿ ಹೇಳಿದರು.

ವಿಧಾನಪರಿಷತ್ ಮಾಜಿ ಹಂಗಾಮಿ ಸಭಾಪತಿ ಡೇವಿಡ್ ಸಿಮಿಯೋನ್ ನಿಧನ



ಬೆಂಗಳೂರು, ಜೂ.10– ವಿಧಾನ ಪರಿಷತ್‌ನ ಮಾಜಿ ಹಂಗಾಮಿ ಸಭಾಪತಿ ಡೇವಿಡ್ ಸಿಮಿ ಯೋನ್ (75) ಅವರು ನಗರದಲ್ಲಿ ಮಂಗಳವಾರ ನಿಧನರಾದರು. ಯಾದಗಿರಿ ತಾಲೂಕಿನ ಮಲ್ಹಾರ ಗ್ರಾಮದ ಸಿಮಿಯೋನ್ ಅವರಿಗೆ ಪತ್ನಿ, ಇಬ್ಬರು ಪುತ್ರಿಯರು, ಒಬ್ಬ ಪುತ್ರ ಇದ್ದಾರೆ.

1996ರಲ್ಲಿ ವಿಧಾನಪರಿಷತ್‌ಗೆ ನಾಮನಿರ್ದೇಶನಗೊಂಡಿದ್ದ ಅವರು, ಉಪ ಸಭಾಪತಿಯಾಗಿದ್ದರು. 2000ದ ಜೂನ್‌ನಿಂದ 2001ರ ಆಗಸ್ಟ್‌ವರೆಗೆ ಹಂಗಾಮಿ ಸಭಾಪತಿಯಾಗಿದ್ದರು. ಕಲಬುರಗಿಯ ಮೆಥೋಡಿಸ್ಟ್ ಚರ್ಚ್ ಆವರಣದಲ್ಲಿ ಜೂನ್ 12ರಂದು ಬೆಳಿಗ್ಗೆ 10.30ರಿಂದ ಮಧ್ಯಾಹ್ನ 2ರವರೆಗೆ ಸಾರ್ವಜನಿಕರ ಅಂತಿಮ ದರ್ಶನಕ್ಕೆ ಅವಕಾಶ ಮಾಡಿಕೊಡಲಾಗುವುದು. ನಂತರ, ಕಲಬುರಗಿಯ ವೆಂಕಟೇಶನಗರ ಕ್ರೈಸ್ತ ಧರ್ಮದ ಸ್ಮಶಾನದಲ್ಲಿ ಸರ್ಕಾರಿ ಗೌರವದೊಂದಿಗೆ ಅಂತ್ಯಕ್ರಿಯೆ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಬನಾಸ್ ನದಿಯಲ್ಲಿ ಮುಳುಗಿ ಎಂಟು ಯುವಕರು ಸಾವು

ಜೈಪುರ: ರಾಜಸ್ಥಾನದ ಟೊಂಕ್ ಜಿಲ್ಲೆಯ ಬನಾಸ್ ನದಿಯಲ್ಲಿ ಮುಳುಗಿ ಎಂಟು ಯುವಕರು ಸಾವನ್ನಪ್ಪಿದ ದಾರುಣ ಘಟನೆ ಮಂಗಳವಾರ ನಡೆದಿದೆ. ಇತರ ಮೂವರು ಯುವಕರನ್ನು ರಕ್ಷಿಸಲಾಗಿದ್ದು, ಅವರ ಆರೋಗ್ಯ ಸ್ಥಿತಿ ಸ್ಥಿರವಾಗಿದೆ ಎಂದು ಟೊಂಕ್ ಪೊಲೀಸ್ ವರಿಷ್ಠಾಧಿಕಾರಿ ವಿಕಾಸ್ ಸಾಂಗ್ವಾನ್ ಅವರು ಹೇಳಿದ್ದಾರೆ.

25 ರಿಂದ 30 ವರ್ಷ ವಯಸ್ಸಿನ 11 ಯುವಕರ ಗುಂಪು ಸ್ನಾನ ಮಾಡಲು ನದಿಗೆ ಇಳಿದಿದ್ದರು. ಈ ವೇಳೆ ನೀರಿನಲ್ಲಿ ಮುಳುಗಿ 8 ಯುವಕರು ಸಾವನ್ನಪ್ಪಿದ್ದಾರೆ ಎಂದು ವಿಕಾಸ್ ಸಾಂಗ್ವಾನ್ ಅವರು ತಿಳಿಸಿದ್ದಾರೆ. ಅವರು ಆಳವಾದ ನೀರಿಗೆ ಹೇಗೆ ಜಾರಿದರು ಎಂಬುದು ತಕ್ಷಣಕ್ಕೆ ಸ್ಪಷ್ಟವಾಗಿಲ್ಲ. ಮೃತರು ಪಿಕ್ನಿಕ್‌ಗಾಗಿ ಜೈಪುರದಿಂದ ಬಂದಿದ್ದರು ಎಂದು ಅವರು ಹೇಳಿದ್ದಾರೆ.

ಬಿಜೆಪಿ ಶಾಸಕ ಮುನಿರತ್ನ ವಿರುದ್ಧ ಬಲವಂತದ ಕ್ರಮ ಕೈಗೊಳ್ಳದಂತೆ ಹೈಕೋರ್ಟ್ ಸೂಚನೆ

ಬೆಂಗಳೂರು, ಜೂ.10– ಮಧ್ಯವಯಸ್ಸಿನ ಮಹಿಳೆಯೊಬ್ಬರ ಮೇಲೆ ತನ್ನ ಸಹಚರರಿಂದ ಕಣ್ಣೆದುರೇ ಅತ್ಯಾಚಾರ ಮಾಡಿಸಿದ ಆರೋಪ ಹೊತ್ತ ಪ್ರಕರಣದಲ್ಲಿ ಮೊದಲ ಆರೋಪಿಯಾಗಿರುವ ರಾಜರಾಜೇಶ್ವರಿ ನಗರ ಕ್ಷೇತ್ರದ ಬಿಜೆಪಿ ಶಾಸಕ ಮುನಿರತ್ನ ವಿರುದ್ಧ ನ್ಯಾಯಾಲಯದ ಅನುಮತಿ ಇಲ್ಲದೇ ಬಲವಂತದ ಕ್ರಮ ಕೈಗೊಳ್ಳುವುದಿಲ್ಲ ಎಂದು ರಾಜ್ಯ ಪ್ರಾಸಿಕ್ಯೂಷನ್ ಹೈಕೋರ್ಟ್‌ಗೆ ಸ್ಪಷ್ಟಪಡಿಸಿದೆ.

ತಮ್ಮ ನಿರೀಕ್ಷಣಾ ಜಾಮೀನು ಅರ್ಜಿಯನ್ನು ತಿರಸ್ಕರಿಸಿದ್ದ, ಶಾಸಕರು–ಸಂಸದರ ವಿರುದ್ಧದ ಕ್ರಿಮಿನಲ್ ಪ್ರಕರಣಗಳ ವಿಚಾರಣೆಯ ವಿಶೇಷ ನ್ಯಾಯಾಲಯದ ನ್ಯಾಯಾಧೀಶ ಸಂತೋಷ ಗಜಾನನ ಭಟ್ ಅವರ ಆದೇಶವನ್ನು ಪ್ರಶ್ನಿಸಿ ಮುನಿರತ್ನ ಸಲ್ಲಿಸಿದ್ದ ಕ್ರಿಮಿನಲ್ ಅರ್ಜಿಯನ್ನು ನ್ಯಾಯಮೂರ್ತಿ ಎಸ್.ಆರ್.ಕೃಷ್ಣಕುಮಾರ್ ಅವರಿದ್ದ ಏಕಸದಸ್ಯ ನ್ಯಾಯಪೀಠ ಮಂಗಳವಾರ ವಿಚಾರಣೆ ನಡೆಸಿತು.



ವಿಚಾರಣೆ ವೇಳೆ ಸಂತ್ರಸ್ತೆಯ ಪರ ವಾದ ಮಂಡಿಸಿದ ಹಿರಿಯ ವಕೀಲ ಸಿ.ಎಚ್.ಹನುಮಂತರಾಯ ಅವರು, ಮುನಿರತ್ನ ವಿರುದ್ಧ ಬೇರೆ ಬೇರೆ 16 ಕ್ರಿಮಿನಲ್ ಪ್ರಕರಣಗಳು ದಾಖಲಾಗಿವೆ. ಅವುಗಳಲ್ಲಿ ಇದೊಂದು ಗುರುತರ ಆಪಾದನೆಯ ಪ್ರಕರಣ. ಹಾಗಾಗಿ ಇದರಲ್ಲಿ ಅವರು ಮತ್ತು ಇತರ ಆರೋಪಿಗಳನ್ನು ಕಸ್ಟಡಿಗೆ ಪಡೆದು ತನಿಖೆ ನಡೆಸುವ ಅಗತ್ಯವಿದೆ. ಆರೋಪಿ ಅತ್ಯಂತ ಪ್ರಭಾವಿ ಜನಪ್ರತಿನಿಧಿಯಾಗಿದ್ದು, ಒಂದು ವೇಳೆ ಜಾಮೀನು ನೀಡಿದರೆ ಸಾಕ್ಷ್ಯ ನಾಶಪಡಿಸಲು ಪ್ರಯತ್ನಿಸುವ ಸಾಧ್ಯತೆ ಇದೆ ಎಂದು ಆತಂಕ ವ್ಯಕ್ತಪಡಿಸಿದರು.

ಇದಕ್ಕೆ ಪ್ರತಿಯಾಗಿ ಮುನಿರತ್ನ ಪರ ಹಾಜರಿದ್ದ ಪದಾಂಕಿತ ಹಿರಿಯ ವಕೀಲ ಅಶೋಕ ಹಾರನಹಳ್ಳಿ, ಅರ್ಜಿದಾರರು ತನಿಖೆಗೆ ಸಹಕರಿಸುತ್ತಾರೆ. ಆದ್ದರಿಂದ, ಅವರ ವಿರುದ್ಧ ಬಲವಂತದ ಕ್ರಮ ಕೈಗೊಳ್ಳದಂತೆ ಆದೇಶಿಸಬೇಕು ಎಂದು ನ್ಯಾಯಪೀಠಕ್ಕೆ ಮನವಿ ಮಾಡಿದರು.

ಇದಕ್ಕೆ ಪ್ರತಿಕ್ರಿಯಿಸಿದ ನ್ಯಾಯಪೀಠ, ಅರ್ಜಿದಾರರು ತನಿಖೆಗೆ ಸಹಕರಿಸಿದರೆ ಬಲವಂತದ ಕ್ರಮ ಕೈಗೊಳ್ಳಬಾರದು ಎಂದು ಪ್ರಕರಣದ ವಿಶೇಷ ಪ್ರಾಸಿಕ್ಯೂಟರ್ ಸಿ.ಎಸ್.ಪ್ರದೀಪ್ ಅವರಿಗೆ ಸೂಚಿಸಿ ವಿಚಾರಣೆಯನ್ನು ಇದೇ 17ಕ್ಕೆ ಮುಂದೂಡಿತು. ಹೈಕೋರ್ಟ್ ವಕೀಲ ಎಸ್.ಎಸ್.ಶ್ರೀನಿವಾಸ ರಾವ್ ಮುನಿರತ್ನ ಪರ ವಕಾಲತ್ತು ವಹಿಸಿದ್ದಾರೆ.

ವಿದ್ಯಾರ್ಥಿಗಳು, ಸಂಶೋಧಕರ ಸಂಘ ಸಹಕರಿಸಿದರೆ ಮಾನಸಗಂಗೋತ್ರಿ 'ಪ್ಲಾಸ್ಟಿಕ್ ಮುಕ್ತ ಕ್ಯಾಂಪಸ್'

• ಮೈಸೂರು ವಿವಿ ಆಡಳಿತಾಧಿಕಾರಿ ಡಾ.ಎಸ್.ಟಿ.ರಾಮಚಂದ್ರ ಮನವಿ • ಪರಿಸರ ದಿನಾಚರಣೆಯಲ್ಲಿ ವಿಶೇಷ ನೃತ್ಯದ ಮೂಲಕ ಪರಿಸರ ಸಂರಕ್ಷಣೆ ಸಂದೇಶ

ಮೈಸೂರು, ಜೂ.10(ಎಸ್‌ಪಿಎನ್)– 'ಪ್ಲಾಸ್ಟಿಕ್ ಮುಕ್ತ ಕ್ಯಾಂಪಸ್' ಆಗಲು ಸ್ನಾತಕೋತ್ತರ ವಿದ್ಯಾರ್ಥಿಗಳು, ಸಂಶೋಧಕರ ಸಂಘ ಕೈಜೋಡಿಸಬೇಕು ಎಂದು ಮೈಸೂರು ವಿವಿ ಆಡಳಿತಾಧಿಕಾರಿ ಡಾ.ಎಸ್.ಟಿ.ರಾಮಚಂದ್ರ ಮನವಿ ಮಾಡಿದರು.

ಮೈಸೂರು ವಿವಿ ಮಾನಸಗಂಗೋತ್ರಿ ಆವರಣದಲ್ಲಿ ಕ್ಲಾಕ್ ಟವರ್ ಮುಂಭಾಗ ಮೈಸೂರು ವಿವಿ ಸಂಶೋಧಕರ ಸಂಘದ ವತಿಯಿಂದ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಸಾಮೂಹಿಕ ನೃತ್ಯ ಪ್ರದರ್ಶನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಮೈಸೂರು ವಿವಿ ಈ ನಾಡಿಗೆ ರಾಷ್ಟ್ರಕವಿ ಕುವೆಂಪು, ದೇಜಗೌ, ಬಿ.ಎಂ.ಶ್ರೀಕಂಠಯ್ಯ ಸೇರಿದಂತೆ ಹಲವು ಸಾಧಕರನ್ನು ನೀಡಿದೆ. ಹಾಗಾಗಿ ಅವರು ಓಡಾಡಿದ ಸ್ಥಳದಲ್ಲಿ ನಾವಿಂದು ಬದುಕುತ್ತಿದ್ದೇವೆ. ಅವರ ಆದರ್ಶಗಳು ಯುವಕರಿಗೆ ಮಾರ್ಗದರ್ಶನವಾಗಬೇಕು ಎಂದು ಕಿವಿಮಾತು ಹೇಳಿದರು.



ಪರಿಸರ ಸಂರಕ್ಷಣೆ ಸಂದೇಶ ಸಾರುವ ನೃತ್ಯ ನೆರೆದವರ ಗಮನ ಸೆಳೆಯಿತು.

ರಾಷ್ಟ್ರಕವಿ ಕುವೆಂಪು ಅವರು, ಮರಗಿಡಗಳನ್ನು ಇಷ್ಟಪಡುತ್ತಿದ್ದರು. ಮಾನಸಗಂಗೋತ್ರಿ ಆವರಣ ಸದಾ ಹಸಿರಿನಿಂದ ಕೂಡಿರಬೇಕು ಎಂಬ ಆಶಯ ಹೊಂದಿದ್ದರು. ಹಾಗಾಗಿ ಈ ಪರಿಸರದಲ್ಲಿ ಮರಗಿಡಗಳನ್ನು ಹೆಚ್ಚಾಗಿ ಬೆಳೆಸಲು ಕಾರಣವಾಗಿದೆ. ಇತ್ತೀಚಿನ ದಿನಗಳಲ್ಲಿ ಎಲ್ಲೆಂದರಲ್ಲಿ ಪ್ಲಾಸ್ಟಿಕ್ ವಸ್ತುಗಳನ್ನು ವಿದ್ಯಾರ್ಥಿಗಳು ಬಿಸಾಡುತ್ತಿದ್ದಾರೆ. ಇದನ್ನು ತಪ್ಪಿಸಲು 'ಪ್ಲಾಸ್ಟಿಕ್ ಮುಕ್ತ ಕ್ಯಾಂಪಸ್' ಆಗಿಸಲು ವಿದ್ಯಾರ್ಥಿಗಳ ಸಹಕಾರ ಅತೀಮುಖ್ಯ. ಈ ನಿಟ್ಟಿನಲ್ಲಿ ಸಂಶೋಧಕ ಸಂಘ ಕೈಜೋಡಿಸಿರುವುದು ಸಂತೋಷದ ಸಂಗತಿ ಎಂದರು.

ಕಾಲಕಾಲಕ್ಕೆ ಮಳೆ–ಬೆಳೆ ಆಗಬೇಕಿದ್ದರೆ ಪರಿಸರ ಮಾಲಿನ್ಯವಾಗದಂತೆ ನೋಡಿಕೊಳ್ಳಬೇಕು. ನಮ್ಮೆಲ್ಲರಿಗೂ ಜೀವದಾತೆಯಾಗಿರುವ ಪರಿಸರದ ಬಗ್ಗೆ ನಾವು ತಾತ್ಸಾರ ಮನೋಭಾವ ಬೆಳೆಸಿಕೊಳ್ಳಬಾರದು ಎಂದು ಕಿವಿಮಾತು ಹೇಳಿದರು.

ಮೈಸೂರು ವಿವಿ ಸಿಂಡಿಕೇಟ್ ಸದಸ್ಯ ಮಾದೇಶ್ ಮಾತನಾಡಿ, ಗಿಡ ನೆಡುವುದರ ಮೂಲಕ ತಾವೆಲ್ಲರೂ ಹಸಿರನ್ನು ಹೆಚ್ಚಿಸಿ ಪರಿಸರವನ್ನು ಸಂರಕ್ಷಿಸಬೇಕು. ನಮ್ಮೆಲ್ಲರ ಬದುಕಿಗೆ ಆಧಾರವಾಗಿರುವ ಪರಿಸರ ರಕ್ಷಣೆಯ ಬಗ್ಗೆ ಮಕ್ಕಳಿಗೆ ತಿಳಿಹೇಳುವ ಮೂಲಕ ಅವರಲ್ಲಿ ಪರಿಸರ ಪ್ರೇಮ ಬೆಳೆಸುವ ಕಾರ್ಯಕ್ಕೆ ಪ್ರಜ್ಞಾವಂತ ಸಮುದಾಯ ಮುಂದಾಗಬೇಕಿದೆ. ಮುಂದಿನ ದಿನಗಳಲ್ಲಿ ಪರಿಸರ ಉಳಿಯಬೇಕಾದರೆ ನಾವೆಲ್ಲ ಪರಿಸರ ಸಂರಕ್ಷಣೆಯ ಬಗ್ಗೆ ಜಾಗೃತರಾಗಬೇಕಿದೆ ಎಂದರು.

ಮತ್ತೋರ್ವ ಸಿಂಡಿಕೇಟ್ ಸದಸ್ಯ ಡಾ.ನಟರಾಜ್ ಶಿವಣ್ಣ ಮಾತನಾಡಿ, ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆ. ಇತ್ತೀಚಿನ ದಿನಗಳಲ್ಲಿ ಮಾನವ ತನ್ನ ಅತಿ ಆಸೆಗೆ ಪರಿಸರದ ಮೇಲೆ ದೌರ್ಜನ್ಯ ಎಸಗುತ್ತಿದ್ದು, ಇದನ್ನು ತಪ್ಪಿಸುವ ಕೆಲಸಕ್ಕೆ ನಾವೆಲ್ಲ ಮುಂದಾಗಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಸಿಂಡಿಕೇಟ್ ಸದಸ್ಯ ಬಸವರಾಜು ಜಟ್ಟಿಹುಂಡಿ, ಸಂಶೋಧಕರ ಸಂಘದ ಅಧ್ಯಕ್ಷ ಶಿವಶಂಕರ್, ಕಾರ್ಯಕ್ರಮ ಸಂಯೋಜಕ ಅಭಿಷೇಕ್ ಪಾಳ್ಯಗಾರ್, ದಲಿತ ವಿದ್ಯಾರ್ಥಿ ಒಕ್ಕೂಟದ ಪುನೀತ್ ಆಲನಹಳ್ಳಿ, ಮಾಸ್ಟರ್ ಸಾಗರ್, ಬಿ.ಸಿ.ಸಂಜಯ್, ಯಶ್ವಂತ್, ನವೀನ್, ಗೌತಮ್, ಅಭಿಷೇಕ್ ಗೌಡ ಮತ್ತಿತರರು ಉಪಸ್ಥಿತರಿದ್ದರು.

ವೇದಿಕೆ ಕಾರ್ಯಕ್ರಮದ ನಂತರ ವಿದ್ಯಾರ್ಥಿಗಳು ಫ್ಲಾಶ್ ಮೋಬ್ ನೃತ್ಯಕ್ಕೆ ಶಿಳ್ಳೆ ಚಪ್ಪಾಳೆ ಮೂಲಕ ಉತ್ತೇಜಿಸಿದರು. 'ಪರಿಸರ ಉಳಿಸು ಮಾನವ, ಮರದೈವ ಕಣೋ' ಎಂಬ ಪರಿಸರ ಗೀತೆಗಳ ಮೂಲಕ ಪರಿಸರ ಸಂರಕ್ಷಣೆ ಸಂದೇಶ ಸಾರುವ ನೃತ್ಯ ವಿದ್ಯಾರ್ಥಿಗಳ ಗಮನ ಸೆಳೆಯಿತು. ನಂತರ ಸ್ಟ್ರೀಟ್ ಡ್ರೀಮರ್ಸ್ ತಂಡದಿಂದ ವಿವಿಧ ಪರಿಸರ ಸಂದೇಶ ಸಾರುವ ಗೀತೆಗಳ ನೃತ್ಯ ನೋಡುಗರ ಗಮನ ಸೆಳೆದವು.

ಮೈಸೂರು ಮಿತ್ರ

ಬುಧವಾರ 11 ಜೂನ್ 2025

ಕಬ್ಬಿನ ಎಫ್‌ಆರ್‌ಪಿ ದರ ಏರಿಕೆ ಸೇರಿದಂತೆ

ವಿವಿಧ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ಪ್ರತಿಭಟನೆ

ನಂಜನಗೂಡು, ಜೂ.10– ಕಬ್ಬಿನ ಎಫ್‌ಆರ್‌ಪಿ ದರ 4500 ರೂ.ಗೆ ಏರಿಕೆ ಮಾಡುವುದು ಸೇರಿದಂತೆ ವಿವಿಧ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರ ಸಂಘದ ಕಾರ್ಯಕರ್ತರು ಮಂಗಳವಾರ ನಗರದಲ್ಲಿ ಪ್ರತಿಭಟನೆ ನಡೆಸಿ ತಹಸೀಲ್ದಾರರಿಗೆ ಮನವಿ ಸಲ್ಲಿಸಿದರು.

ನಗರದ ಗುಂಡ್ಲುಪೇಟೆ ಮುಖ್ಯ ರಸ್ತೆಯಲ್ಲಿರುವ ತಾಲೂಕು ಕಚೇರಿ ಮುಂಭಾಗ ಜಮಾಯಿಸಿ ಪ್ರವೇಶ ದ್ವಾರದಲ್ಲಿ ಧರಣಿ ನಡೆಸಿದ ಪ್ರತಿಭಟನಾಕಾರರು ರೈತರ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಘೋಷಣೆಗಳನ್ನು ಕೂಗಿದರು.

ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರ ಸಂಘದ ರಾಜ್ಯಾಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್ ಮಾತನಾಡಿ, ರೈತರು ಪೂರೈಸುವ ಪ್ರತಿ ಟನ್ ಕಬ್ಬಿನ 10.25 ಇಳುವರಿಗೆ ಕೇಂದ್ರ ಸರ್ಕಾರ 2025–26ರ ಸಾಲಿಗೆ 3550 ನಿಗದಿ ಮಾಡಿದ್ದು, ಪ್ರಸ್ತುತ ಉತ್ಪಾದನಾ ವೆಚ್ಚ, ಕಟಾವು ಕೂಲಿ ಹಾಗೂ ಸಾಗಾಣಿಕೆ, ರಸ ಗೊಬ್ಬರ ಮತ್ತು ಕೂಲಿ ಕಾರ್ಮಿಕರ ವೆಚ್ಚ ಎಲ್ಲವೂ ಹೆಚ್ಚಳವಾಗಿದ್ದು, ಕನಿಷ್ಟ 4,500 ರೂ. ದರ ನಿಗದಿ ಮಾಡಬೇಕಾಗಿತ್ತು. ಆದರೆ ಬಂಡವಾಳಶಾಹಿ ಕಾರ್ಖಾನೆ ಮಾಲೀಕರ ಒತ್ತಡಕ್ಕೆ ಮಣಿದು ಕೇವಲ ಪ್ರತಿ ಟನ್ ಕಬ್ಬಿಗೆ 150 ರೂ. ಮಾತ್ರ ಈ ವರ್ಷ ಹೆಚ್ಚಳ ಮಾಡಿದ್ದು, ಇದನ್ನು ತಕ್ಷಣ ಮರು ಪರಿಶೀಲನೆ ಮಾಡಬೇಕು. ಸಕ್ಕರೆ ಕಾರ್ಖಾನೆಗಳ ಮುಂದೆ ಎಪಿಎಂಸಿ ಹಾಗೂ ಸಹಕಾರ ಇಲಾಖೆ ಮೂಲಕ ತೂಕದ ಯಂತ್ರಗಳನ್ನು ಅಳವಡಿಸಬೇಕು. ಕಾರ್ಖಾನೆ ಮತ್ತು ರೈತರ ನಡುವೆ ದ್ವಿಪಕ್ಷಿಯ ಒಪ್ಪಂದ ಜಾರಿಯಾಗಬೇಕು. ಸಕ್ಕರೆ ಕಾರ್ಖಾನೆಗಳ ಆದಾಯ ಪತ್ರವನ್ನು ರಾಜ್ಯ ಮತ್ತು ಕೇಂದ್ರ ಸರ್ಕಾರ ಪರಿಶೀಲಿಸಿ, ಹೆಚ್ಚುವರಿ ಲಾಭವನ್ನು ರೈತರಿಗೆ ಹಂಚಲು ಕ್ರಮ ಕೈಗೊಳ್ಳಬೇಕು. ಕಟಾವು ಸಾಗಾಣಿಕೆಯನ್ನು ಸಕ್ಕರೆ ಕಾರ್ಖಾನೆಗಳು ಭರಿಸುವಂತೆ ಕ್ರಮ ಕೈಗೊಳ್ಳಬೇಕು. ಕಳೆದ ಸಾಲಿನ 950 ಕೋಟಿ ಬಾಕಿ ರೈತರಿಗೆ ನೀಡಲು ಕ್ರಮ ಕೈಗೊಳ್ಳಬೇಕು. ಅಕ್ರಮ ಸಕ್ರಮ ಯೋಜನೆಯನ್ನು ಮರು ಜಾರಿ ಮಾಡಬೇಕು. ಸರ್ಕಾರಿ ಕೆರೆಕಟ್ಟೆಗಳ ಒತ್ತುವರಿ ಆಗಿರುವುದನ್ನು ತೆರವುಗೊಳಿಸಲು ಮುಂದಾಗಬೇಕು. ನೆನೆಗುದಿಗೆ ಬಿದ್ದಿರುವ ತಾಲೂಕಿನ ಹುರ ಏತ ನೀರಾವರಿ ಯೋಜನೆಯನ್ನು ತ್ವರಿತವಾಗಿ ಪುನರಾರಂಭಿಸಬೇಕು. ಹಳ್ಳಗುಂಡಿಗಳಿಂದ ಕೂಡಿರುವ ಹುಲ್ಲಹಳ್ಳಿ ರಸ್ತೆ ತಕ್ಷಣ ದುರಸ್ತಿ ಮಾಡಬೇಕು ಎಂದು ಒತ್ತಾಯಿಸಿದರು.


ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ಪ್ರತಿಭಟನೆ ನಡೆಸಲಾಯಿತು.

ಇದೇ ವೇಳೆ ಸ್ಥಳಕ್ಕಾಗಮಿಸಿದ ತಹಸೀಲ್ದಾರ್ ಶಿವಕುಮಾರ್ ಕಾಸ್ನೂರು ಅವರಿಗೆ ಮನವಿ ಪತ್ರ ಸಲ್ಲಿಸಿ ಪ್ರತಿಭಟನೆ ಅಂತ್ಯಗೊಳಿಸಲಾಯಿತು. ಪ್ರತಿಭಟನೆಯಲ್ಲಿ ರೈತ ಸಂಘಟನೆ ರಾಜ್ಯ ಖಜಾಂಚಿ ರಾಜಣ್ಣ, ರಾಜ್ಯ ಸಂಚಾಲಕ ಹನುಮಯ್ಯ, ಮೈಸೂರು ಜಿಲ್ಲಾಧ್ಯಕ್ಷ ಗಣೇಶ್, ಚಾಮರಾಜನಗರ ಜಿಲ್ಲಾಧ್ಯಕ್ಷ ನಾಗರಾಜ್, ಮಹೇಂದ್ರ, ಪುಟ್ಟಸ್ವಾಮಿ, ಮಧು, ಶಿವಣ್ಣ, ನಾಗಣ್ಣ, ನಾಗೇಂದ್ರ, ಪ್ರಭುಸ್ವಾಮಿ, ಸಿದ್ದಬಸಪ್ಪ ಇತರರಿದ್ದರು.

ನಂಜನಗೂಡು ಬಳಿ ತಾಯಿ, ಮಗಳು ಆತ್ಮಹತ್ಯೆ


ಜಯಲಕ್ಷ್ಮಿ ಪ್ರಿಯ

ನಂಜನಗೂಡು, ಜೂ.10– ತಾಯಿ ಮತ್ತು ಮಗಳು ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ತಾಲೂಕಿನ ಕೊತ್ತನಹಳ್ಳಿ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ನಿವಾಸಿ ಜಯರಾಮ್ ಅವರ ಪತ್ನಿ ಜಯಲಕ್ಷ್ಮಿ (45), ಮಗಳು ಪ್ರಿಯ (20) ಆತ್ಮಹತ್ಯೆ ಮಾಡಿಕೊಂಡವರು. ದ್ವಿತೀಯ ಪಿಯುಸಿ ಉತ್ತೀರ್ಣಳಾಗಿದ್ದ ಪ್ರಿಯ ಸಿಇಟಿ, ಎನ್‌ಇಇಟಿ ಪರೀಕ್ಷೆಗಳಲ್ಲಿ ಕಡಿಮೆ ಅಂಕ ಬಂದಿದೆ ಎಂದು ಮನನೊಂದಿದ್ದಳು. ಮಗಳನ್ನು ತುಂಬಾ ಪ್ರೀತಿಸುತ್ತಿದ್ದ ತಾಯಿ ಕೂಡ ಮಾನಸಿಕವಾಗಿ ಖಿನ್ನತೆಗೆ ಒಳಗಾಗಿದ್ದರು. ಆದರೆ ಸೋಮವಾರ ಬೆಳಗ್ಗೆ 10.30ರಲ್ಲಿ ಮನೆಯ ಕೊಟ್ಟಿಗೆಯಲ್ಲಿ ತಾಯಿ ಜಯಲಕ್ಷ್ಮಿ ಮತ್ತು ಮಗಳು ಪ್ರಿಯ ಅಕ್ಕಪಕ್ಕದಲ್ಲಿ ವೇಲಿನಿಂದ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾರೆ.

ವರದಕ್ಷಿಣೆ ಕಿರುಕುಳ ಆರೋಪ: ಮೃತಳ ಪತಿ ಜಯರಾಮ ಜಯಲಕ್ಷ್ಮಿಗೆ ವರದಕ್ಷಿಣೆ ಕಿರುಕುಳ ನೀಡುತ್ತಿದ್ದ ಎನ್ನಲಾಗಿದೆ. ಅಲ್ಲದೇ ನಿತ್ಯ ಖ್ಯಾತೆ ತೆಗೆದು ಜಗಳ ಮಾಡುತ್ತಿದ್ದ. ಈ ಸಂಬಂಧ ಪೊಲೀಸರಿಗೆ ದೂರು ನೀಡಿದ್ದರೂ ಯಾವುದೇ ಕ್ರಮ ಕೈಗೊಳ್ಳದೆ ಇದ್ದಿದ್ದರಿಂದಾಗಿ ಹಾಗೂ ಗಂಡನ ವರ್ತನೆ ಮಿತಿ ಮೀರಿದ್ದರಿಂದ ಬೇಸತ್ತು ತಾಯಿ ಮತ್ತು ಮಗಳು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಇಬ್ಬರ ಸಾವಿಗೆ ಪತಿ ಜಯರಾಮ ಕಾರಣ ಎಂದು ಜಯ ಲಕ್ಷ್ಮಿ ತವರು ಮನೆ ಸಂಬಂಧಿಕರು ಆರೋಪಿಸಿದ್ದಾರೆ. ಸ್ಥಳಕ್ಕೆ ಹುಲ್ಲಹಳ್ಳಿ ಪೊಲೀಸ್ ಠಾಣೆ ಎಸ್‌ಐಗಳಾದ ಚೇತನ್ ಕುಮಾರ್, ಶಿವಣ್ಣ ಭೇಟಿ ನೀಡಿ ಶವಗಳನ್ನು ಮರಣೋತ್ತರ ಪರೀಕ್ಷೆಗೆ ಒಳಪಡಿಸಿ ವಾರಸುದಾರರಿಗೆ ಹಸ್ತಾಂತರಿಸಿದರು. ಈ ಸಂಬಂಧ ಹುಲ್ಲಹಳ್ಳಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ರಸಗೊಬ್ಬರ ವಿತರಿಸುವ ಕಾರ್ಯಕ್ಕೆ ಚಾಲನೆ

ಚುಂಚನಕಟ್ಟೆ, ಜೂ.10– ಕೃಷಿ ಪತ್ತಿನ ಸಹಕಾರ ಸಂಘಗಳಿಗೆ ಹೊಸದಾಗಿ ಬೆಳೆ ಸಾಲಕ್ಕೆ ಅರ್ಜಿ ಸಲ್ಲಿಸಿರುವ ರೈತರಿಗೆ ಜಿಲ್ಲಾ ಸಹಕಾರ ಬ್ಯಾಂಕ್ ಕಳೆದ 3 ವರ್ಷಗಳಿಂದ ಸಾಲ ವಿತರಿಸದೇ ರೈತರು ತೊಂದರೆ ಅನುಭವಿಸುತ್ತಿದ್ದು, ಸಹಕಾರ ಸಚಿವರು ಮಧ್ಯ ಪ್ರವೇಶಿಸಿ ಸಾಲ ವಿತರಣೆಗೆ ಮುಂದಾಗಬೇಕೆಂದು ಹೊಸೂರು ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಹೆಚ್.ಆರ್.ಕೃಷ್ಣಮೂರ್ತಿ ಒತ್ತಾಯಿಸಿದರು.


ರೈತರಿಗೆ ರಸಗೊಬ್ಬರ ವಿತರಿಸಲಾಯಿತು.

ಸಾಲಿಗ್ರಾಮ ತಾಲೂಕಿನ ಹೊಸೂರು ಕೃಷಿ ಪತ್ತಿನ ಸಹಕಾರ ಸಂಘದ ವತಿಯಿಂದ ರಸಗೊಬ್ಬರ ವಿತರಿಸುವ ಕಾರ್ಯಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ನಮ್ಮ ಸಂಘ ಷೇರುದಾರ ರೈತರಿಗೆ 2025–26ನೇ ಸಾಲಿನಲ್ಲಿ 15 ಕೋಟಿ ವಿವಿಧ ಬೆಳೆ ಸಾಲ ವಿತರಿಸಿದ್ದು, ಸಾಲ ಪಡೆದ ರೈತರು ಸಕಾಲದಲ್ಲಿ ಮರುಪಾವತಿ ಮಾಡಿ ಸಂಘದ ಅಭಿವೃದ್ಧಿಗೆ ಸಹಕರಿಸಬೇಕು. ರೈತರಿಗೆ ಈ ಸಾಲದ ಜೊತೆಗೆ ಮಧ್ಯಮಾವಧಿ ಸಾಲದಡಿ ಟ್ರಾಕ್ಟರ್, ಐಪಿ ಸೆಟ್, ಬೋರ್‌ವೆಲ್, ಹೈನುಗಾರಿಕೆ ಮತ್ತು ವಾಹನ ಸಾಲವಾಗಿ 5 ಕೋಟಿ ವಿತರಿಸಿ ರೈತರಿಗೆ ಅನುಕೂಲ ಕಲ್ಪಿಸಲಾಗಿದೆ ಎಂದು ಮಾಹಿತಿ ನೀಡಿದರು.

ಕಳೆದ 12 ವರ್ಷಗಳಿಂದ ಕಾರಣಾಂತರಗಳಿಂದ ಸ್ಥಗಿತಗೊಂಡಿದ್ದ ರೈತರಿಗೆ ವಿವಿಧ ಬಗೆಯ ರಸಗೊಬ್ಬರ ವಿತರಣೆ ಆರಂಭಿಸಿ ರೈತರಿಗೆ ಅನುಕೂಲ ಕಲ್ಪಿಸಲಾಗಿದ್ದು, ರೈತರು ನಗದು ಮೂಲಕ ವ್ಯಾಪಾರ ಮಾಡಿ ಸಂಘದ ಏಳಿಗೆಗೆ ಸಹಕರಿಸಬೇಕೆಂದು ಮನವಿ ಮಾಡಿದರು.

ರೈತರ ಪರವಾಗಿ ಮಾತನಾಡಿದ ತಾಲೂಕು ಒಕ್ಕಲಿಗರ ಸಂಘದ ಉಪಾಧ್ಯಕ್ಷ ಎ.ಕುಚೇಲ್, ಜಿಲ್ಲಾ ಹಾಪ್‌ಕಾಮ್ಸ್ ಮಾಜಿ ಅಧ್ಯಕ್ಷ ಹೆಚ್.ಟಿ.ಸುದರ್ಶನ್, ಆಶ್ರಯ ಸಮಿತಿ ಮಾಜಿ ಸದಸ್ಯ ಬಿ.ರಮೇಶ್, ರೈತರು ರಸಗೊಬ್ಬರವನ್ನು ದುಬಾರಿ ದರ ನೀಡಿ ತೆಗೆದುಕೊಂಡು ನಷ್ಟ ಅನುಭವಿಸಿದಂತೆ ಆಡಳಿತ ಮಂಡಳಿ ನೇರವಾಗಿ ಸಂಘದಿಂದ ರಸಗೊಬ್ಬರವನ್ನು ಎಂಆರ್‌ಪಿ ದರದಲ್ಲಿ ವಿತರಣೆಗೆ ಮುಂದಾಗಿರುವುದಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

ಎಪಿಎಂಸಿ ಮಾಜಿ ಅಧ್ಯಕ್ಷ ಹೆಚ್.ಎನ್.ರಾಜೇಗೌಡ, ಎಸ್.ಎಸ್.ಶಿವಸ್ವಾಮಿ, ಸಂಘದ ನಿರ್ದೇಶಕರಾದ ಎಸ್.ಬಿ.ಹುಚ್ಚೇಗೌಡ, ವಿವೇಕಾನಂದ, ಹೆಚ್.ಎನ್.ರಮೇಶ್, ಕಲ್ಯಾಣಮ್ಮ ಜಯಮ್ಮ, ಹೆಚ್.ಬಿ.ನವೀನ್ ಕುಮಾರ್, ಪಾರ್ಥಯ್ಯ, ಸಂಘದ ಮಾಜಿ ಅಧ್ಯಕ್ಷ ಪುಟ್ಟರಾಜು, ಹಳಿಯೂರು ಗ್ರಾಪಂ ಮಾಜಿ ಉಪಾಧ್ಯಕ್ಷ ಭಾಸ್ಕರ್, ಮಂಜಣ್ಣ, ಕಾಂಚನಾ, ಕೃಷಿಕ ಸಮಾಜದ ನಿರ್ದೇಶಕ ಡಿ.ಸಿ.ರಾಮೇಗೌಡ, ಮಾಜಿ ನಿರ್ದೇಶಕ ಹೆಚ್.ಕೆ.ಕೀರ್ತಿ, ಮುಖಂಡರಾದ ಕೆಂಪಣ್ಣ ಸ್ವಾಮಣ್ಣ, ಪ್ರಸನ್ನ, ಹೆಚ್.ಆರ್.ರಾಘವೇಂದ್ರ, ರಾಜೇಶ್, ಚೇತು, ಸಂಘದ ಸಿಇಓ ಚಂದ್ರಕಲಾ, ಸಿಬ್ಬಂದಿಗಳಾದ ಲೋಕೇಶ್, ಅರುಣ, ಮಹದೇವ್, ರವಿ, ಸಂತೋಷ್ ಸೇರಿದಂತೆ ಮತ್ತಿತರರಿದ್ದರು.

ಲಕ್ಷ್ಮಣ ತೀರ್ಥದ ಲಕ್ಷಣ ತೀರಿತೆ ಪುಸ್ತಕ ಬಿಡುಗಡೆ


'ಲಕ್ಷ್ಮಣ ತೀರ್ಥದ ಲಕ್ಷಣ ತೀರಿತೆ' ಪುಸ್ತಕವನ್ನು ಎಂಎಲ್‌ಸಿ ಡಿ.ತಿಮ್ಮಯ್ಯ ಬಿಡುಗಡೆಗೊಳಿಸಿದರು.

ಹುಣಸೂರು, ಜೂ.10– ಬೊಗಸೆಯಲ್ಲಿ ಕುಡಿಯುತ್ತಿದ್ದ ನದಿ ನೀರನ್ನು ಬಾಟಲ್‌ಗಳಲ್ಲಿ ಕುಡಿಯುವುದನ್ನು ನೋಡಲು ಬೇಸರವಾಗುತ್ತದೆ ಎಂದು ವಿಧಾನಪರಿಷತ್ ಸದಸ್ಯ ಡಾ.ತಿಮ್ಮಯ್ಯ ವಿಷಾದ ವ್ಯಕ್ತಪಡಿಸಿದರು.

ನಗರದ ರೋಟರಿ ಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ 'ಲಕ್ಷ್ಮಣ ತೀರ್ಥದ ಲಕ್ಷಣ ತೀರಿತೆ' ಪುಸ್ತಕ ಬಿಡುಗಡೆಗೊಳಿಸಿ ಮಾತನಾಡಿದ ಅವರು ನಾನು ಮತ್ತು ಲೇಖಕ ಹೇಮರಾಜು ಬಾಲ್ಯದ ಸಹಪಾಠಿಗಳು. ನಾವು ಬಾಲ್ಯದಲ್ಲಿ ರಜೆ ವೇಳೆ ನದಿ ದಡದಲ್ಲಿ ಆಟವಾಡುವಾಗ ಬಾಯಾರಿಕೆಯಾದ ಸಂದರ್ಭ ಬೊಗಸೆಯಲ್ಲಿ ನೀರು ಕುಡಿದು ಬಾಯಾರಿಸಿಕೊಳ್ಳುತ್ತಿದ್ದೇವು. ಆಗ ನೀರು ಅಮೃತದಂತಿತ್ತು. ಈಗ ನದಿ ನೀರು ಕಲುಷಿತಗೊಂಡು ನೋಡಲು ಸಹ ಬೇಸರವಾಗುತ್ತದೆ ಎಂದರು.

ಈ ಹಿಂದೆ ಹುಣಸೂರಿನಲ್ಲಿ ಕಾಫಿ ವರ್ಕ್ಸ್, ಹೆಂಚಿನ, ಪ್ಲೈವುಡ್, ವುಲ್ಲನ್ ಕಾರ್ಖಾನೆಗಳಿದ್ದವು. ಸಾವಿರಾರು ಜನ ಕೆಲಸ ಮಾಡುತ್ತಿದ್ದರು. ಈಗ ಅವೆಲ್ಲಾ ಕಾರಣಾಂತರಗಳಿಂದ ಮುಚ್ಚಲ್ಪಟ್ಟಿದೆ. ಲಕ್ಷ್ಮಣ ತೀರ್ಥ ನದಿಯ ಉಳಿಸುವುದು ಪ್ರತಿಯೊಬ್ಬರ ಆದ್ಯ ಕರ್ತವ್ಯ. ನಾನು ಸಹ ಲಕ್ಷ್ಮಣ ತೀರ್ಥ ನದಿ ಉಳಿವಿಗಾಗಿ ಅನೇಕ ಪ್ರಯತ್ನ ಮಾಡುತ್ತಿದ್ದೇನೆ. ಇನ್ನು ಸಾಧ್ಯ ವಾಗದೇ ಇರುವುದು ಬೇಸರದ ಸಂಗತಿ ಎಂದರು.

ಲೇಖಕ ಹೇಮರಾಜು ಮಾತನಾಡಿ, ದೇಶದ ಎಲ್ಲಾ ನದಿಗಳ ಹೆಸರು ಹೆಣ್ಣಿನದ್ದಾಗಿದೆ. ಆದರೆ ಲಕ್ಷ್ಮಣತೀರ್ಥ ನದಿಗೆ ಗಂಡು ಹೆಸರು ಹೇಗೆ ಬಂತು. ಲಕ್ಷ್ಮಣನ ಸೋದರ ಸಂಬಂಧದಲ್ಲಿ ಇದ್ದಂತ ಮೌಲ್ಯಗಳು, ಅಣ್ಣನಿಗೆ ಕೊಟ್ಟ ಗೌರವ, ಸಹಕಾರ ಬೆಲೆ ಕಟ್ಟಲಾಗದ ವಸ್ತುಗಳು. ಅದು ಮಹಾ ಆದರ್ಶ. ಎಲ್ಲಾ ನಾಗರಿಕ ಕಥೆಗಳು ನದಿ ದಡದಲ್ಲಿ ರೂಪುಗೊಳ್ಳುತ್ತವೆ. ನದಿಗಳನ್ನು ಕಾಪಾಡದಿದ್ದರೆ ನಾವು ನಮ್ಮ ಆರೋಗ್ಯ ಕಾಪಾಡಿಕೊಳ್ಳಲು ಅಸಾಧ್ಯ. ನದಿಗಳನ್ನು ಮಲೀನ, ಕಲುಷಿತ ಮಾಡುತ್ತಾ ಹೋದರೆ ಸಮಾಜದ ಚಿಂತನಾಶೀಲತೆಯು ಕುಗ್ಗುತ್ತಿದೆ ಎಂದು ಅರ್ಥ ಎಂದರು.

ಪತ್ರಕರ್ತ ಸಚಿತ್ ಮಾತನಾಡಿದರು. ಈ ವೇಳೆ ಲೇಖಕ ಡಾ.ಜೆ.ಸೋಮಣ್ಣ, ಉಪಪ್ರಾಂಶುಪಾಲ ಸಂತೋಷ್ ಕುಮಾರ್. ಕೆ, ರೊ.ಆನಂದ್ .ಆರ್, ಸಿಟಿ ಕೇಬಲ್ ಸಾಯಿನಾಥ್, ಸೋಮಶೇಖರ್, ಡಾ.ಪ್ರಸನ್ನ, ಹೆಚ್.ಕೆ. ಮಹದೇವ್ ಇತರರಿದ್ದರು.

ದಲಿತ ಚಳುವಳಿಯ ಪ್ರವರ್ತಕ ಪ್ರೊ.ಬಿ.ಕೃಷ್ಣಪ್ಪ


ದಸಂಸ ಸಂಸ್ಥಾಪಕ ಪ್ರೊ.ಬಿ.ಕೃಷ್ಣಪ್ಪ ಅವರ ಜಯಂತಿ ಆಚರಿಸಲಾಯಿತು.

ತಿ.ನರಸೀಪುರ, ಜೂ.10– ಸಾಮಾಜಿಕ ಅಸಮಾನತೆಯ ವಿರುದ್ಧ ಹಾಗೂ ದಮನಿತ ಸಮುದಾಯಗಳ ಪರ ಧ್ವನಿ ಎತ್ತಿ ಹೋರಾಟದ ಜಾಗೃತಿ ಮೂಡಿಸಿದ ಪ್ರೊ.ಬಿ.ಕೃಷ್ಣಪ್ಪ ಅವರು ದಲಿತ ಚಳುವಳಿಯ ಪ್ರವರ್ತಕ ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ (ಭೀಮವಾದ) ತಾಲೂಕು ಸಂಚಾಲಕ ನರಗ್ಯಾತನಹಳ್ಳಿ ಮನೋಜ್ ಕುಮಾರ್ ತಿಳಿಸಿದರು.

ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ಸಮುದಾಯ ಭವನದಲ್ಲಿ ಮಂಗಳವಾರ ಆಯೋಜಿಸಿದ್ದ ದಸಂಸ ಸಂಸ್ಥಾಪಕ ಪ್ರೊ.ಬಿ.ಕೃಷ್ಣಪ್ಪ ಅವರ 87ನೇ ಜಯಂತಿಯಲ್ಲಿ ಮಾತನಾಡಿದ ಅವರು, ನೇರನಡೆ, ನುಡಿ ಮೂಲಕವೇ ದಲಿತ ಚಳುವಳಿಗೆ ಸಂಘರ್ಷ ಸಮಿತಿಯನ್ನು ನಾಡಿನಲ್ಲಿ ಕಟ್ಟಿದ ಪ್ರೊ.ಬಿ.ಕೃಷ್ಣಪ್ಪ ಅವರ ಜೀವನದ ಹಾದಿ ಸಂಘಟನೆಯಲ್ಲಿ ದುಡಿಯುವ ನಮ್ಮಂತಹವರಿಗೆ ದಾರಿಯಾಗಿದೆ ಎಂದರು.

ಜಿಲ್ಲಾ ಸಂಘಟನಾ ಸಂಚಾಲಕ ಕೆಂಪಯ್ಯನಹುಂಡಿ ರಾಜು ಮಾತನಾಡಿ, ಅಸಮಾನತೆಯಿಂದ ನೊಂದವರ ವೇದನೆಯನ್ನು ಅರ್ಥೈಸುವಂತಿದ್ದ ಕೃಷ್ಣಪ್ಪ ಅವರ ಕ್ರಾಂತಿ ಗೀತೆಗಳು ದಲಿತ ಸಂಘಟನೆಗಳ ಹೋರಾಟಕ್ಕೆ ಚೈತನ್ಯ ನೀಡುತ್ತಿದ್ದವು. ಅಲ್ಲದೇ ಅನ್ಯಾಯದ ವಿರುದ್ಧದ ಪ್ರತಿಭಟನೆಗೆ ಬಲ ಹೆಚ್ಚಿಸುತ್ತಿದ್ದವು. ದಲಿತ ಸಮುದಾಯಕ್ಕೆ ಮಾದರಿಯಾಗಿ ನಾಯಕತ್ವದ ಗುಣ ಅವರಲ್ಲಿ ಇದ್ದುದರಿಂದಲೇ ಇಂದಿಗೂ ಕೃಷ್ಣಪ್ಪ ಅವರನ್ನು ಸ್ಮರಿಸಿ, ಗೌರವಿಸಲಾಗುತ್ತಿದೆ ಎಂದರು.

ಜಿಲ್ಲಾ ಕಾರ್ಯಕಾರಣಿ ಸದಸ್ಯ ಕನ್ನಾಯಕನಹಳ್ಳಿ ಮರಿಸ್ವಾಮಿ, ಜಿಲ್ಲಾ ವಿಭಾಗೀಯ ಸಂಚಾಲಕ ಶಿವಕುಮಾರ್, ತಾಲೂಕು ಸಂಘಟನಾ ಸಂಚಾಲಕರಾದ ಕುಮಾರ್, ಪ್ರಭಾಕರ್, ಮಲ್ಲೇಶ್, ಗೋವಿಂದರಾಜು, ಜಯಣ್ಣ, ಪರಶುರಾಮ, ಕಾರ್ ಸ್ವಾಮಿ, ಮುಖಂಡರಾದ ಅರ್ಜುನ್, ಶಿವು, ಆನಂದ್, ಗವಿಸಿದ್ದಯ್ಯ, ಪ್ರಸನ್ನ, ರಾಜೇಂದ್ರ, ಗೌರಮ್ಮ, ನೀಲಮ್ಮ, ಲಕ್ಷ್ಮಮ್ಮ, ಮಹದೇವಮ್ಮ ಇತರರಿದ್ದರು.

ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ

ಮೈಸೂರು, ಜೂ. 10– ಮೈಸೂರಿನ ಲಕ್ಷ್ಮೀಪುರಂನ ಪ್ರೀತಿ ಕ್ಯಾನ್ಸರ್ ಸೆಂಟರ್‌ನಲ್ಲಿ ಜೂ. 12 ರಂದು ಬೆಳಗ್ಗೆ 10 ರಿಂದ ರಾತ್ರಿ 8 ಗಂಟೆಯವರೆಗೆ ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಮಾಹಿತಿಗೆ ದೂ. 0821–4259259 ಸಂಪರ್ಕಿಸಬಹುದು.

ಬಿತ್ತನೆ ಬೀಜ, ರಸಗೊಬ್ಬರ ವಿತರಿಸಲು ಸಿದ್ಧತೆ ಕೈಗೊಳ್ಳಿ

ಅಧಿಕಾರಿಗಳಿಗೆ ಶಾಸಕ ಡಿ.ರವಿಶಂಕರ್ ಸೂಚನೆ

ಕೆ.ಆರ್.ನಗರ, ಜೂ.10– ಮುಂಗಾರು ಆರಂಭಕ್ಕೂ ಮುನ್ನ ಉತ್ತಮ ಮಳೆಯಾಗಿದ್ದು, ರೈತರು ಸಕಾಲಕ್ಕೆ ಬಿತ್ತನೆ ಮಾಡಲು ಅನುಕೂಲವಾಗಿದೆ. ಹೀಗಾಗಿ ಕೃಷಿ ಇಲಾಖೆ ಅಧಿಕಾರಿಗಳು ರೈತರಿಗೆ ಬಿತ್ತನೆ ಬೀಜ ಮತ್ತು ರಸಗೊಬ್ಬರ ವಿತರಿಸಲು ಸಿದ್ಧತೆ ಮಾಡಿಕೊಳ್ಳಬೇಕು ಎಂದು ಶಾಸಕ ಡಿ.ರವಿಶಂಕರ್ ಸೂಚಿಸಿದರು.


ಸಭೆಯಲ್ಲಿ ಶಾಸಕ ಡಿ.ರವಿಶಂಕರ್ ಮಾತನಾಡಿದರು.

ಪಟ್ಟಣದ ತಾಲೂಕು ಕಚೇರಿ ಸಭಾಂಗಣದಲ್ಲಿ ಮುಂಗಾರು ಹಂಗಾಮಿನ ಪೂರ್ವ ಸಿದ್ಧತೆ ಸಂಬಂಧ ನಡೆದ ರೈತ ಮುಖಂಡರು ಮತ್ತು ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ರೈತರು ಹೈಬ್ರಿಡ್ ಭತ್ತ ಬೆಳೆಯಲು ಹೆಚ್ಚು ಆಸಕ್ತಿ ತೋರುತ್ತಿದ್ದು, ಆ ಬಿತ್ತನೆ ಬೀಜಗಳನ್ನು ವಿತರಿಸಲು ಕ್ರಮ ವಹಿಸಲಾಗುತ್ತದೆ ಎಂದರು.

ರೈತರಿಗೆ ಬಿತ್ತನೆ ಬೀಜ ಮತ್ತು ರಸಗೊಬ್ಬರ ಸೇರಿದಂತೆ ಕೃಷಿ ಚಟುವಟಿಕೆಗೆ ಬೇಕಾಗುವ ಪರಿಕರಗಳಿಗೆ ತೊಂದರೆಯಾಗದಂತೆ ಎಚ್ಚರ ವಹಿಸಬೇಕಾದದ್ದು ಕೃಷಿ ಇಲಾಖೆ ಅಧಿಕಾರಿಗಳ ಜವಾಬ್ದಾರಿ. ಈ ವಿಚಾರವನ್ನು ಇಲಾಖಾ ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಿ ಸರ್ಕಾರದ ನಿಯಮಾನುಸಾರ ಬಿತ್ತನೆ ಬೀಜ ಮತ್ತು ರಸಗೊಬ್ಬರ ಮಾರಾಟ ಮಾಡಲು ಅಂಗಡಿ ಮಾಲೀಕರಿಗೆ ಸೂಚಿಸಬೇಕು ಎಂದರು.

ನಿಯಮ ಮೀರಿ ಹೆಚ್ಚು ಬೆಲೆಗೆ ಕಾಳಸಂತೆಯಲ್ಲಿ ಮಾರಾಟ ಮಾಡಿದ್ದು ಕಂಡು ಬಂದಲ್ಲಿ ಅಧಿಕಾರಿಗಳನ್ನು ಹೊಣೆಗಾರರನ್ನಾಗಿ ಮಾಡಲಾಗುತ್ತದೆ ಎಂದು ಎಚ್ಚರಿಕೆ ನೀಡಿದ ಶಾಸಕರು ಎಲ್ಲಾ ಇಲಾಖಾಧಿಕಾರಿಗಳು ರೈತರು ಮತ್ತು ಸಾರ್ವಜನಿಕರೊಂದಿಗೆ ಸೌಜನ್ಯದಿಂದ ವರ್ತಿಸುವುದರೊಂದಿಗೆ ಸರ್ಕಾರದಿಂದ ದೊರೆಯುವ ಸವಲತ್ತುಗಳ ಬಗ್ಗೆ ಸಮರ್ಪಕವಾದ ಮಾಹಿತಿ ನೀಡಿ ಅವರುಗಳಿಗೆ ಅನುಕೂಲ ಕಲ್ಪಿಸಬೇಕು ಎಂದು ತಾಕೀತು ಮಾಡಿದರು.


ಸರ್ಕಾರ ತೋಟಗಾರಿಕೆ ಇಲಾಖೆಯಡಿ ರೈತರಿಗೆ ಸಾಕಷ್ಟು ಉಪಯುಕ್ತ ಯೋಜನೆಗಳನ್ನು ಜಾರಿಗೊಳಿಸಿದೆ. ಅವುಗಳನ್ನು ಸಮರ್ಪಕವಾಗಿ ಪ್ರಚಾರ ಪಡಿಸಿ ಎಲ್ಲಾ ರೈತರಿಗೂ ಅನುಕೂಲ ಮಾಡುವ ಕೆಲಸವನ್ನು ಇಲಾಖಾ ಅಧಿಕಾರಿಗಳು ಮಾಡುತ್ತಿಲ್ಲ. ಈ ಬಗ್ಗೆ ಸಾಕಷ್ಟು ದೂರುಗಳು ಕೇಳಿ ಬಂದಿವೆ. ಹಾಗಾಗಿ ಅಧಿಕಾರಿಗಳು ಹಳ್ಳಿಗಳಿಗೆ ಭೇಟಿ ಕೊಟ್ಟು ತೋಟಗಾರಿಕೆ ಮಾಡುತ್ತಿರುವ ರೈತರನ್ನು ಗುರುತಿಸಿ ಸವಲತ್ತು ತಲುಪಿಸಬೇಕು ಎಂದರು.

ಚಾಮರಾಜ ಬಲ ಮತ್ತು ಎಡದಂಡ ನಾಲೆಗಳ ಕೊನೆ ಹಂತದ ರೈತರ ಜಮೀನುಗಳಿಗೆ ಸರಾಗವಾಗಿ ನೀರು ಹರಿಸುವ ಸಲುವಾಗಿ ನಾಲೆಗಳನ್ನು ಆಧುನೀಕರಣ ಮಾಡಲು ಸರ್ಕಾರದಿಂದ 108 ಕೋಟಿ ರೂ. ಬಿಡುಗಡೆ ಮಾಡಿಸಲಾಗಿದೆ. ಈ ಬಾರಿ ರೈತರು ಬೆಳೆ ಬೆಳೆಯಲು ತೊಂದರೆಯಾಗದಂತೆ ಆಗಬೇಕಾಗಿರುವ ಕಾಮಗಾರಿಗಳನ್ನು ನೀರಾವರಿ ಇಲಾಖೆಯವರು ತ್ವರಿತವಾಗಿ ಮಾಡಿಸಬೇಕು. ಟ್ರಾಕ್ಟರ್ ಮತ್ತು ಎತ್ತಿನಗಾಡಿ ಸಂಚರಿಸಲು ಅನುಕೂಲವಾಗುವಂತೆ ನಾಲೆ ಏರಿ ಸಮತಟ್ಟು ಮಾಡಿಸಬೇಕು ಎಂದರು.

ರೈತ ಮುಖಂಡರಾದ ಹೆಚ್.ಪಿ.ಪ್ರಶಾಂತ್, ಎಲ್.ಪಿ.ರವಿಶಂಕರ್, ಶ್ರೀನಿವಾಸ್, ಹೆಚ್.ಹೆಚ್.ನಾಗೇಂದ್ರ, ರಾಮಪ್ರಸಾದ್, ಎಂ.ಜೆ.ಕುಮಾರ್, ತಿಮ್ಮಪ್ಪ, ಹರೀಶ್, ನಟರಾಜು, ನೇತ್ರಾವತಿ, ರವೀಂದ್ರ, ಎಂ.ಎನ್.ನಾಗೇಶ್, ಶಿವರಾಮು, ಮಲ್ಲೇಶ್ ಮಾತನಾಡಿ ರೈತರಿಗೆ ಆಗಬೇಕಾಗಿರುವ ಅನುಕೂಲಗಳ ಬಗ್ಗೆ ಶಾಸಕರಿಗೆ ಮನವರಿಕೆ ಮಾಡಿಕೊಟ್ಟರು.

ತಹಸೀಲ್ದಾರ್ ಜಿ.ಸುರೇಂದ್ರಮೂರ್ತಿ, ಎಸ್.ನರಗುಂದ್, ತಾಪಂ ಇಓ ಕುಲದೀಪ್, ಕೃಷಿ ಇಲಾಖೆ ಸಹಕಾರ ನಿರ್ದೇಶಕ ಕೆ.ಜೆ.ಮಲ್ಲಿಕಾರ್ಜುನ್, ತೋಟಗಾರಿಕೆ ಇಲಾಖೆ ಭಾರತಿ, ಚೆಸ್ಕಾಂ ಎಇಇ ಅರ್ಕೇಶ್ ಮೂರ್ತಿ, ಜಿಪಂ ಮಾಜಿ ಸದಸ್ಯ ಶಿವರಾಮು, ಜಯರಾಮೇಗೌಡ, ಪುರಸಭೆ ಸದಸ್ಯ ಪ್ರಕಾಶ್, ಶಂಕರ್‌ಸ್ವಾಮಿ, ಮಾಜಿ ಅಧ್ಯಕ್ಷ ನರಸಿಂಹರಾಜು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಮಹದೇವ್, ಉದಯಶಂಕರ್, ವಕ್ತಾರ ಸೈಯದ್ ಜಾಬೀರ್ ಇದ್ದರು.

ಶ್ರದ್ಧಾಂಜಲಿ



ತಿ.ನರಸೀಪುರ ಪುರಸಭೆ ಬಿಲ್ ಕಲೆಕ್ಟರ್ ಎಸ್.ರವಿ ನಿಧನರಾದ ಹಿನ್ನೆಲೆಯಲ್ಲಿ ಮಂಗಳವಾರ ಪುರಸಭೆಯಲ್ಲಿ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಪುರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಸಿ.ಪ್ರಕಾಶ್, ಮುಖ್ಯಾಧಿಕಾರಿ ಬಿ.ಕೆ.ವಸಂತ ಕುಮಾರಿ, ಸಮುದಾಯ ಸಂಘಟಕ ಮಹಾದೇವ ಹಾಗೂ ಸಿಬ್ಬಂದಿ ಹಾಜರಿದ್ದರು.

ಇಂದು ದತ್ತಿ ಉಪನ್ಯಾಸ ಸಮಾರಂಭ

ಸರಗೂರು, ಜೂ.10– ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಮೈಸೂರು, ಪಡುವಲು ಶ್ರೀವಿರಕ್ತಮಠ ಬಿಡಗಲು, ತಾಲೂಕು ಶರಣ ಸಾಹಿತ್ಯ ಪರಿಷತ್ ಸರಗೂರು ಸಂಯುಕ್ತಾಶ್ರಯದಲ್ಲಿ ಜೂ.11 ರಂದು ಬೆಳಗ್ಗೆ ಪಟ್ಟಣದ ಪಡುವಲು ಶ್ರೀವಿರಕ್ತಮಠ ಬಿಡಗಲುವಿನಲ್ಲಿ ಶ್ರೀಮಠದ ಮಹದೇವ ಸ್ವಾಮೀಜಿ ಅವರ ಸಾನಿಧ್ಯದಲ್ಲಿ ದತ್ತಿ ಉಪನ್ಯಾಸ ಸಮಾರಂಭ ನಡೆಯಲಿದೆ.

ದಿ.ಸುಮಂಗಳಮ್ಮ ಸಿದ್ದಲಿಂಗಸ್ವಾಮಿ ದತ್ತಿ, ಕೆಂಪಮ್ಮ ಅರ್ಜನಹಳ್ಳಿ ಬಸಪ್ಪನವರ ದತ್ತಿ, ಜಗದ್ಗುರು ಡಾ.ರಾಜೇಂದ್ರ ಸ್ವಾಮೀಜಿಗಳ ದತ್ತಿ ಉಪನ್ಯಾಸ ಸಮಾರಂಭದಲ್ಲಿ ನಂಜನಗೂಡು ತಾಲೂಕಿನ ಕುರಹಟ್ಟಿ ಶ್ರೀಗುರುಮಲ್ಲೇಶ್ವರ ದಾಸೋಹ ಮಠದ ಮಾದಪ್ಪ ಸ್ವಾಮೀಜಿ, ಭುಜಗಯ್ಯನಹುಂಡಿ ಶ್ರೀಗುರುಮಲ್ಲೇಶ್ವರ ದಾಸೋಹ ಮಠದ ಶಿವಲಿಂಗೇಂದ್ರ ಸ್ವಾಮೀಜಿ ಉಪಸ್ಥಿತರಿರುವರು. ಚಾಮರಾಜನಗರ ಜಿಲ್ಲಾ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಅಧ್ಯಕ್ಷ ಎಂ.ಎನ್.ನಂದೀಶ್ ಕುಮಾರ್ ಕಾರ್ಯಕ್ರಮ ಉದ್ಘಾಟಿಸುವರು. ಜಿಲ್ಲಾ ಶರಣ ಸಾಹಿತ್ಯ ಪರಿಷತ್‌ನ ಡಾ.ಹೆಳವರಹುಂಡಿ ಸಿದ್ದಪ್ಪ ಅಧ್ಯಕ್ಷತೆ ವಹಿಸುವರು. ಜೆಎಸ್‌ಎಸ್ ಮಹಾವಿದ್ಯಾಪೀಠ ನಿರ್ದೇಶಕ ಪ್ರೊ.ಮೊರಬದ ಮಲ್ಲಿಕಾರ್ಜುನ ಉಪನ್ಯಾಸ ನೀಡುವರು. ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಯುವ ಘಟಕದ ಸಿ.ಎಸ್.ಅರ್ಜುನ್, ಜಿಲ್ಲಾ ಶರಣ ಸಾಹಿತ್ಯ ಪರಿಷತ್ ನಿಕಟಪೂರ್ವ ಅಧ್ಯಕ್ಷ ಎಂ.ಚಂದ್ರಶೇಖರ್, ತಾಲೂಕು ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಗುರುಸ್ವಾಮಿ ಭಾಗವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ಗುರಿ, ಛಲ, ಗುರುವಿನ ಆಶೀರ್ವಾದವಿದ್ದರೆ ಸಾಧನೆ ಸಾಧ್ಯ

ವಾಟಾಳು ಮಠದ ಶ್ರೀಸಿದ್ಧಲಿಂಗ ಶಿವಾಚಾರ್ಯ ಸ್ವಾಮೀಜಿ


ಎಸ್‌ಎಸ್‌ಎಲ್‌ಸಿ, ಪಿಯುಸಿಯಲ್ಲಿ ಉತ್ತಮ ಅಂಕಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ತಿ.ನರಸೀಪುರ, ಜೂ.10– ಗುರಿ, ಛಲ, ಗುರುವಿನ ಆಶೀರ್ವಾದ ಇದ್ದರೆ ಮಾತ್ರ ಜೀವನದಲ್ಲಿ ಉತ್ತಮ ಸಾಧನೆ ಮಾಡಲು ಸಾಧ್ಯ ಎಂದು ವಾಟಾಳು ವೀರಸಿಂಹಾಸನ ಮಠದ ಪೀಠಾಧ್ಯಕ್ಷ ಶ್ರೀಸಿದ್ಧಲಿಂಗ ಶಿವಾಚಾರ್ಯ ಸ್ವಾಮೀಜಿ ತಿಳಿಸಿದರು.

ತಾಲೂಕಿನ ಹೊಸೂರುಹುಂಡಿ ಗುರುಮಲ್ಲೇಶ್ವರ ದಾಸೋಹ ಮಠದಲ್ಲಿ ವೀರಶೈವ ಲಿಂಗಾಯತ ವಿದ್ಯಾರ್ಥಿ ಪ್ರತಿಭಾ ಪುರಸ್ಕಾರ ವೇದಿಕೆ ವತಿಯಿಂದ ಆಯೋಜಿಸಿದ್ದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಉತ್ತಮ ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಿ ಆಶೀರ್ವಚನ ನೀಡಿ ಅವರು ಮಾತನಾಡಿದರು.

ಪ್ರತಿಯೊಬ್ಬರಲ್ಲೂ ಒಂದೊಂದು ಶಕ್ತಿ, ಆಸಕ್ತಿ ಇರುತ್ತದೆ. ತಮ್ಮ ಶಕ್ತಿ ಗುರುತಿಸಿಕೊಂಡು ಪ್ರತಿಯೊಬ್ಬರೂ ಸಾಧನೆಯ ಮೆಟ್ಟಿಲೇರಬೇಕು. ಪೋಷಕರಿಗೆ ಹುಟ್ಟಿದ ಊರಿಗೆ ಕೀರ್ತಿ ತರಬೇಕು. ಈಗಿನ ವಿದ್ಯಾರ್ಥಿಗಳೇ ಮುಂದಿನ ಭವಿಷ್ಯದ ರೂವಾರಿಗಳು. ವಿದ್ಯಾವಂತರಾಗಿ ಸಮಾಜಕ್ಕೆ ಏನಾದರೂ ಹಿಂದಿರುಗಿಸುವ ಕೆಲಸ ಮಾಡಬೇಕು. ಪ್ರತಿಯೊಬ್ಬರ ಬೆಳವಣಿಗೆಯಲ್ಲೂ ಪೋಷಕರು, ಶಿಕ್ಷಕರು, ಸ್ನೇಹಿತರು ಮುಂತಾದವರ ಕಾಣಿಕೆ ಇರುತ್ತದೆ. ಬೆಳೆಯುವ ಹಾದಿ ಮರೆಯಬಾರದು. ಇತರರಿಗೆ ಸಹಾಯ ಮಾಡುವ ಮನೋಭಾವ ಬಿಡಬಾರದು ಎಂದರು.

ಮುಡುಕನಪುರ ಶ್ರೀಷಡಕ್ಷರ ದೇಶಿಕೇಂದ್ರ ಸ್ವಾಮೀಜಿ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡುವುದರೊಂದಿಗೆ ಎಲ್ಲಾ ವಿದ್ಯಾರ್ಥಿಗಳಿಗೆ ಪ್ರೇರಣೆ ನೀಡುವುದು ಹಾಗೂ ಅವರು ಇನ್ನಷ್ಟು ಸಾಧನೆ ಮಾಡುವಂತೆ ಪ್ರೋತ್ಸಾಹಿಸುವುದು ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ. ಮಕ್ಕಳ ಬೆಳವಣಿಗೆಯಲ್ಲಿ ಪೋಷಕರ ಶ್ರಮವೂ ಇರುತ್ತದೆ. ಹಾಗಾಗಿ ವಿದ್ಯಾರ್ಥಿಗಳು ಉನ್ನತ ಸ್ಥಾನ ಪಡೆದ ಮೇಲೆ ತಂದೆ–ತಾಯಿ ಹಾಗೂ ಬೆಳೆಸಿದ ಸಮಾಜವನ್ನು ಮರೆಯಬಾರದು ಎಂದು ಕಿವಿಮಾತು ಹೇಳಿದರು.

ಅರೆಬೊಮ್ಮನಹಳ್ಳಿ ಪಾರಮಾರ್ಥಿಕ ಮಠದ ಪೀಠಾಧ್ಯಕ್ಷ ಶ್ರೀಮಲ್ಲಿಕಾರ್ಜುನ ಸ್ವಾಮಿ ಮಾತನಾಡಿ, ವಿದ್ಯಾರ್ಥಿಗಳು ಶಿಕ್ಷಣದೊಂದಿಗೆ ಸಂಸ್ಕಾರ, ಸದ್ವಿಚಾರ, ಧರ್ಮ ಮತ್ತು ಸತ್ಯದ ಮಾರ್ಗ ಅಳವಡಿಸಿಕೊಂಡಾಗ ಮಾತ್ರ ಯಶಸ್ಸು ಪ್ರಾಪ್ತಿಯಾಗುತ್ತದೆ. ಹಾಗಾಗಿ ಮೊದಲು ವಿದ್ಯಾರ್ಥಿಗಳು ಸಂಸ್ಕಾರವಂತರಾಗಬೇಕು. ಇಂದು ಶಿಕ್ಷಣ ಗಗನ ಕುಸುಮವಾಗುತ್ತಿದೆ. ಮಕ್ಕಳಿಗೆ ಶಿಕ್ಷಣ ಕೊಡಿಸಲು ಲಕ್ಷಾಂತರ ರೂ. ವೆಚ್ಚವಾಗುತ್ತಿದೆ. ಆದರೂ ಗುಣಮಟ್ಟದ ಶಿಕ್ಷಣ ಸಿಗುತ್ತಿಲ್ಲ. ಸರ್ಕಾರ ರಾಜ್ಯದ ಜನತೆಗೆ ಉಚಿತ ಭಾಗ್ಯ ಗಳನ್ನು ನೀಡುವ ಬದಲಿಗೆ ಅದೇ ಹಣವನ್ನು ವಿದ್ಯಾರ್ಥಿಗಳ ಪ್ರತಿಭಾ ವಿಕಾಸಕ್ಕೆ ಮೀಸಲಿಟ್ಟರೆ ಮಕ್ಕಳ ಜ್ಞಾನಾಭಿವೃದ್ಧಿಗೆ ಸಹಕಾರವಾಗಲಿದೆ ಎಂದರು.

ಇದೇ ವೇಳೆ ಅಂತರರಾಷ್ಟ್ರೀಯ ಖೋ ಖೋ ಆಟಗಾರ್ತಿ ಕು.ಬಿ.ಚೈತ್ರ ಹಾಗೂ ರಾಷ್ಟ್ರೀಯ ಥ್ರೋ ಬಾಲ್ ಕ್ರೀಡಾಪಟು ಕೇತಹಳ್ಳಿ ಗ್ರಾಮದ ವಿಶಾಲ್ ಸಂಜಯ್ ಕುಮಾರ್ ಅವರನ್ನು ಸನ್ಮಾನಿಸಲಾಯಿತು.

ಹೊಸೂರು ಹುಂಡಿ ಗುರುಮಲ್ಲೇಶ್ವರ ಭಿಕ್ಷದ ಮಠದ ಶ್ರೀರಾಜಶೇಖರ ಸ್ವಾಮೀಜಿ ಅಧ್ಯಕ್ಷತೆ ವಹಿಸಿದ್ದರು. ಅಖಿಲ ಭಾರತ ವೀರಶೈವ ಮಹಾಸಭಾ ತಾಲೂಕು ಅಧ್ಯಕ್ಷ ಎಸ್‌ಎಂಆರ್ ಪ್ರಕಾಶ್, ತಾಪಂ ಮಾಜಿ ಸದಸ್ಯ ಗುರುಮೂರ್ತಿ, ಪರಮೇಶ್, ಕೋಶಾಧ್ಯಕ್ಷ ದೊಡ್ಡನಹುಂಡಿ ನಂಜುಂಡಸ್ವಾಮಿ, ಬಸವೇಶ್ವರ ಸಹಕಾರ ಸಂಘದ ಅಧ್ಯಕ್ಷ ಸುಗಂಧರಾಜು, ಕೆಇಬಿ ಸಿದ್ದಲಿಂಗಸ್ವಾಮಿ, ಕುಮಾರ್, ರತ್ನಶೇಖರ್, ಸ್ವಾಮಿ, ಉಪನ್ಯಾಸಕ ಕುಮಾರಸ್ವಾಮಿ, ತೊಂಟೇಶ್, ವಕೀಲ ಜ್ಞಾನೇಂದ್ರಮೂರ್ತಿ, ಕೆ.ಎಂ. ಮಲ್ಲು, ಪುರಸಭಾ ಸದಸ್ಯೆ ರೂಪಾ, ಅಕ್ಕಿ ನಾಗಪ್ಪ, ಗೌಡ್ರು ಕೆಂಪಣ್ಣ, ಡಿ.ಎಲ್. ಮಹದೇವಪ್ಪ, ಶೇಖರಪ್ಪ, ಪ್ರಭು, ಶಂಕರ, ಸ್ವಾಮಿ, ರಾಜಶೇಖರ್, ಆಡಿಟರ್ ಮಂಜುನಾಥ್, ಮಹಾದೇವ ಪ್ರಸಾದ್ ಸೇರಿದಂತೆ ಪೋಷಕರು, ವಿದ್ಯಾರ್ಥಿಗಳು ಹಾಜರಿದ್ದರು.

ಫಲಾನುಭವಿಗಳಿಗೆ ಪ್ರಮಾಣ ಪತ್ರ ವಿತರಣೆ


ಮೈಸೂರು ತಾಲೂಕು ಜಯಪುರ ಹೋಬಳಿ ನಾಡಕಚೇರಿ ಆವರಣದಲ್ಲಿ ಮಂಗಳವಾರ ನಡೆದ ಪಿಂಚಣಿ ಅದಾಲತ್ ಅನ್ನು ಮೈಸೂರು ತಾಲೂಕು ಗ್ರೇಡ್–2 ತಹಸೀಲ್ದಾರ್ ಬಿ.ಕೆ. ಶ್ರೀನಿವಾಸ್ ಉದ್ಘಾಟಿಸಿ, ಜಯಪುರ ಹೋಬಳಿಯ 8 ಫಲಾನುಭವಿಗಳಿಗೆ ಸಂಧ್ಯಾ ಸುರಕ್ಷಾ, 7 ಫಲಾನುಭವಿಗಳಿಗೆ ವಿಧವಾ ವೇತನ, ಮೂವರು ಅಂಗವಿಕಲರು ಮತ್ತು ಒಬ್ಬರು ವೃದ್ಧಾಪ್ಯರಿಗೆ ಮಾಸಾಶನ ಪ್ರಮಾಣ ಪತ್ರ ವಿತರಿಸಿದರು. ಉಪ ತಹಸೀಲ್ದಾರ್ ಎಂ.ನಿಂಗಪ್ಪ ಕಂದಾಯ ಅಧಿಕಾರಿ ಲೋಹಿತ್, ಗ್ರಾಮ ಆಡಳಿತ ಅಧಿಕಾರಿಗಳಾದ ಎಂ.ವಿ. ಭಾಸ್ಕರ್ ನವೀನ್, ಪ್ರದೀಪ್ ಸಿಂಗ್, ಮಣಿಕಂಠ, ಉದಯ ಕುಮಾರ್, ಭರತ್, ಅಮರೇಶ್, ಸಿ.ಕೆ.ಭವಾನಿ, ಶಿಲ್ಪಶ್ರೀ, ಲೋಕೇಶ್, ಜಗದೀಶ್, ಸಿದ್ದಪ್ಪ ಬೆಕ್ಕಣ್ಣನವರ್, ಶಿವಕುಮಾರ್, ನಿಂಗರಾಜು, ಮೋನಿಕಾ, ಸುಶ್ಮಿತಾ ಮತ್ತು ಗ್ರಾಮ ಸಹಾಯಕರು ಉಪಸ್ಥಿತರಿದ್ದರು.

ಲಕ್ಷ್ಮಮ್ಮ ನಿಧನ



ಸರಗೂರು, ಜೂ.10– ಪಟ್ಟಣದ ಸಾರ್ವಜನಿಕ ಗ್ರಂಥಾಲಯದ ಮೇಲ್ವಿಚಾರಕ ಶಿವಣ್ಣ ಅವರ ಅತ್ತೆ ಲಕ್ಷ್ಮಮ್ಮ (70) ಸೋಮವಾರ ರಾತ್ರಿ ನಿಧನರಾದರು. ಮೃತರು ಮೂವರು ಪುತ್ರರು, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಚಂಗೌಡನಹಳ್ಳಿ(ಮುಳ್ಳೂರುಹುಂಡಿ)ಯಲ್ಲಿ ಮಂಗಳವಾರ ಸಂಜೆ ನಡೆಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮುಕ್ತ ವಿವಿಯಲ್ಲಿ ಸ್ಪರ್ಧಾತ್ಮಕ ಪರೀಕ್ಷೆ ತರಬೇತಿ ಶಿಬಿರದ ಸಮಾರೋಪ

ವಿದ್ಯಾರ್ಥಿಗಳು ಗುರಿ ತಲುಪಲು ಪಣ ತೊಡಬೇಕು

ಕರ್ನಾಟಕ ಗೃಹ ಮಂಡಳಿ ಆಯುಕ್ತ ದಯಾನಂದ ಕಿವಿಮಾತು



ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕಾವೇರಿ ಸಭಾಂಗಣದಲ್ಲಿ ಆಯೋಜಿಸಿದ್ದ ಐಎಎಸ್, ಕೆಎಎಸ್ ಪರೀಕ್ಷಾ ತರಬೇತಿ ಶಿಬಿರದ ಸಮಾರೋಪ ಸಮಾರಂಭದಲ್ಲಿ ಕರ್ನಾಟಕ ಗೃಹ ಮಂಡಳಿ ಆಯುಕ್ತ ಕೆ.ಎ.ದಯಾನಂದ ಮಾತನಾಡಿದರು.

ಮೈಸೂರು,ಜೂ.10(ಎಂಟಿವೈ)– ವಿದ್ಯಾರ್ಥಿಗಳು ಸಾಮಾಜಿಕ ಜಾಲತಾಣ, ರೀಲ್ಸ್ ವ್ಯಾಮೋಹ ಹಾಗೂ ಚಿತ್ರನಟರು, ಕ್ರಿಕೆಟ್ ಆಟಗಾರರನ್ನು ನೋಡುವುದಕ್ಕೆ ಮಾತ್ರ ತಮ್ಮ ಕನಸನ್ನು ಸೀಮಿತಗೊಳಿಸದೇ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಉತ್ತೀರ್ಣರಾಗುವುದಕ್ಕೆ ಪಣ ತೊಟ್ಟು ಸಾಧನೆ ಮಾಡುವ ಗುರಿ ಇಟ್ಟುಕೊಳ್ಳಬೇಕು ಎಂದು ಕರ್ನಾಟಕ ಗೃಹ ಮಂಡಳಿ ಆಯುಕ್ತ ಕೆ.ಎ.ದಯಾನಂದ ಸಲಹೆ ನೀಡಿದ್ದಾರೆ.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕಾವೇರಿ ಸಭಾಂಗಣದಲ್ಲಿ ಕರಾಮುವಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ವತಿಯಿಂದ ಆಯೋಜಿಸಿದ್ದ ಐಎಎಸ್, ಕೆಎಎಸ್ ಪರೀಕ್ಷಾ ತರಬೇತಿ ಶಿಬಿರದ ಸಮಾರೋಪ ಸಮಾರಂಭದಲ್ಲಿ ಅಧ್ಯಯನ ಪುಸ್ತಕ ಬಿಡುಗಡೆಗೊಳಿಸಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿಗಳು ಉನ್ನತ ಶಿಕ್ಷಣ, ಸ್ಪರ್ಧಾತ್ಮಕ ಪರೀಕ್ಷೆಗಳ ಬಗ್ಗೆ ಹೆಚ್ಚಿನ ಗಮನ ನೀಡದೆ ಚಿತ್ರನಟರು, ಕ್ರಿಕೆಟ್ ಆಟಗಾರರನ್ನು ನೋಡುವ, ಅವರೊಂದಿಗೆ ಫೋಟೋ ತೆಗೆಸಿಕೊಳ್ಳುವುದಕ್ಕೆ ಹೆಚ್ಚಿನ ಗಮನ ಕೇಂದ್ರೀಕರಿಸುತ್ತಿದ್ದಾರೆ. ಅಲ್ಲದೆ, ಮೊಬೈಲ್ ಬಳಕೆ, ಸಾಮಾಜಿಕ ಜಾಲತಾಣ, ರೀಲ್ಸ್ ಮಾಡುವುದರಲ್ಲಿಯೇ ಹೆಚ್ಚಿನ ಸಮಯ ವಿನಿಯೋಗಿಸುತ್ತಿದ್ದಾರೆ. ಇವೆಲ್ಲವನ್ನು ಬದಿಗೊತ್ತಿ, ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಆರಂಭದಿಂದಲೇ ಪೂರ್ವ ತಯಾರಿ ಮಾಡಿಕೊಂಡು, ಪರೀಕ್ಷೆಯಲ್ಲಿ ಪಾಸಾಗುವ ಗುರಿ ಇಟ್ಟುಕೊಳ್ಳಬೇಕು. ಆಗ ಮಾತ್ರ ಸಾಧನೆ ಮಾಡಲು ಸಾಧ್ಯ ಎಂದರು.

ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಬೇಕು. ನಾವಿರುವ ಸಂಕಷ್ಟದ ಪರಿಸ್ಥಿತಿಯಿಂದ ಬಹುಬೇಗ ಬಿಡುಗಡೆ ಹೊಂದಬೇಕು ಎಂಬ ಗುರಿ ಇಟ್ಟುಕೊಳ್ಳಬೇಕು. ನಿರಂತರ ಪರಿಶ್ರಮ ಇಲ್ಲದೇ ಹೋದರೆ ಅಂತಹ ಕನಸುಗಳಿಗೆ ಅರ್ಥವಿರುವುದಿಲ್ಲ ಆದ್ದರಿಂದ ವಿದ್ಯಾರ್ಥಿಗಳು ಶ್ರದ್ಧೆಯಿಂದ ಓದಬೇಕು. ಓದಿನ ವಿಚಾರದಲ್ಲಿ ಸೋಮಾರಿತನ ಬಿಡಬೇಕು. ಒಂದು ನಿಮಿಷವನ್ನೂ ವ್ಯರ್ಥ ಮಾಡದೇ ಗುರಿ ಮುಟ್ಟುವವರೆಗೂ ನಿರಂತರವಾಗಿ ಅಧ್ಯಯನದಲ್ಲಿ ತೊಡಗಿಸಿಕೊಳ್ಳಬೇಕು ಎಂದು ತಿಳಿಸಿದರು.

ಕೆಲವರು ಬಡತನ, ಇಂಗ್ಲೀಷ್ ಬರುವುದಿಲ್ಲ ಎನ್ನುವುದೂ ಸೇರಿದಂತೆ ಕುಂಟು ನೆಪ ಹೇಳಿ ಓದುವುದನ್ನು ಮುಂದೂಡುತ್ತಾರೆ. ನೆಪಗಳನ್ನು ಹೇಳಿಕೊಂಡು ಕಾಲ ಕಳೆದರೆ ಜೀವನ ಪೂರ್ತಿ ಕಷ್ಟದಲ್ಲಿಯೇ ಬದುಕಬೇಕಾಗುತ್ತದೆ. ಆದ್ದರಿಂದ ವಿದ್ಯಾರ್ಥಿಗಳು ಸರ್ಕಾರ ನೀಡುವ ಸೌಲಭ್ಯ ಬಳಸಿಕೊಂಡು, ಸಾರ್ವಜನಿಕ ಗ್ರಂಥಾಲಯಗಳನ್ನು ಸದುಪಯೋಗ ಮಾಡಿಕೊಂಡು ಓದಬೇಕು. ಸಮಸ್ಯೆಗಳನ್ನೇ ಸಾಧನೆಯ ಮೆಟ್ಟಿಲು ಮಾಡಿಕೊಳ್ಳಬೇಕು ಎಂದರು.

ಮೊಬೈಲ್ ಲೋಕ ವಿದ್ಯಾರ್ಥಿಗಳು ಮತ್ತು ಯುವಜನರನ್ನು ದಾರಿ ತಪ್ಪಿಸುತ್ತಿದೆ. ಸಾಮಾಜಿಕ ಜಾಲತಾಣಗಳಲ್ಲಿ ರೀಲ್ಸ್ ಮಾಡುವುದರಿಂದ ಹಣ ಸಂಪಾದಿಸಬಹುದು. ಜೀವನದಲ್ಲಿ ಮುಂದೆ ಬರಬಹುದು ಎಂಬ ಭ್ರಮೆಯಲ್ಲಿ ಇಂದಿನ ಯುವಪೀಳಿಗೆ ಸಿಲುಕಿದ್ದಾರೆ. ರೀಲ್ಸ್‌ಗಳಿಗಾಗಿ ತಮ್ಮ ಶ್ರಮ ಮತ್ತು ಬುದ್ಧಿಶಕ್ತಿಯನ್ನು ವ್ಯರ್ಥಮಾಡುತ್ತಿದ್ದಾರೆ. ಇಲ್ಲಸಲ್ಲದ ವಿಚಾರಗಳನ್ನು ತಲೆಯಲ್ಲಿ ತುಂಬಿಕೊಂಡು ಭವಿಷ್ಯವನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ. ವಿದ್ಯಾರ್ಥಿಗಳು ಮೊಬೈಲ್, ಸಾಮಾಜಿಕ ಜಾಲತಾಣ, ರೀಲ್ಸ್, ಅನಗತ್ಯ ಸುತ್ತಾಟ–ಅಲೆದಾಟಗಳಿಂದ ಹೊರಬರಬೇಕು. ಕೆಟ್ಟ ಅಭ್ಯಾಸಗಳನ್ನು ಬಿಟ್ಟು ಸ್ಪರ್ಧಾತ್ಮಕ ಪರೀಕ್ಷೆಗಳ ಕಡೆಗೆ ತಮ್ಮ ಗಮನವನ್ನು ಕೇಂದ್ರೀಕರಿಸಬೇಕು. ಯಾರಲ್ಲಿ ಉತ್ತಮ ನಡತೆ, ಆರೋಗ್ಯ, ಶಿಕ್ಷಣ, ಗುರಿಯ ಬಗ್ಗೆ ಸ್ಪಷ್ಟತೆ ಮತ್ತು ಜ್ಞಾನ ಇರುತ್ತದೆಯೋ ಅವರು ಜೀವನದಲ್ಲಿ ಎಂದಿಗೂ ಸೋಲುವುದಿಲ್ಲ ಎಂದು ತಿಳಿಸಿದರು.

ಕೊಡಗು ಜಿಲ್ಲೆಯ ಅಪರ ಜಿಲ್ಲಾಧಿಕಾರಿ ಆರ್.ಐಶ್ವರ್ಯ ಮಾತನಾಡಿ, ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿ ಉನ್ನತ ಹುದ್ದೆಗಳನ್ನು ಪಡೆದುಕೊಂಡರೆ ತಮ್ಮ ಕಷ್ಟಗಳ ಜೊತೆಗೆ ಸಮಾಜದ ಸಮಸ್ಯೆಗಳನ್ನೂ ಪರಿಹರಿಸಬಹುದು. ನಮ್ಮ ಸ್ಪಷ್ಟವಾದ ಗುರಿಯಿಂದ ಸಮಾಜದ ಕಟ್ಟಕಡೆಯ ವ್ಯಕ್ತಿಯ ಬದುಕನ್ನೂ ಸುಧಾರಿಸಬಹುದು. ಈಗಿನ ಯುವ ಪೀಳಿಗೆ ತುಂಬಾ ಬುದ್ಧಿವಂತರಾಗಿದ್ದಾರೆ. ಆದರೆ ಅವರಲ್ಲಿ ತಾಳ್ಮೆ ಮತ್ತು ಶ್ರಮ ಇರುವುದಿಲ್ಲ. ಒಳಿತು ಕೆಡುಕಿನ ಬಗ್ಗೆ ತಿಳಿದಿರುವುದಿಲ್ಲ. ಹಸಿವಿನ ಆಳದ ಅರಿವಿರುವುದಿಲ್ಲ. ಆದ್ದರಿಂದಲೇ ಅವರು ಪುಷ್ಪಾ ಚಿತ್ರದ ನಾಯಕ ನಟನನ್ನು ನೋಡಲು ಹೋಗಿ ಕಾಲ್ತುಳಿತಕ್ಕೆ ಸಿಲುಕಿದರು. ಹಾಗೆಯೇ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿಯಲ್ಲಿ ಕ್ರಿಕೆಟ್ ಆಟಗಾರರನ್ನು ನೋಡಲು ಹೋಗಿ ಕಾಲ್ತುಳಿತಕ್ಕೆ ಬಲಿಯಾದರು. ಯುವ ಪೀಳಿಗೆಯಲ್ಲಿ ಹಸಿವು–ಅಕ್ಷರದ ಅರಿವಿದ್ದರೆ ತಾವೇ ನಿಜವಾದ ಪ್ರಖ್ಯಾತ ವ್ಯಕ್ತಿಗಳಾಗಿ ಬೆಳೆಯುತ್ತಾರೆ ಎಂದರು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ, ಪರೀಕ್ಷಾಂಗ ಕುಲಸಚಿವ ಡಾ.ಆನಂದ್‌ಕುಮಾರ್, ಸಂಯೋಜನಾಧಿಕಾರಿ ಜೈನಹಳ್ಳಿ ಸತ್ಯನಾರಾಯಣಗೌಡ ಮತ್ತಿತರರು ಉಪಸ್ಥಿತರಿದ್ದರು.

ಮೂಗೂರು ಕರ್ನಾಟಕ ಬ್ರಾಹ್ಮಣ ಸಂಘದಿಂದ ಸಮುದಾಯದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ

ಮೈಸೂರು, ಜೂ.10–ಮೂಗೂರು ಕರ್ನಾಟಕ ಬ್ರಾಹ್ಮಣ ಸಂಘದಿಂದ ಮುಂದಿನ ವಿದ್ಯಾಭ್ಯಾಸಕ್ಕೆ ಅನುಕೂಲವಾಗುವ ನಿಟ್ಟಿನಲ್ಲಿ ಆರ್ಥಿಕವಾಗಿ ಹಿಂದುಳಿದಿರುವ ಸಮುದಾಯದ ವಿದ್ಯಾರ್ಥಿಗಳಿಗೆ 2025ನೇ ಸಾಲಿನ ಶಾಲಾ–ಕಾಲೇಜುಗಳ ದಾಖಲಾತಿಗಾಗಿ ಪ್ರೋತ್ಸಾಹ ಧನವನ್ನು ನೀಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಅವಶ್ಯಕತೆ ಇರುವ ಮೂಗೂರು ಕರ್ನಾಟಕ ಬ್ರಾಹ್ಮಣ ಸಮುದಾಯದ ವಿದ್ಯಾರ್ಥಿಗಳು ಶ್ರೀ ಶಾರದಾನಿಕೇತನ, ಜೆಎಲ್‌ಬಿ ರಸ್ತೆ, ಚಾಮುಂಡಿಪುರಂ, ಮೈಸೂರು ಇಲ್ಲಿರುವ ಸಂಘದ ಕಚೇರಿಯನ್ನು ಕೆಲಸ ವೇಳೆಯಲ್ಲಿ (ಬೆಳಗ್ಗೆ 11.00 ಗಂಟೆಯಿಂದ 12.00ರವರೆಗೆ ಮತ್ತು ಸಂಜೆ 6.00 ರಿಂದ 7 ಗಂಟೆಯವರೆಗೆ) ಸಂಪರ್ಕಿಸಿ. ನಿಗದಿತ ಅರ್ಜಿ ಫಾರಂ ಅನ್ನು ಪಡೆದು, ಜೂನ್ 23ರ ಒಳಗೆ ಸಂಘದ ಕಾರ್ಯದರ್ಶಿಯವರಿಗೆ ಸಲ್ಲಿಸಲು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಹೆಚ್ಚಿನ ವಿವರಗಳಿಗೆ ಮಂಜುನಾಥ್ ಕೆ.ಆರ್., ಪ್ರಧಾನ ಕಾರ್ಯದರ್ಶಿ–9945657522 ಇವರನ್ನು ಸಂಪರ್ಕಿಸಬಹುದು.

ಬೆಂಗಳೂರು ನಗರ ಪೊಲೀಸ್ ಆಯುಕ್ತರಾಗಿದ್ದ ದಯಾನಂದ ಅಮಾನತು ಖಂಡಿಸಿ ಪ್ರತಿಭಟನೆ



ಕನ್ನಡಾಂಬೆ ರಕ್ಷಣಾ ವೇದಿಕೆಯಿಂದ ಮೈಸೂರಿನ ಹಳೆ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಲಾಯಿತು.

ಮೈಸೂರು, ಜೂ.10(ಜಿಎ)–ಆರ್‌ಸಿಬಿ ವಿಜಯೋತ್ಸವ ಆಚರಣೆ ಸಂದರ್ಭ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಂಗಳೂರು ನಗರ ಪೊಲೀಸ್ ಆಯುಕ್ತರಾಗಿದ್ದ ದಯಾನಂದ್ ಅವರನ್ನು ಅಮಾನತ್ತು ಮಾಡಿರುವುದನ್ನು ಖಂಡಿಸಿ ಕನ್ನಡಾಂಬೆ ರಕ್ಷಣಾ ವೇದಿಕೆಯಿಂದ ಮೈಸೂರಿನಲ್ಲಿ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸಲಾಯಿತು.

ಮೈಸೂರಿನ ಹಳೆ ಜಿಲ್ಲಾಧಿಕಾರಿ ಕಚೇರಿ ಎದುರು ಜಮಾಯಿಸಿದ ಪ್ರತಿಭಟನಾಕಾರರು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತ್ತು ಗೃಹ ಸಚಿವ ಡಾ. ಜಿ.ಪರಮೇಶ್ವರ್ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಸರ್ಕಾರದ ನಿರ್ಲಕ್ಷ್ಯದಿಂದ ಕಾಲ್ತುಳಿತ ಉಂಟಾಗಿ 11 ಜನರ ಸಾವಿಗೆ ಕಾರಣವಾಗಿದೆ. ಈ ಪ್ರಕರಣದಲ್ಲಿ ಯಾವುದೇ ತಪ್ಪು ಮಾಡದ ನಿಷ್ಠಾವಂತ ದಕ್ಷ ಪೊಲೀಸ್ ಅಧಿಕಾರಿಗಳನ್ನು ಅಮಾನತ್ತು ಮಾಡಲಾಗಿದೆ. ಸರ್ಕಾರ ಯಾವುದೇ ಮುಂಜಾಗ್ರತಾ ಕ್ರಮ ಕೈಗೊಳ್ಳದೆ ದಿಢೀರನೆ ಈ ಕಾರ್ಯಕ್ರಮ ಆಯೋಜನೆ ಮಾಡಿದ್ದರಿಂದ ಕಾಲ್ತುಳಿತ ಉಂಟಾಗಿದೆ. ಪೊಲೀಸರು ಈ ಕಾರ್ಯಕ್ರಮಕ್ಕೆ ಅನುಮತಿ ನಿರಾಕರಿಸಿದ್ದು, ಸರ್ಕಾರದ ಒತ್ತಡದಿಂದ ಕಾರ್ಯಕ್ರಮ ನಡೆದಿದೆ ಎಂದು ಪ್ರತಿಭಟನಾಕಾರರು ಕಿಡಿಕಾರಿದರು.

18 ವರ್ಷದ ಬಳಿಕ ಆರ್‌ಸಿಬಿ ತಂಡ ಗೆಲುವು ಸಾಧಿಸಿದ ಸಂಭ್ರಮ ಇಡೀ ರಾಜ್ಯದಲ್ಲಿತ್ತು. ಈ ಸಂಭ್ರಮಾಚರಣೆ ಸ್ವಲ್ಪ ತಡವಾಗಿ ಆಚರಿಸಬೇಕಿತ್ತು. ಸರ್ಕಾರ ಆತುರದಿಂದ ಸಂಭ್ರಮಾಚರಣೆ ಮಾಡಿದ್ದರಿಂದ ಕಾಲ್ತುಳಿತ ಉಂಟಾಗಿ 11 ಜನರ ಸಾವಿಗೆ ಕಾರಣವಾಗಿದೆ. ಘಟನೆಗೆ ಪೊಲೀಸ್ ಅಧಿಕಾರಿಗಳನ್ನು ಗುರಿಯಾಗಿಸಿ ಅಮಾಯಕ ಪೊಲೀಸರನ್ನು ಅಮಾನತ್ತು ಮಾಡುವ ಮೂಲಕ ಸರ್ಕಾರ ಗುಬ್ಬಿ ಮೇಲೆ ಬ್ರಹ್ಮಾಸ್ತ್ರ ಪ್ರಯೋಗಿಸಿದೆ. ಕೂಡಲೇ ಅಮಾನತ್ತು ಹಿಂಪಡೆಯಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ರಾಜ್ಯಾಧ್ಯಕ್ಷ ಬಿ.ಬಿ. ರಾಜಶೇಖರ್, ಜಿಲ್ಲಾಧ್ಯಕ್ಷೆ ಮಂಜುಳಾ, ತಾಲೂಕು ಅಧ್ಯಕ್ಷ ಸಂತೋಷ್, ಶ್ರೀನಿವಾಸ್, ಪ್ರತಾಪ್ ಕರ್ತಾಳು, ಅನುರಾಜ್, ಸಿಂಧುವಳ್ಳಿ ಶಿವಕುಮಾರ್, ಮಹದೇವಸ್ವಾಮಿ ಮತ್ತಿತರು ಪಾಲ್ಗೊಂಡಿದರು.

ಭಾರತೀಯರನ್ನು ಸೆಳೆಯಲು ನಟಿ ಕತ್ರಿನಾ ಕೈಫ್‌ನ ಪ್ರವಾಸೋದ್ಯಮ ರಾಯಭಾರಿಯಾಗಿ ಮಾಡಿದ ಮಾಲ್ಡೀವ್ಸ್



ಮಾಲ್ಡೀವ್ಸ್, ಜೂ.10–ಕಳೆದ ವರ್ಷ ಮಾಲ್ಡೀವ್ಸ್‌ನ ಮೂವರು ಯುವ ಸಚಿವರು ಭಾರತದ ಪ್ರಧಾನಿ ನರೇಂದ್ರ ಮೋದಿ ಅವರ ವಿರುದ್ಧ ನಕಾರಾತ್ಮಕ ಹೇಳಿಕೆಗಳನ್ನು ನೀಡಿದ ನಂತರ ಭಾರತ–ಮಾಲ್ಡೀವ್ಸ್ ಸಂಬಂಧ ಹದಗೆಟ್ಟಿತ್ತು. ಮಾಲ್ಡೀವ್ಸ್ ಬಹಿಷ್ಕರಿಸಿ ಮತ್ತು 'ಲಕ್ಷದ್ವೀಪ ಚಲೋ' ಎಂಬ ಘೋಷಣೆಗಳು ಸಾಮಾಜಿಕ ಮಾಧ್ಯಮದಲ್ಲಿ ಕೇಳಿಬರಲು ಪ್ರಾರಂಭಿಸಿತ್ತು. ಆದರೆ ಈ ಮಧ್ಯೆ, ಹೊಸ ಸುದ್ದಿ ಹೊರಬಿದ್ದಿದೆ.

ಮಾಲ್ಡೀವ್ಸ್ ಮಾರ್ಕೆಟಿಂಗ್ ಮತ್ತು ಪಬ್ಲಿಕ್ ರಿಲೇಶನ್ಸ್ ಕಾರ್ಪೊರೇಷನ್ ಬಾಲಿವುಡ್ ನಟಿ ಮತ್ತು ಉದ್ಯಮಿ ಕತ್ರಿನಾ ಕೈಫ್ ಅವರನ್ನು 'ಸನ್ನಿ ಸೈಡ್ ಆಫ್ ಲೈಫ್'ನ ಹೊಸ ಜಾಗತಿಕ ಬ್ರಾಂಡ್ ರಾಯಭಾರಿಯಾಗಿ ನೇಮಿಸಿದೆ. ಈ ಪಾಲುದಾರಿಕೆಯನ್ನು ಮಾಲ್ಡೀವ್ಸ್‌ಗೆ ಭೇಟಿ ನೀಡಿ ಎಂಬ ವಿಶೇಷ ಬೇಸಿಗೆ ಪ್ರಚಾರ ಅಭಿಯಾನದ ಅಡಿಯಲ್ಲಿ ಮಾಡಲಾಗಿದೆ.

'ಸನ್ನಿ ಸೈಡ್ ಆಫ್ ಲೈಫ್'ನ ಮುಖವಾಗಿರುವುದು ನನಗೆ ಗೌರವ. ಈ ಸಹಯೋಗದ ಮೂಲಕ ಪ್ರಪಂಚದಾದ್ಯಂತ ಜನರಿಗೆ ಮಾಲ್ಡೀವ್ಸ್‌ನ ಅನನ್ಯತೆ ಮತ್ತು ಸಾಟಿಯಿಲ್ಲದ ಪ್ರಯಾಣದ ಅನುಭವಗಳನ್ನು ಪರಿಚಯಿಸಲು ನಾನು ಉತ್ಸುಕಳಾಗಿದ್ದೇನೆ ಎಂದು ಕತ್ರಿನಾ ಹೇಳಿದ್ದಾರೆ.

ಆಸ್ಟ್ರಿಯನ್ ಶಾಲೆಯಲ್ಲಿ ಗುಂಡಿನ ದಾಳಿ: 8 ಮಂದಿ ಸಾವು


ವಿಯೆನ್ನಾ: ಮಂಗಳವಾರ ಆಸ್ಟ್ರಿಯಾದ ಗ್ರಾಜ್‌ನಲ್ಲಿರುವ ಶಾಲೆಯಲ್ಲಿ ಗುಂಡಿನ ದಾಳಿ ನಡೆದಿದ್ದು 8 ಜನರು ಸಾವನ್ನಪ್ಪಿದ್ದಾರೆ. ದಾಳಿಯ ಸಮಯದಲ್ಲಿ ಗುಂಡು ಹಾರಿಸಿದ ವ್ಯಕ್ತಿಯೂ ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ನಗರದ ಮೇಯರ್ ಎಲ್ಕೆ ಕಹ್ರ್ ಹೇಳಿದ್ದಾರೆ.

ಬಿಓಆರ್‌ಜಿ ಡ್ರೇಯರ್‌ಸ್ಚುಟ್ಜೆಂಗಾಸ್ಸೆ ಪ್ರೌಢಶಾಲೆಯಲ್ಲಿ ಸ್ಥಳೀಯ ಸಮಯ ಬೆಳಿಗ್ಗೆ 10 ಗಂಟೆಗೆ ಕರೆ ಬಂದ ನಂತರ ಪ್ರೌಢಶಾಲೆಗೆ ಕಳುಹಿಸಲಾದ ವಿಶೇಷ ಪಡೆಗಳು ಏನಾಯಿತು ಎಂಬುದರ ಅವಲೋಕನ ನಡೆಸಲು ಕೆಲಸ ಮಾಡುತ್ತಿವೆ ಎಂದು ಪೊಲೀಸ್ ವಕ್ತಾರ ಸಬ್ರಿ ಯೋರ್ಗುನ್ ಹೇಳಿದ್ದಾರೆ.

ಬೆಳಿಗ್ಗೆ 11:30 ಕ್ಕೆ (ಸ್ಥಳೀಯ ಸಮಯ), ಗ್ರಾಜ್ ಪೊಲೀಸರು ಸಾಮಾಜಿಕ ಮಾಧ್ಯಮ ವೇದಿಕೆ ಎಕ್ಸ್‌ನಲ್ಲಿ ಈ ಬಗ್ಗೆ ಮಾಹಿತಿ ನೀಡಿದ್ದು, ಶಾಲೆಯನ್ನು ಸ್ಥಳಾಂತರಿಸಲಾಗಿದೆ ಮತ್ತು ವಿದ್ಯಾರ್ಥಿಗಳು ಮತ್ತು ಸಿಬ್ಬಂದಿ ಇಬ್ಬರನ್ನೂ ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಲಾಗಿದೆ ಎಂದು ಬರೆದಿದ್ದಾರೆ. ಸ್ಥಳದಲ್ಲಿ ಯಾವುದೇ ಅಪಾಯವಿಲ್ಲ ಎಂದು ಅವರು ದೃಢಪಡಿಸಿದರು, ಪ್ರದೇಶವನ್ನು 'ಸುರಕ್ಷಿತ' ಎಂದು ಘೋಷಿಸಲಾಗಿದೆ. 300,000 ಕ್ಕೂ ಹೆಚ್ಚು ಜನರಿರುವ ಗ್ರಾಜ್, ದೇಶದ ರಾಜಧಾನಿಯಾದ ವಿಯೆನ್ನಾದಿಂದ ಸುಮಾರು 200 ಕಿಲೋಮೀಟರ್ ನೈರುತ್ಯದಲ್ಲಿದೆ. ಇದು ಆಸ್ಟ್ರಿಯಾದ ಎರಡನೇ ಅತಿದೊಡ್ಡ ನಗರವಾಗಿದೆ.

ಕೇರಳ ಕರಾವಳಿಯಲ್ಲಿ ಸಿಂಗಾಪುರದ ಸರಕು ಹಡಗಿಗೆ ಬೆಂಕಿ

ನಾಲ್ವರು ಸಿಬ್ಬಂದಿ ನಾಪತ್ತೆ; 18 ಮಂದಿ ರಕ್ಷಣೆ



ತಿರುವನಂತಪುರಂ, ಜೂ.10– ಶ್ರೀಲಂಕಾದ ಕೊಲೊಂಬೊದಿಂದ ಮುಂಬೈಗೆ ಸರಕು ಸಾಗಿಸುತ್ತಿದ್ದ ಸಿಂಗಾಪುರದ ಬೃಹತ್ ಹಡಗಿನಲ್ಲಿ ಬೆಂಕಿ ಕಾಣಿಸಿಕೊಂಡ ಘಟನೆ ಕೇರಳ ಕರಾವಳಿ ಪ್ರದೇಶದಲ್ಲಿ ನಡೆದಿದೆ.

ಕೊಲಂಬೊದಿಂದ ಮುಂಬೈಗೆ ತೆರಳುತ್ತಿದ್ದ ಹಡಗಿನಲ್ಲಿ ಜೂನ್ 9 ರಂದು ಬೆಂಕಿ ಕಾಣಿಸಿಕೊಂಡಿತು. ಭಾರತೀಯ ನೌಕಾಪಡೆ ತಕ್ಷಣ ತುರ್ತು ಕರೆಗೆ ಸ್ಪಂದಿಸಿ, INS ಸೂರತ್ ಮೂಲಕ 18 ಸಿಬ್ಬಂದಿಯನ್ನು ರಕ್ಷಿಸಿತು. ರಕ್ಷಿಸಲಾದವರಲ್ಲಿ ಐದು ಗಾಯಗೊಂಡಿದ್ದು, ಇಬ್ಬರು ಗಂಭೀರ ಸ್ಥಿತಿಯಲ್ಲಿದ್ದಾರೆ. ರಕ್ಷಿಸಿದ ಸಿಬ್ಬಂದಿಯೊಂದಿಗೆ INS ಸೂರತ್ ಜೂನ್ 9 ರಂದು ರಾತ್ರಿ 10:45ಕ್ಕೆ ಮಂಗಳೂರಿನ NMPAಗೆ ಆಗಮಿಸಿತು.

ಹಡಗಿನಲ್ಲಿದ್ದ 22 ಸಿಬ್ಬಂದಿಗಳ ಪೈಕಿ 18 ಸಿಬ್ಬಂದಿಯನ್ನು ಭಾರತೀಯ ಸೇನಾ ಪಡೆ ರಕ್ಷಿಸಿದೆ. ಆದರೆ ನಾಲ್ವರು ಸಿಬ್ಬಂದಿಗಳು ನಾಪತ್ತೆಯಾಗಿದ್ದಾರೆ. ಇತ್ತ ನೌಕಾಪಡೆ ನಾಪತ್ತೆಯಾಗಿರುವ ಸಿಬ್ಬಂದಿಗಳ ರಕ್ಷಣೆಗೆ ಕಾರ್ಯಾಚರಣೆ ಮುಂದುವರಿಸಿದೆ.


ಸಿಂಗಾಪುರದ ಒಗಿವಾನ್ ಹೈ 503 ಹಡಗು ಶ್ರೀಲಂಕಾದ ಕೊಲೊಂಬೊ ದಿಂದ ಕೇರಳ ಕರಾವಳಿ ಪ್ರದೇಶದ ಮೂಲಕ ಮುಂಬೈಗೆ ಸಾಗುತ್ತಿದ್ದ ವೇಳೆ ಅಗ್ನಿ ದುರಂತ ಸಂಭವಿಸಿದೆ. ಕೇರಳದ ಬೇಪೋರ್ ಕಡಲ ತೀರದಿಂದ 78 ನಾಟಿಕಲ್ ಮೈಲ್ಸ್ ದೂರದ ಆಳ ಸಮುದ್ರದಲ್ಲಿ ಘಟನೆ ಸಂಭವಿಸಿದೆ.

ಹಡಗಿನಿಂದ ಸೋರಿಕೆಯಾದ ತೈಲ ಕೇರಳ ಕರಾವಳಿಗೆ ಸಮಾನಾಂತರವಾಗಿ ಹರಿಯುವ ಸಾಧ್ಯತೆಯಿದೆ. ಕಂಟೇನರ್‌ಗಳು ದಕ್ಷಿಣ–ಆಗ್ನೇಯ ದಿಕ್ಕಿನಲ್ಲಿ ಚಲಿಸುವ ಸಾಧ್ಯತೆಯಿದೆ ಎಂದು ಎಚ್ಚರಿಕೆ ನೀಡಲಾಗಿದೆ. ಹಡಗಿನಲ್ಲಿ ಬೆಂಕಿ ಹರಡುತ್ತಿದೆ. ಹಡಗು ಸಂಪೂರ್ಣವಾಗಿ ಬೆಂಕಿಗಾಹುತಿಯಾಗಿದೆ ಎಂದು ಕೋಸ್ಟ್ ಗಾರ್ಡ್ ತಿಳಿಸಿದೆ.

ಕೋಸ್ಟ್ ಗಾರ್ಡ್ ಹಡಗುಗಳು ಬೆಂಕಿ ಹೊತ್ತಿಕೊಂಡ ಹಡಗನ್ನು ಸಮೀಪಿಸಲು ಸಾಧ್ಯವಾಗುತ್ತಿಲ್ಲ. ಬೆಂಕಿ ಹೊತ್ತಿಕೊಂಡ ಹಡಗನ್ನು ಟಗ್ ಬಳಸಿ ಹೊರ ಸಮುದ್ರಕ್ಕೆ ಎಳೆಯಲಾಗುವುದು. ಹಡಗು ತೀರಕ್ಕೆ ಬರುವುದನ್ನು ತಡೆಯಲು ಟಗ್ ಬಳಸಿ ನಿಯಂತ್ರಿಸಲಾಗುತ್ತಿದೆ. ರಾತ್ರಿಯೂ ರಕ್ಷಣಾ ಕಾರ್ಯ ಮುಂದುವರಿಯಲಿದೆ ಎಂದು ಕೋಸ್ಟ್ ಗಾರ್ಡ್ ತಿಳಿಸಿದೆ.

ಭವಿಷ್ಯದಲ್ಲಿ ಶಿಕ್ಷಣ ಕ್ಷೇತ್ರಕ್ಕೂ ಕೃತಕ ಬುದ್ಧಿಮತ್ತೆ ಪ್ರವೇಶ ಸಾಧ್ಯತೆ

ಮಾಜಿ ಸಚಿವ ಪಿಜಿಆರ್ ಸಿಂಧ್ಯಾ ಭವಿಷ್ಯ



ಮೈಸೂರಿನ ಜಯಚಾಮರಾಜೇಂದ್ರ ಸ್ಕೌಟ್ಸ್ ಮತ್ತು ಗೈಡ್ಸ್ ಶಾಲೆಯ ಸಭಾಂಗಣದಲ್ಲಿ ಮಂಗಳವಾರ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗಾಗಿ ಆಯೋಜಿಸಿದ್ದ ಮಾಹಿತಿ ಕಾರ್ಯಾಗಾರದಲ್ಲಿ ಮಾಜಿ ಸಚಿವ, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಕರ್ನಾಟಕ ಘಟಕದ ಮುಖ್ಯ ಆಯುಕ್ತ ಪಿ.ಜಿ.ಆರ್.ಸಿಂಧ್ಯಾ ಮಾತನಾಡಿದರು.

ಮೈಸೂರು, ಜೂ.10(ಎಂಟಿವೈ)– ಪ್ರಸ್ತುತ ಸಂದರ್ಭದಲ್ಲಿ ಕೃತಕ ಬುದ್ಧಿಮತ್ತೆ (ಎಐ) ಯುಗ ಪ್ರಬಲವಾಗಿದ್ದು ಮುಂದಿನ ನಾಲ್ಕೈದು ವರ್ಷದಲ್ಲಿ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಕಲಿಸುವ ಪದ್ಧತಿ ಬದಲಾಗಬಹುದು ಎಂದು ಮಾಜಿ ಸಚಿವ, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಕರ್ನಾಟಕ ಘಟಕದ ಮುಖ್ಯ ಆಯುಕ್ತ ಪಿ.ಜಿ.ಆರ್. ಸಿಂಧ್ಯಾ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ಜಯಚಾಮರಾಜೇಂದ್ರ ಸ್ಕೌಟ್ಸ್ ಮತ್ತು ಗೈಡ್ಸ್ ಶಾಲೆಯ ಸಭಾಂಗಣದಲ್ಲಿ ಮಂಗಳವಾರ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗಾಗಿ ಆಯೋಜಿಸಿದ್ದ ಮಾಹಿತಿ ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ಎಐ ಎಲ್ಲಾ ಕ್ಷೇತ್ರಗಳಿಗೂ ಪಾದಾರ್ಪಣೆ ಮಾಡಿದ್ದು, ಶಿಕ್ಷಣ ಕ್ಷೇತ್ರದಲ್ಲೂ ಕೆಲವೆಡೆ ಎಐ ಬಳಕೆ ಮಾಡುವ ಪದ್ಧತಿ ಆರಂಭವಾಗಿದೆ. ಈ ಹಿನ್ನೆಲೆಯಲ್ಲಿ ಮುಂದಿನ ನಾಲ್ಕೈದು ವರ್ಷದಲ್ಲಿ ಎಐ ಶಿಕ್ಷಣ ಕ್ಷೇತ್ರದಲ್ಲಿ ಪ್ರಭಾವ ಬೀರುವ ಸಾಧ್ಯತೆ ಇರುವುದರಿಂದ ಬೋಧನ ಪದ್ಧತಿ ಬದಲಾಗಬಹುದು. ಆ ಕಾರಣದಿಂದ ಈಗಿನಿಂದಲೇ ಶಿಕ್ಷಕರು ಸಿದ್ಧತೆ ಮಾಡಿಕೊಳ್ಳಬೇಕಾಗಿದೆ ಎಂದರು.

ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆ ನಡೆಸುವ ಕಾರ್ಯಕ್ರಮಗಳು ಮಕ್ಕಳ ಕಲಿಕೆಗೆ ಪೂರಕವಾಗಿವೆ. ಸ್ಕೌಟ್ಸ್ ಮತ್ತು ಗೈಡ್ಸ್ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವ ಮಕ್ಕಳು ಹೆಚ್ಚು ಅಂಕ ಪಡೆಯುವುದಿಲ್ಲ ಎಂಬ ಆರೋಪ ಇದೆ. ಆದರೆ ಈ ವರ್ಷ ನಡೆದ ರಾಜ್ಯ ಪುರಸ್ಕಾರ ಪರೀಕ್ಷೆಯಲ್ಲಿ 2 ಸಾವಿರಕ್ಕೂ ಅಧಿಕ ವಿದ್ಯಾರ್ಥಿಗಳು ಶೇ.93ರಷ್ಟು ಅಂಕಗಳೊಂದಿಗೆ ಸಾಧನೆ ಮಾಡಿದ್ದಾರೆ. ಕೇಂದ್ರ ನೀತಿ ಆಯೋಗವು ಇತ್ತೀಚೆಗೆ ದೇಶದ ಎಲ್ಲ ರಾಜ್ಯಗಳಲ್ಲಿ ಸ್ಕೌಟ್ಸ್ ಮತ್ತು ಗೈಡ್ಸ್ ಶಿಕ್ಷಣ ಕಡ್ಡಾಯ ಮಾಡಿದೆ. ಕರ್ನಾಟಕದಲ್ಲಿ ಕೆ.ಸಿ.ರೆಡ್ಡಿ ಮುಖ್ಯಮಂತ್ರಿಯಾಗಿದ್ದ ಕಾಲದಿಂದಲೇ ಈ ಯೋಜನೆ ಜಾರಿಯಲ್ಲಿದೆ. ಆದರೆ ಅದು ಪರಿಣಾಮಕಾರಿಯಾಗಿ ಕಾರ್ಯಗತ ಆಗಲು ಶಿಕ್ಷಕರು ಶ್ರಮಿಸಬೇಕು ಎಂದು ಸಲಹೆ ನೀಡಿದರು.

ಪ್ರತಿ ಶಾಲೆಯಲ್ಲೂ ಸ್ಕೌಟ್ಸ್ ಮತ್ತು ಗೈಡ್ಸ್ ಶಿಕ್ಷಣ ಮತ್ತು ತರಬೇತಿ ಕಡ್ಡಾಯವಾಗಿ ನೀಡಬೇಕು. ಸ್ಕೌಟ್ಸ್ ಮತ್ತು ಗೈಡ್ಸ್ ಚಟುವಟಿಕೆಗಳನ್ನು ಹೇಳಿ ಕೊಡಲು ಶಿಕ್ಷಕರಿಗೆ ತರಬೇತಿ ನೀಡಲಾಗುತ್ತಿದೆ. ಸಂಸ್ಥೆ ವತಿಯಿಂದ ನಡೆಯುವ ವಿವಿಧ ಕ್ಯಾಂಪ್‌ಗಳಲ್ಲಿ ಶಿಕ್ಷಕರು, ವಿದ್ಯಾರ್ಥಿಗಳು ಪಾಲ್ಗೊಳ್ಳಬೇಕು. ಎಲ್ಲಾ ಶಾಲೆಗಳಲ್ಲೂ ಸ್ಕೌಟ್ಸ್ ಮತ್ತು ಗೈಡ್ಸ್ ಘಟಕ ತೆರೆಯಬೇಕು. ಕರ್ನಾಟಕದಲ್ಲಿ ಮೈಸೂರು ಅರಸರ ಕಾಲದಿಂದಲೂ ಶಿಕ್ಷಣ ನೀಡುತ್ತಿರುವುದರಿಂದ ನಮ್ಮಲ್ಲಿ ಶಿಕ್ಷಣದ ಗುಣಮಟ್ಟ ಉತ್ತಮವಾಗಿದೆ. ನಾಸಾದಂತಹ ಪ್ರತಿಷ್ಠಿತ ಸಂಸ್ಥೆಗಳಲ್ಲೂ ಕನ್ನಡಿಗರು ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ. ಮಠಗಳು, ದಾಸೋಹ ಪದ್ಧತಿಯಿಂದ ಹೆಚ್ಚು ಮಂದಿಗೆ ಶಿಕ್ಷಣ ಸಾಧ್ಯವಾಗಿದೆ. ಕರಾವಳಿ ಭಾಗದ ಜಿಲ್ಲೆಗಳು ಈ ವಿಚಾರದಲ್ಲಿ ಮುಂಚೂಣಿಯಲ್ಲಿವೆ ಎಂದು ಶ್ಲಾಘಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸ್ಕೌಟ್ಸ್ ಸಂಸ್ಥೆಯ ಜಿಲ್ಲಾ ಮುಖ್ಯ ಆಯುಕ್ತ ಪಿ. ವಿಶ್ವನಾಥ್ ವಹಿಸಿದ್ದರು. ಡಿಡಿಪಿಐ ಎಸ್.ಟಿ. ಜವರೇಗೌಡ, ಕೆ.ಬಿ. ಗುರುಮೂರ್ತಿ, ಬಿ.ಕೆ. ಬಸವರಾಜ್ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	(ದೂ: 2521923)
ಮಾಮನ್ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	(ದೂ: 2422871)
ಏಸ್ (ತ)	4 ಪ್ರದರ್ಶನಗಳು
ಬಾಲಾಜಿ	(ದೂ: 2497199)
ಹೌಸ್‌ಫುಲ್–5 (ಹಿಂ)	4 ಪ್ರದರ್ಶನಗಳು
ಮಹದೇಶ್ವರ	(ಮೊ:9900820093)
ಕಾಲೇಜ್ ಕಲಾವಿದ (ಕ) + ನೀತಿ (ಕ)	2+2 ಪ್ರದರ್ಶನಗಳು
ಗಾಯಿತ್ರಿ	
ಟಕೀಲಾ (ಕ)	4 ಪ್ರದರ್ಶನಗಳು
ರಾಜಕಮಲ್	
ಮದ್ರಾಸ್ ಮ್ಯಾಟಿನಿ (ತ)	4 ಪ್ರದರ್ಶನಗಳು
ಸಂಗಂ	
ಹೌಸ್‌ಫುಲ್–5 (ಹಿಂ)	4 ಪ್ರದರ್ಶನಗಳು
ಲಿಡೋ	
ಅಪ್ಪು (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
–	–
ಪ್ರಭಾ	
ಭಗೀರಥ (ಕ)	4 ಪ್ರದರ್ಶನಗಳು

ಮೈಸೂರು ಬೇಸಿಗೆ ರೇಸ್

3ನೇ ದಿನ, ಬುಧವಾರ, 11–6–2025

ಇಂದಿನ ರೇಸ್‌ಗೆ ನಮ್ಮ ಆಯ್ಕೆ

ಮೊದಲನೇ ರೇಸ್ ಮಧ್ಯಾಹ್ನ 2.00 ಗಂಟೆಗೆ

I. ಬಿಡದಿ ಪ್ಲೇಟ್–1600 ಮೀ. ರೇಟೆಡ್ 20 ರಿಂದ 45. ಮ.2.00ಕ್ಕೆ
1. ಸೆಫಿಯಂಟ್ 2. ಸ್ಟಾರ್ ಈಸ್ ಬ್ಯಾಕ್ 3. ಬ್ರೊಕ್‌ಸ್ಟನ್

II. ಅರಕಲ್‌ಗೂಡ್–1200 ಮೀ. 3 ವರ್ಷ (ಟರ್ಮ್ಸ್). ಮ.2.30ಕ್ಕೆ
1. ಏರಿಯನ್ 2. ಕೊಸೆಟ್ಟಿ 3. ನ್ಯಾಚುರಲ್ ಲುಕ್

III ಚೈತನ್ಯ ಚಕ್ರಂ ಪ್ಲೇಟ್–1200 ಮೀ. ರೇಟೆಡ್ 00 ರಿಂದ 25. ಮ.3.00ಕ್ಕೆ
1. ಕೂರ್ಗ್ ಜನರಲ್ 2. ಬುಂಡೇಲ್ ಖಂಡ್ ಕ್ವೀನ್ 3. ದುರಂಡರ್

IV. ಕೊಳ್ಳೇಗಾಲ ಪ್ಲೇಟ್ ಡಿI–1200 ಮೀ. ರೇಟೆಡ್ 40 ರಿಂದ 65. (ನೋ ವ್ಹಿಪ್) ಮ.3.30ಕ್ಕೆ
1. ಸ್ಟ್ರೀಟ್ ಸೆನ್ಸ್ 2. ರಫೀನ್ ನಾಟೊ 3. ಮಾಂಡೋಲಿನ್

V. ಡಾ. ಎನ್.ಎಂ.ಶ್ರೀನಿವಾಸ್ ಮೆಮೋರಿಯಲ್ ಟ್ರೋಫಿ–1400 ಮೀ. ರೇಟೆಡ್ 60 ಮತ್ತು ಮೇಲ್ಪರ್ಗ. ಸಂ.4.00ಕ್ಕೆ
1. ನಾಟಿ ಪ್ಯಾಟನ್ 2. ಕನ್ಯಾರಾಶಿ 3. ರೈಸ್ ಅಗೈನ್

VI. ಕೊಳ್ಳೇಗಾಲ ಪ್ಲೇಟ್ ಡಿII–1200 ಮೀ. ರೇಟೆಡ್ 40 ರಿಂದ 65. (ನೋ ವ್ಹಿಪ್) ಸಂ.4.30ಕ್ಕೆ
1. ಗ್ರೇಸ್ 2. ಶೀಬಾ 3. ಮಾಪೆಲ್ ಲೀಪ್

VII. ಮಳವಳ್ಳಿ ಪ್ಲೇಟ್–1600 ಮೀ. ರೇಟೆಡ್ 20 ರಿಂದ 45. ಸಂ.5.00ಕ್ಕೆ
1. ವಾಲ್ಟರ್ 2. ಲಕ್ಕಿ ಪಾಯಿಂಟ್ 3. ಗಿಮ್ಮಿ

ದಿನದ ಅತ್ಯುತ್ತಮ	ನಾಟಿಪ್ಯಾಟನ್
ಡಬ್ಬಲ್	ಸೆಫಿಯಂಟ್, ವಾಲ್ಟರ್
ಜಾಕ್‌ಪಾಟ್	3, 4, 5, 6 ಮತ್ತು 7
ಮಿನಿ ಜಾಕ್‌ಪಾಟ್	4, 5, 6 ಮತ್ತು 7
I ಟ್ರಿಬಲ್	2, 3 ಮತ್ತು 4
II ಟ್ರಿಬಲ್	5, 6, ಮತ್ತು 7
ಎಕ್ಸ್‌ಆಕ್ಟ್	1 ರಿಂದ 7

ಟಿಪ್‌ಸ್ಟರ್ ಪಿಜೆಸಿ

ಜೆಎಸ್‌ಎಸ್ ಆಸ್ಪತ್ರೆಯಲ್ಲಿ ಸಾಮಾನ್ಯ ಹೆರಿಗೆ; ಸಿಸೇರಿಯನ್ ಶಸ್ತ್ರಚಿಕಿತ್ಸೆ ಅಭಿಯಾನ

ಮೈಸೂರು, ಜೂ. 10– ಮೈಸೂರಿನ ಜೆಎಸ್‌ಎಸ್ ಆಸ್ಪತ್ರೆಯಲ್ಲಿ ಜೂ. 10ರಿಂದ ರಿಯಾಯಿತಿ ದರದಲ್ಲಿ ಸಾಮಾನ್ಯ ಹೆರಿಗೆ, ಸಿಸೇರಿಯನ್ ಶಸ್ತ್ರಚಿಕಿತ್ಸೆ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಸಾಮಾನ್ಯ ಹೆರಿಗೆಗೆ ಐದು ಸಾವಿರ ರೂ. ಹಾಗೂ ಸಿಸೇರಿಯನ್ ಶಸ್ತ್ರಚಿಕಿತ್ಸೆಗೆ 10 ಸಾವಿರ ರೂ.ಗಳನ್ನು ನಿಗದಿ ಮಾಡಲಾಗಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆಯಬೇಕೆಂದು ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗೆ ದೂ. 0821–2335555, 2335168 ಸಂಪರ್ಕಿಸಬಹುದು.

ಕಾಲ್ತುಳಿತದಲ್ಲಿ ಮೃತಪಟ್ಟ ಭೂಮಿಕ್ ಮನೆಗೆ ಬಿಜೆಪಿ ನಾಯಕರ ಭೇಟಿ; ಪೋಷಕರಿಗೆ ಸಾಂತ್ವನ



ಕಾಲ್ತುಳಿತದಲ್ಲಿ ಮೃತಪಟ್ಟ ಭೂಮಿಕ್ ಮನೆಗೆ ವಿಪಕ್ಷ ನಾಯಕ ಆರ್. ಅಶೋಕ್ ಹಾಗೂ ಮುಖಂಡರು ಭೇಟಿ ನೀಡಿದರು.

ಬೆಂಗಳೂರು, ಜೂ.10– ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ವಿಜಯೋತ್ಸವ ವೇಳೆ ಚಿನ್ನಸ್ವಾಮಿ ಸ್ಟೇಡಿಯಂ ಹೊರಗೆ ಸಂಭವಿಸಿದ ಕಾಲ್ತುಳಿತದಲ್ಲಿ ಮೃತಪಟ್ಟ ಹಾಸನ ಜಿಲ್ಲೆಯ ಬೇಲೂರು ತಾಲೂಕಿನ ನಿವಾಸಿ ಭೂಮಿಕ್ ಅವರ ಮನೆಗೆ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಮತ್ತು ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಭೇಟಿ ನೀಡಿ, ಕುಟುಂಬ ಸದಸ್ಯರಿಗೆ ಸಾಂತ್ವನ ಹೇಳಿ, ನ್ಯಾಯದ ಭರವಸೆ ನೀಡಿದರು.

ಮೃತ ಎಂಜಿನಿಯರಿಂಗ್ ವಿದ್ಯಾರ್ಥಿ ಭೂಮಿಕ್ ಅವರ ತಂದೆ ಡಿ.ಟಿ.ಲಕ್ಷ್ಮಣ್ ಅವರೊಂದಿಗೆ ಮಾತನಾಡಿದ ಆರ್. ಅಶೋಕ್, ಕಳೆದುಹೋದ ಜೀವ ಮರಳಿ ತರಲು ಸಾಧ್ಯವಿಲ್ಲ. ಆದರೆ ನಿಮ್ಮ ಮಗನ ಸಾವಿಗೆ ನ್ಯಾಯ ಒದಗಿಸಲಾಗುವುದು ಎಂದು ಭರವಸೆ ನೀಡಿದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಆರ್.ಅಶೋಕ್, ಭೂಮಿಕ್ ಅವರ ಸಾವು ಕುಟುಂಬಕ್ಕೆ ಅಪಾರ ದುಃಖವನ್ನುಂಟು ಮಾಡಿದೆ. ರಾಜಕೀಯ ಮಾಡಲು ನಾನು ಇಲ್ಲಿಗೆ ಬಂದಿಲ್ಲ, ಇದ್ದೊಬ್ಬನೇ ಮಗನನ್ನು ಕಳೆದುಕೊಂಡು ಒಂದು ವಾರದಿಂದ ಒಂದೇ ಸಮರೋದಿಸುತ್ತಿರುವ ಲಕ್ಷ್ಮಣ ಅವರಿಗೆ ಸಮಾಧಾನ ಹೇಳಲು ಬಂದಿದ್ದೇನೆ ಎಂದರು.

ಇಂತಹ ದುರಂತಗಳು ಮತ್ತೆ ಸಂಭವಿಸಬಾರದು ಎಂದು ಒತ್ತಿ ಹೇಳಿದ ಅಶೋಕ್, ಪೊಲೀಸರು ಕಾರ್ಯಕ್ರಮವನ್ನು ನಡೆಸದಂತೆ ಸಲಹೆ ನೀಡಿದ್ದರೂ ಸರ್ಕಾರ ಅದನ್ನು ಪಾಲಿಸಿಲ್ಲ ಎಂಬುದು ಎಲ್ಲರಿಗೂ ಸ್ಪಷ್ಟವಾಗಿದೆ. ಇದನ್ನು ಸಂಪೂರ್ಣವಾಗಿ ತನಿಖೆ ಮಾಡಬೇಕಾಗಿದೆ. ನ್ಯಾಯ ಖಚಿತಪಡಿಸಿಕೊಳ್ಳಲು ನಾವು ನಮ್ಮ ಹೋರಾಟವನ್ನು ಮುಂದುವರಿಸುತ್ತೇವೆ ಎಂದು ಹೇಳಿದರು.

ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಭೂಮಿಕ್ ಅವರ ತಂದೆ ಲಕ್ಷ್ಮಣ್, ದೊಡ್ಡ ಜನಸಂದಣಿಯೊಂದಿಗೆ ಇಂತಹ ಕಾರ್ಯಕ್ರಮ ನಡೆಸಬಾರದು ಎಂದು ಸರ್ಕಾರ ಏಕೆ ಅರಿತುಕೊಳ್ಳಲಿಲ್ಲ? ನಮ್ಮ ಮಕ್ಕಳು ಪ್ರಾಣ ಕಳೆದುಕೊಂಡಿದ್ದಾರೆ. ಸರ್ಕಾರ ಪರಿಹಾರ ನೀಡಿದೆ. ಆದರೆ ಆ ಹಣ ನಮ್ಮನ್ನು ನೋಡಿಕೊಳ್ಳುತ್ತದೆಯೇ? ಎಂದು ಪ್ರಶ್ನಿಸಿದರು. ಬಿಜೆಪಿ ನಾಯಕರ ಭೇಟಿ ರಾಜಕೀಯ ಪ್ರೇರಿತವಲ್ಲ ಎಂದು ಸ್ಪಷ್ಟಪಡಿಸಿದ ಲಕ್ಷ್ಮಣ್ ಅವರು, ನನ್ನ ಮಗನ ಸಾವಿನ ನಂತರ ಮೊದಲ ದಿನದಿಂದ ಅವರು ನನ್ನೊಂದಿಗೆ ನಿಂತಿದ್ದಾರೆ ಮತ್ತು ನನಗೆ ಸಹಾಯ ಮಾಡಿದ್ದಾರೆ. ಅವರು ಮಾನವೀಯತೆಯಿಂದ ಇಲ್ಲಿಗೆ ಬಂದಿದ್ದಾರೆ ಎಂದರು.

ಉತ್ತರ ಕ್ರಿಯಾದಿ ಭೂಶಾಂತಿ ಆಹ್ವಾನ ಪತ್ರಿಕೆ



ಶ್ರೀ ಬಿ.ಆರ್. ಸ್ವಾಮಿ ರವರು

(ಹಾರ್ಮೋನಿಯಂ ಮತ್ತು ಸಂಗೀತ ವಿದ್ವಾಂಸರು)

ಇವರು ದಿನಾಂಕ 02-06-2025ನೇ ಸೋಮವಾರದಂದು ದೈವಾಧೀನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ತತ್ಸಂಬಂಧವಾದ ಉತ್ತರಕ್ರಿಯಾದಿ ಭೂಶಾಂತಿ ಕಾರ್ಯವನ್ನು 12-06-2025ನೇ ಗುರುವಾರ ಶ್ರೀರಂಗಪಟ್ಟಣ ತಾಲ್ಲೂಕು ಪಾಲಹಳ್ಳಿ ಗ್ರಾಮದ ಬಲಮುರಿ ಕ್ಷೇತ್ರದಲ್ಲಿ ಬೆಳಗ್ಗೆ 11.30 ಕ್ಕೆ ಏರ್ಪಡಿಸಲಾಗಿದೆ. ಆಹ್ವಾನ ಪತ್ರಿಕೆ ತಲುಪದವರು ಇದನ್ನೇ ಆಹ್ವಾನವೆಂದು ತಿಳಿದು ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿಯನ್ನು ಕೋರಬೇಕಾಗಿ ವಿನಂತಿ.

ದುಃಖತಪ್ತರು : ಮೃತರ ಮಗ ಬಿ.ಎಸ್ ಚಿದಂಬರ – ಸೊಸೆ ಮತ್ತು ಹೆಣ್ಣು ಮಕ್ಕಳು – ಅಳಿಯಂದಿರು ಹಾಗೂ ಮೊಮ್ಮಕ್ಕಳು, ಕುಟುಂಬವರ್ಗದವರು

ಭೋಜನ : ಮಧ್ಯಾಹ್ನ 12.30ಕ್ಕೆ, ಸಂಗೀತ : ರಾತ್ರಿ 7 ಗಂಟೆಗೆ, ಖಿರಿಯ ಸಂಗೀತ ವಿದ್ವಾಂಸರುಗಳಿಂದ

ನಿಧನ



ಲೇ|| ಪುಟ್ಟಸ್ವಾಮಿ ಅವರ ಧರ್ಮಪತ್ನಿ ಇವರು ದಿನಾಂಕ 10-6-2025ನೇ ಮಂಗಳವಾರ ಇವರು ದೈವಾಧೀನರಾಗಿದ್ದು, ಮೃತರ ಅಂತ್ಯಕ್ರಿಯೆಯನ್ನು ದಿನಾಂಕ 11-06-2025ನೇ ಗುರುವಾರ ನಂಜನಗೂಡಿನ ಹಿಮ್ಮಾವುನಲ್ಲಿ ನೆರವೇರಿಸಲಾಗುವುದು.

ದುಃಖತಪ್ತರು: ಪಿ ಜಯರಾಮು (ಸೈಲ್ವೇ), ಅಣ್ಣ– ತಮ್ಮಂದಿರು, ಅಕ್ಕ ತಂಗಿಯರು, ಗ್ರಾಮಸ್ಥರು,

ದೊಡ್ಡತಾಯಮ್ಮ

ಪತ್ರಿಕಾ ಪ್ರಕಟಣೆ

ನಮ್ಮ ಕಕ್ಷಿದಾರರಾದ ಪ್ರಶಾಂತ್ ಎನ್. ಬಿನ್ ನಾಗರಾಜು ಎ. ಇವರು ಚೇತನ್‌ಕುಮಾರ್ ಎಸ್.ಡಿ. ಬಿನ್ ದೇವರಾಜಶೆಟ್ಟಿ ಇವರ ವಿರುದ್ಧ ಮೈಸೂರು ಸಿಟಿ, ಚಾಮರಾಜ ಮೊಹಲ್ಲಾ, ಸರಸ್ವತಿಪುರಂನ 5ನೇ ಮುಖ್ಯ ರಸ್ತೆ, 1ನೇ ಅಡ್ಡ ರಸ್ತೆಯಲ್ಲಿ ಇರುವ ಮನೆ ನಂ. 356, ಸಿಹೆಚ್75, ಪಿಐಡಿ ಸಂಖ್ಯೆ 35788 ರ ಸ್ವತ್ತಿಗೆ ಸಂಬಂಧಿಸಿದಂತೆ, ಮೈಸೂರಿನ 4ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯದಲ್ಲಿ ದಾವೆ ಸಲ್ಲಿಸಿದ್ದು, ಸದರಿ ದಾವಾ ಸಂಖ್ಯೆ 751/2025 ಆಗಿರುತ್ತದೆ. ಸದರಿ ದಾವೆಯಲ್ಲಿ ಘನ ನ್ಯಾಯಾಲಯವು ಈ ಮೇಲ್ಕಂಡ ಸ್ವತ್ತನ್ನು ಮಾರಾಟ ಮಾಡದಂತೆ ತಾತ್ಕಾಲಿಕ ನಿರ್ಬಂಧಕಾಜ್ಞೆ ನೀಡಿರುತ್ತದೆ. ಸದರಿ ಪ್ರಕರಣವು ನ್ಯಾಯಾಲಯದಲ್ಲಿ ವಿಚಾರಣೆ ಹಂತದಲ್ಲಿದ್ದು, ಈ ಕೆಳಕಂಡ ಸ್ವತ್ತಿಗೆ ಸಂಬಂಧಿಸಿದಂತೆ ಯಾವುದೇ ರೀತಿಯ ಕ್ರಯ, ಭೋಗ್ಯ, ಆಧಾರ, ದಾನ ಹಾಗೂ ಇತರೆ ವ್ಯವಹಾರಗಳನ್ನು ಮಾಡಬಾರದೆಂದು ಈ ಮೂಲಕ ತಿಳಿಸಲಾಗಿದೆ. ಹಾಗೂ ಒಂದು ವೇಳೆ ಯಾವುದೇ ವ್ಯವಹಾರ ಮಾಡಿದರೆ ಸದರಿ ವ್ಯವಹಾರ ನಮ್ಮ ಕಕ್ಷಿದಾರರನ್ನು ಬದ್ಧಪಡಿಸುವುದಿಲ್ಲ ಎಂದು ತಿಳಿಯತಕ್ಕದ್ದು.

ಷೆಡ್ಯೂಲ್ ಸ್ವತ್ತಿನ ವಿವರ

ಮೈಸೂರು ಸಿಟಿ, ಚಾಮರಾಜ ಮೊಹಲ್ಲಾ, ಸರಸ್ವತಿಪುರಂ, 5ನೇ ಮುಖ್ಯ ರಸ್ತೆ, 1ನೇ ಅಡ್ಡ ರಸ್ತೆಯಲ್ಲಿರುವ ಮನೆ ನಂ. 356, ಸಿಹೆಚ್ 75, ಪಿಐಡಿ ನಂ. 35788 ವಿಸ್ತೀರ್ಣ ಪೂರ್ವ ಪಶ್ಚಿಮ – 66 ಅಡಿ, ಉತ್ತರ ದಕ್ಷಿಣ – 21 ಅಡಿ ಸ್ವತ್ತಿಗೆ ಚೆಕ್ಕು ಬಂದಿ: ಪೂರ್ವಕ್ಕೆ: 5ನೇ ಮುಖ್ಯ ರಸ್ತೆ ; ಪಶ್ಚಿಮಕ್ಕೆ: ಮನೆ ನಂ. 345 ಸಿಹೆಚ್4 ; ಉತ್ತರಕ್ಕೆ: ಸುರೇಂದ್ರರವರ ಸ್ವತ್ತು ; ದಕ್ಷಿಣಕ್ಕೆ: ಮನೆ ನಂ. 355 ಸಿಹೆಚ್ 74.

Sd/- B. Sanath Kumar, B.A., LL.B., Advocate, Off: No. 2758/1A, New No. 10/1A, 1st Floor, Railway Gate Road, K.G. Koppal, Mysore

ಮೈಸೂರು Mob: 9886182656

ಸಾರ್ವಜನಿಕರ ತಿಳುವಳಿಕೆಗಾಗಿ


ಈ ಮೂಲಕ ಸಾರ್ವಜನಿಕರಲ್ಲಿ ತಿಳಿಯಪಡಿಸುವುದೇನೆಂದರೆ ಮೈಸೂರು ಸಿಟಿ, ಚಾಮರಾಜ ಮೊಹಲ್ಲಾ, ಬೋಗಾದಿ 2ನೇ ಹಂತ, 597 ನೇ ನಂಬರ್ ಮನೆಯಲ್ಲಿ ವಾಸವಾಗಿರುವ ಪಿ. ಹರೀಶ್ ಆಳ್ವ ಬಿನ್. ಲೇಟ್. ಸೀನಪ್ಪ ಆಳ್ವ ಇವರು ಮೈಸೂರು ತಾಲ್ಲೂಕು, ಜಯಪುರ ಹೋಬಳಿ, ತಳೂರು ಗ್ರಾಮದ ಸರ್ವೆ ನಂ. 134/3 (3 ಎಕರೆ 05 ಗುಂಟೆ), ಸರ್ವೆ ನಂ. 135/2 (2–06 ಗುಂಟೆ), ಸರ್ವೆ ನಂ. 135/3 (1–37 ಗುಂಟೆ), ಸರ್ವೆ ನಂ.230 (4–00 ಎಕರೆ) ಮತ್ತು ಸರ್ವೆ ನಂ. 235 (2–17ಗುಂಟೆ) ಮತ್ತು ಸರ್ವೆ ನಂ. 160 (1–00 ಎಕರೆ) ಅನ್ಯಕಾಂತ ಸ್ವತ್ತಿನ ಮಾಲೀಕರಾಗಿದ್ದು, ಸದರಿ ಸ್ವತ್ತನ್ನು ಅಭಿವೃದ್ಧಿಪಡಿಸುವ ಸಂಬಂಧ ಮೆ|| ಉನ್ನತಿ ಪ್ರಾಜೆಕ್ಟ್‌ನ ಪಾಲುದಾರರಾದ ಕೆ.ಆರ್. ರಾಮಚಂದ್ರೇಗೌಡ ರವರೊಂದಿಗೆ ದಿನಾಂಕ 07-02- 2015 ರಂದು ಜಂಟಿ ಅಭಿವೃದ್ಧಿ ಕರಾರು (ದಸ್ತಾವೇಜು ಸಂಖ್ಯೆ. 9787) ಮತ್ತು ಸಾಮಾನ್ಯ ಅಧಿಕಾರ ಪತ್ರ (ದಸ್ತಾವೇಜು ಸಂಖ್ಯೆ. 382) ಜಾರಿಗೊಳಿಸಿದ್ದು, ಈ ಮೇರೆ ಜಂಟಿ ಅಭಿವೃದ್ಧಿದಾರರಾದ ಮೆ|| ಉನ್ನತಿ ಪ್ರಾಜೆಕ್ಟ್‌ನ ಪಾಲುದಾರರು ಸದರಿ ತಳೂರು ಗ್ರಾಮದ ಸರ್ವೆ ನಂ. 134/3 ರಲ್ಲಿನ 3 ಎಕರೆ 05 ಗುಂಟೆ ಜಮೀನಿನಲ್ಲಿ ಅಭಿವೃದ್ಧಿಪಡಿಸುವ ಬಡಾವಣೆಯಲ್ಲಿ 36900 ಚದರಡಿ ವಿಸ್ತೀರ್ಣದ ನಿವೇಶನಗಳನ್ನು ನೀಡುವ ಸಂಬಂಧ ದಿನಾಂಕ 19-02-2022 ರಂದು ನನ್ನ ಕಕ್ಷಿದಾರರೊಂದಿಗೆ ಮೈಸೂರು ಪಶ್ಚಿಮ ಉಪನೋಂದಣಾಧಿಕಾರಿಗಳ ಕಛೇರಿಯಲ್ಲಿ ಕ್ರಯದ ಕರಾರು ಒಪ್ಪಂದ (ದಸ್ತಾವೇಜು ಸಂಖ್ಯೆ. 13421) ಜಾರಿಗೊಳಿಸಿದ್ದು, ಸದರಿ ಮೇರೆ ನನ್ನ ಕಕ್ಷಿದಾರರು 36,900 ಚದರಡಿ ಸ್ವತ್ತಿನ ಹಕ್ಕುದಾರರಾಗಿರುತ್ತಾರೆ. ಸದರಿ ಕ್ರಯದ ಕರಾರಿನ ಷರತ್ತುಗಳನ್ನು ಉಲ್ಲಂಘಿಸಿ, ಸದರಿಯವರು ನಿವೇಶನಗಳನ್ನು ಖಾಸಗಿಯವರಿಗೆ ಮಾರಾಟ ಮಾಡಲು ಯತ್ನಿಸಿರುತ್ತಾರೆ. ಆದ ಕಾರಣ ಸಾರ್ವಜನಿಕರು ಯಾವುದೇ ರೀತಿಯಲ್ಲಿ ಮೇಲ್ಕಂಡ ಸ್ವತ್ತುಗಳಿಗೆ ಸಂಬಂಧಪಟ್ಟಂತೆ ಕರಾರು ಹಾಗೂ ಯಾವುದೇ ರೀತಿಯ ವ್ಯವಹಾರ ನಡೆಸಬಾರದೆಂದು ಸಾರ್ವಜನಿಕರಿಗೆ ಈ ಪ್ರಕಟಣೆ ಮೂಲಕ ತಿಳಿಯಪಡಿಸಲಾಗಿದೆ.

ಷೆಡ್ಯೂಲ್: ಮೈಸೂರು ತಾಲ್ಲೂಕು, ಜಯಪುರ ಹೋಬಳಿ, ತಳೂರು ಗ್ರಾಮದ ಸರ್ವೆ ನಂ. 134/3 (3 ಎಕರೆ 05 ಗುಂಟೆ) ಅನ್ಯಕಾಂತ ಸ್ವತ್ತಿನಲ್ಲಿ ಅಭಿವೃದ್ಧಿಪಡಿಸಿರುವ ಬಡಾವಣೆಯ 36900 ಚದರಡಿ ವಿಸ್ತೀರ್ಣದ ನಿವೇಶನಗಳು.

Sd/- H. P. Darshan Shetty
H. P. Gagan Shetty
Prabhu Associates
Advocates, Office :1533, 1" Floor, Navagraha Temple Street Agrahara, K.R.Mohalla, Mysuru - 570024
+91 95908 07007 | +91 89040 40406

ದಿನಾಂಕ: 06-06-2025

25ನೇ ವರ್ಷದ ವಿವಾಹ ವಾರ್ಷಿಕೋತ್ಸವದ ಶುಭಾಶಯಗಳು



ಶ್ರೀಮತಿ ಹೆಚ್. ಪ್ರತಿಭಾ ಮತ್ತು ಹೆಚ್.ಎಲ್.ಶಿವಣ್ಣ

(ನೀರಾವರಿ ಇಲಾಖೆ, ನಂಜನಗೂಡು)

ಶುಭಕೋರುವವರು: ತಾಯಿ: ಸಣ್ಣಮ್ಮ, ಮಕ್ಕಳು : ಎಂ.ಎಸ್.ಕೌಶಿಕ್, ಎಸ್.ಅನುಷಾ ಕೌಶಿಕ್, ಎಂ.ಎಸ್.ಯಶವಂತ್ ಹಾಗೂ ಕುಟುಂಬವರ್ಗದವರು, ಹೆಬ್ಬಾಳ, ಮೈಸೂರು

PUBLIC NOTICE

NOTICE is hereby given that my client is interested in purchasing the property detailed in the schedule from its present owners Mr. M. RAJENDRA aged 61 years, son of Muniswamy, residing at No.1162, G & H Block, Gange Road, Kuvempunagar, Mysuru 570 023 and Mrs. SWATHI MAHESH aged 37 years, wife of Mahesh K. N., daughter of M. Rajendra, residing at No.4, Model House Street, Basavanagudi, Bengaluru South, Bengaluru 560 004. Any person/s claiming any right, title or interest in the said property or any part thereof is hereby informed to make the same known to the undersigned in writing within 15 days from this date with relevant proof thereof towards such claim / objection.

SCHEDULE

Item No.1: Undeveloped Residential converted land bearing Survey No.130 measuring 3 acre, situated at Nagarthahalli Village, Jayapura Hobli, Mysuru Taluk [duly converted for residential use by the office of the Deputy Commissioner, Mysuru vide orderNo.MYSDC/ALN3/VAJA/680/2017(32060) dated 26/03/2018], bounded on the:
East by: Road; **West by:** Land in Survey No.116; **North by:** Road; **South by:** Land in Survey No.131.

Item No.2: Undeveloped Residential converted land bearing Survey No.131 measuring 3 acre, situated at Nagarthahalli Village, Jayapura Hobli, Mysuru Taluk [duly converted for residential use by the office of the Deputy Commissioner, Mysuru vide order No.MYSDC/ALN3/VAJA/681/2017(32061) dated 26/03/2018], bounded on the:
East by: Road; **West by:** Land in Survey No.116; **North by:** Land in Survey No.130; **South by:** Land in Survey No.118.

Date : 10-06-2025
Place : Mysore

K. M. S. BHAT
ADVOCATE
No.12 Block 1-A
Madhuvana Layout, Srirampura
II Stage, Mysuru 570 023

ನಗರಸಭಾ ಕಾರ್ಯಾಲಯ, ಕೊಳ್ಳೇಗಾಲ

ಚಾಮರಾಜನಗರ ಜಿಲ್ಲೆ
Website: www.kollegalacity.mrc.gov.in
E-mail: cmckollegal@yahoo.co.in
Phone No :08224-252016

ಸಂಖ್ಯೆ: ಕೆ.ಸಿ.ಎಂ.ಸಿ./ಕಾ.ವಿ/ಸಿಆರ್/01/2025-26 ದಿನಾಂಕ: 3-6-2025

ಸಾರ್ವಜನಿಕ ಪ್ರಕಟಣೆ

ಈ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, ಸರ್ಕಾರದ ಸುತ್ತೋಲೆಯಂತೆ ಕೊಳ್ಳೇಗಾಲ ಪಟ್ಟಣದ 31 ವಾರ್ಡ್‌ಗಳಲ್ಲಿ ಬರುವ ಅನುಮೋದನೆ ಪಡೆಯದೆ ಹಂಚಿಕೆಗೊಂಡಿರುವ ನಿವೇಶನಗಳು, ನಿವೇಶನಗಳಲ್ಲಿ ಕಟ್ಟಿರುವ ಮನೆಗಳಿಗೆ "ಬಿ" ಖಾತೆ ಯೋಜನೆಯಡಿ ದಿನಾಂಕ: 10–08–2025 ರವರೆಗೆ ಮುಂದುವರೆದಿದ್ದು, ಸಾರ್ವಜನಿಕರು ಪೂರ್ಣ ಪ್ರಮಾಣದಲ್ಲಿ ಕಂದಾಯ ಪಾವತಿಸಿ ದಾಖಲೆಗಳನ್ನು ಕಛೇರಿಯಲ್ಲಿ ನೇರವಾಗಿ ನೀಡುವುದು. ಯಾವುದೇ ಮಧ್ಯವರ್ತಿಗಳ ಆಮಿಷಕ್ಕೆ ಒಳಗಾಗದೆ ಕಛೇರಿಗೆ ಅರ್ಜಿ ಸಲ್ಲಿಸುವುದು. "ಬಿ" ಖಾತೆಯ ಇ–ಸ್ವತ್ತಿನ ನಕಲು ಕಛೇರಿಯ ಶುಲ್ಕ ರೂ. 100/– ಮಾತ್ರ ಇರುತ್ತದೆ ಮಧ್ಯವರ್ತಿಗೆ ಹಣ ನೀಡಿ ಮೋಸ ಹೋಗಬಾರದು. ಕಛೇರಿಯಲ್ಲಿ ಯಾವುದೇ ಸಿಬ್ಬಂದಿಯಾಗಲಿ ಹಣ ನೀಡಲು ಒತ್ತಾಯಿಸಿದರೆ ದಾಖಲೆ ಮೂಲಕ ಪೌರಾಯುಕ್ತರಿಗೆ ಅಥವಾ ಮಾನ್ಯ ಲೋಕಾಯುಕ್ತರಿಗೆ ದೂರು ನೀಡಬಹುದಾಗಿರುತ್ತದೆ. ನೀವು ಅರ್ಜಿ ಸಲ್ಲಿಸುವ ಸಮಯದಲ್ಲಿ ದಾಖಲೆಗಳ ಸಮೇತ ಮತ್ತು ವಿಳಾಸ ಹಾಗೂ ದೂರವಾಣಿ ಸಂಖ್ಯೆಯನ್ನು ನಮೂದಿಸಿ ಅರ್ಜಿ ಸಲ್ಲಿಸುವುದು. ಸಾರ್ವಜನಿಕರು ನಿಗಧಿತ ದಿನಾಂಕದೊಳಗೆ ಅರ್ಜಿ ಸಲ್ಲಿಸಿ ನಿಗಧಿತ ಅವಧಿಯೊಳಗೆ "ಬಿ" ಖಾತೆ ಪಡೆಯುವ ಅವಕಾಶ ಬಳಸಿಕೊಳ್ಳಲು ಸೂಚಿಸಿದೆ.

ಸಹಿ/– ಅಧ್ಯಕ್ಷರು, ನಗರಸಭೆ, ಕೊಳ್ಳೇಗಾಲ

ಸಹಿ/– ಪೌರಾಯುಕ್ತರು, ನಗರಸಭೆ, ಕೊಳ್ಳೇಗಾಲ

ಕೈಲಾಸ ಶಿವಗಣಾರಾಧನೆ ಆಹ್ವಾನ ಪತ್ರಿಕೆ



ಶ್ರೀ ಡಾ|| ಪಿ. ನವೀನ್

ಜನನ : 16-08-1983 ಮರಣ : 03-06-2025

ಇವರು ದಿನಾಂಕ 3-6-2025ನೇ ಮಂಗಳವಾರ ಇವರು ಲಿಂಗೈಕ್ಯರಾದರೆಂದು ತಿಳಿಸುತ್ತಾ ತತ್ಸಂಬಂಧವಾಗಿ ದಿನಾಂಕ 12-06-2025ನೇ ಗುರುವಾರ ಸಂಜೆ 7-00 ಗಂಟೆಗೆ ಸುಕ್ಷೇತ್ರ ದೇವನೂರು ಶ್ರೀ ಗುರುಮಲ್ಲೇಶ್ವರ ತ್ರಿವಿಧ ದಾಸೋಹ ಮಠಾಧ್ಯಕ್ಷರಾದ ಶ್ರೀಮ||ನಿ||ಪ್ರ||ಸ್ವ|| ಶ್ರೀ ಮಹಾಂತಸ್ವಾಮಿಗಳವರ ದಿವ್ಯಪಾದಪೂಜೆಯನ್ನು ಹಾಗೂ ದಿನಾಂಕ 13-06-2025ನೇ ಶುಕ್ರವಾರ ಬೆಳಗ್ಗೆ 10-00 ಗಂಟೆಗೆ ಹುಲ್ಲಹಳ್ಳಿ, ಶ್ರೀ ವಿರಕ್ತಮಠದ ಶ್ರೀ ನಿ||ಪ್ರ||ಸ್ವ|| ಶ್ರೀ ಇಮ್ಮಡಿ ಚೆನ್ನಮಲ್ಲದೇಶಿಕೇಂದ್ರಸ್ವಾಮಿಗಳವರ ದಿವ್ಯಪಾದಪೂಜೆಯನ್ನು ಹಾಗೂ ಕೈಲಾಸ ಗಣಾರಾಧನೆಯನ್ನು ನಡೆಸಲು ನಿಶ್ಚಯಿಸಿರುವುದರಿಂದ ಆಹ್ವಾನ ಪತ್ರಿಕೆ ತಲುಪದವರು ಇದನ್ನೇ ಆಹ್ವಾನವೆಂದು ತಿಳಿದು ಸಕಾಲಕ್ಕೆ ಆಗಮಿಸಿ ಗುರುಕೃಪೆಗೆ ಪಾತ್ರರಾಗಿ ಲಿಂಗೈಕ್ಯರ ಆತ್ಮಕ್ಕೆ ಚಿರಶಾಂತಿ ಕೋರಬೇಕಾಗಿ ವಿನಂತಿಸುತ್ತೇವೆ.

ದುಃಖತಪ್ತರು: ಶ್ರೀಮತಿ ಶೀಲಾ ಮತ್ತು ಶ್ರೀ ಎಂ. ಪುಟ್ಟಸ್ವಾಮಿ ಶಿವೈಕ್ಯರ ಧರ್ಮಪತ್ನಿ ಶ್ರೀಮತಿ ವಿ.ಸಿ. ಸುಮಾ, ಮಗಳು ಕು|| ಗಾನವಿ, ದಿ|| ಅಪ್ಪಾಜಪ್ಪನವರ ಕುಟುಂಬವರ್ಗದವರು ದೇವಲಾಪುರ, ದೇವಲಾಪುರ (ಶ್ರೀಗುರುಮಲ್ಲೇಶ್ವರ ಫಾರಂ ಹೌಸ್ ಚಿಕ್ಕೆಗೌಡನಹುಂಡಿ) ವರುಣಾ ಹೋಬಳಿ ಮೈಸೂರು ತಾಲ್ಲೂಕು